ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 25 ಗುರುವಾರ 2023

ಸಂಪುಟ: 44 | ಸಂಚಿಕೆ: 39 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4

ಸದ್ಯಕ್ಕೆ ಭರ್ತಿ ಮಾಡುವುದು 20 ಸಚಿವ ಸ್ಥಾನ;

ಬರೋಬ್ಬರಿ 60 ಮಂದಿ ಪೈಪೋಟಿ

- ಇವರಲ್ಲಿ ನಾಲ್ಕೈದು ಬಾರಿ ಗೆದ್ದು ಬಂದಿರುವವರೇ 40ಕ್ಕೂ ಅಧಿಕ ಮಂದಿ
- ಸಚಿವ ಸ್ಥಾನ ಆಕಾಂಕ್ಷಿಗಳ ಪಟ್ಟಿಯೊಂದಿಗೆ ಸಿಎಂ, ಡಿಸಿಎಂ ದೆಹಲಿ ಯಾತ್ರೆ
- ಅವರ ಹಿಂದೆಯೇ ದೆಹಲಿ ತಲುಪಿದ ಸಚಿವ ಸ್ಥಾನ ಆಕಾಂಕ್ಷಿಗಳು

ಬೆಂಗಳೂರು, ಮೇ 24(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟ ಸೇರಲು ಕಾಂಗ್ರೆಸ್‌ನ 60ಕ್ಕೂ ಹೆಚ್ಚು ಶಾಸಕರು ಆಕಾಂಕ್ಷಿಗಳಾಗಿರುವುದು ಪಕ್ಷದ ವರಿಷ್ಠರಿಗೆ ದೊಡ್ಡ ತಲೆ ನೋವಾಗಿ ಪರಿಣಮಿಸಿದೆ. ಪ್ರತಿ ಜಿಲ್ಲೆಯಲ್ಲೂ ಸಂಪುಟ ಸೇರಲು 3ರಿಂದ 4 ಮಂದಿ ಆಕಾಂಕ್ಷಿಗಳಿದ್ದಾರೆ. ಅದರಲ್ಲೂ ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಗೆ ದೊಡ್ಡ ಪ್ರಾತಿನಿಧ್ಯವನ್ನು ನೀಡಬೇಕಾಗಿದೆ.

ಸುಮಾರು 40ಕ್ಕೂ ಹೆಚ್ಚು ಶಾಸಕರು 4, 5 ಬಾರಿಗಿಂತ ಹೆಚ್ಚು ಸಲ ವಿಧಾನಸಭೆ ಪ್ರವೇಶಿಸಿದ್ದಾರೆ. ಅದರಲ್ಲೂ ಆರ್.ವಿ.ದೇಶಪಾಂಡೆ 9ನೇ ಬಾರಿ ಆಯ್ಕೆಗೊಂಡಿದ್ದಾರೆ. ಉಳಿದಂತೆ ಟಿ.ಬಿ.ಜಯಚಂದ್ರ, ಡಾ. ಹೆಚ್.ಸಿ.ಮಹದೇವಪ್ಪ, ಬಸವರಾಜ ರಾಯರೆಡ್ಡಿ, ಎನ್.ವೈ.ಗೋಪಾಲಕೃಷ್ಣ, ಶ್ಯಾಮನೂರು ಶಿವಶಂಕರಪ್ಪ, ಅಪ್ಪಾಜಿ ನಾಡಗೌಡ, ಈಶ್ವರ ಖಂಡ್ರೆ, ಹೆಚ್.ಕೆ.ಪಾಟೀಲ್ ಸೇರಿದಂತೆ ಹಲವರು ಹಿರಿಯರಿದ್ದು, ಪಕ್ಷಕ್ಕಾಗಿ ದುಡಿದಿದ್ದಾರೆ. ಇವರಲ್ಲಿ ಕೆಲವರಿಗಾದರೂ ಅವಕಾಶ ನೀಡಬೇಕಾದ ಅನಿವಾರ್ಯತೆ ಪಕ್ಷಕ್ಕಿದೆ. ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಅವರು ಜಾತಿ ಮತ್ತು ಜಿಲ್ಲಾವಾರು ಆಧಾರದ ಮೇಲೆ ಪ್ರತ್ಯೇಕ ಪಟ್ಟಿ ಸಿದ್ಧಪಡಿಸಿಕೊಂಡು ದೆಹಲಿಗೆ ತೆರಳಿದ್ದಾರೆ.

ಎರಡು ದಿನಗಳ ಕಾಲ ರಾಷ್ಟ್ರ ರಾಜಧಾನಿಯಲ್ಲಿ ಉಳಿಯುವ ನಾಯಕರು, ಮಂತ್ರಿಮಂಡಲಕ್ಕೆ ಯಾರನ್ನು ಸೇರ್ಪಡೆ ಮಾಡಿಕೊಳ್ಳಬೇಕು. ಸೇರಿದವರಿಗೆ ಯಾವ ಖಾತೆ ನೀಡಬೇಕು ಎಂಬ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರೊಂದಿಗೆ ▶ 8ನೇ ಪುಟಕ್ಕೆ

ಶೀಘ್ರದಲ್ಲೇ ಸಚಿವರಿಗೆ ಖಾತೆ ಹಂಚಿಕೆ

ಸದನದಲ್ಲಿ ಬೊಮ್ಮಾಯಿ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ



ಬೆಂಗಳೂರು, ಮೇ 24– ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಅವರೊಂದಿಗೆ 8 ಮಂದಿ ಸಚಿವರಾಗಿ ಮೇ 20 ರಂದು ಪ್ರಮಾಣ ವಚನ ಸ್ವೀಕರಿಸಿದ್ದು, ಈವರೆಗೂ ಖಾತೆ ಹಂಚಿಕೆಯಾಗಿಲ್ಲ. ಈ ಕುರಿತು ಪ್ರತಿಪಕ್ಷ ಬಿಜೆಪಿ ರಾಜ್ಯ ವಿಧಾನಸಭೆಯಲ್ಲಿ ವಿಷಯವನ್ನು ಪ್ರಸ್ತಾಪಿಸಿದ ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸಂಪುಟದಲ್ಲಿರುವ ಸಚಿವರಿಗೆ ಶೀಘ್ರದಲ್ಲೇ ಖಾತೆಗಳನ್ನು ಹಂಚಿಕೆ ಮಾಡಲಾಗುವುದು ಎಂದು ಬುಧವಾರ ಹೇಳಿದ್ದಾರೆ.

ಸಚಿವರಿಗೆ ಖಾತೆ ಹಂಚಿಕೆ ವಿಳಂಬದ ಕುರಿತು ಮಾಜಿ ಮುಖ್ಯಮಂತ್ರಿ ಬಿಜೆಪಿಯ ಬಸವರಾಜ ಬೊಮ್ಮಾಯಿ ಕೇಳಿದ ಪ್ರಶ್ನೆಗೆ ಸದನದಲ್ಲಿ ಸಿಎಂ ಈ ಭರವಸೆ ನೀಡಿದರು.

ಸಿಎಂ ತಮ್ಮ ಸಂಪುಟದ ಸಚಿವರನ್ನು ವಿಧಾನಸಭೆಯಲ್ಲಿ ಪರಿಚಯಿಸಿದ ತಕ್ಷಣ ಮಧ್ಯಪ್ರವೇಶಿಸಿದ ಬೊಮ್ಮಾಯಿ, 'ಮುಖ್ಯಮಂತ್ರಿ ಅವರು ಸಚಿವರನ್ನು ಸದನಕ್ಕೆ ಪರಿಚಯಿಸಿದ್ದಕ್ಕೆ ಖುಷಿಯಾಗಿದೆ. ಅವರೆಲ್ಲರೂ ಈ ಹಿಂದೆ ಸಚಿವರಾಗಿ ಕೆಲಸ ಮಾಡಿದ್ದಾರೆ. ಮುಖ್ಯಮಂತ್ರಿಗಳು ಮತ್ತು ಎಲ್ಲಾ ಸಚಿವರಿಗೆ ಅಭಿನಂದನೆಗಳು. ಆದರೆ, ಅವರಿಗೆ ▶ 8ನೇ ಪುಟಕ್ಕೆ

ವಿಧಾನಸಭಾ ಅಧ್ಯಕ್ಷರಾಗಿ ಯು.ಟಿ.ಖಾದರ್ ಅವಿರೋಧ ಆಯ್ಕೆ

ಇಡೀ ಸದನ ಮುಕ್ತಕಂಠದಿಂದ ಶ್ಲಾಘನೆ, ಅಭಿನಂದನೆ



ಬೆಂಗಳೂರು, ಮೇ 24(ಕೆಎಂಶಿ)– ವಿಧಾನಸಭೆಯ ನೂತನ ಸಭಾಧ್ಯಕ್ಷರಾಗಿ ಯು.ಟಿ.ಖಾದರ್ ಫರೀದ್ ಅವಿರೋಧವಾಗಿ ಆಯ್ಕೆಗೊಂಡರು.

ಹಂಗಾಮಿ ಸಭಾಧ್ಯಕ್ಷರಾದ ಆರ್.ವಿ. ದೇಶಪಾಂಡೆ ಅವರು ಸಭಾಧ್ಯಕ್ಷರ ಚುನಾವಣೆ ಪ್ರಕ್ರಿಯೆಗೆ ಅನುವು ಮಾಡಿಕೊಟ್ಟಾಗ ಸಭಾನಾಯಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಯು.ಟಿ.ಖಾದರ್ ಅವರನ್ನು ವಿಧಾನಸಭೆಯ ಸಭಾಧ್ಯಕ್ಷರನ್ನಾಗಿ ಚುನಾಯಿಸಬೇಕೆಂದು ಸೂಚಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿಯವರ ಪ್ರಸ್ತಾಪವನ್ನು ಅನುಮೋದಿಸಿದರು. ▶ 8ನೇ ಪುಟಕ್ಕೆ

ದಕ್ಷ ಹಿರಿಯ ಐಎಎಸ್ ಅಧಿಕಾರಿ ಜಯರಾಂ ಈಗ ಮುಖ್ಯಮಂತ್ರಿ ಕಾರ್ಯದರ್ಶಿ

ಬೆಂಗಳೂರು, ಮೇ 24– ಬೆಂಗಳೂರು ನೀರು



ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಅಧ್ಯಕ್ಷರಾಗಿದ್ದ ಹಿರಿಯ ಐಎಎಸ್ ಅಧಿಕಾರಿ ಎನ್.ಜಯರಾಂ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ. ಈವರೆಗೆ ಈ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಎಂ.ಎಸ್. ಶ್ರೀಕರ್ ಅವರನ್ನು ಸ್ಥಳ ತೋರಿಸದೆ ವರ್ಗಾವಣೆ ಮಾಡಲಾಗಿದೆ. 2004ರ ಬ್ಯಾಚ್‌ನ ಐಎಎಸ್ ಅಧಿಕಾರಿಯಾದ ಜಯರಾಂ ▶ 8ನೇ ಪುಟಕ್ಕೆ

ಮೇ 31ರಿಂದ ಶಾಲೆಗಳು ಪುನಾರಂಭ

ಮೇ 29ರಂದು ಮೈಸೂರು ಜಿಲ್ಲೆಯ 3,446 ಶಾಲೆಗಳಲ್ಲಿ ಸಿದ್ಧತೆ



ಮೈಸೂರು, ಮೇ 24(ಆರ್‌ಕೆ)–ಮೇ 31ರಿಂದ ಶಾಲೆಗಳು ಪುನಾರಂಭಗೊಳ್ಳುತ್ತಿದ್ದು, ಮೇ 29 ರಂದು ಸರ್ವ ರೀತಿಯಲ್ಲಿ ಸಿದ್ಧತೆ ಮಾಡಿಕೊಳ್ಳುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆ ಮೈಸೂರು ಜಿಲ್ಲಾ ಉಪ ನಿರ್ದೇಶಕ ರಾಮಚಂದ್ರ ರಾಜೇ ಅರಸು ಅವರು ತಿಳಿಸಿದ್ದಾರೆ. ಶಾಲಾ ಆರಂಭಕ್ಕೆ ಮಳೆ ಹಾನಿ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮದ ಬಗ್ಗೆಯೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಎಲ್ಲಾ ಶಾಲಾ ಮುಖ್ಯೋಪಾಧ್ಯಾಯರಿಗೆ ಸೂಚನೆಗಳನ್ನು ನೀಡಲಾಗಿದೆ.

ಮೈಸೂರು ಜಿಲ್ಲೆಯ 2,678 ಪ್ರಾಥಮಿಕ ಹಾಗೂ 768 ಪ್ರೌಢಶಾಲೆ ಸೇರಿದಂತೆ ಒಟ್ಟು 3,446 ಶಾಲೆಗಳಲ್ಲೂ ಮೇ 31ರಂದು ಮಕ್ಕಳನ್ನು ಸ್ವಾಗತಿಸಿ ಪಾಠ ಆರಂಭಿಸಬೇಕು. ಅದಕ್ಕೂ ಮೊದಲು ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕೆಂದು, ಅವರು ಆದೇಶದಲ್ಲಿ ನಿರ್ದೇಶನ ನೀಡಿದ್ದಾರೆ. ▶ 6ನೇ ಪುಟಕ್ಕೆ

ಮಾಜಿ ಸಚಿವ ಡಾ.ಅಶ್ವತ್ಥ್‌ನಾರಾಯಣ ವಿರುದ್ಧ ಮೈಸೂರಲ್ಲಿ ಎಫ್‌ಐಆರ್ ದಾಖಲು

ಮೈಸೂರು, ಮೇ 24(ಎಸ್‌ಪಿಎನ್)–



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೊಲೆ ಬೆದರಿಕೆ ಮತ್ತು ಗಲಭೆಗೆ ಪ್ರಚೋದನೆ ನೀಡಿದ್ದ ಆರೋಪ ಮೇರೆಗೆ ಮಾಜಿ ಸಚಿವ ಡಾ.ಸಿ.ಎನ್. ಅಶ್ವತ್ಥ್ ನಾರಾಯಣ್ ಅವರ ವಿರುದ್ಧ ಮೈಸೂರಿನ ದೇವರಾಜ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಡಿಸಿಸಿ ಕಾನೂನು ಘಟಕದ ಅಧ್ಯಕ್ಷ, ವಕೀಲ ತಿಮ್ಮಯ್ಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೊಲೆ ಬೆದರಿಕೆ, ಗಲಭೆಗೆ ಪ್ರಚೋದನೆ ಆರೋಪ

ನೇತೃತ್ವದ ಕಾಂಗ್ರೆಸ್ ನಿಯೋಗ ಇಂದು ದೇವರಾಜ ಠಾಣೆಗೆ ತೆರಳಿ ಅಶ್ವತ್ ನಾರಾಯಣ್ ವಿರುದ್ಧ ದೂರು ಸಲ್ಲಿಸಿತು. ಕಳೆದ ಫೆ.15ರಂದು ಮಂಡ್ಯದ ಸಾತನೂರಿನಲ್ಲಿ ಬಿಜೆಪಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅಂದಿನ ಸಚಿವ ಡಾ.ಸಿ.ಎನ್.ಅಶ್ವತ್ಥ್ ನಾರಾಯಣ ಅವರು, ಟಿಪ್ಪು ಸುಲ್ತಾನನನ್ನು ಮಂಡ್ಯದ ಉರೀಗೌಡ ಮತ್ತು ನಂಜೇಗೌಡ ಕೊಂದು ಹಾಕಿದ್ದಂತೆ ಸಿದ್ದರಾಮಯ್ಯ ▶ 6ನೇ ಪುಟಕ್ಕೆ

ಇನ್ನು ಮುಂದೆ ಕಂಡ ಕಂಡಲ್ಲಿ ಟ್ರಾಫಿಕ್ ಪೊಲೀಸ್ ದಂಡ ವಸೂಲಿಗೆ ಬ್ರೇಕ್

- ಉಲ್ಲಂಘನೆಗೆ ಸಿಸಿ ಕ್ಯಾಮರಾ ದೃಶ್ಯ ಆಧರಿಸಿ ಮನೆಗೆ ಬರಲಿದೆ ನೋಟಿಸ್
- ಸಂಚಾರ ನಿರ್ವಹಣೆಗೆ ಅಷ್ಟೇ ಇನ್ನು ಸಂಚಾರ ಪೊಲೀಸರ ಕಾರ್ಯ



ಮೈಸೂರು, ಮೇ 24(ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಹೆಚ್ಚಾಗುತ್ತಿರುವ ಟ್ರಾಫಿಕ್ ಸಮಸ್ಯೆ ನಿವಾರಿಸಲು ಚಿಂತನೆ ನಡೆಸಿರುವ ಮೈಸೂರು ನಗರ ಸಂಚಾರ ಪೊಲೀಸರು, ಸಂಚಾರ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಲು ಮುಂದಾಗಿದ್ದಾರೆ.

ಸಿಸಿಟಿವಿ ಕ್ಯಾಮರಾಗಳ ದೃಶ್ಯಾವಳಿಗಳ ಆಧರಿಸಿ ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧ ಕ್ರಮ ಕೈಗೊಳ್ಳುವುದರ ಜೊತೆಗೆ ಸಿಗ್ನಲ್‌ಗಳಲ್ಲಿ ಹೆಚ್ಚಿನ ಕ್ರಮವಹಿಸಲಾಗಿದೆ ಎಂದು ಡಿಸಿಪಿ ಎಂ.ಮುತ್ತುರಾಜ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ರಸ್ತೆ ಬದಿಗಳಲ್ಲಿ, ಸಿಗ್ನಲ್‌ಗಳು ಸೇರಿದಂತೆ ಹಲವೆಡೆ ಸಂಚಾರ ನಿಯಮ ಉಲ್ಲಂಘಿಸಿದವರಿಗೆ ದಂಡ ವಿಧಿಸುವುದನ್ನು ತಾತ್ಕಾಲಿಕವಾಗಿ ಕಡಿತಗೊಳಿಸಿ, ಸಿಸಿ ಕ್ಯಾಮರಾಗಳ ಮೂಲಕ ಪರಿಶೀಲನೆ ಹೆಚ್ಚಿಸಲಾಗುತ್ತದೆ. ದಂಡ ವಿಧಿಸಲು ನಿಯೋಜಿಸುತ್ತಿದ್ದ ಸಂಚಾರ ಪೊಲೀಸರನ್ನು ಟ್ರಾಫಿಕ್ ನಿರ್ವಹಣೆಗೆ ನಿಯೋಜಿಸುವ ನಿಟ್ಟಿನಲ್ಲಿ ▶ 6ನೇ ಪುಟಕ್ಕೆ

ಮುಂಗಾರು ಮುನ್ನೆಚ್ಚರಿಕೆ; ಶೀಘ್ರವೇ

ಕೊಡಗಿಗೆ ಎನ್‌ಡಿಆರ್‌ಎಫ್ ತಂಡ

ಪ್ರಾಕೃತಿಕ ವಿಕೋಪ ಎದುರಿಸಲು 20 ಕೋಟಿ ರೂ. ಅನುದಾನ ಲಭ್ಯ



ಮಡಿಕೇರಿ, ಮೇ 24–ಜೂನ್ 4ರಿಂದ ರಾಜ್ಯದಲ್ಲಿ ಮುಂಗಾರು ಆರಂಭವಾಗಲಿದ್ದು, ಈ ವೇಳೆಗೆ ಕೊಡಗು ಜಿಲ್ಲೆಗೆ ಎನ್‌ಡಿಆರ್‌ಎಫ್ ತಂಡ ಆಗಮಿಸುವ ನಿರೀಕ್ಷೆ ಇದೆ. ಜೂನ್ 9 ಮತ್ತು 10ರಂದು ಜಿಲ್ಲೆಯ ಕೆಲವು ಕಡೆಗಳಲ್ಲಿ ಜನ–ಜಾನುವಾರು ರಕ್ಷಣೆ ಕುರಿತು ಎನ್.ಡಿ.ಆರ್.ಎಫ್ ಯೋಧರ ತಂಡ ಅಣುಕು ಪ್ರದರ್ಶನ ನೀಡುವ ಮೂಲಕ ಸಾರ್ವಜನಿಕರ ರಕ್ಷಣೆಯ ಅಭಯ ನೀಡಲಿದೆ ಎಂದು ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಿಳಿಸಿದರು.

ಹೊರ ರಾಜ್ಯದಿಂದ ಬರುವ ಎನ್‌ಡಿಆರ್‌ಎಫ್ ತಂಡ ಈ ಹಿಂದೆ ಪೊಲೀಸ್ ಸಮುದಾಯ ಭವನ ಮೈತ್ರಿಯಲ್ಲಿ ಉಳಿದುಕೊಳ್ಳುತ್ತಿತ್ತು. ಈ ಬಾರಿ ಆರ್‌ಟಿಓ ಕಚೇರಿ ಬಳಿಯ ಪೊಲೀಸ್ ಭವನದಲ್ಲಿ ಉಳಿದುಕೊಳ್ಳಲು ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಅನುಭವದ ಆಧಾರದಲ್ಲಿ ತಯಾರಿ: ಈ ಹಿಂದಿನ ಅನುಭವದ ಆಧಾರದಲ್ಲಿ ಪ್ರವಾಹ, ಭೂ ಕುಸಿತ, ರಸ್ತೆ ಸಂಪರ್ಕ ಕಡಿತ ಮತ್ತಿತರ ಪ್ರದೇಶಗಳನ್ನು ಜಿಲ್ಲಾ ವಿಪತ್ತು ನಿರ್ವಹಣಾ ಘಟಕ ಗುರುತು ಮಾಡಿದೆ. ಅತಿಯಾದ ಮಳೆಯಿಂದ ಭೂಕುಸಿತ, ಪ್ರವಾಹ ಎದುರಾದಲ್ಲಿ ಅಲ್ಲಿನ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವುದು, ಸೂಕ್ತ ಸ್ಥಳದಲ್ಲಿ ಕಾಳಜಿ ಕೇಂದ್ರ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಸರಕಾರ ಕೂಡ ಕಾಳಜಿ ಕೇಂದ್ರದಲ್ಲಿರುವ ಸಂತ್ರಸ್ತರಿಗೆ ನೀಡಬೇಕಾದ ತಿಂಡಿ, ಊಟ ಹಾಗೂ ಇನ್ನಿತರೆ ಮೂಲ ಸೌಲಭ್ಯಗಳನ್ನು ಒದಗಿಸುವ ಮಾರ್ಗಸೂಚಿ ನೀಡಿದರೆ. ಅದರಂತೆಯೇ ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಲಿದೆ ಎಂದು ಹೇಳಿದರು.

ಈ ಬಾರಿಯ ಮಳೆಗಾಲದಲ್ಲಿ ಎಂತಹ ಪರಿಸ್ಥಿತಿ ಎದುರಿಸಲು ಕೊಡಗು ಜಿಲ್ಲಾಡಳಿತ ಸಂಪೂರ್ಣ ಸನ್ನದ್ಧವಾಗಿದೆ. ಈಗಾಗಲೇ ಮುಖ್ಯಮಂತ್ರಿಗಳು ಮಳೆಗಾಲಕ್ಕೆ ಸಂಬಂಧಿಸಿದಂತೆ ಕೆಲವು ನಿರ್ದೇಶನಗಳನ್ನು ನೀಡಿದ್ದು, ▶ 6ನೇ ಪುಟಕ್ಕೆ

ವಿದ್ಯುತ್ ಕಂಬಗಳಿಗೆ ಹಾನಿ

ಈಗಾಗಲೇ ಜಿಲ್ಲೆಯ ವಿವಿಧ ಕಡೆಗಳಲ್ಲಿ ಭಾರೀ ಗಾಳಿ ಸಹಿತ ಗುಡುಗು ಸಿಡಿಲಿನೊಂದಿಗೆ ಮಾನ್ಸೂನ್ ಪೂರ್ವ ಮಳೆಯಾಗುತ್ತಿದೆ. ಗಾಳಿಯ ರಭಸಕ್ಕೆ ಕೆಲವು ಕಡೆಗಳಲ್ಲಿ ಮರ, ವಿದ್ಯುತ್ ಕಂಬಗಳು ವ್ಯಾಪಕವಾಗಿ ಮುರಿದು ಬಿದ್ದಿರುವ ಬಗ್ಗೆ ವರದಿಯಾಗಿದೆ. ಸೋಮವಾರಪೇಟೆ ಮಾಲಂಬಿ ಅರಣ್ಯ ವ್ಯಾಪ್ತಿಯಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಕಂಬದ ಸಹಿತ ಧರೆ ಗುರುಳಿದೆ. ವಿದ್ಯುತ್ ಕಂಬ ಮತ್ತು ತಂತಿಗಳು ತುಂಡಾಗಿರುವ ಸ್ಥಳಗಳಲ್ಲಿ ಭರದ ದುರಸ್ತಿ ಕಾರ್ಯವೂ ಸಾಗಿದೆ. ಎಮ್ಮೆಮಾಡು ಗ್ರಾಮದ ಶಫಿಕ್ ಎಂಬುವರ ಮನೆಯ ಮೇಲೆ ಸಿಲ್ವರ್ ಮರ ಬಿದ್ದು, ಅಲ್ಪ ಪ್ರಮಾಣದ ಹಾನಿಯಾಗಿದೆ.

ಅಂಬೇಡ್ಕರ್ ಭವನ ಪೂರ್ಣಗೊಳಿಸುವ ಮನವಿಗೆ ಸಿಎಂ ಸಕಾರಾತ್ಮಕ ಸ್ಪಂದನೆ



ದಲಿತ ವೆಲ್‌ಫೇರ್ ಟ್ರಸ್ಟ್ ಅಧ್ಯಕ್ಷ ಶಾಂತರಾಜು ಮಾಹಿತಿ

ಮೈಸೂರು,ಮೇ 24(ಪಿಎಂ)– ಮೈಸೂರಿನ ಡಾ.ಅಂಬೇಡ್ಕರ್ ಭವನದ ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಮುಂಬರುವ ಏ.14ರ ಅಂಬೇಡ್ಕರ್ ಜಯಂತಿಯಂದು ತಾವೇ ಭವನದ ಉದ್ಘಾಟನೆ ನೆರವೇರಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮನವಿ ಸಲ್ಲಿಸಿದ್ದು, ಇದಕ್ಕೆ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಕರ್ನಾಟಕ ದಲಿತ ವೆಲ್‌ಫೇರ್ ಟ್ರಸ್ಟ್ ಅಧ್ಯಕ್ಷ ಶಾಂತರಾಜು ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ 2008ರಲ್ಲಿ ಭೂ ಮಂಜೂರಾತಿ ದೊರೆತು 2010ರಿಂದ ಕಾಮಗಾರಿ ಪ್ರಾರಂಭಗೊಂಡು 2018ರವರೆಗೆ ನಡೆಯಿತು. ಬಳಿಕ ಕಾಮಗಾರಿ ಸ್ಥಗಿತಗೊಂಡಿದ್ದು, ಇದಕ್ಕೆ ಈ ಹಿಂದಿನ ಸರ್ಕಾರದ ನಿರ್ಲಕ್ಷ್ಯ ಧೋರಣೆ ಕಾರಣ ಎಂದು ದೂರಿದರು.

ಮೇ 22ರಂದು ಟ್ರಸ್ಟ್ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಭೇಟಿಯಾಗಿ ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಳಿಸಿ ಮುಂದಿನ ಅಂಬೇಡ್ಕರ್ ಜಯಂತಿಯಂದು ತಾವೇ ಉದ್ಘಾಟಿಸಬೇಕೆಂದು ಮನವಿ ಸಲ್ಲಿಸಿದ್ದು, ಇದಕ್ಕೆ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಟ್ರಸ್ಟ್‌ನ ಮನವಿಯಂತೆ ಕಾಮಗಾರಿ ಶೀಘ್ರ ಪೂರ್ಣಗೊಳ್ಳುವ ವಿಶ್ವಾಸವಿದೆ ಎಂದರು.

ಮಹಿಷಾ ದಸರಾ ನಿಲ್ಲಿಸಿಲ್ಲ

"ಯಾವ ಪಕ್ಷ ಅಧಿಕಾರದಲ್ಲಿದ್ದರೂ ಮಹಿಷ ದಸರಾ ನಿಲ್ಲಿಸಿಲ್ಲ. ಚಾಮುಂಡಿಬೆಟ್ಟದ ಮಹಿಷಾ ಪ್ರತಿಮೆ ಬಳಿ ಆಚರಣೆಗೆ ತಡೆಯೊಡ್ಡಿದ ಹಿನ್ನೆಲೆಯಲ್ಲಿ ಈ ಆಚರಣೆ ರಾಜ್ಯಾದ್ಯಂತ ನಡೆಯುವಂತೆ ಆಯಿತು. ಈ ಬಾರಿಯೂ ಮಹಿಷಾ ದಸರಾ ಆಚರಣೆ ಮಾಡೇ ಮಾಡುತ್ತೇವೆ. **–ಶಾಂತರಾಜು**

ಮಹದೇವಪ್ಪಗೆ ಸಚಿವ ಸ್ಥಾನ ನೀಡಿ: ಮೈಸೂರು ಭಾಗದ ಕಾಂಗ್ರೆಸ್ ನಾಯಕ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಶಾಂತರಾಜು ಒತ್ತಾಯಿಸಿದರು. ಟಿ.ನರಸೀಪುರ ಕ್ಷೇತ್ರದಲ್ಲಿ ಗೆದ್ದಿರುವ ಮಹದೇವಪ್ಪ, ಮೈಸೂರು ಭಾಗದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲು ಶ್ರಮಿಸಿದ್ದಾರೆ. ಈ ಹಿಂದೆ ಸಚಿವರಾಗಿ ಜನಪರ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. ಅವರಿಗೆ ಸಚಿವ ಸ್ಥಾನ ನೀಡಬೇಕು. ಈ ಸಂಬಂಧ ಸಿದ್ದರಾಮಯ್ಯನವರಿಗೂ ಮನವಿ ಮಾಡಿದ್ದೇವೆ. ಅವರಿಗೂ ಮಹದೇವಪ್ಪರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವ ಇಚ್ಛೆ ಇದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ದಲಿತ ಸಮುದಾಯದವರು ಮುಖ್ಯಮಂತ್ರಿ ಆಗಬೇಕೆಂಬ ಆಕಾಂಕ್ಷೆ ನಮಗೆ ಇದ್ದೇ ಇದೆ. ಕಾಂಗ್ರೆಸ್ ಹೈಕಮಾಂಡ್ ಮತ್ತು ಶಾಸಕರು ಮುಖ್ಯಮಂತ್ರಿ ಸ್ಥಾನದ ಬಗ್ಗೆ ಈಗಾಗಲೇ ತೀರ್ಮಾನ ಮಾಡಿ ಆಗಿದೆ. ಮುಂದೆ ದಲಿತ ಮುಖ್ಯಮಂತ್ರಿ ಸಂಬಂಧ ಹೋರಾಟ ಮಾಡಲಿದ್ದೇವೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಟ್ರಸ್ಟ್ ಕಾರ್ಯದರ್ಶಿ ಚಿಕ್ಕ ಅನ್ನದಾನಿ, ಲೇಖಕ ಸಿದ್ದಸ್ವಾಮಿ, ಮುಖಂಡರಾದ ಜಯಕುಮಾರ್, ಶಿವಪ್ಪ, ರಾಜು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ವಿಧಾನಸಭೆ ಚುನಾವಣೆ ಆಯ್ತು; ಈಗ ಅಭಿವೃದ್ಧಿ ಕಾರ್ಯಗಳತ್ತ ಸಂಸದ ಪ್ರತಾಪ್ ಸಿಂಹರ ಚಿತ್ತ

ಕೇಂದ್ರ ಸರ್ಕಾರ ಅನುಮೋದಿತ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತಷ್ಟು ವೇಗ



ಪ್ರತಾಪ್ ಸಿಂಹ

ಮೈಸೂರು, ಮೇ 24–ವಿಧಾನಸಭೆ ಚುನಾವಣೆ ಸೋಲಿನ ರಾಜಕೀಯ ಹಿನ್ನಡೆಯ ಹೊರತಾಗಿಯೂ ತಾವು ಹಿಡಿದ ಕೆಲಸವನ್ನು ಮುಗಿಸದೇ ಬಿಡುವುದಿಲ್ಲ ಎಂದು ಮೈಸೂರು–ಕೊಡಗು ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಜನತೆಗೆ ಸಂದೇಶ ರವಾನಿಸಿರುವ ಅವರು, ವಿಧಾನಸಭೆ ಸೋಲಿನ ನಂತರ ನೊಂದು ಹತಾಶನಾಗಿದ್ದೆ. ನಾನು ತಂದಿರುವ ಪ್ರತಿಯೊಂದು ಯೋಜನೆಯನ್ನೂ ತ್ವರಿತವಾಗಿ ಅನುಷ್ಠಾನಗೊಳಿಸಲು ನಮ್ಮದೇ ರಾಜ್ಯ ಸರ್ಕಾರವಿದ್ದರೆ ಖಂಡಿತ ಅನುಕೂಲವಾಗುತ್ತಿತ್ತು. ರಾಜ್ಯದಲ್ಲೂ ನಮ್ಮ ಸರ್ಕಾರ ಇದ್ದುದರಿಂದಲೇ ಎಲ್ಲಾ ಅಡೆ–ತಡೆಗಳನ್ನು ಮೆಟ್ಟಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ಪೂರ್ಣಗೊಳಿಸಲು ಸಾಧ್ಯವಾಯಿತು ಎಂದು ತಿಳಿಸಿದ್ದಾರೆ.

ಈಗಾಗಲೇ ನಮ್ಮ ಸರ್ಕಾರದಿಂದ ಅನುಮೋದನೆ ಪಡೆದಿರುವ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನ ಬಾಕಿ ಉಳಿದಿರುವ ಕಾಮಗಾರಿಯನ್ನು ಪೂರ್ಣಗೊಳಿಸುವುದು, ಮೈಸೂರು–ಕುಶಾಲನಗರ ನಾಲ್ಕು ಪಥ ರಸ್ತೆ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸುವುದು, ಮೈಸೂರಿನ ವಿದ್ಯಾರಣ್ಯಪುರಂನಲ್ಲಿರುವ ಸೀವೇಜ್ ಫಾರಂನಲ್ಲಿ ಸಂಗ್ರಹವಾಗಿರುವ ತ್ಯಾಜ್ಯವನ್ನು ವಿಲೇವಾರಿ ಮಾಡುವ ಯೋಜನೆಯ ತ್ವರಿತ ಅನುಷ್ಠಾನ, ಚಾಮುಂಡಿಬೆಟ್ಟವನ್ನು ಕೇಂದ್ರ ಸರ್ಕಾರದ 'ಪ್ರಸಾದ್' ಯೋಜನೆಯಡಿ 49.21 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸುವುದು, ಮೈಸೂರು ವಸ್ತುಪ್ರದರ್ಶನ ಪ್ರಾಧಿಕಾರದ ಮೈದಾನವನ್ನು 100 ಕೋಟಿಗೂ ಹೆಚ್ಚು ವೆಚ್ಚದಲ್ಲಿ ಕೇಂದ್ರ ಸರ್ಕಾರದ 'ಸ್ವದೇಶಿ ದರ್ಶನ' ಯೋಜನೆಯಡಿ ಅಭಿವೃದ್ಧಿಪಡಿಸಲು ಡಿಪಿಆರ್ ಸಿದ್ಧಪಡಿಸಲಾಗುವುದು ಎಂದರು.

"ಜಲ ಜೀವನ್ ಮಿಷನ್ ಯೋಜನೆಯಡಿ 239 ಕೋಟಿ ರೂ. ವೆಚ್ಚದಲ್ಲಿ ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಹಾಗೂ ಇತರ 303 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಸಂಬಂಧ ಸಭೆ ನಡೆಸುವುದು, ಕೊಡಗು ಜಿಲ್ಲಾದ್ಯಂತ 300 ಕೋಟಿ ರೂ. ವೆಚ್ಚದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಪೂರೈಸುವ ಕಾಮಗಾರಿ ಅನುಷ್ಠಾನದ ಬಗ್ಗೆ ಸಭೆ ನಡೆಸುವುದು, ಮೈಸೂರು ವಿಮಾನ ನಿಲ್ದಾಣದ ಉನ್ನತೀಕರಣ ಹಾಗೂ ವಿಸ್ತರಣೆಗಾಗಿ 319 ಕೋಟಿ ರೂ. ವೆಚ್ಚದಲ್ಲಿ ಅಗತ್ಯವಿರುವ ಭೂಸ್ವಾಧೀನಕ್ಕಾಗಿ ಕೆಐಎಡಿಬಿ ಅಧಿಕಾರಿಗಳೊಂದಿಗೆ ಸಭೆ ನಡೆಸುವುದು, 27 ಕೋಟಿ ರೂ. ವೆಚ್ಚದಲ್ಲಿ ಶಾಸ್ತ್ರೀಯ ಕನ್ನಡ ಭಾಷಾ ಅತ್ಯುನ್ನತ ಅಧ್ಯಯನ ಕೇಂದ್ರ ಸ್ಥಾಪಿಸುವುದು, ಹೊರ ವರ್ತುಲ ರಸ್ತೆ ನಿರ್ಮಾಣ ಸಂಬಂಧ ಮುಡಾ ಅಧಿಕಾರಿಗಳೊಂದಿಗೆ ಸಭೆ ನಡೆಸಲು ಕ್ರಮ ಕೈಗೊಳ್ಳಲಾಗುವುದು. –**ಪ್ರತಾಪ್ ಸಿಂಹ**

ಮೈಸೂರು ತಾಲೂಕು ಹುಯಿಲಾಳು ಗ್ರಾಮದಲ್ಲಿ ಕೆಎಸ್‌ಸಿಎ ವತಿಯಿಂದ ಅಂತರರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡುವುದು, ರೈಲ್ವೆ ಇಲಾಖೆ ಅಭಿವೃದ್ಧಿ ಕಾಮಗಾರಿಯನ್ನು 364 ಕೋಟಿ ರೂ. ವೆಚ್ಚದಲ್ಲಿ ತುರ್ತಾಗಿ ಕೈಗೊಳ್ಳುವ ಸಂಬಂಧ ಗತಿಶಕ್ತಿ ಹಾಗೂ ರೈಲ್ವೆ ಅಧಿಕಾರಿಗಳೊಂದಿಗೆ ಸಭೆ ನಡೆಸುವುದು, ಮೈಸೂರಿನ ಶ್ರೀರಾಂಪುರ, ರಮ್ಮನಹಳ್ಳಿ, ಹೂಟಗಳ್ಳಿ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜಲ ಜೀವನ್ ಮಿಷನ್ ಅನುಷ್ಠಾನ ಸಂಬಂಧ ಸಭೆ ನಡೆಸುವುದು, ಮೈಸೂರು ತಾಲೂಕು ದಡದಕಲ್ಲಹಳ್ಳಿ ಗ್ರಾಮದಲ್ಲಿ ಕಿದ್ವಾಯ್ ಸ್ಮಾರಕ ಗ್ರಂಥಿ ಸಂಸ್ಥೆಯ ಸಂಶೋಧನಾ ಘಟಕ ಮತ್ತು ಪೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ಸ್ಥಾಪಿಸುವುದು, ಗ್ಯಾಸ್ ಪೈಪ್‌ಲೈನ್ ಅಳವಡಿಸುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವುದು, ಹುಣಸೂರಿನ 49 ಕೆರೆಗಳಿಗೆ 85 ಕೋಟಿ ರೂ. ವೆಚ್ಚದಲ್ಲಿ ನೀರು ತುಂಬಿಸುವ ಯೋಜನೆಯ ಟೆಂಡರ್ ಕರೆದು ಕಾಮಗಾರಿ ಆರಂಭಿಸುವುದು, ಜಲ ಜೀವನ್ ಮಿಷನ್ ಯೋಜನೆಯಡಿ 211 ಕೋಟಿ ರೂ. ವೆಚ್ಚದಲ್ಲಿ ಹುಣಸೂರು ತಾಲೂಕಿನ 164 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಕಾಮಗಾರಿಯನ್ನು ಅನುಷ್ಠಾನಗೊಳಿಸುವುದು, ಬೃಹತ್ ಮೈಸೂರು ನಿರ್ಮಾಣ ಸಂಬಂಧ ಮೈಸೂರು ಮಹಾನಗರ ಪಾಲಿಕೆಯಲ್ಲಿ ಪ್ರಸ್ತಾವನೆ ಮಂಡಿಸುವುದು ಹಾಗೂ ಪಿರಿಯಾಪಟ್ಟಣದ ಗ್ರಾಮದೇವತೆ ಮಸಣಿಕಮ್ಮ ದೇವಸ್ಥಾನವನ್ನು 10.5 ಕೋಟಿ ರೂ. ವೆಚ್ಚದಲ್ಲಿ ಮರು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದರು. ಈಗಾಗಲೇ ನಮ್ಮ ಸರ್ಕಾರದಿಂದ ಅನುಮೋದನೆ ಪಡೆದಿದ್ದು, ಈ ಕೆಲಸಗಳನ್ನು ತಪ್ಪದೇ ಮಾಡಿ ಮುಗಿಸುವುದಾಗಿ ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ಅಧಿಕಾರಕ್ಕೆ ಬಂದ ವಾರದಲ್ಲಿ 'ಗ್ಯಾರಂಟಿ' ಬಣ್ಣ ಬಯಲು

ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಕಿಡಿ ನುಡಿ



ಬೆಂಗಳೂರು, ಮೇ 24(ಕೆಎಂಶಿ)– ಗ್ಯಾರಂಟಿಗಳ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರದ ನೈಜ ಬಣ್ಣ ಒಂದು ವಾರದಲ್ಲಿಯೇ ಬಯಲಿಗೆ ಬಂದಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದರು.

ಜಾತ್ಯತೀತ ಜನತಾದಳದ ಶಾಸಕಾಂಗ ಪಕ್ಷದ ನಾಯಕರಾಗಿ ಮರು ಆಯ್ಕೆಯಾದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲ ಸಂಪುಟ ಸಭೆಯಲ್ಲಿಯೇ ಗ್ಯಾರಂಟಿಗಳನ್ನು ಜಾರಿಗೆ ತಂದೇ ತರುತ್ತೇವೆ ಎಂದು ಹೇಳಿದ್ದ ಈಗಿನ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು ಈಗ ವರಸೆ ಬದಲಿಸಿ, ಷರತ್ತುಗಳು ಅನ್ವಯ ಆಗುತ್ತವೆ ಎನ್ನುತ್ತಿದ್ದಾರೆ. ಇದ್ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಗ್ಯಾರಂಟಿಗಳ ಭರವಸೆ ನೀಡಿದ್ದೀರಿ. ಜಾರಿ ಮಾಡಿ ಎಂದು ಜನರು ಕೇಳುತ್ತಿದ್ದಾರೆ. ವಿದ್ಯುತ್ ಬಿಲ್ ಕಟ್ಟುತ್ತಿಲ್ಲ, ಬಸ್ ಟಿಕೆಟ್ ಪಡೆಯಲು ನಿರಾಕರಿಸುತ್ತಿದ್ದಾರೆ. ನುಡಿದಂತೆ ನಡೆಯಬೇಕು, ಮಾತು ತಪ್ಪಿದರೆ ಜನರಿಗೆ ಮೋಸ ಮಾಡಿದಂತೆ ಆಗುತ್ತದೆ. ನಾವು ಜನರ ಪರ ನಿಲ್ಲುತ್ತೇವೆ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದರು.

ಹಾದಿ ಬೀದಿಯಲ್ಲಿ ಹೋಗೋರಿಗೆಲ್ಲಾ ಗ್ಯಾರಂಟಿ ಯೋಜನೆ ಕೊಡಕ್ಕಾಗಲ್ಲ ಎಂಬ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯನ್ನು ಒಪ್ಪಲಾಗದು. ಮೊದಲು ಭಾಷಣ ಏನು ಮಾಡಿದ್ದರು. ಅವತ್ತು ಭರವಸೆ ಕೊಡಬೇಕಾದಾಗ ನಿಮಗೆ ತಲೆ ಇರಲಿಲ್ಲವಾ. ಈಗ ಮತ ಕೊಟ್ಟವರೆಲ್ಲಾ ಹಾದಿಬೀದಿಯವರು ಆಗಿಬಿಟ್ರಾ? ಎಂದು ಆಕ್ರೋಶ ವ್ಯಕ್ತಪಡಿಸಿದರು.

"ನಾನು ಕೊಟ್ಟ ಮಾತು ತಪ್ಪಲ್ಲ, ಮಾತಿಗೆ ತಪ್ಪಿದರೆ ಒಂದು ಕ್ಷಣವೂ ಅಧಿಕಾರದಲ್ಲಿ ಇರಲ್ಲ ಅಂದಿದ್ದಾರೆ ಅವರು. ಅವರೆಲ್ಲ ಮಾಡಿರುವ ಭಾಷಣಗಳನ್ನು ಜನರು ನೋಡಿದ್ದಾರೆ, ಕೇಳಿದ್ದಾರೆ. ಎಲ್ಲರಿಗೂ ವಿದ್ಯುತ್ ಉಚಿತ ಎಂದು ಹೇಳಿದ್ದರು. ಈಗ ನೋಡಿದರೆ, ಅದಕ್ಕೆ ಮಾರ್ಗಸೂಚಿ ರಚನೆ ಆಗಬೇಕು ಎನ್ನುತ್ತಿದ್ದಾರೆ. ಅವತ್ತು ವೀರಾವೇಶದಲ್ಲಿ ಮಾತಾಡಿ ಚಪ್ಪಾಳೆ ಗಿಟ್ಟಿಸಿಕೊಂಡರು. ಒಂದೇ ವಾರದಲ್ಲಿ ಅವರ ನಿಜವಾದ ಬಣ್ಣ ಬಯಲಾಗುತ್ತಿದೆ. ಇವರು ಜನರ ಭಾವನೆಗಳ ಜತೆ ಚೆಲ್ಲಾಟ ಆಡುತ್ತಿದ್ದಾರೆ. ಕಾದು ನೋಡೋಣ. ನಂತರ ಜನತೆಯ ಜತೆ ಸೇರಿ ಯಾವ ರೀತಿ ಹೋರಾಟ ಮಾಡಬೇಕೋ ಮಾಡುತ್ತೇನೆ.

–ಹೆಚ್.ಡಿ.ಕುಮಾರಸ್ವಾಮಿ

ಕಳೆದ ಎರಡು ದಿನಗಳ ಮಳೆ ಬೆಂಗಳೂರಿನ ಮೇಲೆ ಯಾವ ರೀತಿಯ ಪರಿಣಾಮ ಬೀರಿದೆ ಎನ್ನುವುದನ್ನು ನಾನು ಬಲ್ಲೆ. ಕಳೆದ ಹದಿನೈದು ವರ್ಷಗಳಿಂದ ಬೆಂಗಳೂರಿನಲ್ಲಿ ಬಿಜೆಪಿ, ಕಾಂಗ್ರೆಸ್ ಆಡಳಿತ ನಡೆಸಿವೆ. ಬೆಂಗಳೂರು ಈಗ ಪ್ರತಿ ಮಳೆಗಾಲದಲ್ಲಿಯೂ ಈ ಸಮಸ್ಯೆಗಳು ಆಗುತ್ತಿವೆ. ಇದರ ಬಗ್ಗೆ ರಾಷ್ಟ್ರೀಯ ಪಕ್ಷಗಳಿಗೆ ಚಿಂತೆ ಇದೆಯಾ? ಎಂದು ಕಿಡಿಕಾರಿದರು.

ಮಹಾರಾಣಿ ಕಾಲೇಜು ಶಿಕ್ಷಣ ಇಲಾಖೆ ಆವರಣದಲ್ಲಿದ್ದ ಬೃಹತ್ ಮರ ಬುಡಮೇಲು



ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ ಬೃಹತ್ ಮರವೊಂದು ಉರುಳಿ ಬಿದ್ದಿರುವುದು.

ಮೈಸೂರು, ಮೇ 24(ಎಂಟಿವೈ)– ಮೈಸೂರು–ಹುಣಸೂರು ಮುಖ್ಯರಸ್ತೆಯ ಕಾಲೇಜು ಶಿಕ್ಷಣ ಇಲಾಖೆ ಆವರಣದಲ್ಲಿದ್ದ ಬೃಹತ್ ಮರವೊಂದರ ಭಾಗ ಧರೆಗುರುಳಿದಿದೆ. ಅದೃಷ್ಟವಶಾತ್ ಭಾರೀ ಅನಾಹುತ ತಪ್ಪಿದೆ.

ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಸ್ನಾತಕೋತ್ತರ ವಿಭಾಗದ ನೂತನ ಕಟ್ಟಡ ಹಿಂಭಾಗವಿರುವ ಕಾಲೇಜು ಶಿಕ್ಷಣ ಇಲಾಖೆ ಆವರಣದಲ್ಲಿದ್ದ 80 ವರ್ಷಕ್ಕೂ ಹಳೆಯದಾದ ಬೃಹತ್ ಮರದ ಒಂದು ಭಾಗ ಧರೆಗುರುಳಿದೆ. ಸುಮಾರು 80ರಿಂದ 100 ಅಡಿಗಿಂತ ಎತ್ತರವಾಗಿರುವ ಈ ಮರ ದೊಡ್ಡ ದೊಡ್ಡ ಕೊಂಬೆಗಳನ್ನು ಹೊಂದಿದ್ದು, ಕೊಂಬೆಗಳ ಭಾರಕ್ಕೆ ಮರದ ಒಂದು ಭಾಗ ಉರುಳಿಬಿದ್ದಿದೆ.

ಮರ ಬೀಳುವಾಗ ಎನ್‌ಸಿಸಿ ಕಚೇರಿ ಹಿಂಭಾಗದ ವಿದ್ಯುತ್ ಕಂಬದ ಲೈನ್ ಮೇಲೆ ಬಿದ್ದಿದೆ. ಅಲ್ಲದೆ, ಮರದ ದೊಡ್ಡ ಕೊಂಬೆಯೊಂದು ಕಾಲೇಜು ಆವರಣದಲ್ಲಿದ್ದ ಮತ್ತೊಂದು ಮರದ ಕೊಂಬೆ ಮೇಲೆ ಬಿದ್ದಿದೆ. ಇದರಿಂದ ಮತ್ತೊಂದು ಮರದ ಕೊಂಬೆಯೂ ತುಂಡರಿಸಿ ಬಿದ್ದಿದೆ. ಬೆಳಗ್ಗೆ 9.30ರ ವೇಳೆಗೆ ಮರ ಧರೆಗೆ ಉರುಳಿ ಬಿದ್ದಿದ್ದರಿಂದ ಕಾಲೇಜು ಶಿಕ್ಷಣ ಮಂಡಳಿ ಸಿಬ್ಬಂದಿ ಕಚೇರಿಗೆ ಬಂದಿರಲಿಲ್ಲ. ಅಲ್ಲದೆ, ಆ ಮರದ ಕೆಳಗೆ ಕೆಲವರು ವಾಹನಗಳನ್ನು ನಿಲುಗಡೆ ಮಾಡುತ್ತಿದ್ದರು. ಮಹಾರಾಣಿ ಕಾಲೇಜಿನ ವಿದ್ಯಾರ್ಥಿನಿಯರು ಮರದ ಕೆಳಗೆ ಕುಳಿತಿರುತ್ತಿದ್ದರು. ಆದರೆ, ಇಂದು ವಿದ್ಯಾರ್ಥಿನಿಯರು ಬರುವ ಮುನ್ನವೇ ಮರ ಉರುಳಿ ಬಿದ್ದಿದ್ದರಿಂದ ಅನಾಹುತ ತಪ್ಪಿದಂತಾಗಿದೆ. ವಿಷಯ ತಿಳಿದು ಸ್ಥಳಕ್ಕೆ ಬಂದ ಚೆಸ್ಕಾಂ ಸಿಬ್ಬಂದಿ ಮರದ ಕೊಂಬೆ ಸಿಲುಕಿ ಬಾಗಿದ್ದ ವಿದ್ಯುತ್ ತಂತಿಯ ಸಂಪರ್ಕ ಕಡಿತಗೊಳಿಸಿದರು.

ರೈತರ ಆರ್ಥಿಕ ನೆರವಿಗೆ ಇ–ಕೆವೈಸಿ ಅಗತ್ಯ

ಮೈಸೂರು, ಮೇ 24– ಕೇಂದ್ರ ಸರ್ಕಾರದ ಪಿಎಂ ಕಿಸಾನ್ ಯೋಜನೆಯಡಿಯಲ್ಲಿ ರೈತರು ಪ್ರತಿ ತಿಂಗಳಿಗೊಮ್ಮೆ 2000 ರೂ.ಗಳ ಆರ್ಥಿಕ ನೆರವನ್ನು ಪಡೆಯುವ ಸಲುವಾಗಿ ಇ–ಕೆವೈಸಿ ಮಾಡಿಸುವುದು ಅತ್ಯಂತ ಅವಶ್ಯಕವಾಗಿದ್ದು, ಮೈಸೂರು ತಾಲೂಕಿನ ಕಸಬಾ ಹೋಬಳಿಯಲ್ಲಿ 713 ರೈತರು, ಜಯಪುರ ಹೋಬಳಿಯಲ್ಲಿ 3794 ರೈತರು, ವರುಣ ಹೋಬಳಿಯಲ್ಲಿ 2895 ರೈತರು ಹಾಗೂ ಇಲವಾಲ ಹೋಬಳಿಯಲ್ಲಿ 2673 ರೈತರುಗಳು ಸೇರಿದಂತೆ ಒಟ್ಟಾರೆ 10075 ರೈತರು ತಾಲೂಕಿನಲ್ಲಿ ಇದುವರೆಗೂ ಇ–ಕೆವೈಸಿ ಮಾಡಿಸದೆ ಈ ಸೌಲಭ್ಯದಿಂದ ವಂಚಿತರಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ತಾಲೂಕಿನ ರೈತರಿಂದ ಇ–ಕೆವೈಸಿ ಮಾಡಿಸಿ ಆರ್ಥಿಕ ನೆರವನ್ನು ಅವರಿಗೆ ದೊರಕಿಸಿ ಕೊಡುವ ಸಲುವಾಗಿ ಹಾಲಿ ಮೈಸೂರು ತಾಲೂಕಿನ ಕೃಷಿ ಇಲಾಖೆ ಅಧಿಕಾರಿ ಅಥವಾ ನೌಕರರು ತಾಲೂಕಿನ ಎಲ್ಲಾ ಹೋಬಳಿಗಳ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಇ–ಕೆವೈಸಿ ಮಾಡಿಸುವ ಕಾರ್ಯದಲ್ಲಿ ನಿರತರಾಗಿದ್ದು, ಸದರಿ ಅಧಿಕಾರಿ ಅಥವಾ ನೌಕರರು ತಮ್ಮ ಗ್ರಾಮಗಳಿಗೆ ಬಂದಾಗ ರೈತರುಗಳು ಅವರೊಂದಿಗೆ ಸಹಕರಿಸಿ ಇ–ಕೆವೈಸಿ ಮಾಡಿಸಿಕೊಳ್ಳಬೇಕೆಂದು ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಚ್.ಡಿ ಪದವಿ



ಮೈಸೂರು: ಡಾ. ಎಂ.ಕೆ.ಮಹೇಶ್ ಅವರ ಮಾರ್ಗದರ್ಶನದಲ್ಲಿ ಬಿ.ಆರ್.ಸುಸ್ಮಿತಾ ಅವರು ಸಸ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಅರ್ಜಿ ಆಹ್ವಾನ

ಮೈಸೂರು, ಮೇ 24–ಮೈಸೂರಿನ ಬೋಗಾದಿ 2ನೇ ಹಂತ, 1ನೇ ಮೇನ್, 1ನೇ ಕ್ರಾಸ್‌ನಲ್ಲಿರುವ ಜೆಎಸ್‌ಎಸ್ ಮಕ್ಕಳ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. 5ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಅರ್ಜಿಯನ್ನು ಜೆಎಸ್‌ಎಸ್ ವಿದ್ಯಾಪೀಠದಲ್ಲಿ, ವಿದ್ಯಾರ್ಥಿನಿಲಯದಲ್ಲಿ ನೇರವಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸಿ ಇ–ಮೇಲ್ ಹಾಗೂ ವಾಟ್ಸಅಪ್ ಮೂಲಕವೂ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊ. 9741452271, 9972014655 ಸಂಪರ್ಕಿಸಬಹುದು.

ತಿ.ನರಸೀಪುರ: ಬೋನಿಗೆ ಬಿದ್ದ ಹೆಣ್ಣು ಚಿರತೆ



ಮೈಸೂರು,ಮೇ 24(ಎಂಟಿವೈ)– ಜಾನುವಾರುಗಳ ಮೇಲೆ ದಾಳಿ ನಡೆಸಿ ಜನರಲ್ಲಿ ಆತಂಕ ಮೂಡಿಸಿದ್ದ ಹೆಣ್ಣು ಚಿರತೆಯೊಂದು ಅರಣ್ಯ ಇಲಾಖೆ ಇರಿಸಿದ್ದ ಬೋನ್‌ಗೆ ಬಿದ್ದಿದೆ. ತಿ.ನರಸೀಪುರ ತಾಲೂಕಿನ ಸೋಸಲೆ ಹೋಬಳಿಯ ಬೂದಹಳ್ಳಿ ಗ್ರಾಮದ ಜಮೀನೊಂದರಲ್ಲಿ ಅರಣ್ಯ ಇಲಾಖೆ ವತಿಯಿಂದ ಇಟ್ಟಿದ್ದ ಬೋನ್‌ಗೆ ಆಹಾರ ಅರಸಿ ಬಂದ 3 ವರ್ಷದ ಹೆಣ್ಣು ಚಿರತೆ ಸೆರೆ ಸಿಕ್ಕಿದೆ. ಬೂದಹಳ್ಳಿ ಗ್ರಾಮದ ಸುತ್ತಮುತ್ತಲಿನ ಪ್ರದೇಶದಲ್ಲಿ ಕಳೆದ ಕೆಲವು ದಿನಗಳಿಂದ ಚಿರತೆ ಹಾವಳಿ ಇರುವುದಾಗಿ ದೂರು ದಾಖಲಾಗಿತ್ತು. ಗ್ರಾಮಸ್ಥರ ದೂರಿನ ಮೇರೆಗೆ ಬೋನು ಇಡಲಾಗಿತ್ತು. ಬೋನ್‌ನಲ್ಲಿದ್ದ ಕೋಳಿಯೊಂದನ್ನು ಬೇಟೆಯಾಡಲು ಬಂದ ಚಿರತೆ ಸೆರೆಸಿಕ್ಕಿದೆ. ಸೆರೆ ಸಿಕ್ಕ ಚಿರತೆಯನ್ನು ವಶಕ್ಕೆ ಪಡೆದ ಅರಣ್ಯಾಧಿಕಾರಿಗಳು ಅದಕ್ಕೆ ಮೈಕ್ರೋ ಚಿಪ್ ಅಳವಡಿಸಿ, ಬಂಡೀಪುರ ಅಭಯಾರಣ್ಯಕ್ಕೆ ಕೊಂಡೊಯ್ದು ಬಿಡುಗಡೆ ಮಾಡಿದ್ದಾರೆ.



ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಮೈಸೂರಿನ ಕುವೆಂಪುನಗರದ ನಿವಾಸಿ ಪೂಜಾ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮೇಯರ್ ಶಿವಕುಮಾರ್, ಬಿಜೆಪಿ ಮುಖಂಡರಾದ ಕೇಬಲ್ ಸೋಮಶೇಖರ್, ವೆಂಕಟೇಶ್, ಕುಮಾರ್ ಉಪಸ್ಥಿತರಿದ್ದರು.

ಕೋಚಿಂಗ್ ಸೆಂಟರ್ ನೋಂದಣಿ ಕಡ್ಡಾಯ

ಮೈಸೂರು, ಮೇ 24– ಪದವಿ ಪೂರ್ವ ಶಿಕ್ಷಣಕ್ಕೆ ಸಂಬಂಧಿಸಿದಂತೆ ಯಾವುದೇ ರೀತಿಯ ಕೋಚಿಂಗ್‌ಗಳನ್ನು ಖಾಸಗಿಯಾಗಿ ಇಲಾಖೆ ಮಾನದಂಡಗಳಿಗೆ ಒಳಪಟ್ಟು ನಡೆಸಲು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಯಿಂದ ಮೇ 31ರೊಳಗೆ ನೋಂದಣಿ ಮಾಡಿಸಿಕೊಳ್ಳಬೇಕು. ನೋಂದಣಿಯಾಗದ ಕೋಚಿಂಗ್ ಸೆಂಟರ್‌ಗಳನ್ನು ಅನಧಿಕೃತ ಕೋಚಿಂಗ್ ಸೆಂಟರ್‌ಗಳೆಂದು ಘೋಷಿಸಿ ತಕ್ಷಣವೇ ಅವುಗಳನ್ನು ಮುಚ್ಚಿಸುವಂತೆ ಕ್ರಮ ಕೈಗೊಳ್ಳಲಾಗುವುದು. ವಿದ್ಯಾರ್ಥಿಗಳು ಅಥವಾ ಪೋಷಕರು ಸಹ ನೋಂದಣಿಯಾದ ಕೋಚಿಂಗ್ ಸೆಂಟರ್‌ಗಳಿಗೆ ಮಾತ್ರ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕಿ ನಾಗಮ್ಮ ಎಂ.ಪಿ (ದೂ.ಸಂ:9448588338) ಅಥವಾ ವಿಷಯ ನಿರ್ವಾಹಕ ಸುನಿಲ್ ಕುಮಾರ್ (ದೂ.ಸಂ.9986815228) ಅವರನ್ನು ಸಂಪರ್ಕಿಸಬಹುದು.

ಸಿಬಿಎಸ್‌ಇ: ವಿನುತಾಗೆ ಶೇ.86



ಮೈಸೂರು, ಮೇ 24–ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಅವಿಲಾ ಕಾನ್ವೆಂಟ್ ವಿದ್ಯಾರ್ಥಿನಿ ಎನ್.ವಿನುತಾ 543 (ಶೇ.86.88) ಅಂಕ ಗಳಿಸುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಈಕೆ ಎಸ್.ನಾಗರಾಜು ಮತ್ತು ಶೀಲಾವತಿ ದಂಪತಿ ಪುತ್ರಿ.


ನಿಧನ



ಷಫೀವುಲ್ಲಾ ಖಾನ್

ಮೈಸೂರು, ಮೇ 24– ಮೈಸೂರಿನ ಸುಭಾಶ್‌ನಗರದ ನಿವಾಸಿ ಹಾಗೂ ಮಾಜಿ ಅರೇಬಿಕ್ ಶಿಕ್ಷಕರಾದ ಷಫೀವುಲ್ಲಾ ಖಾನ್ (75) ಮೇ 21ರಂದು ನಿಧನರಾದರು. ಮೃತರು ಓರ್ವ ಪುತ್ರಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧುವರ್ಗ ಅಗಲಿದ್ದಾರೆ. ಮೇ 22ರಂದು ಮಧ್ಯಾಹ್ನ 1.45ಕ್ಕೆ ಝೊಹರ್ ಪ್ರಾರ್ಥನೆ ನಂತರ ನಮಾಜ್–ಎ–ಜನಾಜ ನಡೆಯಿತು. ಬಳಿಕ ಮೈಸೂರಿನ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ರುದ್ರಭೂಮಿ ಗೇಟ್ ನಂ.8ರಲ್ಲಿ ಮೃತರ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.5.2023 ಗುರುವಾರ, ಮಳೆ ನಕ್ಷತ್ರ: ರೋಹಿಣಿ, 25.05.2023 ರಿಂದ 07.06.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ: ಷಷ್ಠಿ, ನಕ್ಷತ್ರ: ಪುಷ್ಯ, ರಾಹುಕಾಲ: ಮಧ್ಯಾಹ್ನ 1.30ರಿಂದ 3ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ** ಸುವರ್ಣಪ್ರಾಶನ ಅಭಿಯಾನ, ಸ್ಥಳ: ಆಸ್ಪತ್ರೆ ಆವರಣ, ಬೆಳಗ್ಗೆ 8ರಿಂದ.

■ **ಜೆ.ಎಸ್.ಎಸ್.ಎಸ್. ಸಿಂಹಸುಬ್ಬ ಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನ ಗಣಕ ವಿಜ್ಞಾನ :** ಗೀತಾ ಸಂಹಿತಾ, 2023 ರಾಜ್ಯ ಮಟ್ಟದ ಅಂತರ ಕಾಲೇಜು ಸಾಂಸ್ಕೃತಿಕ ಸ್ಪರ್ಧೆ, ಮುಖ್ಯ ಅತಿಥಿಗಳು : ಐಸಿಎಸ್‌ಐ ಸಂಸ್ಥೆಯ ಮುಖ್ಯಸ್ಥ ವಿಜಯರಾವ್, ನೃತ್ಯ ಪಟು ವಿದ್ವಾನ್ ಶ್ರೀಧರ್ ಜೈನ್, ಸಂಸ್ಥೆಯ ಗೌರವ ಕಾರ್ಯದರ್ಶಿ ಶ್ರೀಮತಿ ವನಜಾ ಬಿ. ಪಂಡಿತ್, ಪ್ರಾಂಶುಪಾಲ ಡಾ ಟಿ.ಎಸ್.ರಾಕೇಶ್, ಸ್ಥಳ: ಕಾಲೇಜು ಆವರಣ, ಮೇಟಗಳ್ಳಿ, ಬೆಳಗ್ಗೆ 9.30ಕ್ಕೆ.

■ **ಜೆಎಸ್‌ಎಸ್ ಮೈಸೂರ್ ಅರ್ಬನ್ ಹಾತ್, ಮೈಸೂರು:** ಗುಜರಾತ್ ಹ್ಯಾಂಡಿಕ್ರಾಫ್ಟ್ ಉತ್ಸವ. ಸ್ಥಳ ಅರ್ಬನ್ ಹಾತ್ ಆವರಣ, ಹೆಬ್ಬಾಳು ಕೈಗಾರಿಕ ಪ್ರದೇಶ, ರಿಂಗ್ ರೋಡ್. ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆವರೆಗೆ.

■ **ಭಾರತೀಯ ಜನಕಲಾ ಸಮಿತಿ, ಮೈಸೂರು ಜಿಲ್ಲಾ ಸಮಿತಿ :** ಇಪ್ಟಾ 80ನೇ ವಾರ್ಷಿಕೋತ್ಸವದ ಅಂಗವಾಗಿ ಸಾಂಸ್ಕೃತಿಕ ಲೋಕದ ಸಮಸ್ಯೆಗಳು ಮತ್ತು ಸವಾಲುಗಳು ಕುರಿತು ವಿಚಾರ ಸಂಕಿರಣ, ಉಪಸ್ಥಿತರು : ರಂಗಾಯಣ ಮಾಜಿ ನಿರ್ದೇಶಕ: ಹೆಚ್.ಜನಾರ್ಧನ್ (ಜನ್ನಿ), ಸಾಹಿತಿ ಜಗದೀಶ್ ಕೊಪ್ಪ, ಸಿಪಿಐ ಹಿರಿಯ ಮುಖಂಡ ಹೆಚ್.ಆರ್.ಶೇಷಾದ್ರಿ, ಇಪ್ಟಾ ರಾಜ್ಯಾಧ್ಯಕ್ಷ ಹೆಚ್.ಬಿ. ರಾಮಕೃಷ್ಣ, ಸ್ಥಳ: ರೋಟರಿ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಗೃಹ ಶೋಭೆ:** ಟ್ರೇಡ್ ಫೇರ್. ಸ್ಥಳ: ಮಹಾರಾಜ ಕಾಲೇಜು ಮೈದಾನ. ಬೆಳಗ್ಗೆ 11ರಿಂದ ರಾತ್ರಿ 9 ರವರೆಗೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ:** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ– 9ನೇ ಅಧ್ಯಾಯ, ಸ್ಥಳ: ಶ್ರೀ ರಾಯರ ಮಠ, ಜಯಲಕ್ಷ್ಮಿಪುರಂ, ಸಂಜೆ 5ಕ್ಕೆ.

■ **ನೃತ್ಯ ವಿದ್ಯಾಪೀಠ, ಅಕಾಡೆಮಿ ಆಫ್ ಕ್ಲಾಸಿಕಲ್ ಡ್ಯಾನ್ಸ್ ಅಂಡ್ ಇಂಡಿಯನ್ ಆರ್ಟ್ಸ್ :** ವಿದುಷಿ ಸಿ.ಎನ್. ಅನಿತಾ ಅವರ ಮಾರ್ಗದರ್ಶನದಲ್ಲಿ ಸಾಂಸ್ಕೃತಿಕ ಸಂಭ್ರಮ, ನೃತ್ಯ ವಿದ್ಯಾ ಪೀಠದ ಚಿಗುರು ಪ್ರತಿಭೆಗಳಿಂದ ಭರತನಾಟ್ಯ ಪ್ರದರ್ಶನ, ಧರ್ಮ ಬೋಧನೆ ಮಾಲಿಕೆ–4, ಆರ್ಷ ಜ್ಞಾನ ಕೇಂದ್ರದ ಸ್ವಾಮಿ ಚಿತ್ಸ್ವರೂಪಾನಂದ ಸರಸ್ವತಿ ಅವರಿಂದ ಸನಾತನ ಸಂಸ್ಕೃತಿಯ ಅರಿವು ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು : ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ ಉಪನ್ಯಾಸಕರಾದ ಡಾ. ಭುವನೇಶ್ವರಿ, ನೃತ್ಯ ವಿದ್ಯಾ ಪೀಠದ ವಿದ್ವತ್ ಹಂತದ ವಿದ್ಯಾರ್ಥಿನಿಯರಿಂದ ತಾಳ ಲಹರಿ, ನಟುವಾಂಗ ನಿರ್ವಹಣಾ ಪ್ರದರ್ಶನ, ಸ್ಥಳ: ಕಲ್ಪಕ್ಷೇತ್ರ ಸಭಾಂಗಣ, ವಿಜಯನಗರ 3ನೇ ಹಂತ, ಸಂಜೆ 5.45ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಚಿನ್ಮಯ ಮಿಷನ್ :** ವಿದುಷಿ ಕೃಷ್ಣರಾವ್ ಪ್ರಕಾಶ್ ಅವರಿಂದ ಪತಂಜಲಿಯ ಯೋಗ ಸೂತ್ರಗಳು – ಸಮಾಧಿ ಪಾದ ಕುರಿತು ಉಪನ್ಯಾಸ, ಸ್ಥಳ: ಶ್ರೀ ಚಿನ್ಮಯ ಮಿಷನ್, ಮೈಸೂರು ಆಶ್ರಮದ ದತ್ತ ಸನ್ನಿಧಿ, ಯಜ್ಞಶಾಲೆ, ಗೋಕುಲಂ, ಸಂಜೆ 6ಕ್ಕೆ.

■ **ಶ್ರೀ ಉತ್ತರಾದಿ ಮಠ, ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ವಿದ್ವಾನ್ ಮುಕುಂದಾಚಾರ್ಯ ಪಾಚ್ಚಾಪುರ, ಮುಂಬೈ ಅವರಿಂದ ಭಗವದ್ಗೀತೆ ಪ್ರವಚನ– 9ನೇ ಅಧ್ಯಾಯ, ಸ್ಥಳ: ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಹಾಗೂ ಸಂಜೆ 6.10ಕ್ಕೆ "ಒಂದೇಕಥೆ" ವಿವಿಧ ಮುಖ–ಬಾನುಲಿ ಸರಣಿ, ಪ್ರಸ್ತುತಿ–ಪ್ರಭುಸ್ವಾಮಿ ಮಳಿಮಠ, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟ ಬಾನುಲಿ ಸರಣಿ ಪ್ರಸ್ತುತಿ–ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, 8.30 ಹಾಡು ಹೇಳಿದ ಕಥೆ, ಪ್ರಸ್ತುತಿ–ಮೈಸೂರು ಉಮೇಶ್, 8.40 ಪಂಪನ ಪೆಂಪು–ಪಂಪ ಭಾರತದ ನಾಟಕೀಯ ಸನ್ನಿವೇಶಗಳನ್ನಾಧರಿಸಿದ ಕಾರ್ಯಕ್ರಮ. ಪ್ರಸ್ತುತಿ–ಜಿ.ಶಾಂತಕುಮಾರ್, 9.00 ಚಿತ್ರಗೀತೆಗಳು, 10.00 ಕೆ.ಎಂ.ಸುರೇಂದ್ರ–ನಾಗಸ್ವರ ವಾದನ, ಆರ್.ಚಂದ್ರ–ಡೋಲು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ. **ಮಧ್ಯಾಹ್ನ:** 12.30 ದೇವರನಾಮ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 4.00 ಜನಪದ ಸಂಗೀತ–ಮಳವಳ್ಳಿ ಮಹದೇವಸ್ವಾಮಿ ಮತ್ತು ತಂಡ, 4.30 ವಿಜ್ಞಾನ ಭಾರತಿ–ಸರ್ ಸಿ.ವಿ.ರಾಮನ್ ಯುವ ವಿಜ್ಞಾನಿ ಪ್ರಶಸ್ತಿ ಪುರಸ್ಕೃತರಾದ ಡಾ. ಪ್ರಸನ್ನ ಸಂತೆ ಕಡೂರು ಅವರೊಂದಿಗೆ ಮಾತುಕತೆ, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಸುಸ್ಥಿರ ಕೃಷಿ ಮಾದರಿಗಳು ಹಾಗೂ ಆರ್ಥಿಕತೆ ಕುರಿತು ಕೆ.ಆರ್.ನಗರ ತಾಲ್ಲೂಕು, ಕಸಬಾ ಹೋಬಳಿ ಕಾಮೇನಹಳ್ಳಿಯ ಕೃಷಿಕ ದಂಪತಿ ಎಂ.ಗಿರಿಜಾ ಹಾಗೂ ವಿ.ಮುರಳಿ ಅವರೊಂದಿಗೆ ಮಾತುಕತೆ, 8.00 ಯುವವಾಣಿ–ಮೈಸೂರಿನ ಜೆಎಸ್‌ಎಸ್ ಇನ್‌ಸ್ಟಿಟ್ಯೂಟ್ ಆಫ್ ಸ್ಪೀಚ್ ಅಂಡ್ ಹಿಯರಿಂಗ್‌ನ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ವೈವಿಧ್ಯ, 9.30 ಕನ್ನಡ ಭಾರತಿ, 10.00 ನಾಟಕ "ಕುಟುಂಬಾಯಣ" ರಚನೆ–ವೈ.ವಿ. ಗುಂಡೂರಾವ್, ನಿರ್ಮಾಣ–ಉಮೇಶ್ ಎಸ್.ಎಸ್. 10.30 ಸವಿನೆನಪು

ಮೇ 29, ವಿಶೇಷ ಕೆರಿಯರ್ ಗೈಡೆನ್ಸ್, ಕೌನ್ಸಿಲಿಂಗ್ ಶಿಬಿರ

ಮೈಸೂರು, ಮೇ 24– ಮೈಸೂರಿನ ಎಂಐಎಫ್‌ಎಸ್‌ಇ ವಿದ್ಯಾಸಂಸ್ಥೆ ವತಿಯಿಂದ ಮೇ 29 (ಸೋಮವಾರ) ಬೆಳಗ್ಗೆ 10.30ಕ್ಕೆ ಜೆಎಲ್‌ಬಿ ರಸ್ತೆಯ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರಿಂಗ್ ಸಭಾಂಗಣದಲ್ಲಿ ವಿಶೇಷ ಕೆರಿಯರ್ ಗೈಡೆನ್ಸ್ ಮತ್ತು ಕೌನ್ಸಿಲಿಂಗ್ ಶಿಬಿರವನ್ನು ಏರ್ಪಡಿಸಲಾಗಿದೆ. ಈ ಶಿಬಿರದಲ್ಲಿ ಎಂಐಎಫ್‌ಎಸ್‌ಇ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ನಡೆಯುತ್ತಿರುವ ಹೆಲ್ತ್ ಮತ್ತು ಸೇಫ್ಟಿ ಡಿಪ್ಲೊಮಾ ಕೋರ್ಸ್‌ಗಳ ಸಂಬಂಧ ಮಾಹಿತಿ ನೀಡಲಾಗುವುದು. ಈ ಕಾರ್ಯಕ್ರಮದಲ್ಲಿ ವಿವಿಧ ಉದ್ಯಮ ಪರಿಣಿತ ಸೇಫ್ಟಿ ಅಧಿಕಾರಿಗಳು, ಪ್ರಾಧ್ಯಾಪಕರು ಮಾಹಿತಿ ನೀಡಲಿದ್ದಾರೆ. ಹೆಲ್ತ್ ಮತ್ತು ಸೇಫ್ಟಿ ಕ್ಷೇತ್ರದಲ್ಲಿ ವ್ಯಾಸಂಗ ಮಾಡಿದಂತ ವಿದ್ಯಾರ್ಥಿಗಳಿಗೆ ವ್ಯಾಪಕ ಉದ್ಯೋಗಾವಕಾಶವಿದೆ. ಸೋಮವಾರದಂದು ಏರ್ಪಡಿಸಲಾಗಿರುವ ಕೌನ್ಸಿಲಿಂಗ್ ಶಿಬಿರಕ್ಕೆ ಪ್ರವೇಶ ಉಚಿತವಾಗಿದ್ದು, ಆಸಕ್ತರು ಮುಂಚಿತವಾಗಿಯೇ ಮೊ.9008717027 ಮೂಲಕ ಹೆಸರು ನೋಂದಾಯಿಸಿಕೊಳ್ಳಬಹುದು.

ಇಪಿಎಫ್ ಸದಸ್ಯರ ಅಹವಾಲು ಆಲಿಕೆ

ಮೈಸೂರು, ಮೇ 24– ಮೈಸೂರು ಕ್ಷೇತ್ರೀಯ ಭವಿಷ್ಯ ನಿಧಿ ಪ್ರಾದೇಶಿಕ ಕಚೇರಿ ವತಿಯಿಂದ ಮೇ 29 (ಸೋಮವಾರ) ರಂದು ಬೆಳಗ್ಗೆ 9 ಗಂಟೆಯಿಂದ ಹೆಚ್.ಡಿ. ಕೋಟೆ ಹೆಚ್.ಡಿ. ರಸ್ತೆ ಟಿಎಪಿಸಿ ಎಂಎಸ್ ಮತ್ತು ಪಾಂಡವಪುರ ಪಟ್ಟಣ ಪುರಸಭಾ ಸಭಾಂಗಣದಲ್ಲಿ 'ಭವಿಷ್ಯ ನಿಧಿ ನಿಮ್ಮ ಹತ್ತಿರ 2.0' ಅಡಿಯಲ್ಲಿ ಜಿಲ್ಲಾ ವ್ಯಾಪ್ತಿಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಪಿಎಫ್ ಸದಸ್ಯರು, ಪಿಂಚಣಿದಾರರು, ಉದ್ಯೋಗದಾತರು ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯನ್ನು ಸಂಪರ್ಕಿಸುವಂತೆ ಕೋರಲಾಗಿದೆ. ಅಲ್ಲದೆ ವಿವರಗಳಿಗಾಗಿ ಸಾರ್ವಜನಿಕರ ಸಂಪರ್ಕಾಧಿಕಾರಿಯನ್ನು 0821–599200 /222 ಮೂಲಕ ಸಂಪರ್ಕಿಸುವುದು. ಇಲ್ಲವೇ ಮೈಸೂರಿನ ಕ್ಷೇತ್ರೀಯ ಭವಿಷ್ಯ ನಿಧಿ ಕಚೇರಿ ಸಾಮಾಜಿಕ ಮಾಧ್ಯಮ ವೇದಿಕೆ (@epfomysore)ಗೆ ಭೇಟಿ ನೀಡಬಹುದು.

ಸಂಸತ್ತನ್ನು ಸಾಂವಿಧಾನಿಕ ಮೌಲ್ಯಗಳಿಂದ ನಿರ್ಮಿಸಲಾಗಿದೆ, ಅಹಂಕಾರದ ಇಟ್ಟಿಗೆಗಳಿಂದಲ್ಲ

ನವದೆಹಲಿ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂಸತ್ತಿನ ನೂತನ ಕಟ್ಟಡ ಉದ್ಘಾಟಿಸದಿರುವುದು ಅಥವಾ ಸಮಾರಂಭಕ್ಕೆ



ಅವರನ್ನು ಆಹ್ವಾನಿಸದಿರುವುದು ದೇಶದ ಅತ್ಯುನ್ನತ ಸಾಂವಿಧಾನಿಕ ಹುದ್ದೆಗೆ ಮಾಡಿದ ಅವಮಾನ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಸಂಸತ್ತನ್ನು ಅಹಂಕಾರದ ಇಟ್ಟಿಗೆಗಳಿಂದ ನಿರ್ಮಿಸಲಾಗಿಲ್ಲ. ಆದರೆ ಸಾಂವಿಧಾನಿಕ ಮೌಲ್ಯಗಳ ಮೂಲಕ ನಿರ್ಮಿಸಲಾಗಿದೆ ಎಂದು ಅವರು ಹೇಳುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಹೊಸ ಸಂಸತ್ತಿನ ಸಂಕೀರ್ಣದ ಉದ್ಘಾಟನೆಯನ್ನು ಕಾಂಗ್ರೆಸ್, ಎಡ, ಎಎಪಿ ಮತ್ತು ಟಿಎಂಸಿ ಸೇರಿದಂತೆ 19 ವಿರೋಧ ಪಕ್ಷಗಳು ಬಹಿಷ್ಕರಿಸುವ ನಿರ್ಧಾರವನ್ನು ಘೋಷಿಸಿದ ನಂತರ ರಾಹುಲ್ ಗಾಂಧಿ ಈ ಸಂಬಂಧ ಮೇಲಿನಂತೆ ಟ್ವೀಟ್ ಮಾಡಿದ್ದಾರೆ.

ಕಂದಕಕ್ಕೆ ಉರುಳಿ ಬಿದ್ದ ವಾಹನ; 7 ದುರ್ಮರಣ

ಕಿಶ್ತ್ವಾರ (ಜಮ್ಮು–ಕಾಶ್ಮೀರ), ಮೇ 24– ಇಲ್ಲಿನ ಕಿಶ್ತ್ವಾರದಲ್ಲಿ ವಾಹನವೊಂದು ಆಳವಾದ ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ 7 ಮಂದಿ ಸಾವನ್ನಪ್ಪಿ, ಓರ್ವ ಗಂಭೀರವಾಗಿ ಗಾಯಗೊಂಡಿರುವ ಘಟನೆ ಬುಧವಾರ ನಡೆದಿದೆ. ದಂಗದೂರು ಪವರ್ ಪ್ರಾಜೆಕ್ಟ್‌ನ 10 ಕಾರ್ಮಿಕರನ್ನು ಕರೆದೊಯ್ಯುತ್ತಿದ್ದಾಗ ದಂಗದೂರು ಅಣೆಕಟ್ಟಿನ ಬಳಿ ಅಪಘಾತ ಸಂಭವಿಸಿದೆ. ಕ್ರೂಸರ್ ವಾಹನವು ಕಣಿವೆಯಲ್ಲಿ ಬಿದ್ದಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ವಾಹನ ಆಳವಾದ ಕಂದಕಕ್ಕೆ ಉರುಳಿದ ಪರಿಣಾಮ ಸಾವು–ನೋವು ಸಂಭವಿಸಿದೆ ಎನ್ನಲಾಗಿದೆ.

ಆಟೋ ಚಾಲಕನ ದೋಚಿದ್ದ ದುಷ್ಕರ್ಮಿ ಬಂಧನ

ಹಲವೆಡೆ ಸುಲಿಗೆ ಪ್ರಕರಣಗಳಲ್ಲಿ ಭಾಗಿ

ಮೈಸೂರು, ಮೇ 24–ಆಟೋ ಚಾಲಕನನ್ನು ಬಾಡಿಗೆಗೆ ಕರೆದೊಯ್ದು ಆತನಿಗೆ ಚಾಕು ತೋರಿಸಿ ಮೊಬೈಲ್, ನಗದು ಜೊತೆಗೆ ಆಟೋವನ್ನು ಕದ್ದೊಯ್ದ ಖದೀಮನೋರ್ವನನ್ನು ಮೈಸೂರು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಈ ಪ್ರಕರಣದಲ್ಲಿ ಇಬ್ಬರು ದುಷ್ಕರ್ಮಿಗಳು ಭಾಗಿಯಾಗಿದ್ದು, ಇದೀಗ ಬಂಧಿತನಿಂದ ಆಟೋ ಮತ್ತು ಮೊಬೈಲ್ ವಶಪಡಿಸಿಕೊಂಡಿದ್ದು, ಮತ್ತೋರ್ವನಿಗಾಗಿ ಹುಡುಕಾಟ ನಡೆಯುತ್ತಿದೆ.

ವಿವರ: ಶ್ರೀರಂಗಪಟ್ಟಣ ತಾಲೂಕು ಹೊಸಹಳ್ಳಿ ಪಂಪ್‌ಹೌಸ್, ಮಾರುತಿ ಲೇಔಟ್ ನಿವಾಸಿಯಾದ ಆಟೋಚಾಲಕ ರವಿ ಎಂಬಾತ ಮೇ 18ರಂದು ರಾತ್ರಿ 9 ಗಂಟೆ ಸುಮಾರಿನಲ್ಲಿ ಮೈಸೂರಿನ ಕಾಡಾ ಕಚೇರಿ ಮುಂದೆ ಬರುತ್ತಿದ್ದಾಗ ಎದುರಾದ ಇಬ್ಬರು ದುಷ್ಕರ್ಮಿಗಳು ಕಡಕೊಳಕ್ಕೆ ಬಾಡಿಗೆ ಬರಬೇಕೆಂದು ಆತನನ್ನು ಕೇಳಿದ್ದಾರೆ. ಅದಕ್ಕೆ ಒಪ್ಪಿಕೊಂಡು ಅವರನ್ನು ಕರೆದೊಯ್ಯುತ್ತಿರುವಾಗ ಬಂಡಿಪಾಳ್ಯ ಎಪಿಎಂಸಿ ಬಳಿ ತೆರಳುತ್ತಿದ್ದ ವೇಳೆ ಪ್ರಯಾಣಿಕರಂತಿದ್ದ ಈ ಇಬ್ಬರು ದುಷ್ಕರ್ಮಿಗಳು, ತಮ್ಮ ಊರಿಗೆ ಕಡಕೊಳದಿಂದ ಈ ಸಮಯದಲ್ಲಿ ಬಸ್ ಸಿಗುವುದಿಲ್ಲ ಹೀಗಾಗಿ ದೇವಲಾಪುರಕ್ಕೆ ಕರೆದೊಯ್ಯುವಂತೆ ಕೇಳಿದ್ದಾರೆ. ಅದರಂತೆ ಆಟೋಚಾಲಕ ದೇವಲಾಪುರಕ್ಕೆ ಹೋದಾಗ ಇನ್ನೂ ಸ್ವಲ್ಪ ಮುಂದೆ ಹೋಗುವಂತೆಯೂ, ಅಲ್ಲಿ ತಮ್ಮ ಸ್ನೇಹಿತ ಬರಲಿದ್ದು, ಆತನಿಗೆ ಎಣ್ಣೆ (ಮದ್ಯ) ಕೊಡಬೇಕೆಂದು ಹೇಳಿದ್ದಾರೆ. ದೇವಲಾಪುರ ಗೇಟ್ ಸಮೀಪದ ಪೂರ್ಣಿಮಾ ಫಾರಂ ಬಳಿ ಆಟೋವನ್ನು ನಿಲ್ಲಿಸುವಂತೆ ಹೇಳಿದ್ದಾರೆ. ಈ ವೇಳೆ ಆಟೋಚಾಲಕ ರವಿ ಮೂತ್ರ ವಿಸರ್ಜನೆಗಾಗಿ ಆಟೋ ಸ್ಟಾರ್ಟ್‌ನಲ್ಲಿದ್ದು, ಅದರಿಂದ ಇಳಿದಾಗ ಇಬ್ಬರು ದುಷ್ಕರ್ಮಿಗಳು ಆತನಿಗೆ ಚಾಕು ತೋರಿಸಿ, ಆತನ ಬಳಿ ಇದ್ದ ಮೊಬೈಲ್ ಮತ್ತು 2 ಸಾವಿರ ನಗದು ದೋಚಿದ್ದಲ್ಲದೇ ಆಟೋವನ್ನೂ ಕೊಂಡೊಯ್ದಿದ್ದಾರೆ.

ಈ ಸಂಬಂಧ ರವಿ ವರುಣ ಠಾಣೆಗೆ ದೂರು ನೀಡಿದ್ದು, ಜಿಲ್ಲಾ ಎಸ್ಪಿ ಸೀಮಾ ಲಾಟ್ಕರ್ ನಿರ್ದೇಶನದ ಮೇರೆಗೆ ಸಬ್ ಇನ್ಸ್‌ಪೆಕ್ಟರ್‌ಗಳಾದ ಜಿ.ಎಸ್.ಸ್ವರ್ಣ ಮತ್ತು ವಿ.ಚೇತನ್ ನೇತೃತ್ವದ ಪೊಲೀಸರ ತಂಡ ಓರ್ವನನ್ನು ಬಂಧಿಸಿ ಆಟೋ ಮತ್ತು ಮೊಬೈಲ್ ವಶಪಡಿಸಿಕೊಂಡಿದೆ. ಈ ಖದೀಮರು ಇಲವಾಲ, ಬಿಳಿಕೆರೆ ಮತ್ತು ಮೈಸೂರು ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಸುಲಿಗೆ ಮತ್ತು ದೇವಸ್ಥಾನಗಳಲ್ಲಿ ಕಳವು ಪ್ರಕರಣಗಳಲ್ಲಿ ಭಾಗಿಯಾಗಿದ್ದರು ಎಂಬುದು ವಿಚಾರಣೆ ವೇಳೆ ತಿಳಿದು ಬಂದಿದೆ ಎಂದು ಜಿಲ್ಲಾ ಎಸ್ಪಿ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಕಳೆದು ಹೋಗಿದ್ದ 30 ಲಕ್ಷ ರೂ. ಮೌಲ್ಯದ 115 ಮೊಬೈಲ್ ಪತ್ತೆ

ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಅವರಿಂದ ವಾರಸುದಾರರಿಗೆ ಹಸ್ತಾಂತರ



ಮೈಸೂರು, ಮೇ 24 (ಆರ್‌ಕೆ)–ಸಾರ್ವಜನಿಕರು ಕಳೆದುಕೊಂಡಿದ್ದ 30 ಲಕ್ಷ ರೂ. ಮೌಲ್ಯದ 115 ಮೊಬೈಲ್ ಫೋನ್‌ಗಳನ್ನು ಮೈಸೂರು ನಗರ ಸಿಇಎನ್ ಕ್ರೈಂ ಠಾಣೆ ಪೊಲೀಸರು ಪತ್ತೆ ಮಾಡಿದ್ದಾರೆ.

ವಶಪಡಿಸಿಕೊಂಡಿದ್ದ ಮೊಬೈಲ್ ಫೋನ್‌ಗಳನ್ನು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಅವರು ನಜರ್‌ಬಾದ್‌ನಲ್ಲಿರುವ ಕಚೇರಿ ಸಭಾಂಗಣದಲ್ಲಿ ಅವುಗಳ ವಾರಸುದಾರರಿಗೆ ಒಪ್ಪಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮೊಬೈಲ್ ಕಳೆದು ಹೋದರೆ ತಕ್ಷಣ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಬ್ಲಾಕ್ ಮಾಡಿಸಬೇಕು. ಠಾಣೆಗೆ ಬರಲು ಸಾಧ್ಯವಾಗದಿದ್ದರೆ ಕರ್ನಾಟಕ ರಾಜ್ಯ ಪೊಲೀಸ್ (ಕೆಎಸ್‌ಪಿ) ಅಪ್ಲಿಕೇಷನ್‌ನಲ್ಲಿ ಆನ್‌ಲೈನ್ ಮೂಲಕವೂ ದೂರು ಸಲ್ಲಿಸಿ, ಸ್ವೀಕೃತಿ ಪಡೆಯಬಹುದು ಎಂದರು.

ನಂತರ ಕಳೆದು ಹೋದ ಮೊಬೈಲ್ ಫೋನ್ ಮತ್ತು ದೂರಿನ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಸಿಇಐಆರ್ (Central Equipment Identity Register) ಪೋರ್ಟಲ್ ಮತ್ತು ಮೈಸೂರು ನಗರ ಪೊಲೀಸ್ ಘಟಕದಿಂದ ಪ್ರಾರಂಭಿಸಿರುವ ಮೊಬೈಲ್ ನಂಬರ್ 6363255135ಗೆ Hai ಎಂದು ವಾಟ್ಸಾಪ್ ಮಾಡಿ, ನಂತರ ಕೇಳುವ ಮಾಹಿತಿ ನೀಡಿದಲ್ಲಿ ದೂರು ದಾಖಲಾಗುತ್ತದೆ. ಆ ದೂರುಗಳನ್ನು ಮೈಸೂರು ನಗರ ಸಿಇಎನ್ ಕ್ರೈಂ ಠಾಣೆ ಪೊಲೀಸರು ಪರಿಶೀಲಿಸಿ ಸಿಇಐಆರ್ ಪೋರ್ಟಲ್ ಮೂಲಕ ಮೊಬೈಲ್ ಫೋನ್‌ಗಳನ್ನು ಪತ್ತೆ ಮಾಡುತ್ತಾರೆ ಎಂದು ಅವರು ತಿಳಿಸಿದರು.

ಮೊಬೈಲ್ ಕಳೆದುಕೊಂಡರೆ ಅಥವಾ ಯಾರಾದರೂ ಕಿತ್ತುಕೊಂಡು ಹೋದರೆ, ತಡಮಾಡದೇ ದೂರು ಸಲ್ಲಿಸಿದಲ್ಲಿ ಸಿಇಐಆರ್ ಪೋರ್ಟಲ್ ಮೂಲಕ ಪತ್ತೆ ಮಾಡಲಾಗುವುದು. ಸಾರ್ವಜನಿಕರು ನಿರ್ಲಕ್ಷ್ಯ ಮಾಡಬಾರದು. ಕಳೆದು ಹೋದ ಮೊಬೈಲ್ ಅನ್ನು ಯಾರಾದರೂ ಬಳಸಲು ಪ್ರಯತ್ನಿಸಿದರೂ, ಸಿಇಐಆರ್ ಪೋರ್ಟಲ್‌ನಲ್ಲಿ ದೂರು ದಾಖಲಾಗುತ್ತಿದ್ದಂತೆಯೇ ಆ ಫೋನ್ ನೆಟ್‌ವರ್ಕ್ ಸಂಪರ್ಕ ಲಭ್ಯವಾಗುವುದಿಲ್ಲವಾದ್ದರಿಂದ ಸಿಕ್ಕಿದ ಹಾಗೂ ಕದ್ದ ಮೊಬೈಲ್ ಫೋನ್‌ಗಳು ಉಪಯೋಗಕ್ಕೆ ಬರುವುದಿಲ್ಲ ಎಂದು ಬಿ.ರಮೇಶ್ ತಿಳಿಸಿದರು.

ಬುಧವಾರ 30 ಮಂದಿ ವಾರಸುದಾರರಿಗೆ ಪೊಲೀಸ್ ಕಮಿಷನರ್ ಮೊಬೈಲ್ ಫೋನ್‌ಗಳನ್ನು ಹಿಂದಿರುಗಿಸಿದರು. ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್. ಜಾಹ್ನವಿ, ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸಿಇಎನ್ ಠಾಣೆ ಇನ್ಸ್‌ಪೆಕ್ಟರ್ ಯೋಗಾನಂಜಪ್ಪ, ಸಬ್ ಇನ್ಸ್‌ಪೆಕ್ಟರ್‌ಗಳಾದ ಪೂಜಾ, ಸಿದ್ದೇಶ್, ಫೈರೋಜ್ ಖಾನ್, ಎಎಸ್‌ಐ ಸುಭಾಷ್, ಸಿಬ್ಬಂದಿಗಳಾದ ಅನಿಲ್, ಬಾದ್‌ಷಾ, ನಟರಾಜ್ ಮತ್ತು ಯಾಕುಬ್ ಶರೀಫ್ ಮೊಬೈಲ್ ಪತ್ತೆ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ರೈಲ್ವೆಯ ಸುರಕ್ಷಾ ಕಾರ್ಯಾಚರಣೆಯಲ್ಲಿ ಉತ್ತಮ ಕಾರ್ಯ ನಿರ್ವಹಣೆ

35 ಸಿಬ್ಬಂದಿಗೆ ನಗದು, ಪ್ರಶಸ್ತಿಯೊಂದಿಗೆ ಸನ್ಮಾನ



ಮೈಸೂರು,ಮೇ 24(ಪಿಎಂ)– ನೈರುತ್ಯ ರೈಲ್ವೆ ಮೈಸೂರು ವಿಭಾಗದ ಮಹಿಳಾ ಕಲ್ಯಾಣ ಸಂಸ್ಥೆ ವತಿಯಿಂದ ರೈಲ್ವೆಯ ಸುರಕ್ಷಾ ಕಾರ್ಯಾಚರಣೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿರುವ 35 ನೌಕರರನ್ನು ನಗದು, ಪ್ರಶಸ್ತಿಯೊಂದಿಗೆ ಸನ್ಮಾನಿಸಲಾಯಿತು.

ಮೈಸೂರಿನ ನೈರುತ್ಯ ರೈಲ್ವೆ ಮೈಸೂರು ವಿಭಾಗೀಯ ವ್ಯವಸ್ಥಾಪಕರ ಕಚೇರಿಯ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸುರಕ್ಷತೆಗೆ ಸಂಬಂಧಿಸಿದಂತೆ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸುತ್ತಿರುವ 35 ಹಿರಿಯ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಹಳಿ ನಿರ್ವಾಹಕರು, ಸಿಗ್ನಲ್ ನಿರ್ವಾಹಕರು, ಓವರ್ ಹೆಡ್ ಸಲಕರಣೆ ಖಲಾಸಿಗಳು, ರೈಲು ನಿರ್ವಾಹಕರು, ಚಾಲಕರು, ವಿಭಾಗ ನಿಯಂತ್ರಕರು ಮತ್ತು ನಿಲ್ದಾಣ ವ್ಯವಸ್ಥಾಪಕರು ಸನ್ಮಾನಕ್ಕೆ ಭಾಜನರಾದರು.

ಪ್ರಶಸ್ತಿ ಪ್ರದಾನ ಮಾಡಿದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರೂ ಆದ ಮಹಿಳಾ ಕಲ್ಯಾಣ ಸಂಸ್ಥೆ ಅಧ್ಯಕ್ಷೆ ಶಿಲ್ಪಿ ಅಗರ್ವಾಲ್ ಮಾತನಾಡಿ, ರೈಲ್ವೆ ಕಾರ್ಯಾಚರಣೆಯಲ್ಲಿ ಸುರಕ್ಷತೆ ಎಂಬುದು ಅತೀ ಮುಖ್ಯವಾಗಿದೆ. ನಿಯಮಿತವಾಗಿ ಗಸ್ತು ತಿರುಗುವ ಮೂಲಕ ಹಳಿಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

ಯಾವುದೇ ಸುರಕ್ಷತಾ ಕಾರ್ಯಾಚರಣೆಯಲ್ಲಿ ಸುಲಭದಾರಿಯನ್ನು ಆಶ್ರಯಿಸದೇ ಪ್ರಮಾಣೀಕೃತ ವಿಧಾನಗಳಂತೆಯೇ ಕೆಲಸ ಮಾಡಬೇಕು. ರೈಲುಗಳ ಸುರಕ್ಷಿತ ಚಾಲನೆಗಾಗಿ ಸೂಚಿಸಲಾದ ವಿಧಾನಗಳನ್ನೇ ಪಾಲನೆ ಮಾಡಬೇಕು. ತಪಾಸಣೆ ಸಮಯದಲ್ಲಿ ಕಂಡುಬರುವ ನ್ಯೂನತೆಗಳನ್ನು ಪೂರ್ಣ ಪ್ರಮಾಣದಲ್ಲಿ ನಿವಾರಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು. ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ವಿನಾಯಕ್ ಆರ್.ನಾಯಕ್, ಇ.ವಿಜಯಾ ಸೇರಿದಂತೆ ಹಿರಿಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ ಸದಸ್ಯರು ಹಾಜರಿದ್ದರು.

ರಾಡ್‌ನಿಂದ ಹೊಡೆದು ಅಂಗನವಾಡಿ ಕಾರ್ಯಕರ್ತೆಯ ಬರ್ಬರ ಹತ್ಯೆ

ಸಿದ್ದಲಿಂಗಪುರ ಬಳಿ ಹೆದ್ದಾರಿ ಬೇಕರಿಯಲ್ಲಿ ಬುಧವಾರ ಸಂಜೆ ಕೃತ್ಯ, ಶಂಕಿತ ಆರೋಪಿ ಪರಾರಿ

ಮೈಸೂರು, ಮೇ24(ಆರ್‌ಕೆ)–ಅಂಗನವಾಡಿ ಕಾರ್ಯಕರ್ತೆಯನ್ನು ಕಬ್ಬಿಣದ ರಾಡ್‌ನಿಂದ ಹೊಡೆದು ಹತ್ಯೆಗೈದಿರುವ ಘಟನೆ ಮೈಸೂರು ತಾಲೂಕು ಸಿದ್ದಲಿಂಗಪುರ ಬಳಿ ಮೈಸೂರು–ಬೆಂಗಳೂರು ದಶಪಥ ಹೆದ್ದಾರಿ ಬೇಕರಿಯೊಂದರಲ್ಲಿ ಬುಧವಾರ ಸಂಜೆ ಸಂಭವಿಸಿದೆ.



ಮಮತಾ

ಪಾಂಡವಪುರ ತಾಲೂಕು, ಕೆರೆತೊಣ್ಣೂರಿನ ಅಂಗನವಾಡಿ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದ ಮಮತಾ(31) ಕೊಲೆಯಾದ ಮಹಿಳೆ. ಮದುವೆಯಾಗಿ ಇಬ್ಬರು ಮಕ್ಕಳಿರುವ ಮಮತಾ ಪತಿಯಿಂದ ದೂರವಿದ್ದು, ಸಿದ್ದಲಿಂಗಪುರದಲ್ಲಿ ವಾಸವಾಗಿದ್ದ ಹಾಸನ ಮೂಲದ ಮೋಹನ್ ಎಂಬ 26 ವರ್ಷದ ಯುವಕನೊಂದಿಗೆ ಸಂಪರ್ಕ ಏರಿಸಿಕೊಂಡಿದ್ದರು ಎಂದು ಹೇಳಲಾಗಿದೆ.

ಮೋಹನ್ ಸಿದ್ದಲಿಂಗಪುರದಲ್ಲಿ ಹೆದ್ದಾರಿ ಬದಿ ಬೇಕರಿಯೊಂದನ್ನು ನಡೆಸುತ್ತಿದ್ದು, ಅದಕ್ಕೆ ಮಮತಾ ಸಹ ಹಣ ಹೂಡಿಕೆ ಮಾಡಿದ್ದಳು ಎನ್ನಲಾಗಿದೆ. ಆಗಿಂದಾಗ್ಗೆ ಸಿದ್ದಲಿಂಗಪುರಕ್ಕೆ ಬಂದು–ಹೋಗುತ್ತಿದ್ದ ಆಕೆ, ಇಂದು ಸಂಜೆ ಬೇಕರಿಗೆ ಬಂದಾಗ ಮಾತಿಗೆ ಮಾತು ಆರಂಭವಾಗಿ ಮೋಹನ್ ರಾಡ್‌ನಿಂದ ತಲೆಗೆ ಹೊಡೆದು ಹತ್ಯೆ ಮಾಡಿ ಪರಾರಿಯಾಗಿದ್ದಾನೆ ಎಂದು ಗ್ರಾಮಸ್ಥರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸ್ಥಳಕ್ಕಾಗಮಿಸಿದ ಮೇಟಗಳ್ಳಿ ಠಾಣೆ ಇನ್ಸ್‌ಪೆಕ್ಟರ್ ವಿನಯ್ ಹಾಗೂ ಸಿಬ್ಬಂದಿ ಮಹಜರು ನಡೆಸಿ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಮೃತದೇಹ ಸ್ಥಳಾಂತರಿಸಿದ್ದಾರೆ. ಕಾನೂನು–ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ.ಮುತ್ತುರಾಜು, ಎನ್.ಆರ್. ಉಪವಿಭಾಗದ ಎಸಿಪಿ ಸಿ.ಕೆ.ಅಶ್ವತ್ಥನಾರಾಯಣ, ಶ್ವಾನದಳ, ಬೆರಳಚ್ಚು ಮುದ್ರೆ ಘಟಕದ ಸಿಬ್ಬಂದಿ ಘಟನಾ ಸ್ಥಳ ಪರಿಶೀಲನೆ ನಡೆಸಿದರು. ಪ್ರಕರಣ ದಾಖಲಿಸಿಕೊಂಡಿರುವ ಮೇಟಗಳ್ಳಿ ಠಾಣೆ ಪೊಲೀಸರು, ತಲೆಮರೆಸಿಕೊಂಡಿರುವ ಶಂಕಿತ ಆರೋಪಿ ಮೋಹನ್ ಪತ್ತೆಗೆ ಬಲೆ ಬೀಸಿದ್ದಾರೆ.

ಮಳೆ ಅಬ್ಬರ: ಕೃಷಿಕರು, ಜನರಿಗೆ ಸಲಹೆ–ಸೂಚನೆ

ಮೈಸೂರು, ಮೇ 24(ಎಸ್‌ಪಿಎನ್)– ರಾಜ್ಯಾದ್ಯಂತ ಮುಂಗಾರು ಮಳೆ ಆರಂಭವಾಗಿದೆ. ಗುಡುಗು ಸಹಿತ ಮಳೆ ಮತ್ತು ಸಿಡಿಲು ಬಡಿತದಿಂದ ಜನರ ಮೇಲಾಗುವ ಪರಿಣಾಮವನ್ನು ತಗ್ಗಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸೂಚನೆ ಮೇರೆಗೆ ರಾಜ್ಯ ಮತ್ತು ಜಿಲ್ಲಾ ಘಟಕ 21ಕ್ಕೂ ಹೆಚ್ಚು ಸಲಹೆ–ಸೂಚನೆಗಳನ್ನು ಬಿಡುಗಡೆ ಮಾಡಿದೆ.

ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ, ಕೊಡಗು ಸೇರಿದಂತೆ ರಾಜ್ಯಾದ್ಯಂತ ಹಲವು ಜಿಲ್ಲೆಗಳಲ್ಲಿ ಗುಡುಗು–ಮಿಂಚು, ಸಿಡಿಲು ಸಹಿತ ಧಾರಾಕಾರ ಮಳೆ ಸುರಿಯುತ್ತಿದೆ. ಸಾಮಾನ್ಯವಾಗಿ ಮಧ್ಯಾಹ್ನ ಅಥವಾ ಸಂಜೆಯಲ್ಲಿ ಸಿಡಿಲು ಬಡಿಯುವ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇದರಿಂದಾಗುವ ಅಪಾಯವನ್ನು ತಗ್ಗಿಸಲು ಕೆಲವು ಸಲಹೆ–ಸೂಚನೆಗಳನ್ನು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ನೀಡಿದೆ.

ಸಿಡಿಲಿಗೆ ಸಾಮಾನ್ಯವಾಗಿ ತುತ್ತಾಗುವಂತಹ ಸ್ಥಳಗಳನ್ನು ಗುರುತಿಸಿ, ಸಾರ್ವಜನಿಕ ಆಸ್ತಿ, ಮೂಲಸೌಕರ್ಯಗಳ ರಕ್ಷಣೆಗೆ ಸಂಬಂಧಪಟ್ಟ ಅಧಿಕಾರಿಗಳು ಆದ್ಯತೆ ನೀಡಬೇಕು. ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಎಂಡಿಸಿ) ಹಾಗೂ ಭಾರತೀಯ ಹವಾಮಾನ ಇಲಾಖೆ (ಐಎಂಡಿ) ವತಿಯಿಂದ ಮುನ್ಸೂಚನೆಗಳನ್ನು ಸ್ಥಳೀಯ ಮಟ್ಟಕ್ಕೆ ತಲುಪಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಲಾಗಿದೆ. ರಾಜ್ಯಾದ್ಯಂತ ಪೂರ್ವ ಮುಂಗಾರು ಮಳೆಯ ವೇಳೆ ಅಪಾಯಗಳ ಕುರಿತು ಗ್ರಾಮೀಣ ಪ್ರದೇಶದ ರೈತಾಪಿ ವರ್ಗಕ್ಕೆ ಕೆಲವು ಸಲಹೆ–ಸೂಚನೆಗಳನ್ನು ನೀಡಲು ರೈತ ಸಂಪರ್ಕ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಪಶು ವೈದ್ಯಕೀಯ ಚಿಕಿತ್ಸಾ ಕೇಂದ್ರಗಳು ಹಾಗೂ ಸಮುದಾಯ ಕೇಂದ್ರಗಳಲ್ಲಿ ತಿಳಿವಳಿಕೆ ಹಾಗೂ ಮಾಹಿತಿ ನೀಡುವಂತೆ ಸೂಚಿಸಲಾಗಿದೆ.

ಹಳ್ಳಿಗಾಡು ಪ್ರದೇಶದಲ್ಲಿ ಲೋಹದ ತಗಡು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ. ಹೀಗಾಗಿ ಸುರಕ್ಷಿತವಾದ ಕಟ್ಟಡಗಳಲ್ಲಿ ಆಶ್ರಯ ಪಡೆಯುವಂತೆ, ಬೆಟ್ಟ–ಗುಡ್ಡ ಹಾಗೂ ಎತ್ತರ ಮತ್ತು ತಗ್ಗು ಪ್ರದೇಶಗಳಿಗೆ ತೆರಳದಂತೆ ಸೂಚಿಸಲಾಗಿದೆ. ವಿದ್ಯುತ್ ಉಪಕರಣ, ವಿದ್ಯುತ್ ಸರಬರಾಜು ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ, ಹಾಗೂ ರೈಲು ಹಳಿಗಳಿಂದ ದೂರವಿರುವಂತೆ ಸೂಚಿಸಿದೆ. ಅರಣ್ಯ ಪ್ರದೇಶ ವ್ಯಾಪ್ತಿಯ ಜನರು ಮಳೆ ವೇಳೆ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚನೆ ನೀಡಲಾಗಿದೆ.

ಮಳೆ ಹಾನಿ ಪರಿಶೀಲನೆಗೆ ತಂಡಗಳ ರಚನೆ

ಮೈಸೂರು, ಮೇ 24 (ಎಸ್‌ಪಿಎನ್)– ಮೈಸೂರು ಜಿಲ್ಲೆಯಲ್ಲಿ ಮಳೆ ಹಾನಿ ಪರಿಶೀಲನೆಗೆ ಸಾರ್ವಜನಿಕ ಶಿಕ್ಷಣ ಇಲಾಖೆ ವ್ಯಾಪ್ತಿಯ ಜಿಲ್ಲಾ ಮತ್ತು ತಾಲೂಕುವಾರು 10 ತಂಡಗಳನ್ನು ರಚನೆ ಮಾಡಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ (ಆಡಳಿತ) ರಾಮಚಂದ್ರರಾಜೇ ಅರಸ್ ಆದೇಶಿಸಿದ್ದಾರೆ.

ಜಿಲ್ಲಾ ವ್ಯಾಪ್ತಿಯಲ್ಲಿ ಶಿಕ್ಷಣಾಧಿಕಾರಿ ಕಮಲಮ್ಮ, ಡಿವೈಪಿಸಿ ಪುಷ್ಪ, ವಿಷಯ ಪರಿವೀಕ್ಷಕಿ ಪುಷ್ಪ ಅವರನ್ನು ನೇಮಿಸಲಾಗಿದೆ. ಮೈಸೂರು ದಕ್ಷಿಣ ವಲಯದಿಂದ ಇಂಜಿನಿಯರ್ ರಾಘವೇಂದ್ರ, ಬಿಆರ್‌ಪಿ ವಿಜಯಕುಮಾರ್, ಕೆಆರ್ ನಗರದಲ್ಲಿ ಬಿಆರ್‌ಪಿ ಕೆ.ಎಸ್.ಹರೀಶ್ ಕುಮಾರ್, ಇಸಿಓ ಮನೋಹರ್, ಪಿರಿಯಾಪಟ್ಟಣದಲ್ಲಿ ಇಸಿಓ ಗಣೇಶ್, ಬಿಆರ್‌ಪಿ ಕುಮಾರ್, ಟಿ.ನರಸೀಪುರದಲ್ಲಿ ಬಿಆರ್‌ಪಿ ಮಹದೇವಸ್ವಾಮಿ, ಇಸಿಓ ವಿಶ್ವನಾಥರೆಡ್ಡಿ, ಉತ್ತರವಲಯದಲ್ಲಿ ಇಸಿಓ ಮಂಜುನಾಥ್, ಬಿಆರ್‌ಪಿ ರಜನಿ, ಮೈಸೂರು ಗ್ರಾಮಾಂತರದಿಂದ ಬಿಆರ್‌ಪಿಗಳಾದ ಸಿ.ಡಿ.ಶಿವಣ್ಣ, ಮಹದೇವ, ಇಸಿಓ ರಾಘವೇಂದ್ರ, ನಂಜನಗೂಡಿನಿಂದ ಇಸಿಓ ರಾಘವೇಂದ್ರ, ಬಿಆರ್‌ಪಿ ಸಿಎಂ ಮಧುಕುಮಾರ್, ಹುಣಸೂರಿಂದ ಮಹದೇವಸ್ವಾಮಿ, ಇಸಿಓ ಕೃಷ್ಣಮೂರ್ತಿ, ನಂಜರಾಜು ನೇತೃತ್ವದ ತಂಡಗಳನ್ನು ರಚಿಸಿ ಡಿಡಿಪಿಐ ಆದೇಶಿಸಿದ್ದಾರೆ.

ಥಟ್ ಅಂತ ಉತ್ತರಿಸಿ ವಚನ ಸಾಹಿತ್ಯ ರಸಪ್ರಶ್ನೆ ವಿಜೇತರು

ಮೈಸೂರು, ಮೇ 24– ಶರಣು ವಿಶ್ವ ವಚನ ಫೌಂಡೇಷನ್ ವತಿಯಿಂದ ವಚನ ಸಾಹಿತ್ಯಕ್ಕೆ ಸಂಬಂಧಿಸಿದಂತೆ ಮಂಗಳವಾರ ರಾತ್ರಿ ಅಂತರ್ಜಾಲದ ಮೂಲಕ ನಡೆದ ಥಟ್ ಅಂತ ಉತ್ತರಿಸಿ 52ನೇ ವಚನ ಸಾಹಿತ್ಯ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಬಿ.ಸಿ.ಪಾಟೀಲ್ ಅವರ ಸಹೋದರಿ ದಾವಣಗೆರೆಯ ವಿನೋದ ಎಲ್.ಅಜಗಣ್ಣನವರ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸಿ ಬಹುಮಾನಕ್ಕೆ ಭಾಜನರಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಅಪರಿಚಿತ ಶವ ಪತ್ತೆ

ಮೈಸೂರು: ಬಿಜಿ ನಗರ–ಯಡಿಯೂರು ರೈಲು ನಿಲ್ದಾಣಗಳ ಮಧ್ಯೆ 40 ವರ್ಷದ ವ್ಯಕ್ತಿ ರೈಲಿಗೆ ಸಿಕ್ಕಿ ಮೃತಪಟ್ಟಿದ್ದು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತಪಟ್ಟ ವ್ಯಕ್ತಿ ಸುಮಾರು 5–8 ಎತ್ತರವಿದ್ದು, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ದುಂಡುಮುಖ ಹಾಗೂ 1/2 ಇಂಚು ಉದ್ದದ ಕಪ್ಪು ಬಿಳಿ ಗಡ್ಡ ಮೀಸೆ ಬಿಟ್ಟಿರುತ್ತಾರೆ. ಮೃತನು ಕಪ್ಪು ಬಣ್ಣದ ರೆಡಿಮೇಡ್ ತುಂಬು ತೋಳಿನ ಶರ್ಟ್ ಮತ್ತು ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಇವರ ಬಗ್ಗೆ ಮಾಹಿತಿ ದೊರೆತಲ್ಲಿ ನಗರದ ರೈಲ್ವೆ ಪೊಲೀಸ್ ಠಾಣೆ ದೂ.ಸಂ. 0821–2516579 ಸಂಪರ್ಕಿಸಬಹುದು.

ಸೌಲಭ್ಯಗಳ ಕೊರತೆ; ಮಹಾರಾಜ ಹಾಸ್ಟೆಲ್ ವಿದ್ಯಾರ್ಥಿಗಳ ಪ್ರತಿಭಟನೆ

ಮೈಸೂರು,ಮೇ 24(ಎಂಟಿವೈ)– ಹಾಸ್ಟೆಲ್‌ನಲ್ಲಿ ಅಶುಚಿತ್ವ, ವಿದ್ಯಾರ್ಥಿಗಳಿಗೆ ಕಳಪೆ ಆಹಾರ, ಕಲುಷಿತ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ಆರೋಪಿಸಿ ಮಹಾರಾಜ ಹಾಸ್ಟೆಲ್ ವಿದ್ಯಾರ್ಥಿಗಳು ದಿಢೀರ್ ಪ್ರತಿಭಟನೆ ನಡೆಸಿದರು.

ಮೈಸೂರಿನ ಏಕಲವ್ಯ ವೃತ್ತದಲ್ಲಿರುವ ಮಹಾರಾಜ ಕಾಲೇಜಿನ ವಿದ್ಯಾರ್ಥಿ ನಿಲಯದಲ್ಲಿ ಬುಧವಾರ ವಿದ್ಯಾರ್ಥಿಗಳು ಪ್ರತಿಭಟನೆ ಮಾಡಿ, ಆಕ್ರೋಶ ವ್ಯಕ್ತಪಡಿಸಿದರು. ವಿದ್ಯಾರ್ಥಿನಿಲಯದ ಆವರಣದಲ್ಲಿ ಅಶುಚಿತ್ವ ಕಾಡುತ್ತಿದೆ. ಸ್ವಚ್ಛತೆ ಕಾಪಾಡುವಲ್ಲಿ ವಿಫಲರಾಗಿದ್ದಾರೆ. ಎಲ್ಲೆಡೆ ಇಲಿ ಹಾಗೂ ಹೆಗ್ಗಣಗಳ ಬಿಲಗಳು ಕಂಡು ಬರುತ್ತಿದ್ದು, ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಪೂರಕವಾದ ವಾತಾವರಣವೇ ಇಲ್ಲದಂತಾಗಿದೆ ಎಂದು ಕಿಡಿಕಾರಿದರು.

ಮೈಸೂರು ವಿವಿ ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ವಿದ್ಯಾರ್ಥಿಗಳು ತಾವು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಿದರು. ಕನಿಷ್ಠ ಸೌಕರ್ಯ ನೀಡುತ್ತಿಲ್ಲ. ಎರಡು ತಿಂಗಳಿಂದ ಕುಡಿಯುವ ನೀರು ಸಮಸ್ಯೆ ಇದೆ. ಟ್ಯಾಂಕ್ ಶುಚಿಗೊಳಿಸಿಲ್ಲ. ಶೌಚಾಲಯದಲ್ಲೂ ನೀರು ಬರುತ್ತಿಲ್ಲ. ಹಲವು ಬಾರಿ ಮನವಿ ಸಲ್ಲಿಸಿದರೂ ಅಧಿಕಾರಿಗಳು ಸ್ಪಂದಿಸಿಲ್ಲ. ಮೈಸೂರು ವಿವಿ ವ್ಯಾಪ್ತಿಗೆ ಬರುವ ಮಹಾರಾಜ ಹಾಸ್ಟೆಲ್‌ನಲ್ಲಿ 450 ಹುಡುಗರಿದ್ದಾರೆ. ಆದರೆ 5 ಶೌಚಾಲಯಗಳು ಮಾತ್ರ ಇವೆ. ಉಳಿದ 4 ಶೌಚಾಲಯಗಳ ಕಮೋಡ್ ಹಾಳಾಗಿದೆ. ಇದರಿಂದ 5 ಶೌಚಾಲಯಗಳ ಮುಂದೆ ಗಂಟೆಗಟ್ಟಲೇ ಸರದಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ಉದ್ಭವಿಸಿದೆ ಎಂದು ಕಿಡಿಕಾರಿದರು.

> ಅಡುಗೆಗೆ ಅವಧಿ ಮೀರಿದ ಸಾಮಗ್ರಿಗಳನ್ನು ಬಳಸಲಾಗುತ್ತಿದೆ. ಕೊಳತೆ ತರಕಾರಿ ಬಳಸುತ್ತಾರೆ. ಹಾಸ್ಟೆಲ್‌ಗೆ ತರುವ ರೇಷನ್ ಎಲ್ಲಿಗೆ ಹೋಗುತ್ತದೆ. ಈ ಬಗ್ಗೆ ಕೇಳಿದರೆ ಮೈಸೂರು ವಿವಿ ಬಿಲ್ ಕೊಟ್ಟಿಲ್ಲ ಎಂದು ಮರು ಉತ್ತರ ನೀಡುತ್ತಾರೆ. ಹಾಸ್ಟೆಲ್‌ನಲ್ಲಿ ಭದ್ರತಾ ಸಿಬ್ಬಂದಿ ಇದ್ದರೂ ಪ್ರಯೋಜನವಿಲ್ಲ. ಹಾಸ್ಟೆಲ್‌ಗೆ ಆಗಾಗ್ಗೆ ಪೊಲೀಸರು ಬರುತ್ತಾರೆ. ಈ ಎಲ್ಲ ಸಮಸ್ಯೆಗಳನ್ನು ಬಗೆಹರಿಸಬೇಕು.
> –ಪ್ರತಿಭಟನಾನಿರತ ವಿದ್ಯಾರ್ಥಿಗಳು

ಹಾಸ್ಟೆಲ್‌ನಲ್ಲಿನ ಹಲವು ವಿದ್ಯಾರ್ಥಿಗಳು ಪ್ರತಿ ತಿಂಗಳು 2 ಸಾವಿರ ರೂ. ಹಣ ಪಾವತಿಸುತ್ತಾರೆ. ಆದರೂ ಸೌಲಭ್ಯ ನೀಡುತ್ತಿಲ್ಲ. ಮೆನು ಪ್ರಕಾರ ಊಟ, ತಿಂಡಿ ಪೂರೈಸುತ್ತಿಲ್ಲ. ಹಾಸ್ಟೆಲ್ ಸಿಬ್ಬಂದಿಗೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರೆ ಡೀನ್‌ಗೆ ಹೋಗಿ ಹೇಳುವಂತೆ ಸೂಚಿಸುತ್ತಾರೆ. ಪ್ರಶ್ನಿಸಿದರೆ ಮುಂದಿನ ವರ್ಷ ಪ್ರವೇಶಾತಿ ಕೊಡುವುದಿಲ್ಲ ಎಂದು ಬೆದರಿಕೆ ಹಾಕುತ್ತಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರತಿಭಟನೆ ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಡೀನ್ ಡಾ.ಚಂದ್ರಶೇಖರ್ ಅವರು, ವಿದ್ಯಾರ್ಥಿಗಳ ಸಮಸ್ಯೆಗಳನ್ನು ಬಗೆಹರಿಸುವುದರ ಜತೆಗೆ ಎಲ್ಲ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ. ಸಂಬಂಧಪಟ್ಟವರಿಗೆ ನೋಟಿಸ್ ನೀಡಲಾಗುವುದು ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳನ್ನು ಸಮಾಧಾನ ಮಾಡಿದರು.

ಮೈಸೂರಿನ 8 ಸರ್ಕಲ್‌ಗಳ ಅಭಿವೃದ್ಧಿ ಕಾಮಗಾರಿ ಆರಂಭ

ಮೈಸೂರು, ಮೇ 24(ಆರ್‌ಕೆ)– ಜನಸಂಖ್ಯೆಗನುಗುಣವಾಗಿ ವಾಹನಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಸಂಚಾರದಟ್ಟಣೆ ನಿಭಾಯಿಸಿ ಅಪಘಾತಗಳನ್ನು ತಡೆಗಟ್ಟಲು ಮೈಸೂರು ಮಹಾನಗರ ಪಾಲಿಕೆಯು ನಗರದ 8 ಸರ್ಕಲ್, ಜಂಕ್ಷನ್‌ಗಳನ್ನು ಅಭಿವೃದ್ಧಿಪಡಿಸಲು ಮುಂದಾಗಿದೆ.

ಸಂಚಾರ ಪೊಲೀಸರ ಮನವಿ ಮೇರೆಗೆ ಲೋಕೋಪಯೋಗಿ ಇಲಾಖೆ ಇಂಜಿನಿಯರ್‌ಗಳ ಸಲಹೆಯಂತೆ ಮೈಸೂರು ಮಹಾನಗರಪಾಲಿಕೆ ಇಂಜಿನಿಯರಿಂಗ್ ವಿಭಾಗದಿಂದ ಮೈಸೂರಿನ ಉದಯಗಿರಿಯ ಅಲ್–ಬದರ್ ಸರ್ಕಲ್, ಗಾಯತ್ರಿಪುರಂನ ಚರ್ಚ್ ಬಳಿಯ ಸರ್ಕಲ್, ಶ್ರೀ ಜಯದೇವ ಹೃದ್ರೋಗ ಆಸ್ಪತ್ರೆ ಎದುರಿನ ಕೆಆರ್‌ಎಸ್ ರಸ್ತೆ ಜಂಕ್ಷನ್, ಕೆ.ಜಿ.ಕೊಪ್ಪಲು ಸರ್ಕಲ್ ಹಾಗೂ ಹೆಬ್ಬಾಳು ಜಂಕ್ಷನ್‌ಗಳ ಅಗಲೀಕರಣ ಮತ್ತು ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿವೆ ಎಂದು ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ.





ಈ ಐದೂ ಸರ್ಕಲ್‌ಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಲ್ಲಿ ವಾಹನ ಸಂಚಾರದಟ್ಟಣೆ ಜಾಸ್ತಿಯಾಗಿರುವುದರಿಂದ ಸರಾಗವಾಗಿ ಸಾಗಲು ಹಲವು ಅಡೆ–ತಡೆಗಳಿದ್ದವು. ಇದೀಗ ಮರ, ವಿದ್ಯುತ್ ಕಂಬಗಳನ್ನು ಪಕ್ಕಕ್ಕೆ ಸರಿಸಿರುವುದರಿಂದ ಸರ್ಕಲ್‌ಗಳು ಅಗಲವಾದಂತಾಗಿದ್ದು, ಸುಗಮ ಸಂಚಾರಕ್ಕೆ ಸಹಾಯವಾಗಲಿದೆ ಎಂದು ತಿಳಿಸಿದರು.

ಅದೇ ರೀತಿ ಹುಣಸೂರು ರಸ್ತೆಯ ವಾಲ್ಮೀಕಿ ರಸ್ತೆ ಜಂಕ್ಷನ್, ವಿವೇಕಾನಂದ ಸರ್ಕಲ್ ಹಾಗೂ ಸಿದ್ಧಗಂಗಾಸ್ವಾಮಿ ಸರ್ಕಲ್‌ಗಳನ್ನು ಉನ್ನತೀಕರಣಗೊಳಿಸಲು ಡಿಪಿಆರ್ ತಯಾರಿಸಿ ಎಸ್ಟಿಮೇಟ್‌ನಂತೆ ಟೆಂಡರ್ ಪ್ರಕ್ರಿಯೆ ಮುಗಿಸಿ ಕಾರ್ಯಾದೇಶ ನೀಡಲಾಗಿದೆ. ಶೀಘ್ರ ಕಾಮಗಾರಿ ಆರಂಭವಾಗಲಿದೆ ಎಂದು ನಗರಪಾಲಿಕೆ ಆಯುಕ್ತರು ತಿಳಿಸಿದರು.

ಅಪಘಾತ ತಪ್ಪಿಸಿ, ಸುಗಮ ಸಂಚಾರಕ್ಕೆ ಅಗತ್ಯ ಕ್ರಮ

ಎಲ್ಲಾ ಜಂಕ್ಷನ್‌ಗಳಲ್ಲೂ ಫ್ರೀ ಲೆಫ್ಟ್ ಟರ್ನ್‌ಗೆ ಅವಕಾಶವಾಗುವಂತೆ ಜಾಗ ವಿಸ್ತಾರಗೊಳಿಸಲಿದ್ದು, ಅಡೆ–ತಡೆಯಿಲ್ಲದೇ ವಾಹನಗಳು ಮುಂದೆ ಸಾಗಲು ಅನುವಾಗುವಂತೆ ವಿನ್ಯಾಸ ಮಾಡಲು ಇಂಜಿನಿಯರ್‌ಗಳು ಹಾಗೂ ಸಂಚಾರ ಪೊಲೀಸರು ವಿನ್ಯಾಸಗೊಳಿಸಿದಂತೆಯೇ ಕೆಲಸ ಮಾಡಲಾಗುತ್ತಿದೆ. ಈ 8 ಸರ್ಕಲ್‌ಗಳ ಅಗಲೀಕರಣ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಪಾಲಿಕೆಯು ಅಂದಾಜು 3 ಕೋಟಿ ರೂ. ಹಣ ಖರ್ಚು ಮಾಡಲಾಗುತ್ತಿದೆ ಎಂದು ನಗರಪಾಲಿಕೆ ಆಯುಕ್ತ ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ.

ನಗರಪಾಲಿಕೆಯು ಕುಡಿಯುವ ನೀರು ಸರಬರಾಜು, ರಸ್ತೆ, ಒಳ ಚರಂಡಿ, ಬೀದಿ ದೀಪ ನಿರ್ವಹಣೆ, ಪಾರ್ಕ್ ಅಭಿವೃದ್ಧಿ, ಸ್ಮಶಾನ, ಕ್ರೀಡಾಂಗಣ ಅಭಿವೃದ್ಧಿ ಮತ್ತು ನಿರ್ವಹಣೆ, ಸ್ವಚ್ಛತೆಯಂತಹ ಮೂಲಭೂತ ಸೌಕರ್ಯ ಒದಗಿಸುವ ಜೊತೆಗೆ ಸಾರ್ವಜನಿಕರ ವಾಹನಗಳ ಸುಗಮ ಸಂಚಾರದ ಬಗ್ಗೆಯೂ ಮೈಸೂರು ಮಹಾನಗರ ಪಾಲಿಕೆಯು ಆಸಕ್ತಿ ವಹಿಸುತ್ತಿದೆ ಎಂದು ಅವರು ನುಡಿದರು.

ನಕ್ಕರೆ ಅದೇ ಸ್ವರ್ಗ

ಆತ : "ನನಗೆ ತುಂಬಾ ನೆಗಡಿಯಾದಾಗ ಒಂದು ಕ್ವಾರ್ಟರ್ ವ್ಹಿಸ್ಕಿ ತರಿಸ್ತೀನಿ, ಅರ್ಧ ಗಂಟೇಲಿ ಮಾಯ ಆಗಿ ಬಿಡುತ್ತೆ"

ಈತ : "ಭೇಷ್! ನೆಗಡಿ ಅಷ್ಟು ಬೇಗ ಹೋಗುತ್ತಾ? ಹೋಗೋದು ನೆಗಡಿ ಅಲ್ಲಯ್ಯ, ವ್ಹಿಸ್ಕಿ!"

ಮೈಸೂರು ಮಿತ್ರ

ಗುರುವಾರ, 25 ಮೇ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಮನೆಯವರ ಮನಸ್ಸು ಅರಿಯದೆ, ಮನೆಯ ಜವಾಬ್ದಾರಿಯನ್ನು ಹೊರದೆ, ಮನೆಯ ಯಜಮಾನ ಗೌರವ ಪಡೆಯಲಾರ, ಅಧಿಕಾರ ಚಲಾಯಿಸಿ ಯಜಮಾನನಾಗುವುದು ಸಾಧ್ಯವಿಲ್ಲ. – ದ.ರಾ. ಬೇಂದ್ರೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಉಂಡಿದ್ದು ಹೊಟ್ಟೆಗಾಗಿ, ಮಾಡಿದ್ದು ಬಟ್ಟೆಗಾಗಿ

ನಿಮ್ಮ ಪತ್ರಗಳು

ಗೆದ್ದ ನಾಯಕರು ಜನತೆಯ ಕನಸಿಗೆ ನೀರೆರಚಬಾರದಷ್ಟೇ?

ಮಾನ್ಯರೆ,

ಚುನಾವಣೆ ಮುಗಿಯಿತು. ಜನತೆಯ ಎದುರು ನಾಯಕರ ಪದಗ್ರಹಣವು ಆಯಿತು. ಅಂದು ನಾಯಕರ ಹರ್ಷ ಮುಗಿಲು ಮುಟ್ಟಿತು. ಜನತೆಯು ತಮ್ಮ ನಾಯಕರು ಗೆದ್ದು ಬೀಗುವುದನ್ನು ಮತ್ತು ತಮ್ಮ ಅಭಿಲಾಷೆ ಈಡೇರಿಸುವರು ಎಂಬ ಆತ್ಮವಿಶ್ವಾಸದಿಂದ ನಾಯಕರು ಅಧಿಕಾರ ಪಡೆಯುವುದನ್ನು ಕಣ್ತುಂಬಿಕೊಂಡರು. ಚುನಾವಣೆಗೂ ಮುನ್ನ ಮತ ಕೋರಿ ಮನೆ ಮನೆಗೆ ಬಂದು ನಾಯಕರು ಜನತೆಯ ಯೋಗಕ್ಷೇಮ ವಿಚಾರಿಸಿ ಅವರಿಗೆ ಆಸೆ ಆಮಿಷಗಳನ್ನು ಒಡ್ಡಿ ಮತ ಪಡೆದಿದ್ದರು.

ಜನತೆಯು ತಮ್ಮ ನಾಯಕರ ಗೆಲುವಿನ ಹಿನ್ನೆಲೆಯಲ್ಲಿ ಹಲವು ಬಣ್ಣಬಣ್ಣದ ಕನಸುಗಳನ್ನು ಕಟ್ಟಿಕೊಂಡು ದೂರದರ್ಶನದ ಮುಂದೆ ಪ್ರತಿದಿನ ಕುಳಿತು ನೋಡುತ್ತ ನಾಯಕರು ಜನತೆಗೆ ತರುವ ಯೋಜನೆಯನ್ನು ಕಾಯುತ್ತಿದ್ದಾರೆ. ಜನತೆಗೆ ನಾಯಕರು ನೀರೆರಚಬಾರದಷ್ಟೇ?

ನಾಯಕರು ತಾವು ನೀಡಿದ ಆಶ್ವಾಸನೆಗಳನ್ನು ಶೀಘ್ರವಾಗಿ ಜಾರಿಗೆ ತಂದು ಜನತೆಯು ಅದರ ಸೌಲಭ್ಯಗಳನ್ನು ಪಡೆಯುವಂತಾಗಲಿ. ಕಲ್ಯಾಣ ಕರ್ನಾಟಕವಾಗಿ ಹೊರಹೊಮ್ಮಬೇಕೆನ್ನುವುದೇ ಪ್ರತಿಯೊಬ್ಬ ಕನ್ನಡಿಗನ ಹಂಬಲ ಮತ್ತು ಅಳಲು. ಕಾರಣಗಳ ಸರಮಾಲೆಯನ್ನು ನಾಯಕರು ಜೋಡಿಸಬಾರದು. ಸುಳ್ಳುಗಳ ಮನೆಯನ್ನು ಕಟ್ಟಬಾರದು. ಕೊಟ್ಟ ಮಾತನ್ನು ಎಂದಿಗೂ ಹಿಂತೆಗೆಯಬಾರದೆಂಬುದು ನಮ್ಮೆಲ್ಲರ ಹಂಬಲ.

ಕಾದು ನೋಡುತ್ತಿದ್ದಾರೆ ಜನರು ಎಷ್ಟರ ಮಟ್ಟಿಗೆ ನಮ್ಮೆಲ್ಲರ ಕೋರಿಕೆಗಳನ್ನು ಈಡೇರಿಸುತ್ತಾರೆಂದು. ಗೆದ್ದು ಬೀಗದೇ ತಗ್ಗಿ ಜನಸೇವೆಗೈದಾಗ ಮಾತ್ರ ಆ ನಾಯಕರು ಮುಂದಿನ ಚುನಾವಣೆಯಲ್ಲಿ ಮರು ಗೆಲುವು ಪಡೆಯಲು ಸಾಧ್ಯ. ಇಲ್ಲವಾದಲ್ಲಿ ಜನತೆಯ ಲೆಕ್ಕಾಚಾರವೇ ಬೇರೆಯಾಗಿರುತ್ತದೆ ಅಲ್ಲವೇ? ಎಲ್ಲರೂ ಕಾದು ನೋಡೋಣ ನಮ್ಮ ಬೇಡಿಕೆ ಎಷ್ಟರ ಮಟ್ಟಿಗೆ ಈಡೇರುತ್ತದೆಂದು?!

–ಅನಿಲ್ ರಾಜ, ಸಿದ್ಧಾರ್ಥನಗರ ಮೈಸೂರು

ಮಹಾತಾಯಿಯ ಸಮಯ ಪ್ರಜ್ಞೆ ಶ್ಲಾಘನೀಯ

ಮಾನ್ಯರೆ,

ಮೊನ್ನೆ ಭಾನುವಾರ ಬೆಂಗಳೂರಿನಲ್ಲಿ ಸುರಿದ ಭಾರೀ ಮಳೆಗೆ, ಬೆಂಗಳೂರು ಕೆ.ಆರ್.ಸರ್ಕಲ್‌ನ ಅಂಡರ್ ಪಾಸ್ ಮಳೆ ನೀರಿನಿಂದ ತುಂಬಿರುವುದನ್ನು ಗಮನಿಸದೇ ಕಾರಿನ ಚಾಲಕ ಬೆಂಗಳೂರನ್ನು ನೋಡಲು ಬಂದಿದ್ದ ಒಂದೇ ಕುಟುಂಬದ ಐದು ಮಂದಿಯನ್ನು ಈ ಅಂಡರ್ ಪಾಸ್‌ನಲ್ಲಿ ಕರೆದೊಯ್ದಾಗ ಅದರಲ್ಲಿ ಸಿಲುಕಿ ಪ್ರಾಣ ಭಯದಿಂದ ಅರುಚಾಟ – ಕಿರುಚಾಡುತ್ತಿದ್ದನ್ನು ನೋಡಿ, ಈ ಅಂಡರ್ ಪಾಸ್ ಮೇಲ್ಭಾಗದಲ್ಲಿ ಹೋಗುತ್ತಿದ್ದ ಮಹಿಳೆಯೊಬ್ಬರು ತಾನು ಉಟ್ಟಿದ್ದ ಸೀರೆಯನ್ನು ಬಿಚ್ಚಿ ಎಸೆದು ನಾಲ್ವರ ಪ್ರಾಣ ಉಳಿಸಲು ನೆರವಾಗಿರುವುದು ಆ ಮಹಾತಾಯಿಯ ಸಮಯ ಪ್ರಜ್ಞೆಯನ್ನು ಮತ್ತು ಧೈರ್ಯ ಸಾಹಸವನ್ನು ಎಲ್ಲರೂ ಮೆಚ್ಚಲೇಬೇಕು.

ಇವೆಲ್ಲವನ್ನು ಗಮನಿಸುತ್ತಿದ್ದ ಪಬ್ಲಿಕ್ ಟಿವಿ ಚಾನೆಲ್‌ನ ಇಬ್ಬರು ವರದಿಗಾರರು ತಮ್ಮ ಪ್ರಾಣದ ಹಂಗನ್ನೇ ತೊರೆದು, ನೀರು ತುಂಬಿದ ಅಂಡರ್ ಪಾಸ್ ಒಳಗೆ ಹೋಗಿ, ಕಾರಿನ ಒಳಗಡೆ ಇದ್ದ ನಾಲ್ವರನ್ನು ಹೊರ ತಂದು, ಕಾರಿನ ಮೇಲೆ ಕೂರಿಸಿ, ಪ್ರಾಣ ಕಾಪಾಡಿ ತಮ್ಮ ಮಾನವೀಯತೆ ಮೆರೆದಿದ್ದಾರೆ. ಬೆಂಗಳೂರು ನಗರಪಾಲಿಕೆ, ಈ ಇಬ್ಬರು ವರದಿಗಾರರನ್ನು ಗುರುತಿಸಿ ಗೌರವಿಸಿರುವುದು ಮೆಚ್ಚುಗೆ ವಿಷಯ. ಆದರೆ ತನ್ನ ಸಮಯ ಪ್ರಜ್ಞೆ ಮೆರೆದ ಆ ಮಹಾತಾಯಿಯನ್ನು ಗುರುತಿಸಿ ಗೌರವಿಸುವ ಕೆಲಸ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ಮಾಡುವಂತಾಗಲಿ.

–ಬೂಕನಕೆರೆ ವಿಜೇಂದ್ರ, ಮೈಸೂರು.

ಸಂಕಲ್ಪದಿಂದ ಕನ್ನಡದ ಕೃತಿಗಳಿಗೆ ಬೆಲೆ ಬಂದಿದೆ!

ಮಾನ್ಯರೆ,

ಕರುನಾಡಿನ ಚಕ್ರವರ್ತಿಯು ಸರಳತೆಯ ಸಾಕಾರವಾಗಿ ತೆಗೆದುಕೊಂಡ ಸಂಕಲ್ಪದ ನಡೆ ಅಧಿಕಾರದ ಅಹಂನಿಂದ ಹಾರ–ತುರಾಯಿಗಳಿಗೆ ಕೊರಳೊಡ್ಡುವ ಗಣ್ಯರಿಗೆ ಮಾದರಿಯಾಗಿದೆ. ಹಾರ–ತುರಾಯಿ, ಶಾಲು–ಶಲ್ಯಗಳನ್ನು ಸ್ವೀಕರಿಸದಿರುವುದು ಹಾಗೂ ಸಾರ್ವಜನಿಕರಿಗೆ ತೊಂದರೆ ಆಗುವುದೆಂದು ಜೀರೋ ಟ್ರಾಫಿಕ್ ಸೌಲಭ್ಯವನ್ನು ವಾಪಸ್ಸು ಮಾಡಿರುವ ಮಾನ್ಯ ಮುಖ್ಯಮಂತ್ರಿಗಳು ತೆಗೆದುಕೊಂಡ ಮತ್ತೊಂದು ಮುಖ್ಯ ತೀರ್ಮಾನ. ಪ್ರೀತಿ–ಗೌರವಗಳನ್ನು ನೀಡಲೇಬೇಕೆಂದು ಅಭಿಮಾನದಿಂದ ಬರುವವರು ಕನ್ನಡದ ಕೃತಿಯೊಂದನ್ನು ಕಾಣಿಕೆಯಾಗಿ ನೀಡಿದರೆ ಸ್ವೀಕರಿಸುತ್ತೇನೆಂದು ಹೇಳಿರುವುದು ಸಂತಸದ ಸುದ್ದಿ, ಅದರಲ್ಲೂ ಕನ್ನಡ ಸಾಹಿತ್ಯ ಕ್ಷೇತ್ರದ ಲೇಖಕರು ಹಾಗೂ ಕವಿಗಳ ಹೃದಯವು ಕೃತಜ್ಞತೆಯ ಭಾವದಿಂದ ಕನ್ನಡ ಡಿಂಡಿಮವ ಬಾರಿಸಿದೆ.

ಸಭೆ ಸಮಾರಂಭಗಳಲ್ಲಿ ಗಣ್ಯರನ್ನು ಗೌರವಿಸುವವರು ಕನ್ನಡದ ಕೃತಿಗಳನ್ನು ನೀಡುವ ಕಾರ್ಯ ಕಾರ್ಯರೂಪಕ್ಕೆ ಬಂದರೆ ಕನ್ನಡ ಪುಸ್ತಕಗಳು ಹೆಚ್ಚು ಮಾರಾಟವಾಗಿ ಪ್ರಕಾಶಕರು ಹಾಗೂ ಬರವಣಿಗೆಗಾರರಿಗೆ ಉತ್ತೇಜನ ನೀಡಿದಂತಾಗುವುದು ಹಾಗೂ ಕನ್ನಡ ಸಾಹಿತ್ಯವು ಸಂಪದ್ಭರಿತವಾಗುವುದು. ದೊರೆಯಾದರೂ ಮರೆಯದೆ ಕನ್ನಡದ ವ್ಯಾಕರಣವನ್ನು ಸುಲಲಿತವಾಗಿ ಮನಮುಟ್ಟುವಂತೆ ಬೋಧಿಸುವ ಮುಖ್ಯಮಂತ್ರಿಗಳು ಪುಸ್ತಕ ಖರೀದಿಗಾಗಿ ಹೆಚ್ಚು ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡಬಹುದೆಂಬ(ಮಾಡಿಯೇ ಮಾಡುತ್ತಾರೆ) ನಂಬಿಕೆಯು ಸಾಹಿತಿಗಳಿಗೆ ಇದೆ.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

ಆಟೋ ಚಾಲಕರ ಕಿರುಕುಳಕ್ಕೆ ಕಡಿವಾಣ ಹಾಕಿ

ಮಾನ್ಯರೆ,

ಆಟೋರಿಕ್ಷಾದವರು ಸಾರ್ವಜನಿಕರಿಗೆ ಕೊಡುತ್ತಿರುವ ಕಿರುಕುಳ ದಿನೇ ದಿನೆ ಹೆಚ್ಚಾಗುತ್ತಲೇ ಇದೆ. ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿಗಳು ದಯಮಾಡಿ ಸಾರ್ವಜನಿಕರಿಗೆ ಆಗುತ್ತಿರುವ ಈ ಹಿಂಸೆಯನ್ನು ತಪ್ಪಿಸಿ, ನ್ಯಾಯಯುತ ದರವನ್ನು ನಿಗದಿ ಮಾಡಿ ಬೇಕಾಬಿಟ್ಟಿ ಬಾಯಿಗೆ ಬಂದಷ್ಟು ಹಣವನ್ನು ಕೇಳುತ್ತಿರುವ ಆಟೋ ಚಾಲಕರ ಈ ಉದ್ಧಟತನದ ಪರಮಾವಧಿಗೆ ಕಡಿವಾಣ ಹಾಕಬೇಕು.

ಸರ್ಕಾರದ ಪರವಾಗಿ ಸಾರಿಗೆ ಇಲಾಖೆಯು ಒಂದು ವ್ಯವಸ್ಥಿತವಾದ ಮೀಟರ್ ಅನ್ನು ಜಾರಿಗೆ ತಂದು ಕಿ.ಮೀ.ಗೆ ಇಂತಿಷ್ಟು ದರ ನಿಗದಿಪಡಿಸಿ, ಕಿ.ಮೀ. ಮತ್ತು ದರ ಎರಡು ಒಟ್ಟಿಗೆ ಪ್ರಯಾಣಿಕರಿಗೆ ಏಕಕಾಲಕ್ಕೆ ತಿಳಿಯುವಂತಹ ಮೀಟರ್‌ಗಳನ್ನು ಅಳವಡಿಸಿ ಅವುಗಳನ್ನು ಸಾರಿಗೆ ಇಲಾಖೆಯೇ ವಿತರಣೆ ಮಾಡಬೇಕು. ಮೀಟರ್ ಅಳವಡಿಸದೆ ಇರುವ ಆಟೋಗಳಿಗೆ ದಂಡವನ್ನು ನಿಗದಿಪಡಿಸುವಂತಹ ಕಾರ್ಯವಾದರೆ ಸ್ವಲ್ಪ ಸುಧಾರಣೆಯನ್ನು ಕಾಣಬಹುದು ಎನ್ನುವ ಭರವಸೆ.

–ಕಾಳಿಂಗಚಾರ್, ಕುಂಬಾರಕೊಪ್ಪಲು, ಮೈಸೂರು.



ಪ್ರೊ. ಆರ್. ಇಂದಿರಾ
ಸಮಾಜಶಾಸ್ತ್ರಜ್ಞೆ
ramaraoindira@gmail.com

ಸಮಾಜಮುಖಿ

ರಾಜಕೀಯದಲ್ಲಿ ಮಹಿಳಾ ಪ್ರಾತಿನಿಧ್ಯ ಬರೀ 'ಮಂತ್ರ'

ಕರ್ನಾಟಕದ 16ನೇ ವಿಧಾನಸಭೆ ಅಸ್ತಿತ್ವಕ್ಕೆ ಬಂದಿದ್ದು, ಮೇ ತಿಂಗಳ ಹತ್ತನೇ ತಾರೀಕಿನಂದು ನಡೆದ ಚುನಾವಣೆಯಲ್ಲಿ ರಾಜ್ಯದ 224 ಕ್ಷೇತ್ರಗಳಿಗೆ ಪ್ರತಿನಿಧಿಗಳನ್ನು ರಾಜ್ಯದ ಮತದಾರರು ಆರಿಸಿ ಕಳುಹಿಸಿದ್ದಾರೆ. ಈ ಕ್ಷೇತ್ರಗಳಲ್ಲಿ 36 ಪರಿಶಿಷ್ಟ ಜಾತಿ ಮೀಸಲು, 15 ಪರಿಶಿಷ್ಟ ಬುಡಕಟ್ಟು ಮೀಸಲು ಮತ್ತು 173 ಸಾಮಾನ್ಯ ಕ್ಷೇತ್ರಗಳಿದ್ದು ಇವುಗಳನ್ನು ಜಿಲ್ಲಾ ಮತ್ತು ಪ್ರದೇಶವಾರು ವಿಭಜಿಸಲಾಗಿದ್ದು, ಇದರ ಅನ್ವಯ ರಾಜ್ಯದ ಚುನಾವಣಾ ಕ್ಷೇತ್ರಗಳು 31 ಜಿಲ್ಲೆಗಳಲ್ಲಿಯೂ ಹಂಚಿ ಹೋಗಿವೆ.

ಚುನಾವಣಾ ಫಲಿತಾಂಶ ಪ್ರಕಟವಾದ ನಂತರ ಅವುಗಳನ್ನು ವಿವಿಧ ಆಯಾಮಗಳಿಂದ ವಿಶ್ಲೇಷಣೆಗೆ ಒಳಪಡಿಸುವುದು ಬಹು ಕಾಲದಿಂದ ನಡೆದು ಬಂದಿರುವಂಥ ಒಂದು ಕ್ರಮ. ಇದರಲ್ಲಿ ಆಸಕ್ತಿಯನ್ನು ತೋರಿಸುವವರು ರಾಜಕೀಯ ಪಕ್ಷಗಳ ಚುನಾವಣಾ ಘಟಕಗಳು, ಚುನಾವಣಾ ಪ್ರವೃತ್ತಿಗಳನ್ನು ಅಧ್ಯಯನ ಮಾಡುವ ಸಮಾಜ ವಿಜ್ಞಾನಿಗಳು ಅಥವಾ ರಾಜಕೀಯ ವಿಶ್ಲೇಷಕರು. ಹೇಗೆ ಎಕ್ಸಿಟ್ ಪೋಲ್‌ಗಳು ಇಂದು ಚುನಾವಣಾ ಪ್ರಕ್ರಿಯೆಯ ಒಂದು ಭಾಗವಾಗಿವೆಯೋ ಹಾಗೆ ಇಂದು ಫಲಿತಾಂಶಗಳ ಮೌಲ್ಯಮಾಪನ ಕೂಡ ವಿವಿಧ ಸೂಚ್ಯಂಕಗಳ ಆಧಾರದ ಮೇಲೆ ನಡೆಯುತ್ತದೆ. ಅವುಗಳಲ್ಲಿ ಪ್ರಮುಖವಾದುವು ಜಾತಿ, ವರ್ಗ, ಲಿಂಗ ಮತ್ತು ಪ್ರಾದೇಶಿಕ ಅಂಶಗಳು. ಈ ಅಂಕಣದಲ್ಲಿ 16ನೇ ವಿಧಾನಸಭಾ ಚುನಾವಣೆಯ ಫಲಿತಾಂಶಗಳನ್ನು ಲಿಂಗಾಧಾರಿತ ಚೌಕಟ್ಟಿನಲ್ಲಿ ವಿಮರ್ಶೆ ಮಾಡಿ ಹೇಗೆ ಕರ್ನಾಟಕದ ಚುನಾವಣಾ ಇತಿಹಾಸದಲ್ಲಿ ಮಹಿಳೆಯರ ಸೀಮಾಂತೀಕರಣ ಏಳು ದಶಕಗಳಿಗೂ ಹೆಚ್ಚು ಕಾಲ ಮುಂದುವರೆಯುತ್ತಲೇ ಬಂದಿದೆ ಎಂಬುದನ್ನು ವಿಶ್ಲೇಷಣೆಗೆ ಒಳಪಡಿಸಲು ಪ್ರಯತ್ನಿಸಲಾಗಿದೆ.

ಈ ಬಾರಿಯ ಚುನಾವಣೆಯಲ್ಲಿ 224 ವಿಧಾನಸಭಾ ಸ್ಥಾನಗಳಲ್ಲಿ ಕೇವಲ 10 ಮಹಿಳೆಯರಿಗೆ ದೊರೆತಿವೆ. ಇವುಗಳನ್ನು ಜಿಲ್ಲಾವಾರು ವಿಂಗಡಿಸಿದಾಗ ಕರ್ನಾಟಕದ 31 ಜಿಲ್ಲೆಗಳಲ್ಲಿ ಕೇವಲ 9 ಜಿಲ್ಲೆಗಳಿಂದ ಮಹಿಳೆಯರು ಆಯ್ಕೆಯಾಗಿರುವುದು ತಿಳಿಯುತ್ತದೆ. ಅವುಗಳೆಂದರೆ ಬೆಳಗಾವಿ ಜಿಲ್ಲೆಯಿಂದ ಇಬ್ಬರು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಕೋಲಾರ, ಗುಲ್ಬರ್ಗ, ರಾಯಚೂರು, ವಿಜಯನಗರ, ಶಿವಮೊಗ್ಗ ಮತ್ತು ಬೆಂಗಳೂರು ನಗರ ಜಿಲ್ಲೆಗಳಿಂದ ತಲಾ ಒಬ್ಬರು.

ಇನ್ನು ಕರ್ನಾಟಕವನ್ನು ಪ್ರಾದೇಶಿಕವಾಗಿ ವಿಂಗಡಿಸಿ ಮಹಿಳಾ ಪ್ರಾತಿನಿಧ್ಯವನ್ನು ವಿಶ್ಲೇಷಿಸಲು ಯತ್ನಿಸಿದಾಗ ನಮ್ಮ ಮುಂದೆ ಮೂಡಿ ಬರುವ ಚಿತ್ರಣ ಹೀಗಿದೆ. ಮುಂಬೈ ಕರ್ನಾಟಕ ಭಾಗದ 50 ಕ್ಷೇತ್ರಗಳಲ್ಲಿ ಇಬ್ಬರು, ಹೈದರಾಬಾದ್ ಕರ್ನಾಟಕದ 31 ಕ್ಷೇತ್ರಗಳಲ್ಲಿ ಇಬ್ಬರು, ಕರಾವಳಿ ಕರ್ನಾಟಕದ 21 ಕ್ಷೇತ್ರಗಳಲ್ಲಿ ಒಬ್ಬರು, ಕೇಂದ್ರ ಕರ್ನಾಟಕದ 35 ಕ್ಷೇತ್ರಗಳಲ್ಲಿ ಇಬ್ಬರು, ದಕ್ಷಿಣ ಕರ್ನಾಟಕದ 51 ಕ್ಷೇತ್ರಗಳಲ್ಲಿ ಒಬ್ಬರು ಮತ್ತು ಬೆಂಗಳೂರಿನ 36 ಕ್ಷೇತ್ರಗಳಲ್ಲಿ ಒಬ್ಬರು, ಆಯ್ಕೆಯಾಗಿ ಬಂದಿದ್ದಾರೆ.

ಇದೇನು ಈ ಬಾರಿಯ ಚುನಾವಣೆಯಲ್ಲಿ ಮಾತ್ರ ಕಾಣುತ್ತಿರುವ ಪರಿಸ್ಥಿತಿಯಲ್ಲ. 1952ರಲ್ಲಿ ನಡೆದ ಪ್ರಥಮ ಚುನಾವಣೆಯಿಂದ ಹಿಡಿದು ಇಂದಿನವರೆಗೂ ವಿಧಾನಸಭೆಯಲ್ಲಿ ಮಹಿಳಾ ಸದಸ್ಯರ ಸಂಖ್ಯೆ, 1957ರ ಎರಡನೇ (6.25%) ಮತ್ತು 1962ರ ಮೂರನೇ (8.65%) ವಿಧಾನಸಭೆಯನ್ನು ಹೊರತುಪಡಿಸಿದರೆ ಶೇಕಡಾ 5ರಷ್ಟನ್ನೂ ತಲುಪಿಲ್ಲ. 1987ರಲ್ಲೇ ಗ್ರಾಮ ಪಂಚಾಯತಿಯಲ್ಲಿ ಮಹಿಳೆಯರಿಗೆ ಶೇಕಡಾ 25ರಷ್ಟು ಮೀಸಲಾತಿಯನ್ನು ನೀಡಿ 73 ಮತ್ತು 74ನೇ ಸಂವಿಧಾನಾತ್ಮಕ ತಿದ್ದುಪಡಿಗಳಿಗೆ ನಾಂದಿಯನ್ನು ಹಾಡಿದ ನಮ್ಮ ರಾಜ್ಯದಲ್ಲಿ 70 ವರ್ಷಗಳ ನಂತರವೂ ಮಹಿಳಾ ಪ್ರಾತಿನಿಧ್ಯ ಶೇಕಡಾ 5ನ್ನೂ ತಲುಪಿಲ್ಲ ಎಂದರೆ ಇದು ಒಳಗೊಳ್ಳುವ ರಾಜಕಾರಣವಂತೂ ಖಂಡಿತಾ ಅಲ್ಲ.

> ಚುನಾವಣಾ ರಾಜಕಾರಣವನ್ನು ಸುತ್ತುವರೆದಿರುವ ಪುರುಷ ಚಕ್ರವ್ಯೂಹವನ್ನು ಭೇದಿಸಿ ಅದರೊಳಗೆ ಮಹಿಳೆಯರು ಹೇಗೆ ಪ್ರವೇಶವನ್ನು ಪಡೆಯುತ್ತಾರೆ ಅಥವಾ ಪಡೆಯಬಹುದು ಎನ್ನುವ ಮುಖ್ಯ ಪ್ರಶ್ನೆ ಮತ್ತು ಅದನ್ನು ಸುತ್ತುವರೆದಿರುವ ಕೆಲ ಉಪ-ಪ್ರಶ್ನೆಗಳನ್ನು ಎತ್ತುವುದು ಅವಶ್ಯ. ಅವುಗಳಲ್ಲಿ ಮುಖ್ಯವಾದವು ಹೊರ ನೋಟಕ್ಕೆ ಮುಕ್ತವೆನಿಸುವ ಪ್ರವೇಶಾವಕಾಶಗಳು ವಾಸ್ತವದಲ್ಲಿ ನಿಜವಾಗಿಯೂ ಮುಕ್ತವಾಗಿವೆಯೇ? ರಾಜಕೀಯ ವಲಯದ ಸಂಪರ್ಕವೇ ಇಲ್ಲದೆ, ಆರ್ಥಿಕವಾಗಿಯೂ ಸದೃಢರಲ್ಲದ ಜನ ಸಮುದಾಯಗಳ ಮಹಿಳೆಯರಿಗಾಗಲಿ, ಸಮಾಜದ ತಳ ವರ್ಗಗಳೊಡನೆ ಗುರುತಿಸಿಕೊಂಡು ಅವರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಮಹಿಳೆಯರಿಗಾಗಲೀ ಮುಖ್ಯವಾಹಿನಿ ರಾಜಕಾರಣ ತನ್ನನ್ನು ತೆರೆದು ಕೊಂಡಿದೆಯೇ? ರಾಜಕೀಯ ಪಕ್ಷಗಳ ಬೆಂಬಲವಿಲ್ಲದ ಮಹಿಳೆಯರು ಚುನಾವಣೆಗಳಲ್ಲಿ ಸ್ಪರ್ಧಿಸಲು ಸಾಧ್ಯವೇ?

ಬಹು ವರ್ಷಗಳ ನಂತರ ಮಹಿಳಾ ಪ್ರಾತಿನಿಧ್ಯ ಎರಡಂಕಿಯನ್ನು(10) ತಲುಪಿದೆ ಎಂದು ಕೆಲ ಮಹಿಳಾ ನಾಯಕಿಯರೇ ಸಂಭ್ರಮಿಸುತ್ತಿದ್ದಾರೆ! 224 ಸ್ಥಾನಗಳಲ್ಲಿ 10 ಸ್ಥಾನಗಳಲ್ಲಿ ಚುನಾಯಿತರಾಗಿ ಬಂದಿರುವ ಮಹಿಳಾ ನಾಯಕಿಯರ ಸಾಮಾಜಿಕ–ಆರ್ಥಿಕ–ರಾಜಕೀಯ ಹಿನ್ನೆಲೆಯನ್ನು ಅರಿಯುವುದು ಚುನಾವಣಾ ಪ್ರವೃತ್ತಿಗಳ ವಿಶ್ಲೇಷಕರಿಗೆ ಬಹು ಮುಖ್ಯವಾದಂಥ ಒಂದು ವಿಚಾರ. ಏಕೆಂದರೆ ಚುನಾವಣಾ ರಾಜಕಾರಣವನ್ನು ಸುತ್ತುವರೆದಿರುವ ಪುರುಷ ಚಕ್ರವ್ಯೂಹವನ್ನು ಭೇದಿಸಿ ಅದರೊಳಗೆ ಮಹಿಳೆಯರು ಹೇಗೆ ಪ್ರವೇಶವನ್ನು ಪಡೆಯುತ್ತಾರೆ ಅಥವಾ ಪಡೆಯಬಹುದು ಎನ್ನುವ ಮುಖ್ಯ ಪ್ರಶ್ನೆ ಮತ್ತು ಅದನ್ನು ಸುತ್ತುವರೆದಿರುವ ಕೆಲ ಉಪ–ಪ್ರಶ್ನೆಗಳನ್ನು ಎತ್ತುವುದು ಅವಶ್ಯ. ಅವುಗಳಲ್ಲಿ ಮುಖ್ಯವಾದವು ಹೊರ ನೋಟಕ್ಕೆ ಮುಕ್ತವೆನಿಸುವ ಪ್ರವೇಶಾವಕಾಶಗಳು ವಾಸ್ತವದಲ್ಲಿ ನಿಜವಾಗಿಯೂ ಮುಕ್ತವಾಗಿವೆಯೇ? ರಾಜಕೀಯ ವಲಯದ ಸಂಪರ್ಕವೇ ಇಲ್ಲದೆ, ಆರ್ಥಿಕವಾಗಿಯೂ ಸಧೃಢರಲ್ಲದ ಜನ ಸಮುದಾಯಗಳ ಮಹಿಳೆಯರಿಗಾಗಲಿ, ಸಮಾಜದ ತಳ ವರ್ಗಗಳೊಡನೆ ಗುರುತಿಸಿಕೊಂಡು ಅವರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಮಹಿಳೆಯರಿಗಾಗಲೀ ಮುಖ್ಯವಾಹಿನಿ ರಾಜಕಾರಣ ತನ್ನನ್ನು ತೆರೆದು ಕೊಂಡಿದೆಯೇ? ರಾಜಕೀಯ ಪಕ್ಷಗಳ ಬೆಂಬಲವಿಲ್ಲದ ಮಹಿಳೆಯರು ಚುನಾವಣೆಗಳಲ್ಲಿ ಸ್ಪರ್ಧಿಸಲು ಸಾಧ್ಯವೇ?

16ನೇ ವಿಧಾನಸಭೆಯ 10 ಮಹಿಳಾ ಸದಸ್ಯರಲ್ಲಿ ಒಬ್ಬರು ಮಾತ್ರ ಸ್ವತಂತ್ರ ಅಭ್ಯರ್ಥಿಯಾಗಿದ್ದರೆ ಇನ್ನುಳಿದ 9 ಮಂದಿ ಪಕ್ಷ ಬೆಂಬಲಿತ ಅಭ್ಯರ್ಥಿಗಳಾಗಿ ಸ್ಪರ್ಧಿಸಿದ್ದಂತಹವರು. ಈ ಒಬ್ಬರು ಸ್ವತಂತ್ರ ಅಭ್ಯರ್ಥಿ ಕೂಡ ರಾಜ್ಯ ಸರ್ಕಾರದ ಮಂತ್ರಿಯಾಗಿದ್ದವರ ಪುತ್ರಿ. ಇನ್ನುಳಿದ 9 ಮಹಿಳಾ ಪ್ರತಿನಿಧಿಗಳಲ್ಲಿ ಒಬ್ಬರು ಹಿಂದಿನ ಸರ್ಕಾರದಲ್ಲಿ ಮಂತ್ರಿಯಾಗಿದ್ದವರು, ಮತ್ತೊಬ್ಬರು ಆರು ಬಾರಿ ಶಾಸಕರಾಗಿ, ಒಂದು ಬಾರಿ ಸಂಸದರಾಗಿ ಮತ್ತು ಮಂತ್ರಿಯಾಗಿ ಸೇವೆ ಸಲ್ಲಿಸಿದ್ದವರ ಪತ್ನಿ ಹಾಗೂ ಹಾಲಿ ಶಾಸಕರು, ಇಬ್ಬರು ಈ ಹಿಂದೆ ಮಂತ್ರಿಯಾಗಿದ್ದವರ ಪುತ್ರಿಯರು ಹಾಗೂ ಮತ್ತೊಬ್ಬರು ಹಾಲಿ ಶಾಸಕರಾಗಿದ್ದು, ಈ ಹಿಂದೆ ಮಂತ್ರಿಗಳಾಗಿದ್ದವರ ಪತ್ನಿ. ಇನ್ನುಳಿದವರಲ್ಲಿ ಇಬ್ಬರು ಹಾಲಿ ಶಾಸಕಿಯರಾಗಿದ್ದವರು ಮತ್ತು ಇನ್ನುಳಿದಿರುವ ಇಬ್ಬರಲ್ಲಿ ಒಬ್ಬರು ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರಾಗಿದ್ದವರು. ಇನ್ನೊಬ್ಬರು ಅಲ್ಪಾವಧಿಗೆ ಗ್ರಾಮ ಪಂಚಾಯತಿಯ ಸದಸ್ಯರಾಗಿದ್ದವರು. ಇವರಲ್ಲಿ 5 ಸದಸ್ಯರು ಪರಿಶಿಷ್ಟ ಜಾತಿಗಳಿಗೆ ಮೀಸಲು ಮತ್ತು ಒಬ್ಬರು ಪರಿಶಿಷ್ಟ ಬುಡಕಟ್ಟುಗಳಿಗೆ ಮೀಸಲು ಕ್ಷೇತ್ರಗಳಿಂದ ಗೆದ್ದು ಬಂದಿದ್ದಾರೆ. ನಾಲ್ಕು ಮಹಿಳೆಯರು ಸಾಮಾನ್ಯ ಕ್ಷೇತ್ರಗಳನ್ನು ಪ್ರತಿನಿಧಿಸುತ್ತಿರುವವರು. ರಾಜ್ಯದ 16ನೇ ವಿಧಾನಸಭೆಯ 10 ಮಹಿಳಾ ಸದಸ್ಯರ ಸರಾಸರಿ ವಯಸ್ಸು 50.4 ಆಗಿದ್ದು ಇವರಲ್ಲಿ ಮೂವರು ಸ್ನಾತಕೋತ್ತರ, ಐದು ಮಂದಿ ಪದವಿ ಪೂರ್ವ ಹಾಗೂ ಮತ್ತಿಬ್ಬರು ಹತ್ತನೇ ತರಗತಿಯವರೆಗೂ ಶಿಕ್ಷಣವನ್ನು ಪಡೆದಿದ್ದಾರೆ.

ನಾವು ಎತ್ತಿದ ಎಲ್ಲ ಪ್ರಶ್ನೆಗಳಿಗೂ ಈ ಬಾರಿ ಆಯ್ಕೆಯಾಗಿರುವ ಮಹಿಳಾ ಪ್ರತಿನಿಧಿಗಳ ರಾಜಕೀಯ ಹಿನ್ನೆಲೆ ಬಹು ಮಟ್ಟಿಗೆ ಉತ್ತರವನ್ನು ನೀಡಿದೆ. ರಾಜಕೀಯ ಕ್ಷೇತ್ರವನ್ನು ಪ್ರವೇಶಿಸಬೇಕಾದರೆ ಮಹಿಳೆಯರಾಗಲೀ ಪುರುಷರಾಗಲೀ ಪ್ರಮುಖ ರಾಜಕೀಯ ಪಕ್ಷಗಳ ಅಥವಾ ಪ್ರಬಲ ರಾಜಕಾರಣಿಗಳ ಬೆಂಬಲವನ್ನು ಹೊಂದಿರಬೇಕು. ಸ್ವಪ್ರತಿಭೆ ಅಥವಾ ಸ್ವಶಕ್ತಿಯಿಂದ ಸ್ಪರ್ಧಿಸಿ ಜಯವನ್ನು ಸಾಧಿಸಿರುವವರ ಸಂಖ್ಯೆ ರಾಜ್ಯ ರಾಜಕಾರಣದಲ್ಲಾಗಲೀ, ರಾಷ್ಟ್ರ ರಾಜಕಾರಣದಲ್ಲಾಗಲೀ ಗೌಣ. ಮಹಿಳೆಯರಿಗೆ ಸ್ವಸಾಮರ್ಥ್ಯದಿಂದ ಅಧಿಕಾರ ಮತ್ತು ಜವಾಬ್ದಾರಿಗಳನ್ನು ನಿರ್ವಹಿಸುವ ಶಕ್ತಿ ಇದ್ದರೂ ಪೂರಕ ಸಂಪರ್ಕ ಜಾಲಗಳ ಬೆಂಬಲವಿಲ್ಲದಿದ್ದರೆ ರಾಜಕೀಯ ಹುದ್ದೆಗಳು ದೊರೆಯುವುದು ಅಪರೂಪವೇ. ಚುನಾವಣೆಗಳು ಹಣ ಬಲ, ತೋಳ್ಬಲ, ಪ್ರಬಲ ರಾಜಕಾರಣಿಗಳ ಕುಟುಂಬ ಅಥವಾ ಬಂಧು ವಲಯದ ಸದಸ್ಯತ್ವ ಅಥವಾ ಪಕ್ಷಗಳ ಕೃಪಾ ಕಟಾಕ್ಷದಿಂದಲೇ ಬಹು ಮಟ್ಟಿಗೆ ನಡೆಯುವುದರಿಂದ, ಹೆಚ್ಚಿನ ಸಂಖ್ಯೆಯ ಮಹಿಳೆಯರಿಗೆ ರಾಜಕೀಯ ಆಕಾಂಕ್ಷೆಗಳು ಮತ್ತು ಸಾಮರ್ಥ್ಯಗಳು ಇದ್ದರೂ ಈ ವಿಷ ವರ್ತುಲವನ್ನು ಭೇದಿಸಿ ಒಳ ಪ್ರವೇಶಿಸಲು ಆಗುವುದಿಲ್ಲ ಎನ್ನುವುದು ಒಂದು ಸಾಮಾಜಿಕ–ರಾಜಕೀಯ ಸತ್ಯ.

ತಮ್ಮದೇ ಆದ ವರ್ಚಸ್ಸಿನಿಂದ ರಾಜ್ಯ ರಾಜಕಾರಣದಲ್ಲಿ ವಿಶೇಷ ಛಾಪನ್ನು ಮೂಡಿಸಿದ ಮಹಿಳಾ ನಾಯಕಿಯರು ಅಥವಾ ಸಮಾಜದ ನಿಮ್ನ ವರ್ಗಗಳಿಂದ ಬಂದು ವಿಧಾನ ಸಭೆಯನ್ನು ಪ್ರವೇಶಿಸಿದ ಮಹಿಳೆಯರು ಕರ್ನಾಟಕದಲ್ಲಿ ಇಲ್ಲವೇ ಇಲ್ಲವೆಂದೇನಿಲ್ಲ. ಆದರೆ ಬರಬರುತ್ತಾ ವಿಧಾನಸಭೆಯಲ್ಲಿ ಮಹಿಳೆಯರ ಸಂಖ್ಯೆ ಕಡಿಮೆಯಾಗುತ್ತ ಹೋಗುತ್ತಿರುವುದೇಕೆ? ಇದಕ್ಕೆ ಪುರುಷ ಪ್ರಧಾನ ವ್ಯವಸ್ಥೆಯನ್ನು ದೂರಿ ಸುಮ್ಮನೆ ಕುಳಿತರೆ ಆಗುವುದಿಲ್ಲ. ಸಮಾಜದ ಎಲ್ಲ ಸ್ತರಗಳಲ್ಲಿ, ಎಲ್ಲ ಸಂಸ್ಥೆಗಳಲ್ಲಿ ಹೆಣ್ಣು ಮಕ್ಕಳಲ್ಲಿ ಅಧಿಕಾರದ ವಲಯವನ್ನು ಪ್ರವೇಶಿಸಲು ಹಂಬಲವನ್ನು ಸೃಷ್ಟಿಸಿ, ಅದಕ್ಕಾಗಿ ಅವರನ್ನು ಸಿದ್ಧಗೊಳಿಸುವ ವ್ಯವಸ್ಥೆಯನ್ನು ರೂಪಿಸಬೇಕಾಗಿದೆ. ಇದು ತಕ್ಷಣ ಮಾಡಬಹುದಾದ ಕೆಲಸ. ಇನ್ನೇನು ಹತ್ತಿರದಲ್ಲಿರುವ ಸಂಸತ್ ಚುನಾವಣೆಗಳಲ್ಲಾದರೂ ಮಹಿಳೆಯರಿಗೆ ಇಂತಿಷ್ಟು ಕ್ಷೇತ್ರಗಳನ್ನು ಮೀಸಲಿಡುವ ನಿರ್ಧಾರವನ್ನು ಎಲ್ಲ ಪಕ್ಷಗಳೂ ತೆಗೆದುಕೊಂಡರೆ ಎಲ್ಲರೂ ಸಂಭ್ರಮಿಸುತ್ತಿರುವ 'ಒಳಗೊಳ್ಳುವ ಪ್ರಜಾಪ್ರಭುತ್ವ', 'ಐತಿಹಾಸಿಕ ಗೆಲುವು' ಮುಂತಾದ ಭಾವನೆಗಳಿಗೆ ನಿಜವಾದ ಅರ್ಥ ಬರುತ್ತದೆ. ಎಲ್ಲಕಿಂತ ಮಿಗಿಲಾಗಿ ಈಗಾಗಲೇ ಪ್ರಜಾಸತ್ತಾತ್ಮಕ ಅಧಿಕಾರವನ್ನು ಪಡೆದಿರುವ ಮಹಿಳಾ ಪ್ರತಿನಿಧಿಗಳು ವಿಧಾನಸಭೆಯಲ್ಲಿ ಮತ್ತು ಪಕ್ಷದ ಒಳಗಿನಿಂದ ಮಹಿಳಾ ಪ್ರಾತಿನಿಧ್ಯ ಹೆಚ್ಚಿಸಲು ಧ್ವನಿಯಾಗಬೇಕು.

ನಿಮ್ಮ ಆಯ್ಕೆ ಹೆಚ್.ಡಿ.ದೇವೇಗೌಡರಿಗೆ ಸಂತೋಷ ತಂದಿದೆ

ವಿಧಾನಸಭಾಧ್ಯಕ್ಷ ಯು.ಟಿ.ಖಾದರ್‌ಗೆ ಶಾಸಕ ಜಿ.ಟಿ.ದೇವೇಗೌಡ ಅಭಿನಂದನೆ





ಬೆಂಗಳೂರು, ಮೇ 24(ಎಂಕೆ)–ರಾಜ್ಯ ವಿಧಾನ ಸಭಾಧ್ಯಕ್ಷರಾಗಿ ಆಯ್ಕೆಯಾದ ಯು.ಟಿ.ಖಾದರ್ ಅವರನ್ನು ಅಭಿನಂದಿಸಿರುವ ಚಾಮುಂಡೇಶ್ವರಿ ಕ್ಷೇತ್ರದ ಶಾಸಕರೂ ಆದ ಮಾಜಿ ಸಚಿವ ಜಿ.ಟಿ. ದೇವೇಗೌಡ, ಯು.ಟಿ.ಖಾದರ್ ಅವರ ಆಯ್ಕೆ ಜೆಡಿಎಸ್ ರಾಷ್ಟ್ರಾಧ್ಯಕ್ಷರಾದ ಹೆಚ್.ಡಿ.ದೇವೇಗೌಡರಿಗೆ ಬಹಳ ಸಂತೋಷ ತಂದಿದೆ ಎಂದಿದ್ದಾರೆ.

ವಿಧಾನಸಭೆ ಕಲಾಪದಲ್ಲಿ ಮಾತನಾಡಿದ ಅವರು, ಸಭಾಧ್ಯಕ್ಷರಾಗಿ ಆಯ್ಕೆಯಾದ ಖಾದರ್ ಅವರಿಗೆ ಮೊದಲು ಜೆಡಿಎಸ್ ಪಕ್ಷದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮಾತು ಆರಂಭಿಸಿ, ವಿಧಾನ ಸಭಾ ಅಧ್ಯಕ್ಷರ ಆಯ್ಕೆಯನ್ನು ನೋಡಿ ನಮ್ಮ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಹೆಚ್.ಡಿ.ದೇವೇಗೌಡರು ಬಾರೀ ಸಂತೋಷಪಟ್ಟಿದ್ದಾರೆ. ಅವರ ಕನಸು ಇವತ್ತು ನನಸಾಗಿದೆ ಎಂದರು.

ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ತಾವು ನಗರಾಭಿವೃದ್ಧಿ ಸಚಿವರಾಗಿ ನೆರೆ ಬಂದ ಸಂದರ್ಭದಲ್ಲಿ ಮೈಸೂರಿಗೆ ಬಂದು ಅಧಿಕಾರಿಗಳೊಂದಿಗೆ ವಿಚಾರ ಮಾಡಿ, ಸಾಮಾನ್ಯ ಜನರ ಕಷ್ಟ–ಸುಖಗಳನ್ನು ವಿಚಾರಿಸಿ ಯಾವ ರೀತಿಯ ಪರಿಹಾರ ಕೊಡಬೇಕು ಎಂಬುದನ್ನು ಸ್ಥಳದಲ್ಲೇ ನಿರ್ಧಾರ ಮಾಡುತ್ತಿದ್ದನ್ನು ನಾನು ನೋಡಿದ್ದೇನೆ. ಚರ್ಚೆಗಳು ಜೋರಾದಾಗ ಉಪನಾಯಕರಾಗಿ ಎಲ್ಲರನ್ನೂ ಸಮಾಧಾನಪಡಿಸಿ ಕೂರಿಸುತ್ತಿದ್ದೀರಿ. ಬೇರೆ ಯಾವ ನಾಯಕರಿಗೂ ಆ ಶಕ್ತಿ ಇರುತ್ತಿರಲಿಲ್ಲ. ಬಹಳ ಶಿಸ್ತನ್ನು ಕಾಪಾಡುತ್ತಿದ್ದೀರಿ. ಜನಮೆಚ್ಚುವ ರೀತಿಯಲ್ಲಿ ಸೇವೆಯನ್ನು ಸಲ್ಲಿಸಿದ್ದೀರಿ ಎಂದರು.

ಅಬ್ದುಲ್ ಕಲಾಂ ಅವರು ರಾಷ್ಟ್ರಪತಿಯಾದಾಗ ಬಹಳ ಪ್ರೀತಿಯಿಂದ ದೇಶದ ಜನ ಅವರನ್ನು ನೋಡುತ್ತಿದ್ದರು. ನಂತರ ಅವರು ಇಡೀ ಪ್ರಪಂಚಕ್ಕೆ ಮೆಚ್ಚುಗೆಯಾಗುವ ರೀತಿಯಲ್ಲಿ ಅಧಿಕಾರವನ್ನು ನಡೆಸಿದ್ದರು. ಇದೇ ರೀತಿಯ ಅಧಿಕಾರವನ್ನು ತಮ್ಮಿಂದಲೂ ರಾಜ್ಯದ ಜನ ನಿರೀಕ್ಷಿಸುತ್ತಿದ್ದಾರೆ ಕಾಂಗ್ರೆಸ್ ಪಕ್ಷ ತಮ್ಮನ್ನು ಆಯ್ಕೆ ಮಾಡಿರುವಂತಹದ್ದು ಸಂತೋಷದ ಸಂಗತಿ. ಆ ಪಕ್ಷ ಹಾಗೂ ನಾಯಕರನ್ನು ತುಂಬು ಹೃದಯದಿಂದ ಅಭಿನಂದಿಸುತ್ತೇನೆ. ರಾಜ್ಯದ ಹಿತಕ್ಕೆ ಸಂಬಂಧಿಸಿದಂತಹ ವಿಷಯಗಳ ಚರ್ಚೆಗೆ ಶಾಸಕರಿಗೆ ಅವಕಾಶ ಮಾಡಿಕೊಡಿ ಎಂದರು.

ಶಾಂತಿ ಕದಡಿದರೆ ಭಜರಂಗ ದಳ, RSS ನಿಷೇಧ; ಬಿಜೆಪಿ ಜಾರಿಗೆ ತಂದಿದ್ದ ಮಸೂದೆಗಳು ವಾಪಸ್



ಬೆಂಗಳೂರು, ಮೇ 24– ರಾಜ್ಯದಲ್ಲಿ ಶಾಂತಿ ಕದಡಿದರೆ ಭಜರಂಗ ದಳ ಮತ್ತು ಆರ್‌ಎಸ್‌ಎಸ್‌ನಂತಹ ಸಂಘಟನೆಗಳನ್ನು ತಮ್ಮ ಸರ್ಕಾರ ನಿಷೇಧಿಸುತ್ತದೆ ಎಂದು ಸಚಿವ ಪ್ರಿಯಾಂಕ ಖರ್ಗೆ ಹೇಳಿದ್ದಾರೆ. ನಾವು ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟ ಮಾಡುತ್ತೇವೆ ಎಂದು ಭರವಸೆ ನೀಡಿದ್ದೇವೆ. ಕಾನೂನನ್ನು ಕೈಗೆ ತೆಗೆದುಕೊಂಡರೆ ನಿಷೇಧ ಕಟ್ಟಿಟ್ಟ ಬುತ್ತಿ. ಪ್ರಣಾಳಿಕೆಯಲ್ಲಿ ನೀಡಿರುವ ಭರವಸೆಯಂತೆ ಭಜರಂಗ ದಳ, ಆರ್‌ಎಸ್‌ಎಸ್ ಸೇರಿದಂತೆ ಯಾವುದೇ ಸಂಘಟನೆಯನ್ನು ನಿಷೇಧಿಸಲು ಹಿಂದೆ ಮುಂದೆ ಯೋಚಿಸುವುದಿಲ್ಲ ಎಂದಿದ್ದಾರೆ. ಹಿಜಾಬ್, ಹಲಾಲ್ ಕಟ್ ಮತ್ತು ಗೋಹತ್ಯೆ ಕಾನೂನುಗಳ ಮೇಲಿನ ನಿಷೇಧವನ್ನು ಸರ್ಕಾರ ಹಿಂಪಡೆಯಲಿದೆ ಎಂದು ಹೇಳಿದರು. ಸಮಾಜದಲ್ಲಿ ಕಾನೂನು ಮತ್ತು ಪೊಲೀಸರ ಭಯವಿಲ್ಲದೆ ಕೆಲವು ಅಂಶಗಳು ಮುಕ್ತವಾಗಿ ವಿಹರಿಸುತ್ತಿವೆ. ಕಳೆದ ಮೂರು ವರ್ಷಗಳಿಂದ ಈ ಪ್ರವೃತ್ತಿ ನಡೆಯುತ್ತಿದೆ ಎಂದು ಪ್ರಿಯಾಂಕ ಖರ್ಗೆ ಹೇಳಿದ್ದಾರೆ.

ಸಂಖ್ಯಾಬಲ ಇಲ್ಲ ಎಂದು ಎದೆಗುಂದಬೇಡಿ: ದೇವೇಗೌಡ



ಬೆಂಗಳೂರು, ಮೇ 24– ಸದನದಲ್ಲಿ ಸಂಖ್ಯಾಬಲ ಕಡಿಮೆ ಇದೆ ಎಂದು ಎದೆಗುಂದಬೇಡಿ. ಹಿಂದಿನ ಲೋಕ ಸಭೆಯಲ್ಲೂ ನಾನು ನಮ್ಮ ಪಕ್ಷದ ಪರವಾಗಿ ಒಬ್ಬನೇ ಇದ್ದೆ. ಈಗಲೂ ನಮಗೆ ಒಬ್ಬರೇ ಎಂಪಿ ಇದ್ದಾರೆ. ಹಾಗಂತ ನಮ್ಮ ಹೋರಾಟದ ಕೆಚ್ಚು ಕಡಿಮೆ ಆಗಿಲ್ಲ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ತಮ್ಮ ಪಕ್ಷದ ನೂತನ ಶಾಸಕರಲ್ಲಿ ಧೈರ್ಯ ತುಂಬಿದರು.

ತಮ್ಮ ನಿವಾಸದಲ್ಲಿ ಕರೆದಿದ್ದ ಸಭೆಯಲ್ಲಿ ಪಕ್ಷದ ನೂತನ ಶಾಸಕರನ್ನು ಉದ್ದೇಶಿಸಿ ಮಾತನಾಡಿದ ಅವರು, 19 ಸೀಟು ಗೆದ್ದಿದ್ದೇವೆ ಎಂಬ ಆತಂಕ ಬೇಡ. 119 ಸೀಟು ಗೆಲ್ಲುವ ದಿಕ್ಕಿನಲ್ಲಿ ಕೆಲಸ ಮಾಡೋಣ. ನಾನು ಬದುಕಿರುವ ತನಕ ಪಕ್ಷಕ್ಕಾಗಿ ದುಡಿಯುತ್ತೇನೆ. ನೀವು ಯಾರೂ ಧೈರ್ಯ ಕಳೆದುಕೊಳ್ಳಬೇಡಿ ಎಂದು ಬೆಂಬಲದ ಮಾತುಗಳನ್ನಾಡಿದರು.

ಚುನಾವಣೆಯಲ್ಲಿ ಸೋಲು, ಗೆಲುವು ಸಾಮಾನ್ಯ. ನಾವು ಎಲ್ಲಿ ತಪ್ಪು ಮಾಡಿದ್ದೇವೆ ಎನ್ನುವುದನ್ನು ಅರ್ಥ ಮಾಡಿಕೊಳ್ಳೋಣ. ಜನರ ಜತೆ ನಿಂತು ಕೆಲಸ ಮಾಡೋಣ. ಪ್ರಾಮಾಣಿಕತೆ, ಬದ್ಧತೆ, ಆಚಲತೆಯಿಂದ ದುಡಿದರೆ ಪಕ್ಷವನ್ನು ಅಧಿಕಾರಕ್ಕೆ ತರುವುದು ಕಷ್ಟವಲ್ಲ. ನಾನು ಕೂಡ ಸೋತಿದ್ದೇನೆ, ಗೆದ್ದಿದ್ದೇನೆ. ಸೋತಾಗ ಹೆದರಿ ಮನೆ ಸೇರಿಕೊಂಡಿಲ್ಲ, ಗೆದ್ದಾಗ ಬೀಗಿಲ್ಲ. ಎಲ್ಲಾ ಸಮಯದಲ್ಲೂ ಶ್ರದ್ಧೆ, ವಿನಯದಿಂದ ಜನರ ಕೆಲಸ ಮಾಡಿದ್ದೇನೆ. ಆಡಳಿತ ಪಕ್ಷದ ವಿರುದ್ಧ ಹೋರಾಟ ನಡೆಸಿದ್ದೇನೆ ಎಂದರು.

1962ರಲ್ಲಿ ಪಕ್ಷೇತರ ಶಾಸಕನಾಗಿ ಗೆದ್ದುಬಂದು ಈ ನೆಲ ಜಲಕ್ಕಾಗಿ ಹೋರಾಟ ನಡೆಸಿದವನು ನಾನು. ಒಬ್ಬನೇ ಶಾಸಕ ಎಂದು ನಾನು ಕೈಕಟ್ಟಿ ಕೂತಿದ್ದರೆ ಕಾವೇರಿ ನೀರಿನ ಸದ್ಬಳಕೆ ಸಾಧ್ಯ ಆಗುತ್ತಿತ್ತಾ? ಕಬಿನಿ, ಹಾರಂಗಿ, ಹೇಮಾವತಿ ಜಲಾಶಯಗಳು ತಲೆ ಎತ್ತುತ್ತಿದ್ದವಾ? ಮನಸ್ಸಿಟ್ಟು ಯೋಚನೆ ಮಾಡಿ, ಅಧೈರ್ಯಪಟ್ಟರೆ ಉಪಯೋಗವಿಲ್ಲ. ನಿಮ್ಮ ಜೊತೆ ಕುಮಾರಸ್ವಾಮಿ ನಿಲ್ಲುತ್ತಾರೆ. ಹೋರಾಟ ಮಾಡಿ ಎಂದು ದೇವೇಗೌಡರು ಕಿವಿಮಾತು ಹೇಳಿದರು.

ಮುಂದೆ ಅನೇಕ ಚುನಾವಣೆಗಳು ಬರಲಿವೆ. ಲೋಕಸಭೆ ಚುನಾವಣೆ ಕೂಡ ಬರುತ್ತದೆ. ಈಗಿನಿಂದಲೇ ಕೆಲಸ ಮಾಡಿ. ನಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಲು ಶ್ರಮಿಸಿ. ನಿಮ್ಮ ಜೊತೆ ನಾನು, ಕುಮಾರಸ್ವಾಮಿ ಇರುತ್ತೇವೆ. ಹೆದರಿ ಹಿಂದೆ ಸರಿಯುವ ಪ್ರಶ್ನೆ ಇಲ್ಲ. ಹೆದರಿ ಕೂತರೆ ಏನನ್ನೂ ಸಾಧನೆ ಮಾಡಿದಂತೆ ಆಗುವುದಿಲ್ಲ ಎಂದು ನೂತನ ಶಾಸಕರಿಗೆ ದೇವೇಗೌಡರು ಧೈರ್ಯ ತುಂಬಿದರು.

ಇದೇ ವೇಳೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಕೂಡ ನೂತನ ಶಾಸಕರ ಜೊತೆ ಮಾತುಕತೆ ನಡೆಸಿದ್ದು, ಈ ಸರಕಾರ ಗ್ಯಾರಂಟಿಗಳನ್ನು ಕೊಟ್ಟು ಅಧಿಕಾರಕ್ಕೆ ಬಂದಿದೆ. ಆಗಲೇ ಅಧಿಕಾರಕ್ಕಾಗಿ ಕಿರಿಕಿರಿ ಮಾಡಿಕೊಳ್ಳುತ್ತಿದ್ದಾರೆ. ನಮಗೆ ಅವರ ರಾಜಕೀಯ ಬೇಕಿಲ್ಲ. ಜನತೆಗೆ ಅವರು ಕೊಟ್ಟ ವಚನ ಪಾಲಿಸುವಂತೆ ಹೋರಾಟ ಮಾಡೋಣ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಬೇಕಾಗಿದ್ದಾರೆ
ಮೈಸೂರಿನ ಪ್ರಸಿದ್ಧ ಆಟೋಮೊಬೈಲ್ ಕಂಪನಿಗೆ ಬೇಕಾಗಿದ್ದಾರೆ.
ನಂಜನಗೂಡು ಮತ್ತು ಮೈಸೂರುಗೆ ಮಾರ್ಕೆಟಿಂಗ್ ಸೇಲ್ಸ್ ಎಕ್ಸಿಕ್ಯೂಟಿವ್
9743647484
Email: starmysoreresume@gmail.com

HOUSE FOR SALE
Size 27x30
Sheet Roofing
Janathanagar, Near Ganesh Bhandar
7348977948

ಬೇಕಾಗಿದ್ದಾರೆ
ಬಟ್ಟೆಗಳನ್ನು ಐರನ್ (ಇಸ್ತ್ರಿ) ಮಾಡಲು ಕೆಲಸಗಾರರು ಬೇಕಾಗಿದ್ದಾರೆ.
ಯಾದವಗಿರಿ, ಮೈಸೂರು
7406349585

ಮಂಟಪ ಮನೆ

ನಿತ್ಯ ಪೂಜೆ ಮಾಡಲು ನಿಮಗೊಂದು ದೇವರ ಮಂಟಪ ಬೇಕೇ ಬೀಟೆ ಮತ್ತು ಹಲಸು ಮರದಿಂದ ತಯಾರಿಸುತ್ತೇವೆ
ಸಂಪರ್ಕಿಸಿ: ಶ್ರೀನಗರ ಮೈಸೂರು
9448207634
9036742526

ಮಾರಾಟಕ್ಕಿದೆ/ಬೇಕಾಗಿದ್ದಾರೆ
ವಿಜಯನಗರ 2ನೇ ಹಂತ, ಮನೆ ನಂ.EWS 2118 ಕದಂಬ ಬೇಕರಿ ಹಿಂಭಾಗ, 2 ಅಂತಸ್ತಿನ ಮನೆ ಮಾರಾಟಕ್ಕಿದೆ. ಬೆಲೆ ರೂ.32 ಲಕ್ಷ
ಡ್ರೈವರ್‌ಗಳು ಬೇಕಾಗಿದ್ದಾರೆ
7829668666
9845011192

ಸರಿಯಾದ ಬೆಲೆ/ ಸರಿಯಾದ ಸರ್ವಿಸ್

ಮನೆ/ಹೋಟೆಲ್‌ಗಳಿಗೆ ಗ್ಯಾಸ್ ಪೈಪ್ ಲೈನಿಂಗ್ ಮಾಡುತ್ತೇವೆ
+ ಗ್ಯಾಸ್ ಸ್ಟೌವ್+ಗ್ಯಾಸ್‌ಗೀಜರ್+ಹಬ್ ಸ್ಟೌವ್+ಚಿಮಿನಿ ಮಾರಾಟ+ಸರ್ವಿಸ್ ಲಭ್ಯ
ರಿಜಿಸ್ಟರ್ಡ್ ಕಂಪೆನಿ+22 ವರ್ಷಗಳ ಅನುಭವ
8088888115

WANTED
ಹೆಲ್ಪರ್ಸ್ ಹುಡುಗರು ಬೇಕಾಗಿದ್ದಾರೆ
ದ್ವಿಚಕ್ರ ವಾಹನ ಹೊಂದಿರುವವರಿಗೆ ಆದ್ಯತೆ
99011 63200
97435 65907

ತಕ್ಷಣ ಬೇಕಾಗಿದ್ದಾರೆ
ಕಡಕೊಳ ತಾಂಡ್ಯ ಟಿ.ವಿ.ಎಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ : SSLC
ಸಂಬಳ: 18,000/-
ವಯೋಮಿತಿ: 45ವರ್ಷದ ಒಳಗೆ
ESI & PF ಊಟ ತಿಂಡಿ ವಸತಿ ಸೌಲಭ್ಯ ಇರುತ್ತದೆ.
9620777819
9880727819

ಸೈಟು ಮಾರಾಟಕ್ಕಿದೆ
DTCP ಅಪ್ರೂವ್ಡ್, 9 & 11A ಖಾತೆ 30x40 18 ಲಕ್ಷದ 60 ಸಾವಿರ
ಬ್ಯಾಂಕ್ ಲೋನ್ ದೊರೆಯುತ್ತದೆ.
ಮಾಲೀಕರಿಂದ ನೇರವಾಗಿ ಮಾರಾಟ
ಮೈಸೂರು–ಬನ್ನೂರು ರಸ್ತೆ.
9945558166

St. Mary's GIRLS PU COLLEGE
Chamundipuram, Mysore
* Admission Open
* Arts & Commerce
* Affordable Fee
9972389020
9844144232
above 85%, Free Admission

ಬಸವಮಾರ್ಗ ವ್ಯಸನ ಮುಕ್ತ ಕೇಂದ್ರ
28ನೇ 21 ದಿನಗಳ ಉಚಿತ ಕುಡಿತ ಬಿಡಿಸುವ ಶಿಬಿರ
8803344999
8553111999

ಬೇಕಾಗಿದ್ದಾರೆ
Tele Calling
ಕೆಲಸಕ್ಕೆ ಹುಡುಗಿಯರು ಮತ್ತು ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 8000 – 12000
ಸಂಪರ್ಕಿಸಿ:
8792140484

ಸೋಲಾರ್ ವಾಟರ್ ಹೀಟರ್
Solar Water Heater

ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

HOUSE FOR RENT / LEASE
3 BHK ground floor house available at Sharadadevinagar.
9980976912, 9483577892

ತಕ್ಷಣವೇ ಬೇಕಾಗಿದ್ದಾರೆ
ಮೈಸೂರು, ಹೆಬ್ಬಾಳಿನ ಕಂಪನಿಯೊಂದರಲ್ಲಿ ಕೆಲಸ ಮಾಡಲು ಟೈಲರುಗಳು, ಹೆಲ್ಪರುಗಳು, ಸೆಕ್ಯೂರಿಟಿ ಗಾರ್ಡ್‌ಗಳು ಮತ್ತು ವೆಲ್ಡರ್ (Welder)ಗಳು ಬೇಕಾಗಿದ್ದಾರೆ.
ESI+PF ವಾರದ ರಜೆ ಮತ್ತು ಕೆಲವು ಸ್ಥಳಗಳಿಗೆ ಬಸ್ಸಿನ ವ್ಯವಸ್ಥೆ ಇರುತ್ತದೆ.
7795285485
8105249880

WANTED
Mysore Diagnostic Centre Pvt.Ltd
#1869, SS Complex, 1st Floor, Opp. Sathyanarayana Temple, New Sayyajirao Road, Mysore-570021
1) Receptionist - M/F
2) Sample Boy - M
(Two Wheeler Vehicle is Must)
9243781901
9243781906, 9845272844

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596



Solar Water Heater
SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

DIRECT II PUC
ARTS & COMMERCE
ಜೂನ್ 1 ರಿಂದ ತರಗತಿಗಳು ಆರಂಭ
I PUC ಯಾವುದೇ ವಿಭಾಗದಲ್ಲಿ ಅನುತ್ತೀರ್ಣರಾದ ಹಾಗೂ SSLC ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಕಾಲೇಜು ಮಾದರಿಯಲ್ಲಿ
REGULAR CLASSES 9.30 am to 3.30 pm
ಹೊರ ಜಿಲ್ಲೆಯ ಬಾಲಕ ಬಾಲಕಿಯರಿಗೆ ಪ್ರತ್ಯೇಕ ಹಾಸ್ಟೆಲ್ ಸೌಲಭ್ಯವಿದೆ
CHANAKYA COACHING CENTRE(R)
Virajpet, Kodagu.
Mob : 8277496007, 948008554

WANTED
English & Kannada Computer typist for advocate office near Agrahara.
Salary Rs. 12,000.
Timings: 9.30 am to 5.30 pm.
Sundays 10.30 am to 3 pm.
7349337469, 9448525072

ಸಂಪು ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಬೇಕಾಗಿದ್ದಾರೆ
ಬೇಕರಿ ನಿರ್ವಹಿಸುವವರು ಕೆಲಸಕ್ಕೆ ಬೇಕಾಗಿದ್ದಾರೆ.
ಸ್ಥಳ: ನಂಜನಗೂಡು, ಬಜಾರು ರಸ್ತೆ,
9686111772

Immidiate Requirements
We Electrical India Pvt Ltd. Male & Femal Candidates
Freshers PUC/SSLC/ITI/
Hootgalli Industrial Area
7676928664
7795790081

WANTED
Immediately joiners
Admin. - 3 Nos.
Female Telecaller - 15 Nos.
PG facilities available.
Contact: **Meghana HR**
Mob: 7829803426

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ.
ಸಂಬಳ+ಟಿಪ 15,200/- to 86,000/-
9740733021, 9535028750

CHANGE OF NAME
I, Mubin Thaj, residing at #1734/2, 2nd Cross, K.N. Pura, Mysuru-570 019, passport bearing No. B5719880, changed my name as Mubeen Taj, on my own free will, in front of Notary C.R. Seetharam on 23-5-2023. I shall at all times hereafter in all records, deeds and writings and in all proceedings, dealings and transactions, private as well as upon all occasions whatsoever use and sign the name of Mubeen Taj.
Sd/- Mubeen Taj

ಸಂಪು ಕ್ಲೀನಿಂಗ್
ಸಂಪರ್ಕಿಸಿ:
8431541631

WANTED
Housekeeping Staffs to work in a reputed hospital in Gokulam, Mysuru.
Contact immediately.
Mob: 8105912167

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು/ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 12,000/–
8892258814

JOB'S @ MYSORE
Age - (18-24), 10th, PUC ಯಾದ
Earn (8500/- ರಿಂದ 16500/-) PM
Only Freshers *No Fee*
ಪರಸ್ಥಳದವರಿಗೆ ಮಾತ್ರ ವಸತಿ ತಮ್ಮ ವಿವರಗಳೊಂದಿಗೆ ನೇರ ಸಂಪರ್ಕಿಸಿ.
ಕಾಲ್: 9342827788
Meet Us (11 AM to 3PM)

ಶ್ರೀ ಮಹಾಲಕ್ಷ್ಮೀ ಟ್ರಾವೆಲ್ಸ್
22–6–23: ಕಾಶಿ, ಗಯಾ, ಬುದ್ಧಗಯಾ, ಪ್ರಯಾಗ್ ರಾಜ್, ಅಯೋಧ್ಯೆ. 22–6–2023: ಚಾರ್ ಧಾಮ್ ಯಾತ್ರ, ಕೇದಾರ್‌ನಾಥ್, ಬದ್ರಿನಾಥ್, ಗಂಗೋತ್ರಿ, ಯಮುನೋತ್ರಿ, ಹರಿದ್ವಾರ್, ಋಷಿಕೇಷ್. 1–6–2023: ಗುರುವಾಯೂರು, ಕೊಚ್ಚಿನ್, ಅಲೆಪ್ಪಿ, ತ್ರಿವೇಂಡ್ರಂ, ಅನಂತಪದ್ಮನಾಭ ದೇವಸ್ಥಾನ, ಕೋವಲಂ ಬೀಚ್. 11–7–2023: ಗುಜರಾತ್, ನಾಗನಾಥ್, ಸೋಮ್‌ನಾಥ್, ದ್ವಾರಕಾ.
9591017782, 9964527782

ಗೋಡೌನ್ ಬಾಡಿಗೆಗೆ ಇದೆ
2700 ಚದರ ಅಡಿ, 14 ಅಡಿ ಎತ್ತರ, ಪೂರ್ವ ದಿಕ್ಕು, ಎನ್ಐಇ ಕಾಲೇಜ್ ಹತ್ತಿರ, ವಿದ್ಯಾರಣ್ಯಪುರಂ, ಮೈಸೂರು.
9449039074, 8310729947

AFFIDAVIT
I, Dinesh Kumar J., S/o Jugarajji, residing at Door No. 1121/L-15, Kurubageri, Lashkar Mohalla, Mysuru. Swear that, in my DL bearing No. 1047/07-08 my name has been wrongly mentioned as Dinesh Kumar Metha. But in my Aadhar Card and Pan Card my name has been mentioned as Dinesh Kumar J. I swear in front of Notary S.M. Umapathi, that my correct name is Dinesh Kumar J.
Sd/- Dinesh Kumar J.

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

WANTED
Security Guards - 4 Nos.
Salary: Rs. 12,000 (12 hours)
Place: Alanahalli.
Edu: Above 10th.
Age: 25 to 55.
9741616826, 6361740914

ತಕ್ಷಣ ಬೇಕಾಗಿದ್ದಾರೆ
ಕುವೆಂಪುನಗರ ಅಪೋಲೋ ಆಸ್ಪತ್ರೆ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC ಸಂಬಳ: 19000/-
ವಯೋಮಿತಿ: 50 ವರ್ಷದ ಒಳಗೆ
ESI & PF ಊಟ ತಿಂಡಿ ಸೌಲಭ್ಯ ಇರುತ್ತದೆ.
9620667819
9880727819

ಬೇಕಾಗಿದ್ದಾರೆ
ಬೆಂಗಳೂರಿನ ಪ್ರತಿಷ್ಠಿತ ಕಂಪನಿಯಲ್ಲಿ ಕೆಲಸ ನಿರ್ವಹಿಸಲು ಅನುಭವವುಳ್ಳ ಚಾಲಕರು ಬೇಕಾಗಿದ್ದಾರೆ.
22 ಸಾವಿರ ಸಂಬಳ ದೊಂದಿಗೆ ಉಚಿತ ವಸತಿ ಸೌಲಭ್ಯವಿರುತ್ತದೆ.
9535539646
8197800851

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
ತಾಯಿ ಚಾಮುಂಡೇಶ್ವರಿ ಕಾಣತೂರೆ ನಾಲ್ವರ ದೈವ ಚೌಡನ್ ಕರೆ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಸಿದ್ಧ. ಖಾಯಂ ವಿಳಾಸ: ಸುಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರ ಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲೆಸಿದ್ದಾರೆ. ಹಳ್ಳಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣತೂರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ ರಸ್ತೆ,, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

JOBNET
ಮೊಬೈಲ್‌ನಲ್ಲಿ ಕೆಲಸ
ಮನೆಯಲ್ಲೇ ಕುಳಿತು ಮೊಬೈಲ್ ಮೂಲಕ ಫಾರಂ ಫಿಲ್ಲಿಂಗ್ ಮಾಡಿ ಪ್ರತಿ ತಿಂಗಳಿಗೆ 10,000 ರಿಂದ 20,000 ಸಂಪಾದಿಸಿ.
9731891409

WANTED
Security Field Officer (Male)
(Min 2-3yrs Exp. in Security Agency)
Contact
7760135606, 6366366388
Call between 10AM to 6PM
Mail your C.V to:
acpltd123@gmail.com

ಬೇಕಾಗಿದ್ದಾರೆ
ಹೆಬ್ಬಾಳನಲ್ಲಿರುವ ಹೆಸರಾಂತ ಸಿ.ಬಿ.ಎಸ್.ಇ ಶಾಲೆಗೆ ಆಯಾಗಳು/ಹೌಸ್‌ಕೀಪಿಂಗ್ (ಮಹಿಳೆಯರು ಮಾತ್ರ) ಮತ್ತು ಶಾಲಾ ವಾಹನ ಡ್ರೈವರ್–ಹೆವಿ ಲೈಸೆನ್ಸ್ ಜೊತೆಗೆ ಅನುಭವವಿರಬೇಕು
0821-2402929
94811 23959

ಮ್ಯಾನೇಜರ್ ನೇಮಕ
ಮೈಸೂರಿನಲ್ಲಿ ದಿನಸಿ ಅಂಗಡಿಯನ್ನು ನೋಡಿಕೊಳ್ಳಲು ಅನುಭವಿ, ಉತ್ಸಾಹಿ ಮತ್ತು ಶ್ರಮಶೀಲ ಮ್ಯಾನೇಜರ್ ಅಗತ್ಯವಿದೆ.
9739816440

RS CONSTRUCTION
Engineers & Contractors
ನಿಮ್ಮ ಕನಸಿನ ಮನೆಯನ್ನು ಉತ್ಕೃಷ್ಟ ಗುಣಮಟ್ಟದಲ್ಲಿ ಅತ್ಯಂತ ಕಡಿಮೆ ಬೆಲೆಯಲ್ಲಿ ನಾವು ನಿರ್ಮಿಸಿ ಕೊಡುತ್ತೇವೆ.
ದರ 1,80,000/– ಪ್ರತಿ ಚದರ
ಉಚಿತ ಪ್ಲಾನ್ ಕೂಡ ಮಾಡಿಕೊಡಲಾಗುತ್ತದೆ, ಇಂದೇ ಸಂಪರ್ಕಿಸಿ:
9538575009
7019151884

ತಕ್ಷಣ ಬೇಕಾಗಿದ್ದಾರೆ
ಆಫೀಸ್ ಕೆಲಸ ಮಾಡಲು ಯುವತಿಯರು ಬೇಕಾಗಿದ್ದಾರೆ. ಸಮಯ: ಬೆಳಗ್ಗೆ 9.30 ರಿಂದ ಸಂಜೆ 6ರವರೆಗೆ, ಸಂಬಳ: 7000 ರಿಂದ 12000 ವಯಸ್ಸಿನ ಮಿತಿ ಇಲ್ಲ, ಕನ್ನಡ ಓದಲು, ಬರೆಯಲು ಬರುವವರಿಗೆ ಮೊದಲ ಆದ್ಯತೆ
9008793561

ಬಾಡಿಗೆಗೆ
ಮೈಸೂರು ಸಿಟಿ ವಿದ್ಯಾರಣ್ಯಪುರಂ ನಾಲ್ಕನೇ ಮುಖ್ಯ ರಸ್ತೆಯ 27ನೇ ಕ್ರಾಸಿನ ಕಾರ್ನರ್‌ನಲ್ಲಿ 3 ಅಂಗಡಿಗಳು (10X10 ಅಡಿ) ಮತ್ತು ಗೋಡೌನ್ (10X40 ಅಡಿ) ಲಭ್ಯವಿದೆ.
ಸಂಪರ್ಕಿಸಿ:
9448872684, 9900079871

ವಾಸ್ತು ಪ್ರಕಾರ
ಹೊಸದಾಗಿ ಮನೆ ಮತ್ತು ಆಲ್ಟ್ರೇಷನ್ ಕೆಲಸ/ಕನ್‌ಸ್ಟ್ರಕ್ಷನ್ ಮಾಡಿಕೊಡಲಾಗುತ್ತದೆ. ಒಂದು ಚದರಕ್ಕೆ 160000/-, *ಷರತ್ತು ಅನ್ವಯ,
ಸ್ವಾಮಿ ಎಂ. ಸಿವಿಲ್ ಕಂಟ್ರಾಕ್ಟರ್
9945442361, 9380885787

ಬೇಕಾಗಿದ್ದಾರೆ
ದಿನಸಿ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗರು/ ಕಂಪ್ಯೂಟರ್ ಬಿಲ್ಲಿಂಗ್, ಕ್ಯಾಶಿಯರ್ ಬೇಕಾಗಿದ್ದಾರೆ. ಇಚ್ಛೆಯುಳ್ಳವರು ಸಂಪರ್ಕಿಸಿ
ಬಾಲಕೃಷ್ಣ ಪ್ರಾವಿಷನ್ ಸ್ಟೋರ್ಸ್
ಕರ್ನಾಟಕ ಬ್ಯಾಂಕ್ ಹತ್ತಿರ, ನಜರ್‌ಬಾದ್, ಮೈಸೂರು

MUDA APPROVED
SITES FOR SALE
@ Rs. 1500/- per sq.ft. onwards.
30x40 East face site.
40x60 East face site.
40x50 & 60x60 North East Corner.
Next to Lal Bahadur Shastri Nagar.
Call: 9538583377

ಮೈಸೂರು ಮ್ಯಾರೇಜ್ ಬ್ಯೂರೋ
ಎಲ್ಲಾ ಜಾತಿಯ ಎಲ್ಲಾ ವಯಸ್ಸಿನ ಮತ್ತು ಎಲ್ಲಾ ವಿದ್ಯಾವಂತ ವಧುವರರು, ವಿಧುರರು, ವಿಧವೆಯರು, ವಿಚ್ಛೇದಿತರು ನೇರ ಸಂಪರ್ಕಿಸಿ
ಡಾ.ಗುರೂಜಿ ಮೈಸೂರು
9448229184
7899625268

ಬೇಕಾಗಿದ್ದಾರೆ
ಸಂಭ್ರಮ ಬಾರ್ ಅಂಡ್ ರೆಸ್ಟೋರೆಂಟ್‌ಗೆ
ಕಿಚನ್ ಅಸಿಸ್ಟೆಂಟ್, ಕ್ಲೀನರ್, ವಾಚ್‌ಮ್ಯಾನ್ ಕೆಲಸಕ್ಕೆ ಬೇಕಾಗಿದ್ದಾರೆ
7411164808
9945108109

DTCP SITES FOR SALE
DTCP Sites
Rs. 699 per sq.ft.,
Near Jayapura,
H.D. Kote Road, Mysore.
9353895908, 9620591666

AFFIDAVIT
I, Kushwanth R.N., residing at #189, MIG-1, Group-1, KHB Colony, Hootagalli, Mysuru. I declare that my correct name is Kushwanth R.N. (In my Aadhar Card No. 5037 8699 7430) and other documents it is mentioned correctly as Kushwanth R.N. But at the time of issuing my Class X Grade Sheet cum Certificate Roll No. 4079247 my name was mentioned as Khuswanth R.N. Hence I swear in front of Notary that my correct name is Kushwanth R.N.
Sd/- Kushwanth R.N.

ಬೇಕಾಗಿದ್ದಾರೆ
ಬೆಂಗಳೂರಿನ ಜೆಪಿ ನಗರದಲ್ಲಿ ಮಾಂಸಾಹಾರಿ ಹೋಟೆಲಿಗೆ ಕೆಲಸಕ್ಕೆ ಬೇಕಾಗಿದ್ದಾರೆ.
(ಊಟ–ವಸತಿ ಆಕರ್ಷಕ ಸಂಬಳ)
9880059793

HOUSE & OFFICE SPACE FOR RENT & LEASE
@Saraswathipuram
Kuvempunagar & Sournding
S.S.Property Services
(Opp. Kuvempu school)
S.S.Puram
93421-25252

ಬೇಕಾಗಿದ್ದಾರೆ
ಮೈಸೂರಿನ ವೆಜ್ ಹೋಟೆಲ್‌ಗೆ ವೇಯಿಟರ್ಸ್ ಬೇಕಾಗಿದ್ದಾರೆ
(Wanted Waiters for Veg Restaurant)
8073162978
9900765507

SITE FOR SALE
30X40 S/E Corner
Yesh Farma Phase II
Gaddige Main Road
Near Jettihundi Contact
9611881632
9480326698

TEACHER REQUIRED
INDIRA CONVENT
(Mandya Guttalu Road)
Qualification : MSc, BSc, BCA, MCA, BE, BEd in Kannada, English, Maths, Scince and Physical Education
Interview Date 27-05-2023
8747011791
8546938423

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಸೂಪರ್ ವೈಸರ್ ಮತ್ತು ಗಾರ್ಡ್‌ಗಳು ಹೌಸ್ ಕೀಪಿಂಗ್ ಹುಡುಗರು/ಮಹಿಳೆಯರು ಫ್ಯಾಕ್ಟರಿ ಹೆಲ್ಪರ್‌ಗಳು ಮತ್ತು Front Office Accountsಗಾಗಿ ಮೈಸೂರಿನ ಸುತ್ತಮುತ್ತ ಇಂಡಸ್ಟ್ರಿಯಲ್ ಏರಿಯಾದಲ್ಲಿ
9035367083
8123769346

WANTED IMMEDIATELY
AIRTEL EXECUTIVE
(Prepaid)
airtel
Male : 10 No.
Female : 05 No.
8861912946
9611450289
Place: Hootagalli, Bogadi & Yelwala

30x40 ಅಳತೆಯ A ಖಾತೆಯುಳ್ಳ ಸೈಟು ಮಾರಾಟಕ್ಕಿದೆ. 11 ಲಕ್ಷದ 50 ಸಾವಿರಗಳು. ನಿರ್ಮಾಣ್ ಲೇಔಟ್ ತಳೂರು ಸರ್ಕಲ್ ಹತ್ತಿರ ಮೈಸೂರು
9742198093

ಬೇಕಾಗಿದ್ದಾರೆ
ಮೈಸೂರಿನ ವಿಜಯನಗರ 4ನೇ ಹಂತದಲ್ಲಿರುವ ಸರ್ವಿಸ್ ಅಪಾರ್ಟ್‌ಮೆಂಟ್‌ನಲ್ಲಿ ರೂಮ್ ಬಾಯ್/ ಹೌಸ್ ಕೀಪಿಂಗ್ ಕೆಲಸ ಮಾಡಲು ಹುಡುಗರು ಬೇಕಾಗಿದ್ದಾರೆ
7259301819

SITE FOR SALE
30X40 West face
30x60 Corner
40x60 West Face
Opp. University Layout
Near Ring Road
40x60 above East
Near Varuna & Varkud
9900372792

TEACHER REQUIRED
S.B.P School (BELAGOLA)
Qualification :
MSc, BSc, BCA, MCA,BE
BEd in Kannada, English, Maths, Scince and Physical Education
Interview Date 27-05-2023
8747011791
8546938423

WANTED
English and Kannada Computer Typist for Advocate's Office
Salary: 12000/-
Timings: 9.30 am to 5.30pm
Sunday: 10.30am to 3.00pm
7349337469
9448525072

ಇಂದೇ ಸಂಪರ್ಕಿಸಿ
ಬೆಂಗಳೂರು ಹಾಗೂ ಮೈಸೂರು ಜಿಲ್ಲೆಗಳಲ್ಲಿ ಹೊಸದಾಗಿ ತೆರೆದಿರುವ ಕಂಪನಿಯೊಂದಕ್ಕೆ 156 ವಿವಿಧ ಪೋಸ್ಟ್‌ಗಳಿಗೆ SSLC, PUC, ITI, Degree ಆಗಿರುವ ಉತ್ಸಾಹಿ ಯುವಕ/ಯುವತಿಯರು ಬೇಕಾಗಿದ್ದಾರೆ. ಉಚಿತ ವಸತಿಯೂಟದೊಂದಿಗೆ 14,000–30,000/- ESI+PF+OT
6364103418, 6366141586

100% Job
ಮೈಸೂರಿನ ಪ್ರತಿಷ್ಠಿತ ಕಂಪನಿಗಳಿಗೆ ಶೋರೂಂಗಳಿಗೆ ಮತ್ತು ಆಫೀಸ್‌ಗಳಿಗೆ ಕೆಲಸ ಮಾಡಲು ಯುವಕ/ಯುವತಿಯರು ಬೇಕಾಗಿದ್ದಾರೆ Any Qualification, (7th, 10th, PUC, ITI, Any Degree Pass /Fail) ಆದವರಿಗೆ ಅರ್ಹತೆಗೆ ತಕ್ಕಂತೆ ಕೆಲಸ ಸಂಬಳ 14,500 ರಿಂದ 39,000/- ESI+PF+OT ಸೇರಿ ಷರತ್ತು ಅನ್ವಯ
9036548905, 9035143190

ಹೋಂ ನರ್ಸಿಂಗ್ ಕೆಲಸ
ವಯಸ್ಸಾದವರನ್ನು, ರೋಗಿಗಳನ್ನು ನೋಡಿಕೊಳ್ಳಲು ಮಹಿಳೆಯರು, ಯುವತಿಯರು, ವಿಧವೆ, ವಿಚ್ಛೇದಿತೆಯರು ತಕ್ಷಣವೇ ಸಂಪರ್ಕಿಸಿ ಊಟ ವಸತಿಯೊಂದಿಗೆ ಆಕರ್ಷಕ ಸಂಬಳ ಇರುತ್ತದೆ ಮೊದಲು ಬಂದವರಿಗೆ ಆದ್ಯತೆ
(ಸರ್ಕಾರಿ ನೋಂದಾಯಿತ ಸಂಸ್ಥೆ)
9035113222

ವಾರಾಂತ್ಯದ ಪ್ರವಾಸ
ದಿ.27ನೇ ಮತ್ತು 28ನೇ ಮೇ ತಿಂಗಳು2023 ಪ್ಯಾರಡೈಸ್ ಬೀಚ್ ಟ್ರೆಕ್ಕಿಂಗ್ ನಿರ್ವಾಣ ಬೀಚ್ ಪಕ್ಕದಲ್ಲಿ ರೆಸಾರ್ಟ್‌ನಲ್ಲಿ ಸ್ಟೇ ಯಾಣ ಗುಹೆಗಳು ಇಡಗುಂಜಿ ಗಣಪತಿ ಮುರುಡೇಶ್ವರ ಮಿರ್ಜಾನ್ ಕೋಟೆ • ಟೆಂಟ್‌ನಲ್ಲಿ ಸ್ಟೇ • ಊಟದ ತಿಂಡಿ ಕಾಫೀ ಟೀ ಎಲ್ಲ ಸೇರಿರುತ್ತದೆ. ಎಲ್ಲಾ ಸೇರಿ ಒಬ್ಬರಿಗೆ 4000/– ರೂಪಾಯಿಗಳು ಕೂಡಲೇ ಕರೆ ಮಾಡಿ
7022271023

FOR SALE
20x30,30x40,40x60 Sites in H D Kote Road
Near Defence Apartment
2) 30x40 40x60 and 50x80 site
Residential,Commercial Properties
Vijay Nagar, Srirampura, Dattagalli
9538690359
9035990359

ಹೆಲ್ತ್ ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲೊಮೋ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗುತ್ತದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ ANM/GNM ಆದವರಿಗೆ ಕೆಲಸವಿದೆ.
ಸೆಂಟ್ ಮೇರಿಸ್ ಆಸ್ಪತ್ರೆ ಸಿಲ್ಕ್ ಫ್ಯಾಕ್ಟರಿ ಸರ್ಕಲ್ NIE ಕಾಲೇಜ್ ಪಕ್ಕ ಮೈಸೂರು
9916908454

ಬೇಕಾಗಿದ್ದಾರೆ
ರೋಟರಿ ವೆಸ್ಟ್ ಪಾಲ್ ಹ್ಯಾರೀಸ್ ವೃತ್ತಿ ಶಿಕ್ಷಣ ತರಬೇತಿ ಕೇಂದ್ರ, ದಟ್ಟಗಳ್ಳಿ.
ಕಂಪ್ಯೂಟರ್ ಶಿಕ್ಷಕ ಮತ್ತು ಬ್ಯೂಟಿಶಿಯನ್ ಶಿಕ್ಷಕಿ ಸಂದರ್ಶನಕ್ಕೆ ಹಾಜರಾಗಿ ದಿನಾಂಕ 26–05–2023 ಬೆಳಗ್ಗೆ 11 ಗಂಟೆಗೆ. ಹೊಲಿಗೆ ತರಬೇತಿ ಶಿಕ್ಷಣ ದಿನಾಂಕ: 01–06–2023 ರಿಂದ ಪ್ರಾರಂಭವಾಗುತ್ತದೆ. ನೋಂದಾಯಿಸಿಕೊಳ್ಳಿ
9880707290

ಬೇಕಾಗಿದ್ದಾರೆ
ಕಂಪ್ಯೂಟರ್ ಆಫೀಸ್‌ನಲ್ಲಿ ಫ್ರಂಟ್ ಆಫೀಸ್ ಮತ್ತು ಅಕೌಂಟ್ಸ್ ನಿರ್ವಹಣೆಗಾಗಿ, ಬಿ.ಕಾಂ, ಮಾಡಿರುವ 25 ವರ್ಷದೊಳಗಿನ ಮಹಿಳಾ ಅಭ್ಯರ್ಥಿಗಳು ಬೇಕಾಗಿದ್ದಾರೆ. ಕಂಪ್ಯೂಟರ್ ಮತ್ತು ಅಕೌಂಟ್ಸ್‌ನಲ್ಲಿ ಅನುಭವವುಳ್ಳವರಿಗೆ ಹೆಚ್ಚಿನ ಆದ್ಯತೆ.
8073393505

ಶಿಕ್ಷಕ/ಶಿಕ್ಷಕಿಯರು ಬೇಕಾಗಿದ್ದಾರೆ
ಮೈಸೂರು ಗ್ರಾಮಾಂತರ
English - 02
Spoken English -02
Maths - 02
Hindi - 01
8147472526
6360942194

HOUSE FOR RENT
2 BHK house Ground Floor at Vijayanagar 1st Stage available for Rent
9108258245
(Brokers Excuse)

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 6 ರಲ್ಲಿ

ಬೊಲೆರೋ ಉರುಳಿ ಓರ್ವ ಸಾವು, 12 ಮಂದಿಗೆ ಗಾಯ



ನಾಗಮಂಗಲ, ಮೇ 24– ಗ್ರಾಮ ದೇವತೆ ಹಬ್ಬಕ್ಕಾಗಿ ಒಂದೇ ಕುಟುಂಬದ 12 ಮಂದಿ ತೆರಳುತ್ತಿದ್ದ ಬೊಲೆರೋ ವಾಹನ ಪಲ್ಟಿಯಾದ ಪರಿಣಾಮ ಓರ್ವ ಸಾವನ್ನಪ್ಪಿ, 12 ಮಂದಿ ಗಂಭೀರ ವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಪಿ.ನೇರಲಕೆರೆ ಗ್ರಾಮದಲ್ಲಿ ಬುಧವಾರ ಸಂಜೆ ಸಂಭವಿಸಿದೆ.

ಘಟನೆಯಲ್ಲಿ ಪಾಲ ಅಗ್ರಹಾರ ಗ್ರಾಮದ ಶಾಂತಕುಮಾರ್ (40) ಸಾವನ್ನಪ್ಪಿದ್ದು, ಉಳಿದ 12 ಮಂದಿ ಗಂಭೀರ ವಾಗಿ ಗಾಯಗೊಂಡಿದ್ದು, ಅವರನ್ನು ಬೆಳ್ಳೂರಿನ ಬಿಜಿಎಸ್ ಆಸ್ಪತ್ರೆಗೆ ದಾಖ ಲಿಸಲಾಗಿದೆ. ಬುಧ ವಾರ ಸಂಜೆ ನಾಲ್ಕು ಗಂಟೆ ಸಮಯದಲ್ಲಿ ಬೊಲೆರೋ ವಾಹನದಲ್ಲಿ 13 ಮಂದಿ ಹಬ್ಬಕ್ಕೆಂದು ಪಾಲ ಅಗ್ರಹಾರ ಗ್ರಾಮದಿಂದ ಪಿ.ನೇರಲಕೆರೆ ಗ್ರಾಮಕ್ಕೆ ತೆರಳುತ್ತಿದ್ದಾಗ ನೇರಲಕೆರೆ ಬಳಿ ಅಪಘಾತ ಸಂಭವಿಸಿದೆ. ಘಟನೆ ಸಂಬಂಧ ನಾಗಮಂಗಲ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಬಳಿಕ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಟ್ರಾಕ್ಟರ್ ಪಲ್ಟಿ; ಚಾಲಕ ಸಾವು

ಪಾಂಡವಪುರ, ಮೇ 24– ಟ್ರ್ಯಾಕ್ಟರ್ ಪಲ್ಟಿಯಾಗಿ ವ್ಯಕ್ತಿಯೋರ್ವ ಮೃತ ಪಟ್ಟಿರುವ ಘಟನೆ ತಾಲೂಕಿನ ಜಯಂತಿನಗರದ ಶ್ರೀಶಂಭುಲಿಂಗೇಶ್ವರ ಶಾಲೆಯ ಬಳಿಯ ವಿಸಿ ನಾಲೆ ಏರಿಯ ಮೇಲೆ ಬುಧವಾರ ಬೆಳಿಗ್ಗೆ ನಡೆದಿದೆ.



ಹಾರೋಹಳ್ಳಿ ಗ್ರಾಮದ ಎಂ.ಶಿವಣ್ಣ (33) ಬುಧವಾರ ಬೆಳಗ್ಗೆ ಟ್ರ್ಯಾಕ್ಟರ್‌ನಲ್ಲಿ ವಿಸಿ ನಾಲೆಯ ಏರಿಯಲ್ಲಿ ಹೋಗುತ್ತಿದ್ದ ಸಂದರ್ಭದಲ್ಲಿ ಆಯತಪ್ಪಿ ಟ್ರ್ಯಾಕ್ಟರ್ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಈ ವೇಳೆ ಟ್ರ್ಯಾಕ್ಟರ್ ಕೆಳಗೆ ಸಿಲುಕಿ ಶಿವಣ್ಣ ಮೃತಪಟ್ಟಿದ್ದಾನೆ. ಸಬ್‌ಇನ್ಸ್‌ಪೆಕ್ಟರ್ ಮಂಜುನಾಥ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಮೈಷುಗರ್‌ಗೆ ತುರ್ತಾಗಿ 10 ಕೋಟಿ ಬಿಡುಗಡೆಗೆ ಶಾಸಕದ್ವಯರ ಮನವಿ





ದಿನೇಶ್ ಗೂಳಿಗೌಡ



ಗಣಿಗ ರವಿಕುಮಾರ್

ಮಂಡ್ಯ, ಮೇ 24– ಮೈಸೂರು ಸಕ್ಕರೆ ಕಾರ್ಖಾನೆಗೆ 2023–24ನೇ ಸಾಲಿನಲ್ಲಿ ಕಬ್ಬು ನುರಿಸಲು ಸರ್ಕಾರದಿಂದ ತುರ್ತಾಗಿ 10 ಕೋಟಿ ರೂ. ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ವಿಧಾನಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ ಹಾಗೂ ಮಂಡ್ಯ ಶಾಸಕ ರವಿಕುಮಾರ್ ಗಣಿಗ ಮನವಿ ಮಾಡಿದ್ದಾರೆ.

ಕಳೆದ ವರ್ಷ ಆಯವ್ಯಯದಲ್ಲಿ ಕಾರ್ಖಾನೆ ಪುನಶ್ಚೇತನಕ್ಕೆ ರಾಜ್ಯ ಸರ್ಕಾರ 50 ಕೋಟಿ ರೂ. ಘೋಷಣೆ ಮಾಡಿತ್ತು ಆದರೆ, ಈವರೆಗೆ ಕೇವಲ 32 ಕೋಟಿ ರೂ. ಮಾತ್ರ ಬಿಡುಗಡೆ ಮಾಡಿದೆ. ಈ ಹಿನ್ನೆಲೆಯಲ್ಲಿ ಬಾಕಿ ಹಣವನ್ನು ಬಿಡುಗಡೆ ಮಾಡಬೇಕಿದೆ. ಅದರಲ್ಲಿ ಈ ಬಾರಿ ತುರ್ತಾಗಿ 10 ಕೋಟಿ ರೂ. ಬಿಡುಗಡೆ ಮಾಡಿಸುವಂತೆ ಆರ್ಥಿಕ ಇಲಾಖೆಗೆ ಸೂಚನೆ ನೀಡಬೇಕು ಎಂದು ಅವರು ಮನವಿ ಮಾಡಿದ್ದಾರೆ. ಕಾರ್ಖಾನೆಯ ವ್ಯಾಪ್ತಿಯಲ್ಲಿ ಈ ಹಂಗಾಮಿನಲ್ಲಿ 10,002 ಹೆಕ್ಟೇರ್ ಪ್ರದೇಶದಲ್ಲಿ ರೈತರು ಕಬ್ಬು ಬೆಳೆದಿದ್ದು, ಅದನ್ನು ಪೂರೈಕೆ ಮಾಡುವ ಕುರಿತು ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ. 5745 ರೈತರು ಕಾರ್ಖಾನೆಗೆ ಕಬ್ಬು ನುರಿಸಲು ನೀಡುವುದಾಗಿ ಈಗಾಗಲೇ ನೋಂದಣಿ ಮಾಡಿಕೊಂಡಿದ್ದಾರೆ. ರೈತರ ಹಿತ ದೃಷ್ಟಿಯಿಂದ ಹಾಗೂ ಕಾರ್ಖಾನೆಯ ಭವಿಷ್ಯದ ದೃಷ್ಟಿಯಿಂದ ಸಕಾಲದಲ್ಲಿ ಕಬ್ಬು ನುರಿಸಲು ಪ್ರಾರಂಭಿಸಬೇಕಿದೆ ಎಂದು ಹೇಳಿದ್ದಾರೆ.

ಕಬ್ಬು ನುರಿಸುವಿಕೆಯ ಸಿದ್ಧತೆಯು ಜೂನ್‌ನಿಂದ ಆರಂಭವಾಗಬೇಕಿದೆ. ಆದರೆ, ಕಾರ್ಖಾನೆಯಲ್ಲಿ ತುರ್ತು ನಿರ್ವಹಣಾ ಕೆಲಸ, ಕಟಾವು ಗ್ಯಾಂಗ್‌ಗಳಿಗೆ ಹಣ ಪಾವತಿ, ಸಿಬ್ಬಂದಿ ವೇತನ ಎಲ್ಲಾ ಸೇರಿ 18.54 ಕೋಟಿ ರೂ. ಅಗತ್ಯವಿದೆ. ಹಾಗಾಗಿ ತುರ್ತಾಗಿ 10 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡುವಂತೆ ಹಣಕಾಸು ಇಲಾಖೆಗೆ ಸೂಚನೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಗ್ರಾಪಂ ಕಾರ್ಯದರ್ಶಿ ಲೋಕಾಯುಕ್ತ ಬಲೆಗೆ


ಮಂಡ್ಯ, ಮೇ 24– ನಿವೇಶನದ ಖಾತೆ ಮಾಡಿಸಿಕೊಡುವುದಕ್ಕೆ ಲಂಚ ಸ್ವೀಕರಿಸುತ್ತಿದ್ದ ಗ್ರಾಪಂ ಕಾರ್ಯದರ್ಶಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಮಂಡ್ಯದಲ್ಲಿ ನಡೆದಿದೆ.

ತಾಲೂಕಿನ ಬೇಲೂರು ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್–1) ದಯಾನಂದ (54) ಎಂಬಾತನೇ ಲೋಕಾಯುಕ್ತ ಬಲೆಗೆ ಬಿದ್ದವನಾಗಿದ್ದು, ಮಂಡ್ಯದ ಶ್ರೀರಾಮ ಬಡಾವಣೆಯ ಮಂಜುನಾಥ್ ಎಂಬುವವರು 30x40 ಅಳತೆಯ ನಿವೇಶನ ಖರೀದಿಸಿದ್ದರು. ಇದಕ್ಕೆ ಸಂಬಂಧಿಸಿದಂತೆ ತನ್ನ ಪತ್ನಿ ಹಾಗೂ ಅತ್ತೆ ಹೆಸರಿಗೆ ಜಂಟಿ ಖಾತೆ ಮಾಡಿಸಿಕೊಡುವಂತೆ ಗ್ರಾಪಂಗೆ ಮನವಿ ಸಲ್ಲಿಸಿದ್ದರು. ಖಾತೆ ಬದಲಾವಣೆಗೆ ಆರಂಭದಲ್ಲಿ 40 ಸಾವಿರ ರೂ. ಬೇಡಿಗೆ ಇಟ್ಟಿದ್ದ ದಯಾನಂದ, ನಂತರ 35 ಸಾವಿರಕ್ಕೆ ಒಪ್ಪಿಕೊಂಡಿದ್ದ ಎನ್ನಲಾಗಿದೆ. ದೂರುದಾರ ಮಂಜುನಾಥ್ ಅವರಿಂದ ಗ್ರಾಪಂ ಕಚೇರಿಯಲ್ಲಿ ದಯಾನಂದ ಐದು ಸಾವಿರ ಲಂಚ ಸ್ವೀಕರಿಸುವ ವೇಳೆ ದಾಳಿ ನಡೆಸಿದ ಲೋಕಾಯುಕ್ತ ಪೊಲೀಸರು ಆತನನ್ನು ಬಂಧಿಸಿದ್ದಾರೆ.

ಲೋಕಾಯುಕ್ತ ಎಸ್ಪಿ ಶ್ರೀನಾಥ್ ಜೋಷಿ, ಡಿವೈಎಸ್ಪಿ ಸುನೀಲ್ ಕುಮಾರ್ ಮಾರ್ಗದರ್ಶನದಲ್ಲಿ ತನಿಖಾಧಿಕಾರಿ ಪ್ರಕಾಶ್ ನೇತೃತ್ವದಲ್ಲಿ ಇನ್ಸ್‌ಪೆಕ್ಟರ್‌ಗಳಾದ ಮೋಹನ್ ರೆಡ್ಡಿ ಬ್ಯಾಟರಾಯಗೌಡ, ಸಿಬ್ಬಂದಿಗಳಾದ ಶಂಕರ್, ಮಹದೇವಯ್ಯ, ಶರತ್, ಯೋಗೇಶ್, ನಂದೀಶ್, ಚಾಲಕ ನವೀನ್, ಶಶಿಕುಮಾರ್ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ರಕ್ತ ಸಂಗ್ರಹಣೆ ಮೊಬೈಲ್ ವಾಹನಕ್ಕೆ ಚಾಲನೆ

ಮಂಡ್ಯ, ಮೇ 24– ಐಸಿಐಸಿಐ ಬ್ಯಾಂಕ್ ಸಿಎಸ್‌ಆರ್ ಯೋಜನೆಯಡಿ 37 ಲಕ್ಷ ರೂ. ವೆಚ್ಚದ ರಕ್ತ ಸಂಗ್ರಹಣೆ ಮೊಬೈಲ್ ವಾಹನವನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮಿಮ್ಸ್ ಕಾಲೇಜಿಗೆ ಹಸ್ತಾಂತರಿಸಿ ಚಾಲನೆ ನೀಡಲಾಯಿತು.



ವಿಶೇಷ ವಾಹನವನ್ನು ವೀಕ್ಷಿಸಿ ವಾಹನಕ್ಕೆ ಚಾಲನೆ ಕೊಟ್ಟ ನಂತರ ಮಾತನಾಡಿದ ಜಿಲ್ಲಾಧಿಕಾರಿ ಡಾ.ಹೆಚ್.ಎನ್.ಗೋಪಾಲಕೃಷ್ಣ, ಜಿಲ್ಲಾಡಳಿತಕ್ಕೆ ಐಸಿಐಸಿಐ ಬ್ಯಾಂಕ್ ಅವರು ವಿಶೇಷ ವಾಹನವನ್ನು ನೀಡಿದ್ದಾರೆ. ವಾಹನವು ಅತ್ಯಾಧುನಿಕ ತಂತ್ರಜ್ಞಾನದ ವ್ಯವಸ್ಥೆ ಹೊಂದಿದ್ದು, ರಕ್ತ ಸಂಗ್ರಹಣೆಗೆ ಬೇಕಾದ ಎಲ್ಲಾ ರೀತಿಯ ವ್ಯವಸ್ಥೆ ಮಾಡಲಾಗಿದೆ. ರೆಫ್ರಿಜಿರೇಟರ್, ರಕ್ತದಾನಿಗಳು ವಿಶ್ರಾಂತಿ ಪಡೆಯಲು ಆಸನದ ವ್ಯವಸ್ಥೆ ಮಾಡಲಾಗಿದ್ದು, ರಕ್ತದಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಕ್ತದಾನ ಮಾಡುವಂತೆ ಮನವಿ ಮಾಡಿದರು.

ರಕ್ತದಾನ ಶಿಬಿರವನ್ನು ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಮಾತ್ರ ಆಯೋಜಿಸಲಾಗುತ್ತಿತ್ತು. ಮೊಬೈಲ್ ರಕ್ತ ಸಂಗ್ರಹಣಾ ವಾಹನವನ್ನು ಉಪಯೋಗಿಸಿಕೊಂಡು ಮುಂದಿನ ದಿನಗಳಲ್ಲಿ ರಕ್ತದಾನ ಶಿಬಿರವನ್ನು ಗ್ರಾಮ ಮಟ್ಟದಲ್ಲೂ ಆಯೋಜಿಸಬಹುದು ಎಂದರು. ಐಸಿಐಸಿಐ ಬ್ಯಾಂಕ್‌ನ ಅಧಿಕಾರಿ ವೆಂಕಟೇಶ್ ಮಾತನಾಡಿ, ಸಿಎಸ್‌ಆರ್ ಯೋಜನೆಯಡಿ ಮೊಬೈಲ್ ರಕ್ತ ಸಂಗ್ರಹಣೆ ವಾಹನವನ್ನು ಜಿಲ್ಲಾ ಮೆಡಿಕಲ್ ಕಾಲೇಜಿಗೆ ನೀಡಲಾಗಿದೆ. ಇದರಿಂದ ಮಂಡ್ಯ ಜಿಲ್ಲೆಗೆ ಅನುಕೂಲವಾಗುತ್ತದೆ. ರಕ್ತದ ಅವಶ್ಯಕತೆ ಇದ್ದವರಿಗೆ ಸ್ಪಂದಿಸಲು ಸಹಾಯಕವಾಗುತ್ತದೆ ಎಂದು ಹೇಳಿದರು.

ಗ್ರಾಮೀಣ ಭಾಗದಲ್ಲಿ ರಕ್ತದಾನದ ಶಿಬಿರಗಳನ್ನು ಮಾಡಿದಾಗ ರಕ್ತವನ್ನು ಸಂಗ್ರಹಿಸಿಟ್ಟುಕೊಂಡು ಬರುವುದು ತುಂಬಾ ಮುಖ್ಯವಾಗುತ್ತದೆ. ಈ ಕೆಲಸಕ್ಕೆ ವಾಹನವು ತುಂಬಾ ಅವಶ್ಯಕವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗಾರಾಜು, ಮಿಮ್ಸ್ ನಿರ್ದೇಶಕ ಡಾ.ಮಹೇಂದ್ರ, ಮೆಡಿಕಲ್ ಸೂಪರಿಂಟೆಂಡ್ ಡಾ.ಶ್ರೀಧರ್, ಐಸಿಐಸಿಐ ಬ್ಯಾಂಕ್ ಮ್ಯಾನೇಜರ್ ಮುರಳೀಧರ್ ಸೇರಿದಂತೆ ಹಲವು ಉಪಸ್ಥಿತರಿದ್ದರು.

ರುಕ್ಮಿಣಿ ನಿಧನ

ಪಾಂಡವಪುರ, ಮೇ 24– ಲೋಕೋಪಯೋಗಿ ಇಲಾಖೆಯಲ್ಲಿ 'ಡಿ'ಗ್ರೂಪ್ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ರುಕ್ಮಿಣಿ(55) ಮಂಗಳವಾರ ಮಧ್ಯರಾತ್ರಿ ನಿಧನ ಹೊಂದಿದ್ದಾರೆ.



ಲೋಕೋಪಯೋಗಿ ಇಲಾಖೆಯ ಪ್ರವಾಸಿ ಮಂದಿರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ರುಕ್ಮಿಣಿ, ಮಂಗಳವಾರ ರಾತ್ರಿಪಾಳಿಯಲ್ಲಿ ಕೆಲಸ ನಿರ್ವಹಣೆ ಮಾಡುತ್ತಿದ್ದರು. ಮಂಗಳವಾರ ಮಧ್ಯರಾತ್ರಿ 2 ಗಂಟೆಯ ಸಮಯದಲ್ಲಿ ಹೃದಯಾಘಾತವಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಅಂತ್ಯಕ್ರಿಯೆ ಅವರ ಸ್ವಗ್ರಾಮ ಮಳವಳ್ಳಿ ತಾಲೂಕಿನ ದಾಸನದೊಡ್ಡಿ ಗ್ರಾಮದಲ್ಲಿ ನೆರವೇರಿಸಲಾಯಿತು. ಮೃತರಿಗೆ ಇಬ್ಬರು ಪುತ್ರರು, ಓರ್ವ ಪುತ್ರಿ ಇದ್ದಾರೆ. ರುಕ್ಮಿಣಿ ಅವರ ನಿಧನಕ್ಕೆ ಅಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.

ಚಂದ್ರು



ಕೆ.ಆರ್.ಪೇಟೆ, ಮೇ 24– ಪಟ್ಟಣದ ಟಿಎಪಿಸಿಎಂಎಸ್ ನಿವೃತ್ತ ನೌಕರರಾದ ಚಂದ್ರು(62) ಅವರು ಇಂದು ನಿಧನ ಹೊಂದಿದ್ದಾರೆ. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಅಂತ್ಯಕ್ರಿಯೆಯು ಪಟ್ಟಣದ ಮೃತರ ಜಮೀನಿನಲ್ಲಿ ನಡೆಯಿತು. ಚಂದ್ರು ಅವರ ನಿಧನಕ್ಕೆ ಮಾಜಿ ಸಚಿವ ಡಾ.ನಾರಾಯಣಗೌಡ, ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ಪುರಸಭಾ ಅಧ್ಯಕ್ಷೆ ಮಹಾದೇವಿ, ಮಾಜಿ ಅಧ್ಯಕ್ಷ ಚಂದ್ರೇಗೌಡ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಶ್ರೀನಿವಾಸ್, ಕಸಬಾ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಪುರುಷೋತ್ತಮ್, ಪುರಸಭಾ ಸದಸ್ಯರಾದ ಕೆ.ಸಿ.ಮಂಜುನಾಥ್, ಕೆ.ಆರ್.ರವೀಂದ್ರಬಾಬು ಇತರರು ಸಂತಾಪ ಸೂಚಿಸಿದ್ದಾರೆ.

ಚೊಟ್ಟನಹಳ್ಳಿಯಲ್ಲಿ ಡೆಂಗ್ಯೂ ಜಾಗೃತಿ



ಶ್ರೀರಂಗಪಟ್ಟಣ, ಮೇ 24– ಡೆಂಗ್ಯೂ ಹಾಗೂ ಚಿಕೂನ್ ಗುನ್ಯ ಜ್ವರಗಳು ಸೋಂಕು ಹೊಂದಿದ ಈಡಿಸ್ ಈಜಿಪ್ಟ್ ಎಂಬ ಸೊಳ್ಳೆಯ ಕಡಿತ ದಿಂದ ಬರುತ್ತವೆ. ನಿಂತ ಸ್ವಚ್ಛ ನೀರಿನಲ್ಲಿ ಹುಟ್ಟುವ ಈ ಸೊಳ್ಳೆ ಸಾಧಾರಣವಾಗಿ ಹಗಲಿನಲ್ಲಿ ಕಚ್ಚುತ್ತವೆ ಇದರಿಂದ ಜಾಗೃತರಾಗಿರಬೇಕೆಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು.

ತಾಲೂಕು ಆರೋಗ್ಯಾಧಿಕಾರಿಗಳ ಕಛೇರಿ ಹಾಗೂ ಕೊಡಿಯಾಲ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಶ್ರೀರಂಗಪಟ್ಟಣ ತಾಲೂಕಿನ ಚೊಟ್ಟನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಸಾರ್ವಜನಿಕರಿಗಾಗಿ ಏರ್ಪಡಿಸಿದ್ದ "ಡೆಂಗ್ಯೂ ಜಾಗೃತಿ"ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಮುಂಬರುವ ಮಳೆಗಾಲ ಹಾಗೂ ನಂತರದ ದಿನಗಳಲ್ಲಿ ಡೆಂಗ್ಯೂ ನಿಯಂತ್ರಣ ಕ್ರಮಗಳನ್ನು ಸಮುದಾಯ ಮಟ್ಟದಲ್ಲಿ ಪರಿಣಾಮಕಾರಿ ಅನುಷ್ಠಾನಗೊಳಿಸುವುದರ ಮೂಲಕ ಡೆಂಗ್ಯೂ ಪ್ರಕರಣಗಳನ್ನು ನಿಯಂತ್ರಿಸುವ ಸಲುವಾಗಿ "ಎಲ್ಲರ ಸಹಭಾಗಿತ್ವದೊಂದಿಗೆ ಡೆಂಗ್ಯೂ ಸೋಲಿಸೋಣ" ಎಂಬ ಈ ವರ್ಷದ ಧ್ಯೇಯವಾಕ್ಯದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ.

ನಿರ್ದಿಷ್ಟ ಚಿಕಿತ್ಸೆ ಇಲ್ಲದ ಈ ಖಾಯಿಲೆಗೆ ಮುಂಜಾಗ್ರತೆಯೆ ಪರಮೌಷಧಿಯಾಗಿದ್ದು, ಹಠಾತ್ತನೆ ಬರುವ ಅಧಿಕ ಜ್ವರ, ತೀವ್ರ ತಲೆ ನೋವು, ಕಣ್ಣುಗಳ ಹಿಂಬಾಗದಲ್ಲಿ ತೀವ್ರತರ ನೋವು, ವಾಕರಿಕೆ ಮತ್ತು ವಾಂತಿ ರೋಗದ ಲಕ್ಷಣಗಳಾಗಿವೆ. ರೋಗದ ಲಕ್ಷಣ ಕಂಡಾಗ ಹತ್ತಿರದ ಆರೋಗ್ಯ ಕೇಂದ್ರಗಳಲ್ಲಿ ಪರೀಕ್ಷಿಸಿಕೊಳ್ಳಿ. ಜೊತೆಗೆ ಸೊಳ್ಳೆಗಳ ಉತ್ಪತ್ತಿ ತಾಣಗಳಾದ ಒಡೆದ ಟೈರ್‌ಗಳು, ತೆಂಗಿನ ಚಿಪ್ಪುಗಳು, ಸಿಮೆಂಟ್ ತೊಟ್ಟಿಗಳು, ತೆರೆದ ಪ್ಲಾಸ್ಟಿಕ್ ವಸ್ತುಗಳು, ನೀರಿನ ಸಂಗ್ರಹಣಾ ತೊಟ್ಟಿ, ಹೂವಿನ ಕುಂಡಗಳು, ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಂದು ಬಾರಿ ಲಕ್ಷ್ಯ ವಹಿಸಿ ಎಚ್ಚರಿಕೆ ವಹಿಸಬೇಕೆಂದು ಲಾರ್ವಾಗಳ ಪ್ರಾತ್ಯಕ್ಷಿಕೆಯೊಂದಿಗೆ ಜಾಗೃತಿ ಮೂಡಿಸಿದರು.

ನಂತರ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಪುಷ್ಪಾ ಮಾತನಾಡಿ, ಸೊಳ್ಳೆಗಳು ಕಚ್ಚದಂತೆ ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸಿ. ಒಟ್ಟಾರೆ ನೀರು ನಿಲ್ಲದಂತೆ ನೋಡಿಕೊಳ್ಳಿ, ಸೊಳ್ಳೆ ಉತ್ಪತ್ತಿ ತಡೆಗಟ್ಟಿ ಎಂದು ಸಲಹೆ ನೀಡಿದರು.

ಸೋಲಿನಿಂದ ಧೃತಿಗೆಡಲ್ಲ: ಡಿ.ಸಿ. ತಮ್ಮಣ್ಣ

ಮದ್ದೂರು, ಮೇ 24– ಚುನಾವಣೆಯಲ್ಲಿ ಸೋಲು ಗೆಲುವು ಸಹಜ. ರಾಜಕೀಯದಲ್ಲಿ ನಾನು ಎರಡನ್ನು ಸಮಚಿತ್ತದಿಂದ ಸ್ವೀಕರಿಸಿದ್ದೇನೆ. ಗೆದ್ದಾಗ ಹಿಗ್ಗಿಲ್ಲ, ಸೋತಾಗ ಕುಗ್ಗಿಲ್ಲ. ಸೋಲಿನಿಂದ ನಾನು ಎಂದಿಗೂ ಧೃತಿಗೆಡುವುದಿಲ್ಲ ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ತಿಳಿಸಿದರು.



ನಾನು ಶಾಸಕನಾಗಿದ್ದ ಅವಧಿಯಲ್ಲಿ ನೀರಾವರಿ, ಶಿಕ್ಷಣ, ಆರೋಗ್ಯ ಮತ್ತು ಮೂಲ ಸೌಕರ್ಯಗಳಿಗೆ ಹೆಚ್ಚಿನ ಒತ್ತು ನೀಡಿದ್ದೇನೆ. ಈ ಬಗ್ಗೆ ನನಗೆ ತೃಪ್ತಿ ಇದೆ ಎಂದು ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಬುಧವಾರ ಸುದ್ದಿಗಾರರಿಗೆ ತಿಳಿಸಿದರು.

ನನ್ನ 10 ವರ್ಷಗಳ ಅಧಿಕಾರದ ಅವಧಿಯಲ್ಲಿ 4 ಸಾವಿರ ಕೋಟಿಗೂ ಹೆಚ್ಚು ಅನುದಾನ ತಂದು ಕ್ಷೇತ್ರದ ಸರ್ವಾಂಗೀಣ ಬೆಳವಣಿಗೆಗೆ ಶ್ರಮಿಸಿದ್ದೇನೆ. ವಿರೋಧ ಪಕ್ಷದ ಶಾಸಕನಾಗಿ ಇಷ್ಟೊಂದು ಅನುದಾನ ತಂದು ಅಭಿವೃದ್ಧಿ ಮಾಡಿರುವುದು ಸಂತೋಷ ತಂದಿದೆ ಎಂದರು. ನನಗೆ ಅಧಿಕಾರವಿಲ್ಲದಿದ್ದರೂ ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ವಾರಕ್ಕೆ 5 ದಿನ ಇದ್ದು ಜನರ ಕಷ್ಟ ಸುಖಗಳಿಗೆ ಭಾಗಿಯಾಗುತ್ತೇನೆ. ಈ ಚುನಾವಣೆಯಲ್ಲಿ ನನಗೆ ಸಹಕಾರ ನೀಡಿದ ಕ್ಷೇತ್ರದ ಮತದಾರರು, ಜೆಡಿಎಸ್ ಕಾರ್ಯಕರ್ತರು ಮತ್ತು ಮುಖಂಡರಿಗೆ ಅಭಿನಂದನೆ ಸಲ್ಲಿಸಲಾಗುವುದು ಎಂದರು.

ನಾನು ಶಾಸಕ, ಸಚಿವನಾಗಿದ್ದಾಗ ರಾಷ್ಟ್ರ ಮತ್ತು ವಿದೇಶ ಪ್ರವಾಸ ಮಾಡುವ ಅವಕಾಶಗಳು ಒದಗಿ ಬಂದವು. ನಾನು ವಾರಗಟ್ಟಲೆ ಕ್ಷೇತ್ರದ ಜನರನ್ನು ಬಿಟ್ಟು ಇರಬೇಕಾಗುತ್ತದೆ ಎಂಬ ಒಂದೇ ಉದ್ದೇಶದಿಂದ ನಾನು ಯಾವುದೇ ಪ್ರವಾಸಕ್ಕೆ ಹೋಗಿರಲಿಲ್ಲ. ನನಗೆ ಕ್ಷೇತ್ರದ ಅಭಿವೃದ್ಧಿಯೇ ಮುಖ್ಯವಾಗಿತ್ತು ಎಂದರು. ಮುಂಬರುವ ಜಿಪಂ ಮತ್ತು ತಾಪಂ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದ ಹೆಚ್ಚಿನ ಅಭ್ಯರ್ಥಿಗಳನ್ನು ಗೆಲ್ಲಿಸುವ ನಿಟ್ಟಿನಲ್ಲಿ ಈಗಿನಿಂದಲೇ ಕಾರ್ಯತಂತ್ರ ರೂಪಿಸಲಾಗುವುದು ಎಂದರು.

ಒಂದನೇ ಪುಟದಿಂದ

ಮೇ 31ರಿಂದ ಶಾಲೆಗಳು ಪುನಾರಂಭ

ವಿಪತ್ತು ನಿರ್ವಹಣೆಗಾಗಿ ಈಗಾಗಲೇ ಶಿಕ್ಷಣ ಇಲಾಖೆಯಿಂದ ತಂಡಗಳನ್ನು ರಚಿಸಲಾಗಿದ್ದು, ಪ್ರತೀ ದಿನ ತಾಲೂಕು ಹಂತದಲ್ಲಿ ಬೀಳುವ ಮಳೆ ಪ್ರಮಾಣ ವರದಿ ಮಾಡುವುದು, ಶಿಥಿಲಾವಸ್ಥೆ ಇರುವ ಶಾಲಾ ಕಟ್ಟಡದ ಬಳಿ ಮಕ್ಕಳು ತೆರಳದಂತೆ ಎಚ್ಚರ ವಹಿಸುವುದು, ನದಿ ಪಾತ್ರದ ಶಾಲೆಗಳಲ್ಲಿ ಮಳೆ ಪ್ರಮಾಣ ಜಾಸ್ತಿಯಾದಾಗ ಆ ಶಾಲೆಗೆ ರಜೆ ನೀಡಲು ಪ್ರಸ್ತಾವನೆ ಸಲ್ಲಿಸಬೇಕು ಎಂದು ಉಪ ನಿರ್ದೇಶಕರು ಸೂಚಿಸಿದ್ದಾರೆ. ಮಳೆ ನೀರು ಚರಂಡಿ, ದೊಡ್ಡ ಮೋರಿಗಳ ಸಮೀಪವಿರುವ ಶಾಲೆಗಳಲ್ಲಿ ಅಗತ್ಯ ಮುಂಜಾಗ್ರತೆ ವಹಿಸಬೇಕು. ಮಳೆ ಪ್ರಮಾಣ ಜಾಸ್ತಿಯಾಗಿ ಶಾಲಾ ಕೊಠಡಿ ಹಾನಿಯಾದರೆ ತಕ್ಷಣ ತಹಶೀಲ್ದಾರ್‌ಗೆ ತಿಳಿಸಿ ಕ್ರಮ ಕೈಗೊಳ್ಳುವುದು. ಪ್ರವಾಹ ಪರಿಸ್ಥಿತಿ ಉಂಟಾದರೆ ಶಾಲೆಯಲ್ಲಿ ಗಂಜಿ ಕೇಂದ್ರ ಸ್ಥಾಪಿಸಲು ಅನುವು ಮಾಡಿಕೊಡಬೇಕು. ತಾಲೂಕು ಹಂತದಲ್ಲಿ ವಿಪತ್ತು ನಿರ್ವಹಣೆ ಅಧಿಕಾರಿಗಳ ವಾಟ್ಸ್ ಆ್ಯಪ್ ಗುಂಪು ರಚಿಸಿ ಮಾಹಿತಿ ಹಂಚಿಕೊಳ್ಳಬೇಕು. ಹವಾಮಾನ, ನೀರಿನ ಹರಿವು, ನದಿ ಸ್ಥಿತಿ ಬಗ್ಗೆ ಎಲ್ಲಾ ಮುಖ್ಯ ಶಿಕ್ಷಕರಿಗೆ ಮಾಹಿತಿ ನೀಡಿ ಕ್ರಮ ವಹಿಸಬೇಕೆಂದು ಅವರು ತಿಳಿಸಿದ್ದಾರೆ.

ಚಾಲ್ತಿಯಲ್ಲಿರುವ ವರುಣ ಮಿತ್ರ ಸಹಾಯವಾಣಿ 9243345433ಗೆ ಮಾಹಿತಿ ನೀಡುವುದು, ಶಾಲೆ ಸುತ್ತಮುತ್ತಲಿನ ಚರಂಡಿ ತೆರೆದಿದ್ದರೆ ಮುಚ್ಚಿಸಬೇಕು. ವಿದ್ಯುತ್ ತಂತಿ ಅಪಾಯದ ಸ್ಥಿತಿಯಲ್ಲಿದ್ದರೆ ಸೆಸ್ಕ್ ಅಧಿಕಾರಿಗಳಿಂದ ಸರಿಪಡಿಸಬೇಕು. ಮಳೆಗಾಲದಲ್ಲಿ ಹರಡುವ ರೋಗಗಳ ಬಗ್ಗೆ ಅರಿವು ಮೂಡಿಸಬೇಕು. ವಿಪತ್ತು ನಿರ್ವಹಣೆ ಅಧಿಕಾರಿಗಳ ಮೊಬೈಲ್ ನಂಬರ್ ಅನ್ನು ಎಲ್ಲಾ ಶಾಲೆಗಳಿಗೆ ಒದಗಿಸಬೇಕು. ಅಪಾಯಕಾರಿ ಮರ, ರೆಂಬೆಗಳನ್ನು ತೆರವುಗೊಳಿಸಲು ಕ್ರಮ ವಹಿಸಬೇಕೆಂದೂ ಉಪ ನಿರ್ದೇಶಕರು ಸೂಚನೆ ನೀಡಿದ್ದಾರೆ.

ಮೈಸೂರಲ್ಲಿ ಎಫ್‌ಐಆರ್ ದಾಖಲು

ಅವರನ್ನು ಹೊಡೆದು ಹಾಕಿ ಎಂದು ಬಹಿರಂಗವಾಗಿ ಸಾರ್ವಜನಿಕರನ್ನು ಪ್ರಚೋದಿಸಿದ್ದಾರೆ ಎಂದು ಎಂ.ಲಕ್ಷ್ಮಣ್ ನೀಡಿರುವ ದೂರಿನಲ್ಲಿ ತಿಳಿಸಿರುವುದಲ್ಲದೆ, ಈ ಸಂಬಂಧ ಫೆ.17ರಂದೇ ಕಾಂಗ್ರೆಸ್ ಮುಖಂಡರು ದೂರು ಸಲ್ಲಿಸಿದ್ದರೂ ದೇವರಾಜ ಠಾಣೆ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ.

ಡಾ.ಅಶ್ವತ್ಥ್ ನಾರಾಯಣ್ ನೀಡಿರುವ ಹೇಳಿಕೆಯೂ ರಾಜ್ಯಾದ್ಯಂತ ಸಾಮಾಜಿಕ ಜಾಲತಾಣದಲ್ಲಿ ಬಾರೀ ಪ್ರಚಾರ ಪಡೆದು ಜವಾಬ್ದಾರಿಯುತ ಸ್ಥಾನದಲ್ಲಿರುವ ಸಿದ್ದರಾಮಯ್ಯ ಅವರಿಗೆ ಕುಂದುಂಟು ಮಾಡಿದೆ. ಅಲ್ಲದೆ, ರಾಜ್ಯದಲ್ಲಿ ಅಶಾಂತಿ ಮೂಡಿ, ಕೋಮು ಸೌಹಾರ್ದತೆ ಹಾಳಾಗುತ್ತಿರುವುದು ಕಂಡು ಬರುತ್ತಿದೆ. ಅಶ್ವತ್ ನಾರಾಯಣ್ ಅವರು ಸಿದ್ದರಾಮಯ್ಯ ಅವರನ್ನು ಕೊಲೆ ಮಾಡಲು ಸುಫಾರಿ ನೀಡಿರುವ ಸಂಶಯವಿದೆ. ಆದ್ದರಿಂದ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿ, ಬಂಧಿಸಿ ವಿಚಾರಣೆಗೊಳಪಡಿಸಬೇಕು ಎಂದು ದೂರಿನಲ್ಲಿ ಕೋರಲಾಗಿದೆ.

ದೂರಿನನ್ವಯ ಭಾರತೀಯ ದಂಡ ಸಂಹಿತೆ 506(ಕೊಲೆ ಬೆದರಿಕೆ), 513(ಗಲಭೆಗೆ ಪ್ರಚೋದನೆ) ಅಡಿ ದೇವರಾಜ ಠಾಣೆ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಕೊಡಗಿಗೆ ಎನ್‌ಡಿಆರ್‌ಎಫ್ ತಂಡ

ಅದರಂತೆಯೇ ಸಿದ್ದತೆಗಳನ್ನು ಕೊಡಗು ಜಿಲ್ಲಾಡಳಿತ ಮಾಡಿಕೊಂಡಿದೆ. ಈಗಾಗಲೇ ಜಿಲ್ಲಾ ವಿಪತ್ತು ನಿರ್ವಹಣಾ ಘಟಕದ ವತಿಯಿಂದ ಚೆಸ್ಕಾಂ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ, ಅರಣ್ಯ, ನೀರಾವರಿ ಇಲಾಖೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಳೆಗಾಲ ಎದುರಿಸಲು ಸಜ್ಜಾಗುವಂತೆ ಸ್ಪಷ್ಟ ಸೂಚನೆ ನೀಡಲಾಗಿದೆ. ಮುಖ್ಯಮಂತ್ರಿಗಳ ಸೂಚನೆಯಂತೆ ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೋಡೆಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಈ ಬಾರಿ ಕಳೆದ ಸಾಲಿಗಿಂತ ಹೆಚ್ಚಾಗಿಯೇ ಶೇ.100ರಷ್ಟು ಸಿದ್ದತೆಗಳು ಪೂರ್ವ ಮಾನ್ಸೂನ್ ಅವಧಿಯಲ್ಲಿಯೇ ಅನುಷ್ಠಾನ ಆಗಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಖಾತೆಯಲ್ಲಿದೆ 57 ಕೋಟಿ ರೂ.: ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಸರಕಾರದ ಒಟ್ಟು 57 ಕೋಟಿ ರೂ. ಅನುದಾನವಿದೆ. ಈಗಾಗಲೇ ಮೀಸಲಿಟ್ಟಿರುವ ಕಾಮಗಾರಿಗಳನ್ನು ಹೊರತುಪಡಿಸಿದರೆ ಪ್ರಾಕೃತಿಕ ವಿಕೋಪ ಎದುರಿಸುವ ಸಲುವಾಗಿಯೇ 20 ಕೋಟಿ ರೂ. ಅನುದಾನ ಲಭ್ಯವಿದೆ. 5 ಕೋಟಿ ರೂ. ಮತ್ತು ಅದಕ್ಕಿಂತ ಕಡಿಮೆ ಅನುದಾನ ಪಿ.ಡಿ. ಖಾತೆಯಲ್ಲಿ ಉಳಿದುಕೊಂಡಿದ್ದಲ್ಲಿ ಜಿಲ್ಲಾಡಳಿತದಿಂದ ಮನವಿ ಸಲ್ಲಿಸಿದ್ದಲ್ಲಿ ಒಂದೇ ದಿನದಲ್ಲಿ ಸರಕಾರ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಈಗಾಗಲೇ ಸುರಿದ ಮಳೆಯಿಂದ ಕೆಲವು ಕಡೆಗಳಲ್ಲಿ ಮನೆಗಳಿಗೆ ಹಾನಿ ಸಂಭವಿಸಿದೆ. ಆ ಘಟನೆಗಳನ್ನು ಗ್ರಾಮ ಪಂಚಾಯಿತಿ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಪರಿಶೀಲಿಸಿದ್ದಾರೆ. ಹಾನಿ ಸಂಭವಿಸಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಂತ್ರಸ್ತರ ಖಾತೆಗಳಿಗೆ ಹಾನಿಗೆ ಅನುಗುಣವಾಗಿ ಪರಿಹಾರ ವಿತರಿಸಲು ಕೂಡ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಆಕಾಶ್ ಮಧ್ವಾಲ್ ಮ್ಯಾಜಿಕ್, ಲಕ್ನೋ ವಿರುದ್ಧ ಮುಂಬೈಗೆ ಜಯ

ಮೇ 26ರಂದು ಗುಜರಾತ್–ಮುಂಬೈ ಫೈನಲ್ ಪಂದ್ಯಕ್ಕಾಗಿ ಕಾದಾಟ

ಚೆನ್ನೈ, ಮೇ 24(ಸಿಎನ್)– ಕ್ಯಾಮರೂನ್ ಗ್ರೀನ್ ಸಮಯೋಚಿತ ಬ್ಯಾಟಿಂಗ್ ಹಾಗೂ ಆಕಾಶ್ ಮಧ್ವಾಲ್ ಬಿಗಿ ದಾಳಿಯ ನೆರವಿನಿಂದ ಮುಂಬೈ ಇಂಡಿಯನ್ಸ್ ತಂಡ ಲಕ್ನೋ ಸೂಪರ್‌ಜೈಂಟ್ಸ್ ವಿರುದ್ಧ 81 ರನ್‌ಗಳ ಜಯ ಸಾಧಿಸಿದೆ. ಇದರೊಂದಿಗೆ ಆ ಮೂಲಕ 5 ಬಾರಿಯ ಚಾಂಪಿಯನ್ ಮುಂಬೈ ಇಂಡಿಯನ್ಸ್ ತಂಡ ಮೇ 26 ರಂದು, ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ಗುಜರಾತ್ ಸೆಣಸಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ಫೈನಲ್‌ನಲ್ಲಿ ಚೆನ್ನೈ ವಿರುದ್ಧ ಹೋರಾಡಲಿದೆ.

ಇಲ್ಲಿನ ಎಂ.ಚಿದಂಬರಂ ಕ್ರೀಡಾಂಗಣದಲ್ಲಿ ಪ್ಲೇಆಫ್‌ನ ಎರಡನೇ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಮುಂಬೈ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 182 ರನ್‌ಗಳ ಸವಾಲಿನ ಮೊತ್ತ ಕಲೆಹಾಕಿತು.

183 ರನ್‌ಗಳ ಸವಾಲಿನ ಮೊತ್ತ ಬೆನ್ನತ್ತಿದ ಲಕ್ನೋ ಆರಂಭದಿಂದಲೇ ಆಘಾತಕ್ಕೆ ಒಳಗಾಯಿತು. ಮಾರ್ಕಸ್ ಸ್ಟೊಯಿನಿಸ್ 27 ಎಸೆತದಲ್ಲಿ 1 ಸಿಕ್ಸ್ 5 ಬೌಂಡರಿ ಒಳಗೊಂಡ 41 ರನ್ ಗಳಿಸಿದರು. ಉಳಿದ ಬ್ಯಾಟ್ಸ್‌ಮನ್‌ಗಳು ಹೆಚ್ಚು ರನ್ ಗಳಿಸದೆ ಪೆವಿಲಿಯನ್ ಪರೇಡ್ ನಡೆಸಿದರು. ಲಕ್ನೋ ತಂಡ 16.3 ಓವರುಗಳಲ್ಲೇ 101 ರನ್‌ಗಳಿಗೆ ಆಲೌಟ್ ಆಯಿತು. ಮುಂಬೈ ಪರ ಆಕ್ರಮಣಕಾರಿ ಬೌಲಿಂಗ್ ಪ್ರದರ್ಶನ ನೀಡಿದ ಆಕಾಶ್ ಮಧ್ವಾಲ್ 5 ವಿಕೆಟ್ ಪಡೆದು ಮಿಂಚಿದರೆ, ಪಿಯುಷ್ ಚಾವ್ಲಾ, ಜೋರ್ಡನ್ ತಲಾ ಒಂದು ವಿಕೆಟ್ ಪಡೆದರು

ಇದಕ್ಕೂ ಮುನ್ನ ಬ್ಯಾಟ್ ಮಾಡಿದ ಮುಂಬೈ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 182 ರನ್ ಗಳಿಸಿತು. ತಂಡದ ಪರ ಕ್ಯಾಮರೋನ್‌ಗ್ರೀನ್ 23 ಎಸೆತದಲ್ಲಿ 1 ಸಿಕ್ಸ್ 6 ಬೌಂಡರಿ ಒಳಗೊಂಡ 41 ರನ್ ಗಳಿಸಿದರೆ, ಸೂರ್ಯಕುಮಾರ್ ಯಾದವ್ 33 ರನ್ ಗಳಿಸಿದರು. ಇಶಾನ್ ಕಿಶನ್ (15), ತಿಲಕ್‌ವರ್ಮಾ 26, ನೇಹಾಲ್‌ವಧೇರಾ 23 ರನ್ ಗಳಿಸಿ ತಂಡದ ಮೊತ್ತ ಹೆಚ್ಚಿಸಲು ನೆರವಾದರು. ಲಕ್ನೋ ಪರ ನವೀನ್ ಉಲ್–ಹಕ್ 4 ವಿಕೆಟ್ ಪಡೆದರೆ, ಯಶ್ ಠಾಕೂರ್ ಎರಡು ವಿಕೆಟ್, ಮೋಹ್ಸಿನ್ ಖಾನ್ ಒಂದು ವಿಕೆಟ್ ಉರುಳಿಸಿದರು.

ಕೇವಲ 5 ರನ್ ನೀಡಿ 5 ವಿಕೆಟ್ ಪಡೆದ ಆಕಾಶ್ ಮಧ್ವಾಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಎರಡನೇ ಕ್ವಾಲಿಫೈಯರ್ ಪಂದ್ಯ ಗುಜರಾತ್ ಹಾಗೂ ಮುಂಬೈ ನಡುವೆ ಮೇ 26ರ ರಾತ್ರಿ 7.30ಕ್ಕೆ ನಡೆಯಲಿದೆ.

ವಸೂಲಿಗೆ ಬ್ರೇಕ್

ಹೊಸ ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಿಸಿಟಿವಿ ಕಣ್ಗಾವಲು ಚುರುಕು: ಸಂಚಾರ ನಿಯಮ ಉಲ್ಲಂಘಿಸಿದವರಿಗೆ ಸ್ಥಳದಲ್ಲೇ ದಂಡ ವಿಧಿಸುವ ಬದಲು ಸಿಸಿಟಿವಿ ವೀಕ್ಷಣೆ ಹೆಚ್ಚಾಗಲಿದೆ. ಪ್ರತಿಯೊಂದು ಸಿಗ್ನಲ್‌ಗಳಲ್ಲಿಯೂ ಸಿಸಿ ಕ್ಯಾಮರಾ ಕಣ್ಗಾವಲಿದ್ದು, ಸಂಚಾರ ನಿಯಮ ಉಲ್ಲಂಘಿಸಿದರೆ, ಮನೆಗೆ ದಂಡ ಪಾವತಿಸುವಂತೆ ನೋಟಿಸ್ ಕಳುಹಿಸಲಾಗುವುದು ಎಂದು ಎಚ್ಚರಿಸಿದರು.

ಟ್ರಾಫಿಕ್ ನಿರ್ವಹಣೆಗೆ ಆದ್ಯತೆ: ಕಳೆದೊಂದು ವರ್ಷದಿಂದ ಮೈಸೂರಿನಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗುತ್ತಿದ್ದು, ಎಲ್ಲೆಡೆ ಟ್ರಾಫಿಕ್ ಜಾಮ್ ಸಮಸ್ಯೆ ಉಂಟಾಗುತ್ತಿದೆ. ಆದ್ದರಿಂದ ಸಿಗ್ನಲ್‌ಗಳಲ್ಲಿ, ಪ್ರಮುಖ ರಸ್ತೆಗಳಲ್ಲಿ ಸಂಚಾರ ಪೊಲೀಸರನ್ನು ಕಾರ್ಯ ನಿಯೋಜಿಸುವ ಮೂಲಕ ಟ್ರಾಫಿಕ್ ಸಮಸ್ಯೆ ಪರಿಹರಿಸುವ ಪ್ರಯತ್ನ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಇಂದು ಕುಂಡೆ ಹಬ್ಬ

ರಾತ್ರಿಯಿಂದಲೇ ಮದ್ಯ ಮಾರಾಟ ನಿಷೇಧ

ಮಡಿಕೇರಿ, ಮೇ 24– ಕೊಡಗು ಜಿಲ್ಲೆಯ ಪೊನ್ನಂಪೇಟೆ ತಾಲೂಕು ಗೋಣಿಕೊಪ್ಪ ಪೊಲೀಸ್ ಠಾಣಾ ಸರಹದ್ದಿನ ದೇವರಪುರ ಗ್ರಾಮ ಪಂಚಾಯಿತಿಗೆ ಸೇರುವ ದೇವರಪುರ ಗ್ರಾಮದಲ್ಲಿ ಶ್ರೀ ಅಯ್ಯಪ್ಪ ಮತ್ತು ಭದ್ರಕಾಳಿ ದೇವರ ಬೇಡು(ಕುಂಡೆ) ಹಬ್ಬವನ್ನು ಮೇ 25 ರಂದು ಆಚರಿಸಲಾಗುತ್ತಿದೆ.

ಬೇಡುಹಬ್ಬದ ಹಿನ್ನೆಲೆಯಲ್ಲಿ ಸಾರ್ವಜನಿಕ ಹಿತಾಸಕ್ತಿಯಿಂದ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಮೇ 24ರ ಮಧ್ಯರಾತ್ರಿ 12 ಗಂಟೆಯಿಂದ ಮೇ 25ರ ಮಧ್ಯರಾತ್ರಿ 12 ಗಂಟೆಯವರೆಗೆ ಗೋಣಿಕೊಪ್ಪ ಮತ್ತು ಸುತ್ತಮುತ್ತಲಿನ 10 ಕಿಮೀ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮದ್ಯದ ಅಂಗಡಿ, ಬಾರ್, ಹೋಟೆಲ್ ಮತ್ತು ಕ್ಲಬ್‌ಗಳಲ್ಲಿ ಎಲ್ಲಾ ವಿಧದ ಮದ್ಯ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಬಿ.ಸಿ.ಸತೀಶ ಅವರು ಆದೇಶಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಮೇ 24– ಮಡಿಕೇರಿಯ ಕೋಟೆ ಫೀಡರ್‌ನಲ್ಲಿ ತುರ್ತು ನಿರ್ವಹಣೆ ಕಾರ್ಯ ಹಿನ್ನೆಲೆಯಲ್ಲಿ ಮೇ 25 ರಂದು ಬೆಳಗ್ಗೆ 9ರಿಂದ ಸಂಜೆ 5 ಗಂಟೆವರೆಗೆ ಇಂಡಸ್ಟ್ರಿಯಲ್ ಏರಿಯಾ, ಕೆಎಸ್‌ಆರ್‌ಟಿಸಿ ಪ್ರಕೃತಿ ಬಡಾವಣೆ, ಗೌಳಿಬೀದಿ, ಚೌಕಿ, ನಗರಸಭೆ, ಪೆಸ್ಟನ್ ಲೈನ್ ಹಾಗೂ ಸುತ್ತಮುತ್ತಲ ವ್ಯಾಪ್ತಿಯ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಪಟ್ಟಡ ಪ್ರಭಾಕರ ನಿಧನ

ಮಡಿಕೇರಿ, ಮೇ 24– ಮಡಿಕೇರಿ



ತಾಲೂಕು ಅವಂದೂರು ಗ್ರಾಮದ ಪಟ್ಟಡ ದಿವಂಗತ ಮುತ್ತಣ್ಣ ಅವರ ಪುತ್ರ ನಿವೃತ್ತ ವಾಯು ಸೇನಾಧಿಕಾರಿ ಪಟ್ಟಡ ಪ್ರಭಾಕರ(75) ಅವರು ಬುಧವಾರ ನಿಧನರಾಗಿದ್ದಾರೆ.

ಇವರು ಕೊಡಗು ಸಂಗಾತಿಯ ಸಂಪಾದಕರಾಗಿ ಹಾಗೂ ಹಾಲಿ ಅವಂದೂರಿನ ಧವಸ ಬಂಡಾರದ ಮತ್ತು ಬೆಟ್ಟಗೇರಿ ಸರಕಾರಿ ಪ್ರಾಥಮಿಕ ಶಾಲೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಮೃತರ ಅಂತ್ಯಕ್ರಿಯೆ ಗುರುವಾರ ಮೃತರ ಸ್ವಗ್ರಾಮ ಅವಂದೂರಿನಲ್ಲಿ ನಡೆಯಲಿದೆ.

ಮುಕೋಂಡ ಕಪ್ ಫುಟ್ಬಾಲ್ ಟೂರ್ನಿ: ಕೊಲ್ಲೀರ ಕುಟುಂಬಕ್ಕೆ ಪ್ರಶಸ್ತಿ

- ವಿಜೇತರಿಗೆ 20 ಸಾವಿರ ರೂ. ನಗದು, ಟ್ರೋಫಿ ಪ್ರದಾನ
- ಪಂದ್ಯಾವಳಿಯಲ್ಲಿ 32 ಕುಟುಂಬ ತಂಡಗಳು ಭಾಗಿ
- ಪ್ರತಿವರ್ಷ ಫುಟ್ಬಾಲ್ ಪಂದ್ಯಾವಳಿ ನಡೆಸಲು ಆಸಕ್ತಿ



ಫೈವ್ ಸೈಡರ್ಸ್ ಮೂಕೋಂಡ ಕಪ್ ಪುಟ್ಬಾಲ್ ಕಪ್ ತನ್ನದಾಗಿಸಿಕೊಂಡ ಕೊಲ್ಲೀರ ಕುಟುಂಬ.

ವಿರಾಜಪೇಟೆ, ಮೇ 24– ದೇವಣಗೇರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಆಯೋಜಿಸಲಾಗಿದ್ದ ಫೈವ್‌ಸೈಡರ್ಸ್ ಮೂಕೋಂಡ ಕಪ್ ಪುಟ್ಬಾಲ್ ಫೈನಲ್ಸ್ ಪಂದ್ಯದಲ್ಲಿ ಕೊಲ್ಲೀರ ಕುಟುಂಬ, ಕಳ್ಳಿಚಂಡ ಕುಟುಂಬವನ್ನು ಟೈಬ್ರೇಕರ್‌ನಲ್ಲಿ 3–2 ಗೋಲುಗಳ ಅಂತರದಲ್ಲಿ ಮಣಿಸಿ ಪ್ರಶಸ್ತಿ ಗೆದ್ದುಕೊಂಡಿದೆ.

ಪ್ರಶಸ್ತಿ ಗೆದ್ದ ತಂಡ ಇಪ್ಪತ್ತು ಸಾವಿರ ರೂ. ನಗದು ಹಾಗೂ ಟ್ರೋಫಿಯನ್ನು ಮುಡಿಗೇರಿಸಿಕೊಂಡಿತು. ದ್ವಿತೀಯ ಸ್ಥಾನ ಪಡೆದ ಕಳ್ಳಿಚಂಡ ಕುಟುಂಬ ಹತ್ತು ಸಾವಿರ ನಗದು ಹಾಗೂ ಟ್ರೋಫಿಯನ್ನು ಪಡೆದುಕೊಂಡಿತು. ಆರಂಭದಿಂದಲೇ ಎರಡು ತಂಡಗಳು ಸಂಘಟಿತ ಹೋರಾಟಕ್ಕೆ ಒತ್ತು ನೀಡಿತು. ಪ್ರಥಮಾರ್ಧದಲ್ಲಿ 2 ತಂಡಗಳಿಗೂ ಗೋಲು ಗಳಿಸಲು ಅವಕಾಶ ದೊರೆತರೂ ಯಶಸ್ಸು ಸಿಗಲಿಲ್ಲ.

ದ್ವಿತೀಯಾರ್ಧದ ಕೊನೆಯ 5 ನಿಮಿಷದಲ್ಲಿ ಕಳ್ಳಿಚಂಡ ಕುಟುಂಬದ ನೆರ್ಪಂಡ ಕಾರ್ತಿಕ್ ಗೋಲು ಗಳಿಸುವುದರ ಮೂಲಕ ಮುನ್ನಡೆ ಕಾಯ್ದುಕೊಂಡರು. ಪಂದ್ಯಾಟದ ಕೊನೆಯಲ್ಲಿ 30 ಸೆಕೆಂಡುಗಳು ಇರುವಾಗ ಕೊಲ್ಲಿರ ತಂಡದ ಲೇಖಿನ್ ಅಪ್ಪಚ್ಚು ಗೋಲು ಬಾರಿಸುವುದರ ಮೂಲಕ ಪಂದ್ಯವನ್ನು ಸಮಸ್ಥಿತಿಗೆ ತಂದರು. ತೀರ್ಪುಗಾರರು ಟೈ ಬ್ರೇಕರ್ ನಿಯಮದಂತೆ ಆಡಿಸಿದಾಗ ಕೊಲ್ಲಿರ ತಂಡ 2 ಗೋಲು ಗಳಿಸಿತು. ಕಳ್ಳಿಚಂಡ ತಂಡ ಕೇವಲ 1 ಗೋಲು ಗಳಿಸಿತು.

ಕೊಲ್ಲೀರ ತಂಡದಲ್ಲಿ ಬಲ್ಯಾಣಮಾಡ ಮೊಣ್ಣಪ್ಪ, ಕಾಯಪಂಡ ಪ್ರತೀಕ್, ಕಳ್ಳಿಚಂಡ ತಂಡದಲ್ಲಿ ನೆರ್ಪಂಡ ಕಾರ್ತಿಕ್, ಚೇಂದಂಡ ಮರ್ಣ್ ಅತಿಥಿ ಆಟಗಾರರಾಗಿ ಪಾಲ್ಗೊಂಡಿದ್ದರು.

ತೃತೀಯ ಸ್ಥಾನಕ್ಕಾಗಿ ನಡೆದ ಪಂದ್ಯದಲ್ಲಿ ಕುಂಜಿಲಗೇರಿ ಮುಕ್ಕಾಟೀರ ತಂಡವು ಮನೆಯಪಂಡ ತಂಡವನ್ನು 3–0 ಗೋಲುಗಳಿಂದ ಪರಾಭವಗೊಳಿಸಿತು. ಇದರೊಂದಿಗೆ ಐದು ಸಾವಿರ ರೂ. ನಗದು ಹಾಗೂ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು. ಈ ಪಂದ್ಯಾಟದಲ್ಲಿ ಒಟ್ಟು 32 ಕುಟುಂಬಗಳು ಪಾಲ್ಗೊಂಡಿದ್ದವು.

ಬುಧವಾರ ಪೂರ್ವಾಹ್ನ ನಡೆದ ಕ್ವಾಟರ್ ಫೈನಲ್ ಪಂದ್ಯಾಟದಲ್ಲಿ ಕೊಲ್ಲಿರ ತಂಡ ಕಲಿಯಂಡ ತಂಡವನ್ನು 3–0 ಗೋಲುಗಳಿಂದ ಪರಾಭವಗೊಳಿಸಿತು. ಮುಕ್ಕಾಟೀರ (ಕುಂಜಿಲಗೇರಿ) ತಂಡವು ಮೂಕೊಂಡ ತಂಡವನ್ನು 3–2 ಗೋಲುಗಳಿಂದ ಟೈ ಬ್ರೇಕರ್‌ನಲ್ಲಿ ಮಣಿಸಿತು. ಮನೆಯಪಂಡ ತಂಡವು ಮುಂಡೇಡ ತಂಡವನ್ನು 1–0 ಗೋಲಿನಿಂದ ಟೈ ಬ್ರೇಕರ್‌ನಲ್ಲಿ ಸೋಲಿಸಿತು. ಕಳ್ಳಿಚಂಡ ತಂಡವು ಕೊದೇಂಗಡ ತಂಡವನ್ನು 3–0 ಗೋಲುಗಳಿಂದ ಪರಾಭವಗೊಳಿಸಿತು.

ನಂತರ ನಡೆದ ಸೆಮಿಫೈನಲ್ಸ್ ಪಂದ್ಯಾಟದಲ್ಲಿ ಕೊಲ್ಲಿರ ತಂಡ ಮುಕ್ಕಾಟೀರ ತಂಡವನ್ನು 3–0 ಗೋಲುಗಳಿಂದ, ಎರಡನೇ ಸೆಮಿಫೈನಲ್ಸ್ ಪಂದ್ಯಾಟದಲ್ಲಿ ಕಳ್ಳಿಚಂಡ ತಂಡವು ಮನೆಯಪಂಡ ತಂಡವನ್ನು 4–1 ಗೋಲುಗಳಿಂದ ಪರಾಭವಗೊಳಿಸಿ ಅಂತಿಮ ಸುತ್ತಿಗೆ ಪ್ರವೇಶಿಸಿತು.

ಪಂದ್ಯದಲ್ಲಿ ತೀರ್ಪುಗಾರರಾಗಿ ಅಜಯ್ ಮತ್ತು ಗಣೇಶ್ ಕಾರ್ಯನಿರ್ವಹಿಸಿದರು. ಪಂದ್ಯಾಟದ ವೀಕ್ಷಕ ವಿವರಣೆಯನ್ನು ಮೂಕೋಂಡ ರೋಹಿತ್ ನೆರವೇರಿಸಿದರು.

ಈ ಪಂದ್ಯಾವಳಿಯಲ್ಲಿ ಕಳ್ಳಿಚಂಡ ಕಾರ್ತಿಕ್ 6 ಗೋಲು ಗಳಿಸುವುದರ ಮೂಲಕ ಅತಿ ಹೆಚ್ಚು ಗೋಲು ಗಳಿಸಿದ ಆಟಗಾರ ಪ್ರಶಸ್ತಿಗೆ, ಬೊಳ್ಳಚೆಟ್ಟೀರ ತರುಣ್ ಉತ್ತಮ ಗೋಲ್ ಕೀಪರ್ ಪ್ರಶಸ್ತಿಗೆ, ಕೊಲ್ಲೀರ ಲೇಖಿನ್ ಅಪ್ಪಚ್ಚು ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ರನ್ನರ್ ಅಪ್ ಪ್ರಶಸ್ತಿ ಪಡೆದುಕೊಂಡು ಕಳ್ಳಿಚಂಡ ಕುಟುಂಬ.

ಸಮಾರೋಪ ಸಮಾರಂಭದಲ್ಲಿ ಪ್ಲಾಂಟರ್ ಪಾಲೇಕಂಡ ಕುಮಾರ್ ಅಯ್ಯಪ್ಪ ಮಾತನಾಡಿ, ಕೊಡವ ಕುಟುಂಬದಲ್ಲಿ ಹಾಕಿ, ಕ್ರಿಕೆಟ್ ಸೇರಿದಂತೆ ಇನ್ನಿತರ ಕ್ರೀಡೆ ಗಳನ್ನು ನಡೆಸಲಾಗುತ್ತಿದೆ. ಮೂಕೋಂಡ ಕುಟುಂಬದವರು ಪುಟ್ಬಾಲ್ ಪಂದ್ಯಾಟಕ್ಕೆ ಚಾಲನೆ ನೀಡಿ ಕೊಡವರ ಹೆಮ್ಮೆಗೆ ಪಾತ್ರರಾಗಿದ್ದಾರೆ. ಕೊಡವ ಜನಾಂಗದಲ್ಲೂ ಕೂಡ ಉತ್ತಮ ಪುಟ್ಬಾಲ್ ಆಟಗಾರರಿದ್ದು ಇಂತಹ ಪಂದ್ಯಾಟಗಳು ಅವರ ಪ್ರತಿಭೆಯನ್ನು ಪ್ರದರ್ಶಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕ್ರೀಡಾ ಸಂಚಾಲಕ ಮೂಕೋಂಡ ಶಶಿ ಸುಬ್ರಮಣಿ ಮಾತನಾಡಿ, ಕೊಡವ ಕುಟುಂಬಗಳಲ್ಲಿ ಪುಟ್ಬಾಲ್ ಪ್ರತಿಭೆಯನ್ನು ಹೊರ ತರುವ ನಿಟ್ಟಿನಲ್ಲಿ ಉತ್ತಮ ವೇದಿಕೆ ಮಾಡಿಕೊಡಲಾಗಿದೆ. ಕುಟುಂಬ ಪುಟ್ಬಾಲ್ ಪಂದ್ಯಾಟಗಳು ನಿರಂತರವಾಗಿ ನಡೆಯಬೇಕು ಎಂಬ ಅಭಿಲಾಷೆ ಇದೆ. ಮುಂದಿನ ಸಾಲಿನಲ್ಲಿ ಯಾವುದಾದರೊಂದು ಕುಟುಂಬ ಪಂದ್ಯಾಟ ನಡೆಸಲು ಉದ್ದೇಶಿಸಿದರೆ ಅವರಿಗೆ ಬಿಟ್ಟು ಕೊಡಲಾಗುವುದು. ಯಾರು ನಡೆಸಲು ಅಪೇಕ್ಷಿಸದೇ ಇದ್ದರೆ ತಮ್ಮ ಕುಟುಂಬದಿಂದಲೇ ಪಂದ್ಯಾಟವನ್ನು ನಡೆಸಲಾಗುವುದು ಎಂದು ಹೇಳಿದರು. ಸಭೆಯ ಅಧ್ಯಕ್ಷತೆಯನ್ನು ಕುಟುಂಬದ ಅಧ್ಯಕ್ಷ ರಾಜಾ ಬೋಪಣ್ಣ ವಹಿಸಿದ್ದರು. ವೇದಿಕೆಯಲ್ಲಿ ಹಿರಿಯ ರಾದ ಮೂಕೋಂಡ ಪುಟ್ಟು ಅಯ್ಯಪ್ಪ ಉಪಸ್ಥಿತರಿದ್ದರು.

ಶ್ರೀ ಜೋಡಿ ಬಸವೇಶ್ವರ ದೇವರ ಅದ್ದೂರಿ ಪೂಜೆ

ಕೊಂಡ ಹಾಯ್ದ ನಂತರ ಪ್ರತಿವರ್ಷದಂತೆ ಮಳೆ



ಗುಡ್ಡೆಹೊಸೂರು, ಮೇ 24– ಇಲ್ಲಿಗೆ ಸಮೀಪದ ರಂಗಸಮುದ್ರ ಗ್ರಾಮದ ಶ್ರೀ ಜೋಡಿ ಬಸವೇಶ್ವರ ದೇವಸ್ಥಾನದ ವಾರ್ಷಿಕ ಮಹಾಪೂಜೆಯು ಸಾವಿರಾರು ಮಂದಿ ಗ್ರಾಮಸ್ಥರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಿತು.

ಕಾವೇರಿ ನದಿಯಿಂದ ಕಳಸ ಪೂಜೆ ನಡೆಸಿ ಬಸವೇಶ್ವರ ಮೂರ್ತಿಯ ಪಲ್ಲಕ್ಕಿ ಮೆರವಣಿಗೆ ಸಾಗಿ ಕೆಂಡ ಕೊಂಡ ಪೂಜೆ ನೆರವೇರಿಸಿ ಕೊಂಡ ಹಾಯ್ದ ನಂತರ ದೇವಸ್ಥಾನದಲ್ಲಿ ಮಹಾ ಪೂಜೆ ನಡೆಸಲಾಯಿತು. ಆ ಸಂದರ್ಭ ಪವಾಡ ರೀತಿಯಲ್ಲಿ ದೇವಸ್ಥಾನದ ಸುತ್ತ ಭಾರೀ ಮಳೆ ಸುರಿಯಿತು. ಪ್ರತಿ ವರ್ಷ ಕೂಡ ಅಲ್ಲಿನ ಪೂಜಾ ದಿನ ಮಳೆ ಬರುವುದು ವಾಡಿಕೆ. ಆದರೆ ಈ ಬಾರಿ ಮೆರವಣಿಗೆಯು ಉತ್ಸವಮೂರ್ತಿ ಪಲ್ಲಕ್ಕಿ ಗರ್ಭಗುಡಿ ಪ್ರವೇಶಿಸಿದ ತಕ್ಷಣವೇ ಮಳೆ ಸುರಿದು ಭಕ್ತರು ಪುಳಕಿತರಾದರು. ಈ ಸಂದರ್ಭ ಲೋಕ ಕಲ್ಯಾಣಾರ್ಥ ಅನ್ನಸಂತರ್ಪಣೆ ನಡೆಯಿತು. ದೇವಸ್ಥಾನ ಸಮಿತಿಯ ಅಧ್ಯಕ್ಷ ನೆಕ್ಕರೆ ಕುಶಾಲಪ್ಪ ಮತ್ತು ಉಪಾಧ್ಯಕ್ಷ ಆನೇರ ರಮೇಶ್ ಮತ್ತು ಎಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು.

ಕಾಂಗ್ರೆಸ್ ಗೆಲುವಿನಲ್ಲಿ ದಸಂಸ ಪಾತ್ರ ಮಹತ್ವ

ಮುಂದಿನ ತಿಂಗಳು ಸಿಎಂ ಸಿದ್ದರಾಮಯ್ಯಗೆ ದಲಿತ ರತ್ನ ಪ್ರಶಸ್ತಿ

ಮಡಿಕೇರಿ, ಮೇ 24– ಕೊಡಗಿನ ಎರಡು ವಿಧಾನ ಸಭಾ ಕ್ಷೇತ್ರಗಳಲ್ಲಿನ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿನಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಘಟಕದ ಪಾತ್ರ ಮಹತ್ತರವಾದುದು ಎಂದು ಸಂಘಟನೆಯ ಜಿಲ್ಲಾ ಸಂಚಾಲಕ ಹೆಚ್.ಎಲ್. ದಿವಾಕರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಬಿಜೆಪಿ ಸರ್ಕಾರದ ದಲಿತ ವಿರೋಧಿ ಧೋರಣೆಗಳ ಹಿನ್ನೆಲೆಯಲ್ಲಿ ರಾಜಕೀಯ ರಹಿತವಾದ ದಸಂಸ ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ತನ್ನ ಸಂಪೂರ್ಣ ಬೆಂಬಲವನ್ನು ನೀಡಿದೆ. ತಮ್ಮ ಗ್ರಾಮ ಸಮಿತಿಗಳ ಮೂಲಕ ಜಿಲ್ಲೆಯ ಎರಡು ಕ್ಷೇತ್ರಗಳ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಹಗಲಿರುಳೆನ್ನದೆ ಶ್ರಮಿಸಿದೆ. ಈ ಹಿನ್ನೆಲೆ ಕಾಂಗ್ರೆಸ್ ಗೆಲುವಿನಲ್ಲಿ ದಸಂಸ ಪ್ರಮುಖ ಪಾತ್ರ ವಹಿಸಿದೆಯೆಂದು ವಿಶ್ವಾಸದಿಂದ ನುಡಿದರು.

ನಿಗಮಗಳಲ್ಲಿ ಅವಕಾಶ ನೀಡಿ: ನೂತನ ಕಾಂಗ್ರೆಸ್ ಸರ್ಕಾರದಲ್ಲಿ ದಲಿತ ಸಂಘರ್ಷ ಸಮಿತಿಯ ಪ್ರಮುಖರಿಗೆ ಯಾವುದೇ ನಿಗಮಗಳಲ್ಲಿ ಅಧ್ಯಕ್ಷ ಸ್ಥಾನ, ಅಕ್ರಮ ಸಕ್ರಮ ಸಮಿತಿಗಳಲ್ಲಿ ಸದಸ್ಯ ಸ್ಥಾನಗಳನ್ನು ನೀಡುವಂತೆ ಹೆಚ್.ಎಲ್. ದಿವಾಕರ್ ಇದೇ ಸಂದರ್ಭ ಮನವಿ ಮಾಡಿದರು. ಹಿಂದಿನ ಬಿಜೆಪಿ ಸರ್ಕಾರದಲ್ಲಿ ಶೋಷಿತ ದಲಿತ ಸಮೂಹವನ್ನು ಸಂಪೂರ್ಣ ಕಡೆಗಣಿಸಲಾಗಿತ್ತು. ಈ ಹಿನ್ನೆಲೆ ಚುನಾವಣೆಯಲ್ಲಿ ಕಾಂಗ್ರೆಸ್‌ನ್ನು ಬೆಂಬಲಿಸಲಾಗಿದ್ದು, ಎರಡು ಕ್ಷೇತ್ರಗಳಲ್ಲಿ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಬಹುಮತದೊಂದಿಗೆ ಅಧಿಕಾರಕ್ಕೆ ಬರುವ ಮೂಲಕ 'ದಲಿತರನ್ನು ಕಡೆಗಣಿಸಬೇಡಿ' ಎನ್ನುವ ಸಂದೇಶ ರವಾನೆಯಾಗಿದೆಯೆಂದು ಸ್ಪಷ್ಟಪಡಿಸಿದರು.

'ಸಿದ್ದು'ಗೆ ದಲಿತ ರತ್ನ ಪ್ರಶಸ್ತಿ: ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಕೊಡಗು ಜಿಲ್ಲಾ ಘಟಕದಿಂದ ಮುಂದಿನ ಜೂನ್ 2ನೇ ವಾರದಲ್ಲಿ ಮಡಿಕೇರಿಯಲ್ಲಿ 132ನೇ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುತ್ತದೆ. ಈ ಸಂದರ್ಭ ರಾಜ್ಯದ ಸಿಎಂ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಿ ಅವರಿಗೆ 'ದಲಿತ ರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲು ಉದ್ದೇಶಿಸಲಾಗಿದೆ. ನಗರದ ಗಾಂಧಿ ಮೈದಾನದಲ್ಲಿ ನಡೆಯುವ ಸಮಾರಂಭದಲ್ಲಿ ಏಳೆಂಟು ಸಾವಿರ ಜನರು ಸಮಾವೇಶಗೊಳ್ಳುವ ನಿರೀಕ್ಷೆ ಇದ್ದು, ಈ ಸಂದರ್ಭ ನಗರದಲ್ಲಿ ಬೃಹತ್ ಮೆರವಣಿಗೆಯನ್ನು ಆಯೋಜಿಸಲಾಗುವುದೆಂದು ಮಾಹಿತಿ ನೀಡಿದರು.



ದಸಂಸ ಮಡಿಕೇರಿ ತಾಲೂಕು ಸಂಚಾಲಕ ದೀಪಕ್ ಪೊನ್ನಪ್ಪ ಮಾತನಾಡಿ, ಹಿಂದಿನ ಸರ್ಕಾರದ ಅವಧಿಯಲ್ಲಿ ದಲಿತ ಸಮುದಾಯವನ್ನು ದಲಿತ ಅಧಿಕಾರಿಗಳನ್ನು ಗೌರವಯುತವಾಗಿ ನಡೆಸಿಕೊಂಡಿಲ್ಲ. ದಲಿತ ಸಮೂಹಕ್ಕೆ ಜವಾಬ್ದಾರಿಯುತವಾದ ಯಾವುದೇ ಸ್ಥಾನಮಾನಗಳನ್ನು ನೀಡದಿರುವುದು, ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿನ ಭ್ರಷ್ಟ ವ್ಯವಸ್ಥೆ, ನಿರಂತರವಾಗಿ ಏರು ಮುಖವಾದ ನಿತ್ಯೋಪಯೋಗಿ ವಸ್ತುಗಳ ಬೆಲೆ ಏರಿಕೆ, ಡಾ. ಅಂಬೇಡ್ಕರ್‌ಗೆ ಅವಮಾನ ಮೊದಲಾದ ಕಾರಣಗಳ ಹಿನ್ನೆಲೆ ಈ ಚುನಾವಣೆಯಲ್ಲಿ ದಸಂಸ ಕಾಂಗ್ರೆಸ್ ಪಕ್ಷವನ್ನು ಬಹಿರಂಗವಾಗಿ ಬೆಂಬಲಿಸಿದ್ದಾಗಿ ತಿಳಿಸಿದರು.

ಸಿದ್ದರಾಮಯ್ಯ ಮತ್ತೆ ಮುಖ್ಯಮಂತ್ರಿ; ಅಭಿವೃದ್ಧಿ ನಿರೀಕ್ಷೆಯಲ್ಲಿ ಚಾಮರಾಜನಗರ





ಮೊದಲ ಬಾರಿ ಸಿಎಂ ಆಗಿದ್ದಾಗ ಸಾವಿರಾರು ಕೋಟಿ ಅನುದಾನ ನೀಡಿದ್ದ ಸಿದ್ದು ಮೇಲೆ ಅಪಾರ ವಿಶ್ವಾಸ

● ಸಿದ್ದಲಿಂಗಸ್ವಾಮಿ

ಚಾಮರಾಜನಗರ, ಮೇ 24– ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಮೈಸೂರು ಭಾಗದ ಸಿದ್ದರಾಮಯ್ಯ ಅಧಿಕಾರ ಸ್ವೀಕರಿಸಿದ್ದು, ಗಡಿಜಿಲ್ಲೆ ಚಾಮರಾಜನಗರದ ಅಭಿವೃದ್ಧಿಯ ನಿರೀಕ್ಷೆ ಜಿಲ್ಲೆಯ ಜನರಲ್ಲಿ ಮೂಡಿದೆ.

2013ರಲ್ಲಿ ಮೊದಲ ಬಾರಿಗೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ಜಿಲ್ಲೆಯಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳು ನಡೆದಿದ್ದವು. ಐದು ಸಾವಿರ ಕೋಟಿಗೂ ಹೆಚ್ಚು ಅನುದಾನ ನೀಡುವ ಮೂಲಕ ಜಿಲ್ಲೆಯ ಬಗ್ಗೆ ಅಪಾರ ಕಾಳಜಿ ತೋರಿಸಿದ್ದರು. ಈಗ ಎರಡನೇ ಬಾರಿಗೆ ಮುಖ್ಯಮಂತ್ರಿ ಆಗಿರುವುದರಿಂದ ಜಿಲ್ಲೆಗೆ ಇನ್ನಷ್ಟು ಯೋಜನೆ ನೀಡಲಿದ್ದಾರೆ ಎಂಬ ವಿಶ್ವಾಸ ಜಿಲ್ಲೆಯ ಜನರಲ್ಲಿ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರಲ್ಲಿ ಮೂಡಿದೆ.

ಮೌಢ್ಯತೆ ದೂರ ಮಾಡಿದ್ದರು: ಮುಖ್ಯಮಂತ್ರಿಯಾದವರು ಜಿಲ್ಲಾ ಕೇಂದ್ರವಾದ ಚಾಮರಾಜನಗರಕ್ಕೆ ಭೇಟಿ ನೀಡಿದರೆ, 6 ತಿಂಗಳೊಳಗೆ ಅಧಿಕಾರ ಹೋಗುತ್ತದೆ ಎಂಬ ಮೂಢ ನಂಬಿಕೆಯಿಂದ ಹಲವು ಮುಖ್ಯಮಂತ್ರಿಗಳು ಚಾಮರಾಜನಗರಕ್ಕೆ ಭೇಟಿ ನೀಡಿರಲಿಲ್ಲ. ಈ ಮೌಢ್ಯವನ್ನು ದೂರ ಮಾಡಿದವರು ಸಿದ್ದರಾಮಯ್ಯ ಅವರು. 2013ರಿಂದ 2018ರವರೆಗೆ ಜಿಲ್ಲಾ ಕೇಂದ್ರಕ್ಕೆ ಸುಮಾರು 12ಕ್ಕೂ ಹೆಚ್ಚು ಬಾರಿ ಹಾಗೂ ಜಿಲ್ಲೆಗೆ 20ಕ್ಕೂ ಹೆಚ್ಚು ಬಾರಿ ಭೇಟಿ ನೀಡಿದ್ದರು. ಈ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ನಾಂದಿಯಾಡಿದ್ದರು.


ಜಿಲ್ಲೆಯ ಬಗ್ಗೆ ಅಪಾರ ಕಾಳಜಿ: 1997, ಆಗಸ್ಟ್ 15ರಂದು ಹಳೆ ಮೈಸೂರು ಭಾಗದಿಂದ ಬೇರ್ಪಟ್ಟು ಪ್ರತ್ಯೇಕ ಜಿಲ್ಲೆಯಾದ ಚಾಮರಾಜನಗರಕ್ಕೆ ಅಂದಿನ ಮುಖ್ಯಮಂತ್ರಿ ಜೆ.ಎಚ್. ಪಟೇಲ್ ಮೂಢನಂಬಿಕೆಗೆ ಕಟ್ಟುಬಿದ್ದು ಜಿಲ್ಲಾ ಕೇಂದ್ರಕ್ಕೆ ಭೇಟಿ ನೀಡಿರಲಿಲ್ಲ. ಆದರೆ, ಈ ವೇಳೆ ಉಪ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಜಿಲ್ಲಾ ಕೇಂದ್ರಕ್ಕೆ ಭೇಟಿ ನೀಡಿ, ಜಿಲ್ಲೆಯನ್ನು ಉದ್ಘಾಟಿಸಿದ್ದರು. ಸಿದ್ದರಾಮಯ್ಯ ಅವರು ಹಳೆ ಮೈಸೂರು ಭಾಗದವರು. ಹೀಗಾಗಿ, ಇವರಿಗೆ ಜಿಲ್ಲೆಯ ಇಂದಿನ ಪರಿಸ್ಥಿತಿ ಚೆನ್ನಾಗಿ ತಿಳಿದಿದೆ. ಹೀಗಾಗಿಯೇ ಐದು ವರ್ಷಗಳ ಅವಧಿಯಲ್ಲಿ ಸಿದ್ದರಾಮಯ್ಯ ಅವರ ಸರ್ಕಾರ ಜಿಲ್ಲೆಗೆ ಹಲವು ಕೊಡುಗೆಗಳನ್ನು ನೀಡಿತ್ತು.

ವಿಶೇಷವಾಗಿ ಜಿಲ್ಲಾ ಕೇಂದ್ರಕ್ಕೆ ಬಜೆಟ್‌ನಲ್ಲಿ 50 ಕೋಟಿ ರೂ. ಘೋಷಣೆ ಮಾಡಿ ಅನುದಾನ ನೀಡಿದ್ದರು. ಈ ಅನುದಾನದಲ್ಲಿ ಸುಮಾರು 36 ಕೋಟಿ ರೂ.ನಲ್ಲಿ ನಗರದ ಬಿ. ರಾಚಯ್ಯ ಜೋಡಿ ರಸ್ತೆ ಅಭಿವೃದ್ಧಿಪಡಿಸಲಾಯಿತು. ಅಲ್ಲದೇ ಚಾಮರಾಜೇಶ್ವರ ದೇವಾಲಯ ಅಭಿವೃದ್ಧಿ ಆಗಿರುವುದು ಗಮನಾರ್ಹ. ಇದಲ್ಲದೇ ಇವರ ಅಧಿಕಾರದ ಅವಧಿಯಲ್ಲಿ ನಗರದ ಬದನಗುಪ್ಪೆ, ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶಾಭಿವೃದ್ಧಿ, ಚಾಮುಲ್, ಮಲೆ ಮಹದೇಶ್ವರಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದವು. ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನುಷ್ಠಾನವಾಯಿತು. ವೈದ್ಯಕೀಯ ಕಾಲೇಜು, ಆಸ್ಪತ್ರೆಯು ಸಹ ಸಿದ್ದರಾಮಯ್ಯ ಅವರ ಸರ್ಕಾರದ ಕಾಳಜಿಯಿಂದ ತ್ವರಿತಗತಿಯಲ್ಲಿ ನಿರ್ಮಾಣವಾದವು.

ಮತ್ತಷ್ಟು ನಿರೀಕ್ಷೆ: ಇದೀಗ ಮತ್ತೊಮ್ಮೆ ರಾಜ್ಯದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅಧಿಕಾರ ಸ್ವೀಕಾರ ಮಾಡಿದ್ದಾರೆ. ಆ ಮೂಲಕ ಜಿಲ್ಲೆಯ ಮತ್ತಷ್ಟು ಯೋಜನೆಗಳು ಸಾಕಾರಗೊಳ್ಳುವ ಭರವಸೆ, ವಿಶ್ವಾಸ ಜಿಲ್ಲೆಯ ಜನರಲ್ಲಿ ಮೂಡತೊಡಗಿದೆ.

ಜಿಲ್ಲೆಯ ಎಲ್ಲಾ ಕೆರೆಗಳಿಗೂ ನೀರು, ಜಿಲ್ಲಾ ಕೇಂದ್ರಕ್ಕೆ ಕಾವೇರಿ ಕುಡಿಯುವ ನೀರಿನ ಯೋಜನೆ ಅನುಷ್ಠಾನ, ಕಾನೂನು ಕಾಲೇಜು ಆರಂಭಕ್ಕೆ ಹಸಿರು ನಿಶಾನೆ, ಕೆಎಸ್‌ಆರ್‌ಟಿಸಿ ನೂತನ ಬಸ್ ನಿಲ್ದಾಣ, ಪ್ರತ್ಯೇಕ ಜಿಲ್ಲಾ ಸಹಕಾರಿ ಬ್ಯಾಂಕ್ ಸೇರಿದಂತೆ ಇನ್ನೂ ಹಲವಾರು ಕಾರ್ಯಕ್ರಮಗಳಿಗೆ ಸಿದ್ದರಾಮಯ್ಯ ಅವರು ಹೇಗೆ ಸ್ಪಂದಿಸುತ್ತಾರೆ ಎಂಬುದು ಕಾದು ನೋಡಬೇಕಿದೆ.

> ಚಾಮರಾಜನಗರಕ್ಕೆ 276 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರು ಪೂರೈಸುವ ಯೋಜನೆ, ನಗರದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಒಳ ಚರಂಡಿ ಪೂರ್ಣಗೊಳಿಸುವುದು, ಜೋಡಿ ರಸ್ತೆ ಸಮಸ್ಯೆ ಬಗೆಹರಿಸುವುದು, ರಸ್ತೆಗಳ ಅಭಿವೃದ್ಧಿ ಹಾಗೂ ಒಳಚರಂಡಿ ನಿರ್ಮಾಣಕ್ಕೆ ಅನುದಾನ, ಹಳ್ಳಿಗಳಲ್ಲಿ ಮನೆಗಳ ವಿತರಣೆ ಹಾಗೂ ನಗರದಲ್ಲಿ ನಿವೇಶನ ಹಂಚಿಕೆ ಮಾಡುವುದು ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳ ಉದ್ದೇಶ ಹೊಂದಿದ್ದೇನೆ. ಇದಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಸ್ಪಂದಿಸುವ ವಿಶ್ವಾಸವಿದೆ.
> –ಸಿ. ಪುಟ್ಟರಂಗಶೆಟ್ಟಿ, ಶಾಸಕರು, ಚಾಮರಾಜನಗರ.






> ಕೊಳ್ಳೇಗಾಲ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕು ಎಂಬ ದೂರದೃಷ್ಟಿಯ ಆಸೆ ಹೊಂದಿದ್ದೇನೆ. ಈ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ನನ್ನ ಕರ್ತವ್ಯವನ್ನು ನಿರ್ವಹಿಸುತ್ತೇನೆ. ಇದಕ್ಕೆ ಸರ್ಕಾರ ಸ್ಪಂದಿಸುವ ವಿಶ್ವಾಸವಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ಜಿಲ್ಲೆಗೆ ಈ ಬಾರಿಯೂ ಹೆಚ್ಚಿನ ಅನುದಾನ ನೀಡುವ ಮೂಲಕ ಅಭಿವೃದ್ಧಿಗೆ ಅವಕಾಶ ಕಲ್ಪಿಸಲಿದ್ದಾರೆ.
> –ಎ.ಆರ್. ಕೃಷ್ಣಮೂರ್ತಿ, ಶಾಸಕರು, ಕೊಳ್ಳೇಗಾಲ.

> ಗುಂಡ್ಲುಪೇಟೆ ಕ್ಷೇತ್ರದ ಮೂಲಸೌಲಭ್ಯ ಕಲ್ಪಿಸಲು ಶಕ್ತಿಮೀರಿ ಶ್ರಮಿಸುತ್ತೇನೆ. ಗುಂಡ್ಲುಪೇಟೆ ಪಟ್ಟಣಕ್ಕೆ ನೀರು ಪೂರೈಸುವ 168 ಕೋಟಿ ರೂ. ವೆಚ್ಚದ ಯೋಜನೆಗೆ ಮಂಜೂರಾತಿ ದೊರಕಿಲ್ಲ. ಇದಕ್ಕೆ ಮಂಜೂರಾತಿ ದೊರಕಿಸುವ ದೂರದೃಷ್ಟಿ ಹೊಂದಿದ್ದೇನೆ. ಕ್ಷೇತ್ರದಲ್ಲಿ ಗಾರ್ಮೆಂಟ್ಸ್ ಉದ್ಯಮ ತಂದು ಉದ್ಯೋಗ ಸೃಷ್ಟಿಸಲು ಕಾರ್ಯಪ್ರವೃತ್ತನಾಗಿದ್ದೇನೆ.
> –ಎಚ್.ಎಂ. ಗಣೇಶಪ್ರಸಾದ್, ಶಾಸಕರು, ಗುಂಡ್ಲುಪೇಟೆ.



ಇಂದು ಪಡಗೂರು ಅಡವಿ ಮಠದಲ್ಲಿ ಗುರುವಂದನೆ

ಗುಂಡ್ಲುಪೇಟೆ, ಮೇ 24– ಸಾಮಾಜಿಕ ಕಳಕಳಿಯಿಂದ ಕಾರ್ಯನಿರ್ವಹಿಸುತ್ತಿರುವ ತಾಲೂಕಿನ ಪ್ರಸಿದ್ಧ ಪಡಗೂರು ಅಡವಿ ಮಠಾಧ್ಯಕ್ಷರಾದ ಶ್ರೀ ಶಿವಲಿಂಗೇಂದ್ರಸ್ವಾಮಿಗಳಿಗೆ 60ನೇ ವರ್ಷ ತುಂಬಿದ ಅಂಗವಾಗಿ ಮೇ 25ರಂದು ಭಕ್ತ ವೃಂದದಿಂದ ಪಡಗೂರು ಅಡವಿಮಠದಲ್ಲಿ ಗುರುವಂದನೆ ಕಾರ್ಯಕ್ರಮ ಆಯೋಜಿಸಲಾಗಿದೆ.



ತಾಲೂಕಿನಲ್ಲಿ ಪ್ರತಿಷ್ಠಿತ ಸ್ಥಾನ ಹೊಂದಿರುವ ಶ್ರೀಮಠವು 500 ವರ್ಷಗಳ ಇತಿಹಾಸ ಹೊಂದಿದ್ದು, ಧಾರ್ಮಿಕ, ಸಾಮಾಜಿಕ, ಆಧ್ಯಾತ್ಮಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ತನ್ನದೇ ಆದ ಛಾಪು ಮೂಡಿಸಿದೆ. ಸದ್ಯ ಶ್ರೀಮಠದ ಅಧ್ಯಕ್ಷರಾದ ಶಿವಲಿಂಗೇಂದ್ರಸ್ವಾಮೀಜಿಯವರು 1963 ಏ.23 ರಂದು ಮೂಡಗೂರಿನ ದಿ. ಎಂ.ಎಸ್.ಚನ್ನಬಸವ ದೇವರು ಹಾಗೂ ಶಿವನಂಜಮ್ಮನವರ ಪುತ್ರನಾಗಿ ಜನಿಸಿದ್ದರು. ಪೂರ್ವಾಶ್ರಮದಲ್ಲಿ ಎಂ.ಸಿ.ಮಹೇಶ್ ಎಂಬ ಹೆಸರಿನಿಂದ ಕರೆಯಲಾಗುತ್ತಿದ್ದ ಶ್ರೀಗಳು ಮಾನಸ ಗಂಗೋತ್ರಿಯಲ್ಲಿ ಸಂಸ್ಕೃತ ವಿಷಯದಲ್ಲಿ ಚಿನ್ನದ ಪದಕ ಪಡೆದಿದ್ದರು.

1987ರಲ್ಲಿ ಮಠದ ಮದ್ದಾನೇಶ್ವರರ ಗದ್ದುಗೆಯ ಕಳಸಾರೋಹಣ ಕಾರ್ಯಕ್ರಮದ ಜತೆಗೆ ಉತ್ತರಾಧಿಕಾರಿಯಾಗಿ ಪಟ್ಟಾಭಿಷೇಕ ಮಾಡಲಾಗಿತ್ತು. ಈ ಕಾರ್ಯಕ್ರಮಕ್ಕೆ ಸಿದ್ದಗಂಗೆಯ ಶಿವಕುಮಾರ ಸ್ವಾಮಿಗಳು, ಸುತ್ತೂರು ಮಠದ ರಾಜೇಂದ್ರಸ್ವಾಮಿಗಳು ಭಾಗವಹಿಸಿದ್ದರು. 1995 ರಲ್ಲಿ ಮಠದ ಹಿರಿಯ ಶ್ರೀಗಳಾದ ಶಿವಕುಮಾರಸ್ವಾಮಿಗಳು ಲಿಂಗೈಕ್ಯರಾದ ನಂತರ ಸ್ವತಂತ್ರ ಹಾಗೂ ಸಮರ್ಥವಾಗಿ ಮಠವನ್ನು ಮುನ್ನಡೆಸುತ್ತಾ ಬಂದಿದ್ದಾರೆ. ಶ್ರೀ ಮದ್ದಾನೇಶ್ವರ ವಿದ್ಯಾಸಂಸ್ಥೆಯನ್ನು ಸ್ಥಾಪಿಸಿ ಅದರಡಿಯಲ್ಲಿ ಶಾಲೆಗಳನ್ನು ನಡೆಸುತ್ತಿದ್ದಾರೆ. ಗುರುವಾರ ಪಡಗೂರು ಮಠದ ಆವರಣದಲ್ಲಿ ಬೆಳಗ್ಗೆ 10 ಗಂಟೆಗೆ ಆಯೋಜಿಸಿರುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮೈಸೂರು ರಾಜವಂಶಸ್ಥ ರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ವಹಿಸಲಿದ್ದಾರೆ. ಸುತ್ತೂರು ಮಠದ ಶಿವರಾತ್ರಿ ದೇಶೀಕೇಂದ್ರ ಶ್ರೀಗಳು, ಸಿದ್ದಗಂಗಾ ಮಠದ ಸಿದ್ದಲಿಂಗ ಮಹಾ ಸ್ವಾಮಿಗಳು ಸೇರಿದಂತೆ ಹಲವಾರು ಮಠಾಧೀಶರು ಭಾಗವಹಿಸಲಿದ್ದಾರೆ.

ಇಂದು ಸಿಮ್ಸ್ ಡೀನ್ ವಿರುದ್ಧ ಪ್ರತಿಭಟನೆಗೆ ಕಾಂಗ್ರೆಸ್ ಬೆಂಬಲ



ಚಾಮರಾಜನಗರ, ಮೇ.24– ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರ ವಿರುದ್ಧ ನಿಂದನೆ ಆರೋಪ ಹೊತ್ತಿರುವ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ನಿರ್ದೇಶಕ ಡಾ. ಜಿ.ಎಂ. ಸಂಜೀವ್ ವಿರುದ್ಧ ಅಂಬೇಡ್ಕರ್‌ರವರ ಅನುಯಾಯಿಗಳ ಮಹಾ ಒಕ್ಕೂಟವು ಮೇ 25ರಂದು ಹಮ್ಮಿಕೊಂಡಿರುವ ಪ್ರತಿಭಟನೆಗೆ ಜಿಲ್ಲಾ ಕಾಂಗ್ರೆಸ್ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಪಕ್ಷದ ಎಸ್‌ಸಿ ಘಟಕದ ಜಿಲ್ಲಾಧ್ಯಕ್ಷ ನಲ್ಲೂರು ಸೋಮೇಶ್ವರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಡಾ. ಸಂಜೀವ್ ವಿರುದ್ಧ ನಡೆಯುವ ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್, ಎಸ್‌ಸಿ ಘಟಕ, ವಿದ್ಯಾರ್ಥಿ ಘಟಕದ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಭಾಗವಹಿಸಿ ಬೆಂಬಲ ಸೂಚಿಸಲಾಗುವುದು ಎಂದರು.

ಡೀನ್ ಡಾ.ಸಂಜೀವ್ ಅವರು ಮಾಡಿರುವ ಆರೋಪಗಳ ಬಗ್ಗೆ ಈಗಾಗಲೇ ಶಾಸಕ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ ಅವರ ಗಮನಕ್ಕೆ ತರಲಾಗಿದ್ದು, ಡೀನ್ ಸಂಜೀವ್ ಅವರನ್ನು ಸೇವೆಯಿಂದ ವಜಾಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಆರ್. ಮಹದೇವು, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಎಂ. ಶಿವಮೂರ್ತಿ, ತಾಪಂ ಮಾಜಿ ಸದಸ್ಯ ಪಿ. ಕುಮಾರ್‌ನಾಯಕ್, ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷ ಮೋಹನ್ ಕುಮಾರ್, ಮುಖಂಡರಾದ ಸಿ.ಕೆ. ರವಿಕುಮಾರ್, ರಾಮಸಮುದ್ರ ನಾಗರಾಜು ಹಾಜರಿದ್ದರು.

ಪ್ರತಿಭಟನೆಗೆ ಛಲವಾದಿ ಮಹಾಸಭಾ ಬೆಂಬಲ

ಚಾಮರಾಜನಗರ, ಮೇ 24– ಸಿಮ್ಸ್ ಡೀನ್ ವಿರುದ್ಧ ದಲಿತಪರ ಸಂಘಟನೆಗಳು ಮೇ 25ರಂದು ನಗರದಲ್ಲಿ ಹಮ್ಮಿಕೊಂಡಿರುವ ಬೃಹತ್ ಪ್ರತಿಭಟನೆಗೆ ಛಲವಾದಿ ಮಹಾಸಭಾ ಜಿಲ್ಲಾ ಘಟಕ ಬೆಂಬಲ ನೀಡಲಿದೆ ಎಂದು ಮಹಾಸಭಾದ ಜಿಲ್ಲಾಧ್ಯಕ್ಷ ಕೆ.ಆರ್. ನಾರಾಯಣ್ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ವಿರುದ್ಧ ಅವಾಚ್ಯ ಪದಗಳಿಂದ ನಿಂದಿಸಿರುವ ಡೀನ್ ಡಾ.ಸಂಜೀವ್ ವಿರುದ್ಧ ಕ್ರಮಕೈಗೊಳ್ಳಬೇಕು. ಡೀನ್ ಹೇಳಿಕೆಯನ್ನು ಮಹಾಸಭಾ ಖಂಡಿಸುತ್ತದೆ ಎಂದು ತಿಳಿಸಿದರು. ನರ್ಸಿಂಗ್ ಬಾಲಕಿಯರ ಆಯ್ಕೆಯಲ್ಲಿ ದಲಿತ ಹೆಣ್ಣು ಮಕ್ಕಳಿಗೆ ಕಿರುಕುಳ, ಆಸ್ಪತ್ರೆಯಲ್ಲಿ ಅಂಬೇಡ್ಕರ್ ಭಾವಚಿತ್ರವಿಡುವ ಸಂದರ್ಭದಲ್ಲಿ ಪೊಲೀಸರನ್ನು ಕರೆಸಿ ದೌರ್ಜನ್ಯ ಮಾಡಿದ್ದಾರೆ. ಅಲ್ಲದೇ ಆಸ್ಪತ್ರೆಯ ಮುಂಭಾಗ ಆಟೋ ನಿಲ್ದಾಣ ಚಾಲಕರಿಗೆ ಅಂಬೇಡ್ಕರ್ ನಾಮಫಲಕ ಅಳವಡಿಸುವ ಬಗ್ಗೆ ದಬ್ಬಾಳಿಕೆ ನಡೆಸಿದ್ದಾರೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಎಲ್. ಮಹದೇವಯ್ಯ, ಕುಮಾರ್, ಪರಮೇಶ್, ಗುರುಸ್ವಾಮಿ, ಗಣೇಶ್ ಇದ್ದರು.

ಮೇ 30, ಗೋಲಕ ಹಣ ಎಣಿಕೆ

ಚಾಮರಾಜನಗರ, ಮೇ 24– ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದ ಗೋಲಕಗಳ ಎಣಿಕೆ ಕಾರ್ಯವನ್ನು ಬೆಟ್ಟದ ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಸಂಕೀರ್ಣ ಕಟ್ಟಡದ ಮೊದಲ ಮಹಡಿಯ ವಿಶ್ರಾಂತಿ ಗೃಹದಲ್ಲಿ ಮೇ 30ರಂದು ಬೆಳಿಗ್ಗೆ ಸೂಕ್ತ ಪೊಲೀಸ್ ಬಂದೋಬಸ್ತ್‌ನೊಂದಿಗೆ ನಡೆಸಲಾಗುವುದು ಎಂದು ಮಲೆ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಂಕೆ ಚರ್ಮ ಸಾಗಣೆ, ಇಬ್ಬರು ಆರೋಪಿಗಳ ಬಂಧನ, ಬೈಕ್ ವಶ



ಕೊಳ್ಳೇಗಾಲ, ಮೇ 24– ಜಿಂಕೆ ಚರ್ಮ ಸಾಗಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಕೊಳ್ಳೇಗಾಲ ಸಿಐಡಿ ಅರಣ್ಯ ಸಂಚಾರಿ ದಳದ ಪೊಲೀಸರು ಬಂಧಿಸಿದ್ದಾರೆ.

ಹನೂರು ತಾಲೂಕಿನ ಕೂಡ್ಲೂರು ಗ್ರಾಮದ ರಾಘವೇಂದ್ರ(33) ಹಾಗೂ ಮಣಿಕಂಠ(25) ಬಂಧಿತ ಆರೋಪಿಗಳು. ಆರೋಪಿಗಳು ಕೂಡ್ಲೂರಿನಿಂದ ಬಸ್‌ನಲ್ಲಿ ಬೇಟೆಯಾಡಿದ್ದ ಜಿಂಕೆ ಚರ್ಮವನ್ನು ತರುತ್ತಿರುವ ವಿಚಾರ ಅರಣ್ಯ ಸಂಚಾರಿ ದಳದ ಪೊಲೀಸರಿಗೆ ದೊರೆತ ಹಿನ್ನೆಲೆಯಲ್ಲಿ ಹನೂರು ತಾಲೂಕಿನ ಆರ್.ಎಸ್. ದೊಡ್ಡಿ ಪೆಟ್ರೋಲ್ ಬಂಕ್ ಬಳಿ ಆರೋಪಿಗಳನ್ನು ಬಂಧಿಸಿ ಬಂಧಿತರಿಂದ 2 ಮೊಬೈಲ್, ಜಿಂಕೆ ಚರ್ಮ ಇನ್ನಿತರೆ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿ ಜೂನ್ 6ರವರೆವಿಗೆ ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದೆ.

ಮೈಸೂರು ಮಿತ್ರ

ಒಂದನೇ ಪುಟದಿಂದ

ಬರೋಬ್ಬರಿ 60 ಮಂದಿ ಪೈಪೋಟಿ

ಚರ್ಚಿಸಿ ಅಂತಿಮಗೊಳಿಸಲಿದ್ದಾರೆ. ವಾರಾಂತ್ಯದೊಳಗೆ ಮಂತ್ರಿ ಮಂಡಲ ವಿಸ್ತರಣೆ ಪೂರ್ಣಗೊಳಿಸಿ ಸೋಮವಾರದಿಂದಲೇ ತ್ವರಿತ ರೀತಿ ಆಡಳಿತ ನಡೆಸಲು ಮುಖ್ಯಮಂತ್ರಿ ತೀರ್ಮಾನಿಸಿದ್ದಾರೆ. ಐದಕ್ಕಿಂತ ಹೆಚ್ಚು ಬಾರಿ ವಿಧಾನಸಭೆ ಪ್ರವೇಶ ಮಾಡಿರುವ ಶಾಸಕರ ಸಂಖ್ಯೆಯೇ ಪಕ್ಷದಲ್ಲಿ 30ಕ್ಕೂ ಹೆಚ್ಚು ಮಂದಿ ಇದ್ದಾರೆ. ಇಂಥವರಲ್ಲಿ ಕೆಲವರನ್ನು ಮಂತ್ರಿ ಮಂಡಲಕ್ಕೆ ಸೇರಿಸಿಕೊಳ್ಳಬೇಕು. ಇದರ ನಡುವೆ ಮೂಲ ಹಾಗೂ ವಲಸಿಗರು ಎಂಬ ಜಿಜ್ಞಾಸೆಯೂ ನಡೆಯುತ್ತಿದೆ. ವಲಸಿಗರೇ ಮಂತ್ರಿಗಳಾಗಲು ಹೆಚ್ಚು ಒತ್ತಡ ಮತ್ತು ಪ್ರಭಾವವನ್ನು ಮುಖ್ಯಮಂತ್ರಿಗಳ ಮೇಲೆ ಬೀರುತ್ತಿದ್ದಾರೆ.

ಇದು ಇನ್ನೊಂದು ಬಣಕ್ಕೆ ಸಹಿಸಲಾಗುತ್ತಿಲ್ಲ. ಇಂತಹ ಜಂಜಾಟದ ನಡುವೆ ಖಾಲಿ ಇರುವ 24ರಲ್ಲಿ ಸದ್ಯಕ್ಕೆ 20 ಸ್ಥಾನ ಭರ್ತಿ ಮಾಡಿ, ಉಳಿದ ನಾಲ್ಕು ಸ್ಥಾನವನ್ನು ಹಾಗೆಯೇ ಉಳಿಸಿಕೊಳ್ಳಲು ಮುಖ್ಯಮಂತ್ರಿ ನಿರ್ಧರಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರ್ನಾಟಕದವರೇ ಆಗಿರುವುದರಿಂದ ಅವರಿಗೆ ರಾಜ್ಯದ ಪ್ರತಿ ಮೂಲೆ ಹಾಗೂ ಜನರ ನಾಡಿಮಿಡಿತ ರಾಜಕೀಯ ವಿದ್ಯಮಾನಗಳ ಅರಿವಿದೆ. ಅವರು ಕೂಡ ಸಂಪುಟ ಹೇಗಿರಬೇಕು ಎಂಬ ಸಲಹೆ–ಸೂಚನೆ ನೀಡಿ ಸಂಪುಟ ವಿಸ್ತರಣೆಗೆ ಅನುಮತಿ ನೀಡಲಿದ್ದಾರೆ.

ಶೀಘ್ರದಲ್ಲೇ ಸಚಿವರಿಗೆ ಖಾತೆ ಹಂಚಿಕೆ

ಖಾತೆ ಹಂಚಿಕೆ ನಂತರ ಅವರನ್ನು ಮುಖ್ಯಮಂತ್ರಿಗಳು ಪರಿಚಯಿಸಿದ್ದರೆ ಸೂಕ್ತವಾಗಿತ್ತು ಎಂದರು. ಏಕೆ ಇನ್ನೂ ಖಾತೆ ಹಂಚಿಕೆಯಾಗಿಲ್ಲ. ಆದಷ್ಟು ಬೇಗನೆ ಖಾತೆ ಹಂಚಿಕೆ ಮಾಡಬೇಕು. ನನ್ನ ಅಭಿಪ್ರಾಯದಲ್ಲಿ ಅದನ್ನು ಬೇಗನೆ ಮಾಡಿದರೆ ಒಳ್ಳೆಯದು ಎಂದು ಅವರು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಶೀಘ್ರದಲ್ಲಿಯೇ ಸಚಿವರಿಗೆ ಖಾತೆ ಹಂಚಿಕೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಬಿಜೆಪಿ ನಾಯಕ ಬಿಎಸ್ ಯಡಿಯೂರಪ್ಪ ಈ ಹಿಂದೆ ಸಚಿವ ಸಂಪುಟದ ಏಕಾಂಗಿ ಸದಸ್ಯರಾಗಿ ಕೆಲಕಾಲ ಸೇವೆ ಸಲ್ಲಿಸಿದ್ದರು ಎಂಬುದನ್ನು ನೆನಪಿಸಿದರು.

ನಾವು ಅವರಿಗೆ ಆದಷ್ಟು ಬೇಗ ಜವಾಬ್ದಾರಿಯನ್ನು ನೀಡುತ್ತೇವೆ. ಬಿಎಸ್ ಯಡಿಯೂರಪ್ಪ ಅವರು ಎಷ್ಟು ದಿನ ಮುಖ್ಯಮಂತ್ರಿಯಾಗಿ ಸಂಪುಟದಲ್ಲಿ ಇದ್ದರು. ಮಾಜಿ ಮುಖ್ಯಮಂತ್ರಿ (ಬೊಮ್ಮಾಯಿ), ನಿಮಗೆ ಯಾವುದೇ ಅನುಮಾನ ಬೇಡ, ಅವರಿಗೆ (ಸಚಿವರಿಗೆ) ಆದಷ್ಟು ಬೇಗ ಜವಾಬ್ದಾರಿಯನ್ನು ನೀಡಲಾಗುತ್ತದೆ ಎಂದು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಬೊಮ್ಮಾಯಿ, ಯಡಿಯೂರಪ್ಪ ಆಗ ಒಬ್ಬರೇ ಪ್ರಮಾಣ ವಚನ ಸ್ವೀಕರಿಸಿದ್ದರು. ಹಾಗಾಗಿ ಏಕಾಂಗಿಯಾಗಿದ್ದರು. ಆದರೆ, ಈ ವೇಳೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯವರ ಜೊತೆಗೆ ಸಚಿವರು ಪ್ರಮಾಣ ವಚನ ಸ್ವೀಕರಿಸಿದ್ದಾರೆ ಎಂದರು. ನೀವೇ ಅವರನ್ನು ಸಚಿವರನ್ನಾಗಿ ಮಾಡಿದ್ದೀರಿ. ಆದರೆ, ಖಾತೆ ಹಂಚಿಕೆ ಮಾಡಿಲ್ಲ. ಹೀಗಾದರೆ, ಜನರು ಏನೆಂದು ತಿಳಿದುಕೊಳ್ಳುತ್ತಾರೆ ಎಂದು ಬೊಮ್ಮಾಯಿ ಹೇಳಿದರು. ಇದಕ್ಕೆ ಉತ್ತರಿಸಿ ಸಿಎಂ, ಯಾರೂ ಏನನ್ನೂ ಯೋಚಿಸುವುದಿಲ್ಲ, ವಿರೋಧ ಪಕ್ಷದವರು ಈ ಬಗ್ಗೆ ಯೋಚಿಸದಿದ್ದರೆ ಸಾಕು ಎಂದು ಕಿಚಾಯಿಸಿದರು. ನಾನು ಸಚಿವರ ಪರವಾಗಿ ಮಾತನಾಡುತ್ತಿದ್ದೇನೆ ಎಂದ ಬೊಮ್ಮಾಯಿ ಅವರಿಗೆ ಉತ್ತರಿಸಿದ ಸಿದ್ದರಾಮಯ್ಯ, ನಿಮ್ಮ ಸಲಹೆಗೆ ಧನ್ಯವಾದಗಳು ಎಂದರು.

ಸಿದ್ದರಾಮಯ್ಯ ಮತ್ತು ಶಿವಕುಮಾರ್ ಇಂದು ಪ್ರತ್ಯೇಕವಾಗಿ ದೆಹಲಿಗೆ ತೆರಳುತ್ತಿದ್ದು, ಅಲ್ಲಿ ಅವರು ಕಾಂಗ್ರೆಸ್ ಹೈಕಮಾಂಡ್ ಅನ್ನು ಭೇಟಿ ಮಾಡಿ ಸಂಪುಟ ವಿಸ್ತರಣೆ ಮತ್ತು ಹಾಲಿ ಸಚಿವರಿಗೆ ಖಾತೆ ಹಂಚಿಕೆ ಕುರಿತು ಚರ್ಚಿಸುವ ನಿರೀಕ್ಷೆಯಿದೆ.

ಯು.ಟಿ.ಖಾದರ್ ಅವಿರೋಧ ಆಯ್ಕೆ

ಬಳಿಕ ಸಭಾಧ್ಯಕ್ಷರು ಮಾತನಾಡಿ, ಮುಖ್ಯಮಂತ್ರಿ ಸೂಚಿಸಿರುವ ಹಾಗೂ ಉಪಮುಖ್ಯಮಂತ್ರಿ ಅನುಮೋದಿಸಿರುವ ಚುನಾವಣೆ ಪ್ರಸ್ತಾವವನ್ನು ಮತಕ್ಕೆ ಹಾಕುವುದಾಗಿ ಹೇಳಿದರು. ಆಗ ಸದನದಲ್ಲಿ ಧ್ವನಿ ಮತದ ಮೂಲಕ ಸರ್ವಾನುಮತದಿಂದ ಖಾದರ್ ಸಭಾಧ್ಯಕ್ಷರಾಗಿ ಆಯ್ಕೆಗೊಂಡರು. ಈ ಸಂದರ್ಭದಲ್ಲಿ ಸದಸ್ಯರು ಮೇಜು ಕುಟ್ಟಿ ನೂತನ ಸಭಾಧ್ಯಕ್ಷರನ್ನು ಅಭಿನಂದಿಸಿದರು. ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು, ಸರ್ವಾನುಮತದಿಂದ ಆಯ್ಕೆಯಾದ ಖಾದರ್ ಅವರನ್ನು ಸಂಪ್ರದಾಯದಂತೆ ಸಭಾಧ್ಯಕ್ಷರ ಪೀಠದವರೆಗೂ ಕರೆತಂದರು. ಆಗ ದೇಶಪಾಂಡೆ ಅವರು ನೂತನ ಸಭಾಧ್ಯಕ್ಷರಿಗೆ ಪೀಠವನ್ನು ಬಿಟ್ಟುಕೊಟ್ಟು ನಿರ್ಗಮಿಸಿದರು.

ಸಭಾಧ್ಯಕ್ಷರಾದ ಮೇಲೆ ಮಾತನಾಡಿದ ಖಾದರ್, ಅವಿರೋಧವಾಗಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಕ್ಕೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ ಸದನದ ಎಲ್ಲರಿಗೂ ಅಭಿನಂದನೆಗಳು. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದೇಶದಲ್ಲೇ ಮೊದಲ ಬಾರಿಗೆ ಅನುಷ್ಠಾನ ಮಾಡಿದವರು ಮೈಸೂರು ಮಹಾರಾಜರು. ನನಗೆ ಈ ಸ್ಥಾನ ಸಿಕ್ಕಿರುವುದು ನನ್ನ ಸೌಭಾಗ್ಯ. ಸದಸ್ಯರೆಲ್ಲರ ಸಹಕಾರದಿಂದ ಸದನದ ಘನತೆ ಎತ್ತಿ ಹಿಡಿಯುವ ಕೆಲಸ ಮಾಡುತ್ತೇನೆ. ಪಕ್ಷ ಬೇಧ ಮರೆತು ಎಲ್ಲಾ ಶಾಸಕರನ್ನು ಸಮಾನವಾಗಿ ಕಾಣಲಾಗುವುದು. ರಾಜ್ಯದ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಬಲಿಷ್ಠ ಕರ್ನಾಟಕ ನಿರ್ಮಾಣ ಮಾಡೋಣ ಎಂದರು.

ಮುಖ್ಯಮಂತ್ರಿ ಅಭಿನಂದನೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಕರ್ನಾಟಕ ವಿಧಾನಸಭೆಗೆ ಸಭಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ನಿಮ್ಮನ್ನು ಸದನದ ಎಲ್ಲ ಸದಸ್ಯರ ಪರವಾಗಿ ಹಾಗೂ ವೈಯಕ್ತಿಕವಾಗಿ ಅಭಿನಂದಿಸುವುದಾಗಿ ಹೇಳಿದರು.

ನಿಮ್ಮ ತಂದೆಯವರಾದ ಯು.ಟಿ.ಫರೀದ್ ಅವರು ಶಾಸಕರಾಗಿದ್ದರು. ನೀವು ಕೂಡ ಉಲ್ಲಾಳ ವಿಧಾನಸಭಾ ಕ್ಷೇತ್ರದಿಂದ 5 ಬಾರಿ ಆಯ್ಕೆಯಾಗಿದ್ದು, ಅತ್ಯಂತ ಉತ್ಸಾಹಿ, ಸಕ್ರಿಯ ರಾಜಕಾರಣಿ. ಶಾಸಕರಾಗಿ, ಸಚಿವರಾಗಿ ಕೆಲಸ ಮಾಡಿದ್ದೀರಿ. ಅತೀ ಹೆಚ್ಚು ಪ್ರಶ್ನೆ ಕೇಳಿ ಸದನವೀರ ಪ್ರಶಸ್ತಿಯನ್ನು ಗಳಿಸಿದ್ದೀರಿ. ಮಾದರಿ ಶಾಸಕರಾಗಿದ್ದೀರಿ. ಕೊಟ್ಟ ಜವಾಬ್ದಾರಿಯನ್ನು ಪರಿಣಾಮಕಾರಿಯಾಗಿ ನಿಭಾಯಿಸಿದ್ದೀರಿ ಎಂದು ನೂತನ ಸಭಾಧ್ಯಕ್ಷರನ್ನು ಅಭಿನಂದಿಸಿದರು. ಸಭಾಧ್ಯಕ್ಷರಾದವರು ಪಕ್ಷಾತೀತವಾಗಿ ಕೆಲಸ ಮಾಡಬೇಕೆಂದು ಎಲ್ಲರೂ ಬಯಸುತ್ತಾರೆ. ರಾಜ್ಯದ ಜ್ವಲಂತ ಸಮಸ್ಯೆಗಳು ಚರ್ಚೆಯಾಗಬೇಕು. 7 ಕೋಟಿ ಕನ್ನಡಿಗರ ಸಮಸ್ಯೆ ಚರ್ಚೆಯಾಗಬೇಕು. ರಾಜ್ಯದ ಹಿತ, ಅಭಿವೃದ್ಧಿ ನಮಗೆ ಮುಖ್ಯ ಎಂದು ಹೇಳಿದರು.

ನಿಮ್ಮ ತಕ್ಕಡಿ ಸಮವಾಗಿರಲಿ: ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಭಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿ ಕರ್ನಾಟಕದ ವಿಧಾನ ಮಂಡಲ ತನ್ನದೇ ಆದ ಘನತೆ ಹೊಂದಿದೆ. ಇಂತಹ ಮಹತ್ವದ ಸದನದ ಸಭಾಧ್ಯಕ್ಷರಾಗಿ ನೀವು ಆಯ್ಕೆಯಾಗಿರುವುದಕ್ಕೆ ನಿಮಗೆ ಅಭಿನಂದನೆ ಸಲ್ಲಿಸುತ್ತೇನೆ. ನಿಮಗೆ ಇಪ್ಪತ್ತು ವರ್ಷದ ಅನುಭವ ಇದೆ. ನೀವು ಶಾಸಕರಾಗಿ, ಸಚಿವರಾಗಿ ಕೆಲಸ ಮಾಡುವಾಗ ಯಾವತ್ತೂ ಸಂಯಮ ಕಳೆದುಕೊಳ್ಳದೆ ಕೆಲಸ ಮಾಡಿದ್ದೀರಿ ಎಂದರು. ವಿರೋಧ ಪಕ್ಷದ ಉಪ ನಾಯಕರಾಗಿಯೂ ಸಮರ್ಥವಾಗಿ ಕೆಲಸ ಮಾಡಿದ್ದೀರಿ. ಈ ಹಿಂದೆ ಈ ಹುದ್ದೆ ಅಲಂಕರಿಸಿದವರು ಈ ಹುದ್ದೆಯ ಗೌರವ ಹೆಚ್ಚಿಸಿದ್ದಾರೆ. ನೀವು ಕೊಡುವ ತೀರ್ಪು ಇಡೀ ವ್ಯವಸ್ಥೆಯ ಮೇಲೆ ಪರಿಣಾಮ ಬೀರಲಿದೆ. ನಿಮ್ಮ ತಕ್ಕಡಿ ಸಮವಾಗಿರಬೇಕು. ಸಂವಿಧಾನದಲ್ಲಿ ವಿಶೇಷ ಸ್ಥಾನ ಸಭಾಪತಿಗಳಿಗೆ ಇದೆ. ಸರ್ಕಾರದ ಅಳಿವು ಉಳಿವಿನ ತೀರ್ಮಾನ ಆಗಿದೆ. ಕೆಲವು ತೀರ್ಪುಗಳು ಸುಪ್ರೀಂಕೋರ್ಟ್ ಮೆಟ್ಟಿಲು ಹತ್ತಿದ್ದು ಇದೆ. ತಾವು ನೀಡುವ ತೀರ್ಪು ಲ್ಯಾಂಡ್ ಮಾರ್ಕ್ ಆಗುತ್ತದೆ. ನೀವು ನಿಷ್ಪಕ್ಷಪಾತವಾಗಿ ಕೆಲಸ ಮಾಡಿ. ಪ್ರತಿಪಕ್ಷದಲ್ಲಿ ನಿಮ್ಮ ಸ್ನೇಹಿತರು ಹೆಚ್ಚಿದ್ದಾರೆ. ಆಡಳಿತ ಪಕ್ಷದಲ್ಲಿ ನಿಮ್ಮ ನಿಕಟ ಪೂರ್ವ ಪಕ್ಷದ ಆತ್ಮೀಯರು ಇದ್ದಾರೆ. ಇಬ್ಬರನ್ನೂ ಸಮನಾಗಿ ನೋಡಿ ಎಂದು ಸಲಹೆ ನೀಡಿದರು.

ಇತಿಹಾಸ ಸೇರಿದ್ದೀರಿ: ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಕರ್ನಾಟಕ ರಾಜ್ಯದ ವಿಧಾನಸಭೆಯ ಇತಿಹಾಸಕ್ಕೆ ನೀವು ಸೇರಿದ್ದೀರಿ. ನಾನು ನಿಮ್ಮ ತಂದೆ ಜತೆ ಶಾಸಕನಾಗಿ ಕೆಲಸ ಮಾಡಿದ್ದೆ. ನಿಮ್ಮನ್ನು ಸೇವಾದಳದ ಕಾರ್ಯಕರ್ತನಾಗಿ, ವಿದ್ಯಾರ್ಥಿ ಘಟಕದ ಕಾರ್ಯಕರ್ತನಾಗಿ, ಶಾಸಕನಾಗಿ, ಮಂತ್ರಿಯಾಗಿ ನೋಡಿದ್ದೇನೆ. ಇಂದು ನಿಮ್ಮನ್ನು ಸ್ಪೀಕರ್ ಸ್ಥಾನದಲ್ಲಿ ನೋಡುತ್ತಿದ್ದೇನೆ. ಆ ಸ್ಥಾನ ಬಹಳ ಶ್ರೇಷ್ಠವಾದುದು. ನಾವು ಮಾಜಿ ಸ್ಪೀಕರ್ ವೈಕುಂಠ ಬಾಳಿಗಾ ಅವರ ಇತಿಹಾಸ ಕೇಳಿದ್ದೇವೆ. ಎಸ್.ಎಂ.ಕೃಷ್ಣ, ಜಗದೀಶ್ ಶೆಟ್ಟರ್, ರಮೇಶ್ ಕುಮಾರ್ ಅವರು ಈ ಸ್ಥಾನದಲ್ಲಿ ಕೂತಿದ್ದರು. ಇವರೆಲ್ಲರೂ ಆಡಳಿತ ಅಥವಾ ವಿರೋಧ ಪಕ್ಷದ ಯುವ ಸದಸ್ಯರನ್ನು ಎಬ್ಬಿಸಿ ಮಾತನಾಡಲು ಹೇಳುತ್ತಿದ್ದರು. ನೀವು ಸ್ನೇಹಜೀವಿ, ಮಾನವೀಯತೆಯ ಪ್ರತೀಕ. ಕೋಮುಸೌಹಾರ್ದತೆಗೆ ಮತ್ತೊಂದು ಹೆಸರು ಯು.ಟಿ. ಖಾದರ್ ಫರೀದ್ ಎಂಬುದನ್ನು ನಾವು ಮರೆಯಲು ಸಾಧ್ಯವಿಲ್ಲ. ಎಲ್ಲಾ ಸಮಾಜದ ಜತೆ ಉತ್ತಮ ಬಾಂಧವ್ಯ ಇಟ್ಟುಕೊಂಡಿದ್ದೀರಿ. ಹಿಜಾಬ್, ಹಲಾಲ್ ಗಲಾಟೆ ಸಮಯದಲ್ಲೂ ನಿಮ್ಮ ನಿಲುವು ದೇಶದ ಹಿತಾಸಕ್ತಿ, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಂವಿಧಾನಕ್ಕೆ ಬದ್ಧವಾಗಿತ್ತು.

ನೀವು ಎಲ್ಲರನ್ನು ವಿಶಾಲ ಹೃದಯದಿಂದ ನೋಡಿದ್ದೀರಿ, ನೀವು ನ್ಯಾಯಾಧೀಶರ ಸ್ಥಾನದಲ್ಲಿ ಕೂತಿದ್ದು, ನ್ಯಾಯಪೀಠದಿಂದ ಅನ್ಯಾಯ ಆಗಬಾರದು ಎಂಬ ಮಾತಿನಂತೆ, ತಾವು ಈ ಸ್ಥಾನದಲ್ಲಿ ಕೂತು ಎಲ್ಲರಿಗೂ ನ್ಯಾಯ ಒದಗಿಸಿ. ನಮ್ಮ ತಪ್ಪುಗಳನ್ನು ನೀವು ಸರಿಪಡಿಸಿ. ಕೆಲವರು ಉತ್ಸಾಹದಿಂದ ಅಥವಾ ಆಕ್ರೋಶದಿಂದ ಎಲ್ಲೆ ಮೀರಿ ಮಾತನಾಡಲು ಮುಂದಾಗುತ್ತಾರೆ ಅಂತಹವರನ್ನು ನಿಯಂತ್ರಣ ಮಾಡಿ ಎಂಬ ಸಲಹೆ ಮಾಡಿದರು. ಪಕ್ಷ ಬೇಧ ಮರೆತು ಹಲವು ಸದಸ್ಯರು ಸಭಾಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದರು. ಬಳಿಕ ಸದನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಯಿತು.

ಜಯರಾಂ ಈಗ ಮುಖ್ಯಮಂತ್ರಿ ಕಾರ್ಯದರ್ಶಿ

ಸರ್ಕಾರದ ಹಲವು ಪ್ರಮುಖ ಹುದ್ದೆಗಳಲ್ಲಿ ದಕ್ಷತೆಯಿಂದ ಸೇವೆ ಸಲ್ಲಿಸಿ ಹೆಸರುವಾಸಿಯಾಗಿದ್ದಾರೆ. ಈ ಹಿಂದೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು, ಬೆಳಗಾವಿ ಜಿಲ್ಲಾಧಿಕಾರಿ, ಮೈಸೂರು ಅಭಿವೃದ್ಧಿ ಕಾರ್ಯದರ್ಶಿ, ಕಂದಾಯ ಇಲಾಖೆ ಕಾರ್ಯದರ್ಶಿಯಾಗಿಯೂ ಜಯರಾಂ ಅತ್ಯಂತ ದಕ್ಷತೆಯಿಂದ ಕಾರ್ಯ ನಿರ್ವಹಿಸಿದ್ದರು. ಇವರು ವಿಧಾನ ಪರಿಷತ್ ಮಾಜಿ ಸದಸ್ಯ ಸಂದೇಶ್ ನಾಗರಾಜ್ ಅವರ ಅಳಿಯ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿಶೇಷ ಕರ್ತವ್ಯಾಧಿಕಾರಿಯಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಕೆ.ಚಿರಂಜೀವಿ ಅವರನ್ನು ನೇಮಕ ಮಾಡಲಾಗಿದೆ.


ಸಾಧಾರಣ ಮಳೆಗೂ ನೀರಿನ ಹೊಂಡಗಳಾಗುತ್ತಿವೆ ಮೈಸೂರು ರಸ್ತೆಗಳು

- ಬೆಂಗಳೂರು–ಮೈಸೂರು ರಸ್ತೆ ಸೇರಿದಂತೆ ಹಲವೆಡೆ ನೀರು ನಿಂತು ವಾಹನ ಸವಾರರು, ಸಾರ್ವಜನಿಕರ ಪರದಾಟ
- ಅಧಿಕಾರಿಗಳ ನಿರ್ಲಕ್ಷ್ಯ, ಎಚ್ಚೆತ್ತುಕೊಳ್ಳುವುದು ಯಾವಾಗ?

ಮೈಸೂರು, ಮೇ 24(ಎಂಕೆ)– ಮಳೆ ಬಂದರೆ ಸಾಕು ನೀರಿನ ಹೊಂಡಗಳಾಗುತ್ತಿರುವ ಮೈಸೂರಿನ ಪ್ರಮುಖ ರಸ್ತೆಗಳು, ವಾಹನ ಸವಾರರು, ಪಾದಚಾರಿಗಳಿಗೆ ಕಂಟಕವಾಗಿ ಪರಿಣಮಿಸುತ್ತಿವೆ.

ಹೌದು! ಕೇವಲ ಅರ್ಧ ಗಂಟೆ ಸುರಿದ ಮಳೆ ನೀರಿನಿಂದ ಕೆರೆ, ಹೊಂಡಗಳಂತೆ ಕಾಣುವ ನಗರದ ಕೆಲ ರಸ್ತೆಗಳು ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ರಸ್ತೆ ಬದಿಯಲ್ಲಿರುವ ಚರಂಡಿಗಳಲ್ಲಿ ಸರಾಗವಾಗಿ ಮಳೆ ನೀರು ಹರಿಯದೆ, ರಸ್ತೆಯ ತುಂಬಾ 2–3 ಅಡಿಗಳಷ್ಟು





ನೀರು ನಿಂತು ಹೊಂಡವೇ ನಿರ್ಮಾಣವಾಗಿ ಸಾರ್ವಜನಿಕರು ಪರದಾಡುವಂತಾಗುತ್ತಿದೆ. ಅನೇಕ ಕಡೆ ಚರಂಡಿಯಲ್ಲಿ ಮಣ್ಣು ಹಾಗೂ ಕಸ ತುಂಬಿದೆ. ಕೆಲವೆಡೆ ಚರಂಡಿಗಳನ್ನು ಅವೈಜ್ಞಾನಿಕವಾಗಿ ನಿರ್ಮಿಸಿರುವುದರಿಂದ ನೀರು ಚರಂಡಿಯಲ್ಲಿ ಸರಾಗವಾಗಿ ಹರಿದು ಹೋಗಲು ಸಾಧ್ಯವಾಗದೇ ರಸ್ತೆಯಲ್ಲೇ ನಿಲ್ಲುವಂತಾಗಿದೆ. ಮತ್ತೆ ಕೆಲವೆಡೆ ವರ್ಷಗಳಿಂದ ಸ್ಲಾಬ್‌ಗಳನ್ನು ತೆಗೆದು ಚರಂಡಿ ಸ್ವಚ್ಛಗೊಳಿಸದಿರುವುದರಿಂದಲೂ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ.

ಬುಧವಾರ ಸುರಿದ ಸಾಧಾರಣ ಮಳೆಗೆ ಮೈಸೂರಿನ ಸಯ್ಯಾಜಿರಾವ್ ರಸ್ತೆ (ತಿಲಕ್ ನಗರದ ಸಿಗ್ನಲ್ ಬಳಿ), ನಜರ್‌ಬಾದ್ ಮುಖ್ಯ ರಸ್ತೆ(ಶಾಂತವೇರಿ ಗೋಪಾಲ್ ಗೌಡ ಆಸ್ಪತ್ರೆ ಹಾಗೂ ಸಾಯಿಬಾಬ ಗುಡಿ ಎದುರು), ಮೈಸೂರು–ಬೆಂಗಳೂರು ರಸ್ತೆ(ಎಲ್‌ಐಸಿ ಕಚೇರಿ ಸಮೀಪ), ಬನ್ನೂರು ಮುಖ್ಯ ರಸ್ತೆ(ಜಿಲ್ಲಾಧಿಕಾರಿಗಳ ಹೊಸ ಕಚೇರಿ ಎದುರು), ರಿಂಗ್ ರಸ್ತೆಯಲ್ಲಿರುವ ಫ್ಲೈಓವರ್‌ಗಳು, ನಗರದೊಳಗಿರುವ ಅಂಡರ್ ಬ್ರಿಡ್ಜ್‌ಗಳು ಹಾಗೂ ವಿವಿಧ ಬಡಾ ವಣೆಗಳ ಪ್ರಮುಖ ರಸ್ತೆಗಳಲ್ಲಿ ಎರಡ್ಮೂರು ಅಡಿಗಳಷ್ಟು ನೀರು ನಿಂತು ವಾಹನ ಸವಾರರು ಪರದಾಡುವಂತಾಗಿದೆ.

ಚರಂಡಿಗಳ ದುಸ್ಥಿತಿ: ಮಳೆ ನೀರು ಸರಾಗವಾಗಿ ಹರಿಯಲು ಇರುವ ಚರಂಡಿಗಳ ಸರಿಯಾದ ನಿರ್ವಹಣೆ ಇಲ್ಲದೆ ಆಗಾಗ ಅವಾಂತರ ಸೃಷ್ಟಿಯಾಗುತ್ತಿದೆ. ಅಲ್ಲದೆ ಚರಂಡಿಗಳಲ್ಲಿ ತುಂಬುವ ಕಸವನ್ನು ತೆರವುಗೊಳಿಸದಿರುವುದು, ರಸ್ತೆಯಲ್ಲಿ ಬಿದ್ದ ಮಳೆ ನೀರು ಚರಂಡಿ ಸೇರಲು ಸೂಕ್ತ ಜಾಗ ಮಾಡದಿರುವುದು, ಅಪೂರ್ಣ ಚರಂಡಿ ಕಾಮಗಾರಿ, ಮಳೆ ನೀರಿನ ಚರಂಡಿಗಳಿಗೆ ಒಳಚರಂಡಿ ನೀರು ಸೇರ್ಪಡೆ ಹಾಗೂ ಅವೈಜ್ಞಾನಿಕ ಚರಂಡಿ ಕಾಮಗಾರಿಯಿಂದಾಗಿಯೂ ರಸ್ತೆಗಳಲ್ಲಿ ನೀರು ನಿಲ್ಲುವಂತಾಗಿದೆ.

ಸಮತಟ್ಟಿಲ್ಲದ ರಸ್ತೆ: ಚರಂಡಿಗಳ ದುಸ್ಥಿತಿಯ ಜೊತೆಗೆ ರಸ್ತೆ ಕಾಮಗಾರಿ ವ್ಯವಸ್ಥಿತವಾಗಿ ನಡೆಯದಿರುವುದು ಕೂಡ ರಸ್ತೆ ಮಧ್ಯೆ ನೀರು ನಿಲ್ಲಲು ಕಾರಣವಾಗಿದೆ. ಸಮತಟ್ಟಾಗಿ ಇರಬೇಕಾದ ರಸ್ತೆಗಳು ಅಲ್ಲಲ್ಲಿ ತಗ್ಗಾಗಿವೆ. ನಜರ್‌ಬಾದ್ ಮುಖ್ಯರಸ್ತೆ (ಶಾಂತವೇರಿ ಗೋಪಾಲ್ ಗೌಡ ಆಸ್ಪತ್ರೆ ಹಾಗೂ ಸಾಯಿಬಾಬ ಗುಡಿ ಎದುರು) ಅರ್ಧ ನೀರಿನಿಂದ ಆವೃತ್ತವಾದರೆ, ಮೈಸೂರು–ಬೆಂಗಳೂರು ರಸ್ತೆಯಲ್ಲಿ ಶ್ರೀ ಮಲೈ ಮಹದೇಶ್ವರ ಸ್ವಾಮಿ ದೇವಸ್ಥಾನದ ಎದುರು ಇಡೀ ರಸ್ತೆ ಕೆರೆಯಂತಾಗುತ್ತದೆ. ಅವೈಜ್ಞಾನಿಕ ರಸ್ತೆ ನಿರ್ಮಾಣ ಮತ್ತು ಕಾಮಗಾರಿ ಕೂಡ ಇದಕ್ಕೆ ಕಾರಣ.

ಅಧಿಕಾರಿಗಳ ನಿರ್ಲಕ್ಷ್ಯ: ಮಳೆಗಾಲ ಆರಂಭಕ್ಕೂ ಮುನ್ನವೇ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಬೇಕಾದ ಸಂಬಂಧಪಟ್ಟ ಅಧಿಕಾರಿಗಳು ಜವಾಬ್ದಾರಿ ಇಲ್ಲದಂತೆ ವರ್ತಿಸುತ್ತಿದ್ದಾರೆ. ಇಂತಹ ಸಮಸ್ಯೆಗೂ ನಮಗೂ ಸಂಬಂಧವೇ ಇಲ್ಲವೇನೋ ಎಂಬಂತಿದ್ದಾರೆ ಎಂದು ಮೈಸೂರಿನ ಪ್ರಜ್ಞಾವಂತ ನಾಗರಿಕರು ಕಿಡಿಕಾರಿದ್ದಾರೆ.

ತಕ್ಷಣ ಎಚ್ಚೆತ್ತುಕೊಳ್ಳಿ....

ಇದೀಗ ತಾನೇ ಮಳೆಗಾಲ ಆರಂಭವಾಗಿದೆ. ಈ ಸಣ್ಣ ಮಳೆಗೆ ಮೈಸೂರು ನಗರದಾದ್ಯಂತ ಸಮಸ್ಯೆಗಳು ತಲೆದೋರಲಾರಂಭಿಸಿವೆ. ನಗರದ 65 ವಾರ್ಡ್‌ಗಳ ಕಾರ್ಪೊರೇಟರ್‌ಗಳು ತಕ್ಷಣ ಎಚ್ಚೆತ್ತುಕೊಂಡು ತಮ್ಮ ತಮ್ಮ ವಾರ್ಡ್‌ಗಳ ಇಂಜಿನಿಯರ್‌ಗಳು ಮತ್ತು ಅಧಿಕಾರಿಗಳೊಂದಿಗೆ ಒಂದು ಸುತ್ತು ಹಾಕಿ ಎಲ್ಲೆಲ್ಲಿ ನೀರು ನಿಲ್ಲುತ್ತದೆ. ಅಲ್ಲಿನ ಸಮಸ್ಯೆಗಳು ಏನೆಂದು ಪರಿಶೀಲಿಸಿ, ಜನರಿಗೆ ತೊಂದರೆಯಾಗದಂತೆ ಎಚ್ಚರ ವಹಿಸಬೇಕಾಗಿದೆ. ಸಂಬಂಧಪಟ್ಟ ಕಾರ್ಪೊರೇಟರ್‌ಗಳು ಸಕಾಲದಲ್ಲಿ ಸ್ಪಂದಿಸದಿದ್ದರೆ ಮೇಯರ್ ಮತ್ತು ಪಾಲಿಕೆ ಆಯುಕ್ತರು ತಮ್ಮ ಸಿಬ್ಬಂದಿಗಳೊಂದಿಗೆ ಖುದ್ದಾಗಿ ರಸ್ತೆಗಿಳಿದು ಅನಾಹುತ ತಡೆಗೆ ಮುಂದಾಗಬೇಕು ಎಂಬುದು ಸಾರ್ವಜನಿಕರ ಕಳಕಳಿಯ ಮನವಿ.



ಮೈಸೂರಲ್ಲೂ ಅನಾಹುತಗಳು ಸಂಭವಿಸಬಹುದು...

ಭಾರೀ ಮಳೆಯಿಂದ ಬೆಂಗಳೂರಿನಲ್ಲಿ ಯುವತಿಯೊಬ್ಬರು ಫ್ಲೈಓವರ್ ಕೆಳಗೆ ಆವೃತ್ತವಾಗಿದ್ದ ಮಳೆ ನೀರಿನಲ್ಲಿ ಸಿಲುಕಿ ಮೃತಪಟ್ಟಂತೆ ಮೈಸೂರಿನಲ್ಲಿಯೂ ಅನಾಹುತಗಳು ಸಂಭವಿಸಬಹುದು. ಈಗ 2–3 ಅಡಿಯಷ್ಟು ನೀರು ನಿಲ್ಲುತ್ತಿದೆ. ಇದೇ ರೀತಿ ನಿರ್ಲಕ್ಷ್ಯ ವಹಿಸಿದರೆ ಅಲ್ಲಿ ಭಾರೀ ಹೊಂಡವೇ ಆಗಿ ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತು ಕೊಳ್ಳುವಂತೆ ಮೈಸೂರಿಗರು ಆಗ್ರಹಿಸಿದ್ದಾರೆ.

ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಿ.ಎಂ.ಇಬ್ರಾಹಿಂ ರಾಜೀನಾಮೆ



ಬೆಂಗಳೂರು: ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಪಕ್ಷಕ್ಕೆ ಹಿನ್ನಡೆಯಾಗಿದ್ದರಿಂದ ಸೋಲಿನ ಹೊಣೆ ಹೊತ್ತು ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸಿ.ಎಂ.ಇಬ್ರಾಹಿಂ ರಾಜೀನಾಮೆ ನೀಡಿದ್ದಾರೆ. ತಮ್ಮ ರಾಜೀನಾಮೆ ಪತ್ರವನ್ನು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರಿಗೆ ಸಲ್ಲಿಸಿದ್ದು, ಗೌಡರು ಇನ್ನೂ ಅಂಗೀಕರಿಸಿಲ್ಲ.

ರಾಜೀನಾಮೆ ನೀಡಿದ ಬಳಿಕ ಮಾತನಾಡಿದ ಸಿಎಂ ಇಬ್ರಾಹಿಂ, ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದ ಸೋಲಿನ ಹೊಣೆಯನ್ನು ನಾನೇ ಹೊರುತ್ತೇನೆ. ಹೀಗಾಗಿ ನಾನು ರಾಜೀನಾಮೆ ನೀಡಿದ್ದೇನೆ ಎಂದರು.

ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ. ಅವರಿಗೆ ಶುಭವಾಗಲಿ. ರಾಜ್ಯದಲ್ಲಿ ಬಿಜೆಪಿ ಆಡಳಿತ ವಿರೋಧಿ ಅಲೆ ಇತ್ತು. ಇದನ್ನು ಕಾಂಗ್ರೆಸ್‌ನವರು ಹಣಬಲ ಸೇರಿದಂತೆ ಬೇರೆ ಬೇರೆ ವಿಚಾರದಲ್ಲಿ ಗೆದ್ದಿದ್ದಾರೆ. ನಮ್ಮದು ಪ್ರಾದೇಶಿಕ ಪಕ್ಷ. ಹಣ ಇಲ್ಲ. ನಮಗೆ ಯಾರ ಬೆಂಬಲವೂ ಇರಲಿಲ್ಲ. ಆದರೂ ನಾವು 60 ಲಕ್ಷ ಮತ ಪಡೆದಿದ್ದೇವೆ ಎಂದರು. ಲೋಕಸಭೆ ಚುನಾವಣೆ, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಚುನಾವಣೆಗೆ ಒಟ್ಟಾಗಿ ಕೆಲಸ ಪ್ರಾರಂಭಿಸುತ್ತೇವೆ. ನೂತನ ಮುಖ್ಯಮಂತ್ರಿಗೆ ಒಳ್ಳೆಯದಾಗಲಿ. ಕೊಟ್ಟ ಭರವಸೆ ಈಡೇರಿಸಲಿ. 3 ತಿಂಗಳು ಸಮಯ ಕೊಡ್ತೀವಿ. 3 ತಿಂಗಳು ಹನಿಮೂನ್ ಸಮಯ. ಅಧಿಕಾರ ಯಂತ್ರ ಬೇಗನೆ ಆರಂಭವಾಗಲಿ ಎಂದು ಸಿಎಂ ಇಬ್ರಾಹಿಂ ಹೇಳಿದರು.

ಚಾಮುಂಡಿಬೆಟ್ಟದ ದೇವಿಕೆರೆ ರಸ್ತೆ ಬಂದ್: ನಿವಾಸಿಗಳಿಗೆ ತೀವ್ರ ತೊಂದರೆ

ಎಂದಿನಂತೆ ಇದೇ ರಸ್ತೆ ಸಂಚಾರಕ್ಕೆ ಮುಕ್ತಗೊಳಿಸಲು ಮೈಸೂರು ರಾಜಮನೆತನದವರಲ್ಲಿ ಮನವಿ

ಮೈಸೂರು, ಮೇ 24–ಚಾಮುಂಡಿ ಬೆಟ್ಟದ ದೇವಿಕೆರೆ ರಸ್ತೆಗೆ ಗೇಟ್ ಅಳವಡಿಸಿರುವುದರಿಂದ ಬೆಟ್ಟದ ನಿವಾಸಿಗಳು ತೀವ್ರ ತೊಂದರೆಗೀಡಾಗಿದ್ದಾರೆ.

ಸಣ್ಣ ನೀರಾವರಿ ಇಲಾಖೆಯು 7.5 ಕೋಟಿ ರೂ. ವೆಚ್ಚದಲ್ಲಿ ದೇವಿಕೆರೆಯನ್ನು ಅಭಿವೃದ್ಧಿಪಡಿಸಲು ಮುಂದಾಗಿತ್ತು. ಆ ಸಂದರ್ಭದಲ್ಲಿ ಇಲಾಖೆ ಮಾಹಿತಿ ನೀಡಿಲ್ಲ, ತಮ್ಮ ಅನುಮತಿಯನ್ನೂ ಪಡೆದಿಲ್ಲ ಎಂದು ಮೈಸೂರು ರಾಜಮನೆತನದವರು ಆಕ್ಷೇಪಣೆ ವ್ಯಕ್ತಪಡಿಸಿದ್ದರಿಂದ ಕಾಮಗಾರಿ ಸ್ಥಗಿತಗೊಂಡಿತ್ತಲ್ಲದೆ, ಇಲ್ಲಿನ ಗೇಟ್ ದುರಸ್ತಿಪಡಿಸಿ, ಬಂದ್ ಮಾಡಲಾಗಿತ್ತು.

ಈ ಗೇಟ್ ಹಾಕಿದ ನಂತರ ಸಮಸ್ಯೆ ಉದ್ಭವಿಸಿದೆ. ಚಾಮುಂಡಿಬೆಟ್ಟದ ನಾಯಕರ ಬೀದಿಗೆ ದೇವಿಕೆರೆಯ ಮಾರ್ಗದ ರಸ್ತೆಯಲ್ಲೇ ಹೋಗಬೇಕಾಗಿದೆ. ಅಲ್ಲಿನ ಸುಮಾರು 40ಕ್ಕೂ ಹೆಚ್ಚು ಕುಟುಂಬದವರು ಇಲ್ಲಿವರೆಗೆ ಈ ರಸ್ತೆಯನ್ನೇ ಬಳಸುತ್ತಿದ್ದರು. ಕಾರಣ ನಾಯಕರ ಬೀದಿಯಿಂದ ದೇವಸ್ಥಾನದವರೆಗೆ ಬರಲು ರಸ್ತೆ ಇಲ್ಲ. ನಾಯಕರ ಬೀದಿಯು ಬೆಟ್ಟದಿಂದ ಸ್ವಲ್ಪ ಕೆಳ ಭಾಗದಲ್ಲಿದ್ದು, ದೇವಸ್ಥಾನದ ಬಳಿಗೆ ನಾಲ್ಕು ಚಕ್ರ ವಾಹನದಲ್ಲಿ ಬರಲು ಸಾಧ್ಯವಿಲ್ಲ. ವಾಹನ ಸಂಚಾರಕ್ಕೆ ಮಾತ್ರವಲ್ಲದೇ ದೇವಿಕೆರೆ ಬಳಿ ಇರುವ ಸ್ಮಶಾನಕ್ಕೆ ತೆರಳಲು ಚಾಮುಂಡಿಬೆಟ್ಟದ ನಿವಾಸಿಗಳು ಈ ರಸ್ತೆಯನ್ನೇ ಬಳಸುತ್ತಿದ್ದರು. ಬೆಟ್ಟದಲ್ಲಿ ಯಾರಾದರೂ ಮೃತಪಟ್ಟರೆ ದೇವಸ್ಥಾನದ ಮುಂಭಾಗ



ಅಥವಾ ಹಿಂಭಾಗದಲ್ಲಿ ಮೃತದೇಹವನ್ನು ಕೊಂಡೊಯ್ಯಬಾರದು ಎಂಬ ಪ್ರತೀತಿಯ ಕಾರಣದಿಂದಾಗಿ ದೇವಿಕೆರೆ ರಸ್ತೆ ಬಳಸಲಾಗುತ್ತಿತ್ತು. ಈವರೆವಿಗೂ ಇದ್ಯಾವುದಕ್ಕೂ ರಾಜಮನೆತನದಿಂದ ಯಾವುದೇ ರೀತಿಯ ಅಡ್ಡಿಯಾಗಲೀ, ಆಕ್ಷೇಪಣೆಯಾಗಲೀ ಇರಲಿಲ್ಲ. ಆದರೆ ತಮ್ಮ ಅನುಮತಿಯನ್ನು ಪಡೆಯದೇ ತಮಗೆ ಸೇರಿದ ದೇವಿಕೆರೆ ಅಭಿವೃದ್ಧಿ ಕಾಮಗಾರಿಯನ್ನು ಸಣ್ಣ ನೀರಾವರಿ ಇಲಾಖೆ ಕೈಗೆತ್ತಿಕೊಂಡ ಕಾರಣ, ತಮ್ಮ ಆಸ್ತಿಯ ರಕ್ಷಣೆ ದೃಷ್ಟಿಯಿಂದ ರಾಜಮನೆತನದವರು ದೇವಿಕೆರೆ ರಸ್ತೆಗೆ ಜನವರಿ ತಿಂಗಳಿನಲ್ಲಿ ಗೇಟ್‌ವೊಂದನ್ನು ಅಳವಡಿಸಿ 'ಸಾರ್ವಜನಿಕರಿಗೆ ಪ್ರವೇಶ ನಿಷೇಧಿಸಲಾಗಿದೆ' ಎಂಬ ಫಲಕವನ್ನು ಹಾಕಿದ್ದಾರೆ. ದಿನದ 24 ಗಂಟೆಯೂ ಭದ್ರತೆಗಾಗಿ ಸಿಬ್ಬಂದಿಯನ್ನು ನಿಯೋಜಿಸಿದ್ದಾರೆ. ಇದರಿಂದ ಬೆಟ್ಟದ ನಿವಾಸಿಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರಮುಖವಾಗಿ ನಾಯಕರ ಬೀದಿಗೆ ಈಗ ಆಂಬುಲೆನ್ಸ್ ಸೇರಿದಂತೆ ಯಾವುದೇ ನಾಲ್ಕು ಚಕ್ರ ವಾಹನ ಸಂಚರಿಸಲು ಸಾಧ್ಯವಾಗುತ್ತಿಲ್ಲ. ಹಬ್ಬ–ಹರಿದಿನಗಳಲ್ಲಿ ದೇವಸ್ಥಾನಕ್ಕೆ ಲಕ್ಷಾಂತರ ಮಂದಿ ಭಕ್ತಾದಿಗಳು ಆಗಮಿಸುವುದರಿಂದ ಜನ ದಟ್ಟಣೆಯಿಂದಾಗಿ ಅಲ್ಲಿನ ನಿವಾಸಿಗಳು ಮೈಸೂರಿಗೆ ಬರಬೇಕಾದರೆ ದ್ವಿಚಕ್ರ ವಾಹನದಲ್ಲೂ ಬರಲು ಸಾಧ್ಯವಾಗದೇ ದೇವಿಕೆರೆ ರಸ್ತೆಯನ್ನೇ ಅವಲಂಬಿಸಿದ್ದರು. ಇದೀಗ ಈ ರಸ್ತೆ ಬಂದ್ ಆಗಿರುವುದರಿಂದ ನಿವಾಸಿಗಳು ಸಂಕಷ್ಟ ಅನುಭವಿಸಬೇಕಾಗಿದೆ ಎಂದು ಗ್ರಾಮ ಪಂಚಾಯ್ತಿ ಮಾಜಿ ಸದಸ್ಯ ಎಂ.ಮಹದೇವಸ್ವಾಮಿ ಅಳಲು ತೋಡಿಕೊಂಡಿದ್ದಾರೆ.

ರಾಜಮನೆತನದವರು ಹಿಂದಿನಂತೆ ಈ ರಸ್ತೆ ಬಳಸಲು ನಮಗೆ ಅವಕಾಶ ನೀಡಬೇಕು ಎಂಬುದು ನಮ್ಮ ಮನವಿಯಾಗಿದೆ. ಇಲ್ಲಿನ ನಿವಾಸಿಗಳೆಲ್ಲಾ ಸೇರಿ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲು ಮಾ.6ರಂದು ಅರಮನೆಗೆ ಹೋಗಿದ್ದೆವು. ನಮಗೆ ಅವರು ಲಭ್ಯವಿಲ್ಲದ ಕಾರಣ ಅವರ ಆಪ್ತ ಕಾರ್ಯದರ್ಶಿಗಳಿಗೆ ಮನವಿ ಪತ್ರ ಕೊಟ್ಟು ಬಂದಿದ್ದೇವೆ. ಮಾ.18ರಂದು ಮತ್ತೆ ನಾವೆಲ್ಲರೂ ಅರಮನೆಗೆ ಹೋದಾಗಲೂ ಕೂಡ ನಮಗೆ ಪ್ರಮೋದಾದೇವಿ ಒಡೆಯರ್ ಅವರು ಲಭ್ಯವಾಗಿಲ್ಲ. ರಾಜಮನೆತನದವರನ್ನು ನಾವೆಲ್ಲಾ ಬಹಳಷ್ಟು ಗೌರವಿಸುತ್ತೇವೆ. ಈಗಲೂ ಕೂಡ ಅವರು ನಮಗೆ ರಾಜಮನೆತನದವರೇ ಆಗಿದ್ದಾರೆ. ನಾವು ಅವರ ಪ್ರಜೆಗಳು ಎಂಬ ಭಾವನೆ ಹೊಂದಿದ್ದೇವೆ. ರಾಜಮನೆತನದವರು ತಮ್ಮ ಪ್ರಜೆಗಳಾದ ನಮ್ಮ ಸಂಕಷ್ಟವನ್ನು ನಿವಾರಿಸಬೇಕು ಎಂಬುದೇ ನಮ್ಮ ಮನವಿಯಾಗಿದೆ ಎಂದು ಮಹದೇವಸ್ವಾಮಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ನರ್ಸಿಂಗ್ ಹುದ್ದೆಗಳಿಗೆ ವರ್ಷದಿಂದ ವರ್ಷಕ್ಕೆ ಬೇಡಿಕೆ ಹೆಚ್ಚುತ್ತಲೇ ಇದೆ





ಮೈಸೂರು,ಮೇ 24(ಎಂಟಿವೈ)– ಶುಶ್ರೂಷಕ ಪದವಿ ಪಡೆದವರಿಗೆ ಭಾರತದಲ್ಲಿಯೇ ವಿಪುಲ ಉದ್ಯೋಗಾವಕಾಶಗಳಿದ್ದು, ಅದನ್ನು ಸದುಪಯೋಗಪಡಿಸಿಕೊಳ್ಳುವಂತೆ ಹೊಳೆನರಸೀಪುರ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲರಾದ ಡಾ.ಕೆ.ಪಿ.ದಾಕ್ಷಾಯಿಣಿ ಸಲಹೆ ನೀಡಿದ್ದಾರೆ.

ಮೈಸೂರಿನ ಜೆ.ಕೆ.ಮೈದಾನದ ಅಮೃತ ಮಹೋತ್ಸವ ಭವನದಲ್ಲಿ ಬುಧವಾರ ನಡೆದ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಥಮ ವರ್ಷ ಬಿಎಸ್ಸಿ ನರ್ಸಿಂಗ್ ವಿದ್ಯಾರ್ಥಿಗಳ ಪ್ರತಿಜ್ಞಾ ವಿಧಿ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿದರು. ನರ್ಸಿಂಗ್ ಪದವಿ ಪಡೆದವರಲ್ಲಿ ಯಾರೂ ನಿರುದ್ಯೋಗಿಗಳಿಲ್ಲ. ನರ್ಸಿಂಗ್ ಹುದ್ದೆಗಳಿಗೆ ವರ್ಷದಿಂದ ವರ್ಷಕ್ಕೆ ಬೇಡಿಕೆ ಹೆಚ್ಚುತ್ತಲೇ ಇದೆ. ಮೂರ್ನಾಲ್ಕು ವರ್ಷಗಳಿಂದ ಕೇಂದ್ರ ಸರ್ಕಾರ ಕಮ್ಯುನಿಟಿ ಹೆಲ್ತ್ ಆಫೀಸರ್ ಎಂಬ ಹೊಸ ಉದ್ಯೋಗ ಸೃಷ್ಟಿಸಿದೆ. ಉತ್ತಮ ಅಭ್ಯಾಸ ಮಾಡಿದರೆ ಉತ್ತಮ ಅವಕಾಶಗಳು ದೊರೆಯಲಿವೆ. ಶುಶ್ರೂಷಕರು ಸಹಾನುಭೂತಿಯಿಂದ ರೋಗಿಗಳ ಆರೈಕೆ ಮಾಡಬೇಕು. ವೈದ್ಯಕೀಯ ತಂಡಕ್ಕೆ ಸಹಕಾರ ನೀಡಬೇಕು. ತಮ್ಮ ವೃತ್ತಿಯಲ್ಲಿ ನಾವೀನ್ಯ ವಿಷಯಗಳನ್ನು ಕಲಿಯುವ ಕುತೂಹಲವಿರಬೇಕು. ಶ್ರದ್ಧೆಯೊಂದಿಗೆ ಬದ್ಧತೆ ಇರಬೇಕು. ನಗು ಮುಖದಿಂದ ರೋಗಿಗಳ ಉಪಚರಿಸಬೇಕು ಎಂದು ಸಲಹೆ ನೀಡಿದರು. ಮೈಸೂರಿನ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯವನ್ನು ಸ್ವತಂತ್ರ ಮತ್ತು ಸ್ವಾಯತ್ತಗೊಳಿಸಬೇಕು. ಬೋಧಕ, ಬೋಧಕೇತರ ಸಿಬ್ಬಂದಿ ಸಹಿತವಾಗಿ ಅಗತ್ಯ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಮೈಸೂರು ವೈದ್ಯಕೀಯ ಕಾಲೇಜಿನ ಡೀನ್‌ಗೆ ಮನವಿ ಮಾಡಿದರು.

ಚೆಲುವಾಂಬ ಆಸ್ಪತ್ರೆಯ ಅಧೀಕ್ಷಕ ಡಾ.ರಾಜೇಂದ್ರಕುಮಾರ್ ಮಾತನಾಡಿ, ನರ್ಸಿಂಗ್ ವಿದ್ಯಾರ್ಥಿಗಳು ತಮ ಕರ್ತವ್ಯದ ವೇಳೆ ಫ್ಲಾರೆನ್ಸ್ ನೈಟಿಂಗೇಲ್ ಅವರು ಹೇಳಿರುವ ಪ್ರತಿ ವಾಕ್ಯವನ್ನು ನೆನಪಿಟ್ಟುಕೊಳ್ಳಬೇಕು. ಕಲಿಕಾ ಸಮಯದಲ್ಲಿ ಅತ್ಯುತ್ತಮ ಸ್ಥಾನಕ್ಕೆ ಹೋಗಬೇಕೆಂಬ ಗುರಿ ಹೊಂದಬೇಕು ಎಂದು ಸಲಹೆ ನೀಡಿದರು.

ಪ್ರತಿಜ್ಞಾವಿಧಿ ಸ್ವೀಕರಿಸಿ ಮಾತನಾಡಿದ ಪ್ರಥಮ ವರ್ಷದ ಬಿಎಸ್ಸಿ ವಿದ್ಯಾರ್ಥಿ ನಾಗರಾಜ್, 500 ಕಿಲೋ ಮೀಟರ್ ದೂರದ ಗದಗಿನಿಂದ ಇಲ್ಲಿ ವಿದ್ಯಾಭ್ಯಾಸಕ್ಕೆ ಬಂದಿದ್ದೇನೆ. ಆರಂಭದಲ್ಲಿ ಅನೇಕ ಪ್ರಶ್ನೆಗಳು, ಗೊಂದಲ ಇತ್ತು. ಮೂಲಸೌಕರ್ಯದ ಕೊರತೆ ಇತ್ತು. ಕಲಿಕಾ ವಾತಾವರಣ ಮುಕ್ತವಾಗಿದೆ. ಸೀನಿಯರ್ ಸಹೋದರರಾಗಿ ಸಹಕರಿಸುತ್ತಿದ್ದಾರೆ ಎಂದು ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ ವಹಿಸಿದ್ದರು. ಕೆ.ಆರ್.ಆಸ್ಪತ್ರೆ ಸಹಾಯಕ ಆಡಳಿತಾಧಿಕಾರಿ ಚಂದ್ರಕಲಾ ಕೆ.ಎಂ, ಸರ್ಕಾರಿ ಶುಶ್ರೂಷಾ ಶಾಲೆ ಪ್ರಾಂಶುಪಾಲ ಪಿ.ರುದ್ರಪ್ಪ ಕೆ.ಆರ್.ಆಸ್ಪತ್ರೆಯ ಅಂಗ ರಚನಾ ಶಾಸ್ತ್ರ ವಿಭಾಗದ ಡಾ.ಕೆ.ಟಿ.ಚಂದ್ರಶೇಖರ್, ಹಿರಿಯ ಶಶ್ರೂಷಕರಾದ ಗಂಗಮ, ವಿ.ಸಾಕಮ, ವನಜಾಕ್ಷಿ, ಸರ್ಕಾರಿ ಶುಶ್ರೂಷಾಧಿಕಾರಿಗಳ ಸಂಘದ ಅಧ್ಯಕ್ಷೆ ಹೇಮಲತಾ ಇದ್ದರು. ಇದೇ ವೇಳೆ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಎ.ಬಿ.ಪುಷ್ಪಲತಾ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಉಪನ್ಯಾಸಕ ಜಿತೇಂದ್ರ ಹೆಚ್.ವೈ ಪ್ರತಿಜ್ಞಾ ವಿಧಿ ಬೋಧಿಸಿದರೆ, ಗೀತಾ ಮತ್ತು ಹಿಮಜ ಪ್ರಾರ್ಥಿಸಿದರು. ಪ್ರಾಧ್ಯಾಪಕ ಡಾ.ಪರಮೇಶ್.ಎ.ಈ ಸ್ವಾಗತಿಸಿದರು. ಜ್ಯೋತಿ.ಸಿ ವಂದಿಸಿದರು. ರಶಿತಾ ಟಿ.ಎಸ್.ನಿರೂಪಿಸಿದರು. ಸಭಾ ಕಾರ್ಯಕ್ರಮದ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಿತು.

ಹೆಚ್.ಡಿ.ಕೋಟೆ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಪೊಲೀಸರಿಗೆ ಹೆಚ್ಚು ದೂರು

ಹೆಚ್.ಡಿ.ಕೋಟೆ, ಮೇ 24 – ತಾಲೂಕಿನಲ್ಲಿ ಅಧಿಕಾರಿಗಳ ವಿರುದ್ಧ ಸಾರ್ವಜನಿಕರಿಂದ ಲೋಕಾಯುಕ್ತ ಪೊಲೀಸರಿಗೆ ಹೆಚ್ಚು ದೂರುಗಳು ಬರುತ್ತಿದ್ದು, ಸಮಸ್ಯೆ ಬಗೆ ಹರಿಸಲು ಮುಂದಾಗಬೇಕು. ಇಲ್ಲದೆ ಇದ್ದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವುದಾಗಿ ಲೋಕಾ ಯುಕ್ತ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುರೇಶ್ ಬಾಬು ಎಚ್ಚರಿಕೆ ನೀಡಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಬುಧವಾರ ಜಿಲ್ಲಾ ಲೋಕಯುಕ್ತ ಪೊಲೀಸ್ ವತಿಯಿಂದ ಹಮ್ಮಿಕೊಂಡಿದ್ದ ಸಾರ್ವಜನಿಕರಿಂದ ದೂರು ಸ್ವೀಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾಲೂಕಿನಲ್ಲಿ ಒಟ್ಟು 15 ದೂರುಗಳು ಬಂದಿದ್ದು ಅದರಲ್ಲಿ ಹೆಚ್ಚು ಕಂದಾಯ ಇಲಾಖೆಗೆ ಸಂಬಂಧಿಸಿದ್ದಾಗಿದೆ, ಸಾರ್ವಜನಿಕರ ಸಮಸ್ಯೆ ಬಗೆಹರಿಸಲು ಅಧಿಕಾರಿಗಳು ಮುಂದಾಗಬೇಕು, ಸರ್ಕಾರ ನಮ್ಮನ್ನು ಸಾರ್ವಜನಿಕರ ಸಮಸ್ಯೆ ಬಗೆಹರಿಸುವ ಉದ್ದೇಶದಿಂದ ನೇಮಕ ಮಾಡಿದೆ, ಅದನ್ನು ಸಮರ್ಥವಾಗಿ ನಿಭಾಯಿಸಬೇಕು. ಇತ್ಯರ್ಥ ಮಾಡಲು ಸಾಧ್ಯವಾಗದ ಅರ್ಜಿಗಳಿಗೆ ಹಿಂಬರಹ ನೀಡಬೇಕು, ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಅಲೆದಾಡಿಸಬಾರದು. ಮತ್ತೊಮ್ಮೆ ಕಂದಾಯ ಇಲಾಖೆ ವಿರುದ್ಧ ದೂರು ಬಂದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಹಶೀಲ್ದಾರ್ ಪಿ.ಎಸ್.ಮಹೇಶ್‌ಗೆ ಎಚ್ಚರಿಕೆ ನೀಡಿದರು.



ಮಟಕೆರೆ ಕೃಷ್ಣ ಮಾತನಾಡಿ, ಸವ್ವೆ ಗ್ರಾಮದ ಸರ್ವೆ ನಂ.58, 59, 65, 70ರ ಸರ್ಕಾರಿ ಜಮೀನು ಸ್ವಾಧೀನ ಸಂಬಂಧ ತಹಶೀಲ್ದಾರ್ ಮತ್ತು ಇಲಾಖೆಗೆ ಅರ್ಜಿ ನೀಡಲಾಗಿದೆ. ಈ ಬಗ್ಗೆ ಕ್ರಮ ಕೈಗೊಳ್ಳುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ. ಈ ಬಗ್ಗೆ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ನಂತರ ಮಾತನಾಡಿದ ಲೋಕಾಯುಕ್ತ ಎಸ್ಪಿ ಈ ಬಗ್ಗೆ ತಹಶೀಲ್ದಾರ್ ಅವರು ದಾಖಲೆಗಳನ್ನು ಪರಿಶೀಲನೆ ಮಾಡಿ ಬೆಂಗಳೂರಿನ ರವಿ ಬಾಬು ಎಂಬ ವ್ಯಕ್ತಿ ಸರ್ಕಾರದ ನಿಯಮದ ಪ್ರಕಾರ ಖರೀದಿ ಮಾಡಿದ್ದಾನೆಯೇ ಎಂಬುದನ್ನು ಪರಿಶೀಲನೆ ಮಾಡಬೇಕು, ಇಲ್ಲದಿದ್ದರೆ ಈ ಜಮೀನನ್ನು ಸರ್ಕಾರದ ವಶಕ್ಕೆ ಪಡೆದುಕೊಳ್ಳಬೇಕು ಎಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ಹಂಪಾಪುರ ಗ್ರಾಪಂ ಪಿಡಿಓ ವಿರುದ್ಧ ಅನೇಕ ದೂರುಗಳು ಬರುತ್ತಿದ್ದು, ಅವರಿಗೆ ನೋಟಿಸ್ ಜಾರಿ ಮಾಡಿ ಎಂದು ಸೂಚನೆ ನೀಡಲಾಯಿತು.

ಅಧಿಕಾರ ದುರ್ಬಳಕೆ ಮಾಡಿಕೊಂಡು ಸಾಗುವಳಿ ಮಂಜೂರು ಶಿಫಾರಸು ಕೂಡ ಆಗಿದೆ. ಇದನ್ನು ತಡೆದು ಅರ್ಹರಿಗೆ ಸಾಗುವಳಿ ದೊರಕುವಂತೆ ತಹಶೀಲ್ದಾರ್‌ಗೆ ನಿರ್ದೇಶನ ನೀಡಬೇಕು ಹಾಗೂ ಸುಳ್ಳು ಮಾಹಿತಿ ನೀಡಿದ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಸಾರ್ವಜನಿಕರು ಹಲವಾರು ಸಮಸ್ಯೆಗಳಿಗೆ ಸಂಬಂಧಿಸಿದಂತೆ ದೂರು ನೀಡಿದರು.

ಲೋಕಾಯುಕ್ತ ಡಿವೈಎಸ್ಪಿ ಕೃಷ್ಣಯ್ಯ, ಇನ್ಸ್‌ಪೆಕ್ಟರ್‌ಗಳಾದ ಜಯರತ್ನ, ರೂಪಶ್ರೀ, ತಹಶೀಲ್ದಾರ್ ಪಿ.ಎಸ್.ಮಹೇಶ್, ಇಓ ಜೆರಾಲ್ಡ್ ರಾಜೇಶ್, ಡಾ.ಟಿ.ರವಿಕುಮಾರ್, ರಂಗಸ್ವಾಮಿ, ನಾರಾಯಣ ಸ್ವಾಮಿ, ರಾಮಸ್ವಾಮಿ, ನಾಗರಾಜು, ರಾಮೇಗೌಡ, ಮುಖಂಡರಾದ ಅಕ್ಬರ್ ಪಾಷ, ಚೌಡಹಳ್ಳಿ ಜವರಯ್ಯ, ಉಮೇಶ್, ಕಂದೇಗಾಲ ಶ್ರೀನಿವಾಸ್ ಇದ್ದರು.

ಖಾಸಗಿ ಬಸ್ ಹರಿದು ಪೋಸ್ಟ್ ಮಾಸ್ಟರ್ ಸಾವು

ತಿ.ನರಸೀಪುರ, ಮೇ 24– ಖಾಸಗಿ ಬಸ್ಸೊಂದು ಹರಿದ ಪರಿಣಾಮ ಪೋಸ್ಟ್ ಮಾಸ್ಟರ್ ಸ್ಥಳದಲ್ಲೇ ಮೃತಪಟ್ಟ ಘಟನೆ ನಂಜನಗೂಡು ಮುಖ್ಯ ರಸ್ತೆಯಲ್ಲಿ ನಡೆದಿದೆ.



ನಂಜನಗೂಡು ತಾಲೂಕಿನ ಗೆಜ್ಜಗನಹಳ್ಳಿ ಗ್ರಾಮದ ಲೇಟ್ ಮಲ್ಲಪ್ಪ ಎಂಬುವರ ಪುತ್ರ ಪೋಸ್ಟ್ ಮಾಸ್ಟರ್ ಮಹದೇವ ಸ್ವಾಮಿ(57) ಅಪಘಾತದಲ್ಲಿ ಸಾವನ್ನಪ್ಪಿದವರು.

ತಿ.ನರಸೀಪುರದಿಂದ ಹೆಳವರಹುಂಡಿ ಗ್ರಾಮದ ರಾಜಣ್ಣ ಎಂಬುವರ ಜೊತೆ ತಮ್ಮ ಗ್ರಾಮದತ್ತ ಕವಾಸಕಿ ಬಜಾಜ್‌ನಲ್ಲಿ ಹೋಗುತ್ತಿದ್ದಾಗ ತಾಯೂರ್ ಗೇಟ್ ಬಳಿ ಖಾಸಗಿ ಬಸ್ಸೊಂದು ಡಿಕ್ಕಿ ಹೊಡೆದು ತಲೆ ಮೇಲೆ ಬಸ್ ಚಲಿಸಿದ್ದರಿಂದ ಸ್ಥಳದಲ್ಲೇ ಸಾವನ್ನಪ್ಪಿದರು. ರಾಜಣ್ಣರವರಿಗೂ ಸಣ್ಣ-ಪುಟ್ಟ ಗಾಯಗಳಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮತ್ತೊಂದು ದ್ವಿಚಕ್ರ ವಾಹನ ಸವಾರ ಕಾರಾಪುರ ಗ್ರಾಮದ ಪ್ರಭುಸ್ವಾಮಿರವರಿಗೂ ಸಹ ಬಸ್ ಡಿಕ್ಕಿ ಹೊಡೆದು ಆ ನಂತರ ಮಹದೇವಸ್ವಾಮಿ ಅವರ ಮೇಲೆ ಹರಿದಿದೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

ಈ ಸಂಬಂಧ ಕುದೇರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಪಘಾತವೆಸಗಿ ಪರಾರಿಯಾದ ಬಸ್ ಮತ್ತು ಚಾಲಕನ ಪತ್ತೆಗೆ ಪೊಲೀಸರು ಮುಂದಾಗಿದ್ದಾರೆ. ಡಿಕ್ಕಿ ಹೊಡೆದ ಬಸ್ಸನ್ನು ಹಿಂಬದಿಯ ಸವಾರ ರಾಜಣ್ಣ ನೋಡಿದರಾದರೂ ಕತ್ತಲೆಯಾದ್ದರಿಂದ ಬಸ್ಸಿನ ನಂಬರ್ ಗೊತ್ತಾಗಲಿಲ್ಲ ಎನ್ನಲಾಗಿದೆ.

'ಕರ್ನಾಟಕದ ಬೆಳಕು' ಪುಸ್ತಕ ನೀಡಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸನ್ಮಾನ

ಸುತ್ತೂರು, ಮೇ 24– ವರುಣ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ನೂತನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 'ಕರ್ನಾಟಕದ ಬೆಳಕು' ಪುಸ್ತಕ ನೀಡಿ ಬೆಂಗಳೂರಿನ ಅವರ ನಿವಾಸದಲ್ಲಿ ಸನ್ಮಾನಿಸಿದರು.

ವರುಣ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರು ಸಿದ್ದರಾಮಯ್ಯನವರು ಈ ಹಿಂದೆ ಮೊದಲ ಬಾರಿ ಮುಖ್ಯಮಂತ್ರಿಯಾಗಿದ್ದ ವೇಳೆ ಹಾರ ತುರಾಯಿಗಳನ್ನು ತೆಗೆದುಕೊಂಡು ಹೋಗಿ ಸನ್ಮಾನಿಸಲು ಮುಂದಾಗಿದ್ದ ವೇಳೆ ಸಿದ್ದರಾಮಯ್ಯ ರವರು ಇದಕ್ಕೆ ಹಣ ಪೋಲು ಮಾಡದೇ ಆ ಹಣವನ್ನು ಸದುಪಯೋಗ ಪಡಿಸಿಕೊಳ್ಳಿ ಎಂದಿದ್ದರು.

ಎರಡನೇ ಬಾರಿ ಮುಖ್ಯಮಂತ್ರಿಯಾದ ನಂತರ ಸಿದ್ದರಾಮಯ್ಯ ನವರು ಹಾರ, ತುರಾಯಿ, ಶಾಲು, ಪೇಟೆಗಳ ಸನ್ಮಾನ ನಿರಾಕರಿಸಿ, ಕೇವಲ ಪುಸ್ತಕ ನೀಡಿ ಎಂದು ತಿಳಿಸಿದ್ದ ಹಿನ್ನೆಲೆಯಲ್ಲಿ ವರುಣ ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರು "ಕರ್ನಾಟಕದ ಬೆಳಕು" ಎಂಬ ಪುಸ್ತಕವನ್ನು ನೀಡಿ ಸನ್ಮಾನಿಸಿದರು.

ಇದೇ ವೇಳೆ ವರುಣ ಕ್ಷೇತ್ರದ ಮುಖಂಡರಾದ ತುಮ್ಮನೇರಳೆ



ಗ್ರಾಪಂ ಸದಸ್ಯ ಬುಲೆಟ್ ಮಹದೇವು, ನಜರ್‌ಬಾದ್ ನಟರಾಜು, ಲೋಕೇಶ, ಶಂಕರ್, ಮಲ್ಲೇಶ್, ಕೆಂಪಿಸಿದ್ದನಹುಂಡಿ ಕುಮಾರ, ಲೋಕರಂಜನ್, ಮುದ್ದುಮಾದೇಗೌಡ, ಬಿಳಿಗೆರೆ ಗುಂಡಪ್ಪ, ಮಾರೇಗೌಡ, ಡಾ. ಭರತ್, ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರುಗಳು ಹಾಜರಿದ್ದರು.

ಸರಗೂರಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರ ವರ್ಧಂತಿ



ಸರಗೂರು, ಮೇ 24 – ಪಟ್ಟಣದಲ್ಲಿ ಶ್ರೀ ಚೌಡೇಶ್ವರಿ ಅಮ್ಮನವರ ವರ್ಧಂತಿ ಹಾಗೂ 83ನೇ ಜ್ಯೋತಿ ಪೂಜಾ ಮಹೋತ್ಸವವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಪಟ್ಟಣವನ್ನು ತಳಿರು ತೋರಣಗಳಿಂದ ಸಿಂಗರಿಸಿ ರಂಗೋಲಿ ಬಿಡಿಸಿ ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ದೇವಾಲಯದಲ್ಲಿ ಬೆಳಗಿನ ಜಾವದಿಂದ ಹೋಮ, ಹವನ ನಡೆಸಿ ಗಣಪತಿ ಹೋಮ, ಪುಣ್ಯಾಹ, ಕಳಸ ಪ್ರತಿಸ್ಥಾಪನೆ, ದುರ್ಗಾ ಹೋಮ, ಕುಂಕುಮಾರ್ಚನೆ ಪೂಜಾ ಕೈಂಕರ್ಯಗಳು ಜರುಗಿದವು.

ಶ್ರೀ ಚೌಡೇಶ್ವರಿ ಅಮ್ಮನವರ ಹೂವಿನ ಪಲ್ಲಕ್ಕಿ ಉತ್ಸವವನ್ನು ಜ್ಯೋತಿ ಸಮೇತವಾಗಿ ಮಂಗಳ ವಾದ್ಯದೊಡನೆ ಕಪಿಲಾ ನದಿಗೆ ತೆರಳಿ ಗಂಗೆ ಪೂಜೆ ನಡೆಸಿ ಹರಕೆ ಹೊತ್ತ ಭಕ್ತರು ಬಾಯಿಬೀಗ, ಅಲಗುಸೇವೆ, ಸ್ತೋತ್ರ ಪಠಣ, ಖಡ್ಗಸ್ತೋತ್ರ ಪಠಣ, ಭಜನೆ, ಪೂರ್ಣಕುಂಭ ಕಳಸದೊಂದಿಗೆ ಪ್ರಮುಖ ರಸ್ತೆ ಮುಖಾಂತರ ಮಂಗಳವಾದ್ಯ, ಸತ್ತಿಗೆ, ವೀರಗಾಸೆ ಕುಣಿತ ಹಾಗೂ ಕಲಾತಂಡಗಳ ಜೊತೆಯಲ್ಲಿ ಮೆರವಣಿಗೆ ನಡೆಸಲಾಯಿತು.

ಉತ್ಸವವು ದೇವಾಲಯಕ್ಕೆ ತಲುಪಿ ನಂತರ ವಿಶೇಷ ಪೂಜೆ ನಡೆಸಿ ಮಹಾಮಂಗಳಾರತಿ ಮಾಡಿ ಪ್ರಸಾದ ವಿತರಿಸಲಾಯಿತು.

ಕೋಟೆ ಬಳಿ ಸಿಡಿಲು ಬಡಿದು ಎತ್ತು ಸಾವು; ಮತ್ತೊಂದು ಎತ್ತು, ರೈತ ಮಹಿಳೆ ಪಾರು

ಹೆಚ್.ಡಿ.ಕೋಟೆ, ಮೇ 24– ಸಿಡಿಲು ಬಡಿದು ಎತ್ತೊಂದು ಸ್ಥಳದಲ್ಲೇ ಸಾವನ್ನಪ್ಪಿದೆ.

ತಾಲೂಕಿನ ಗೆಂಡತ್ತೂರು ಗ್ರಾಮದ ನಿವಾಸಿ ತಾಯಮ್ಮ ಎಂಬುವರು ಬುಧವಾರ ಜಮೀನಿನಲ್ಲಿ ಉಳುಮೆ ಮಾಡಿ ಎತ್ತುಗಳನ್ನು ಜಮೀನಿನ ಬಳಿ ಕಟ್ಟಿಹಾಕಿ ಹುಲ್ಲು ಕೊಯ್ಯುತ್ತಿದ್ದ ಸಂದರ್ಭದಲ್ಲಿ ಸಿಡಿಲು ಬಡಿದು ಒಂದು ಎತ್ತು ಸ್ಥಳದಲ್ಲೇ ಸಾವನ್ನಪ್ಪಿದೆ.

ರೈತ ಮಹಿಳೆ ತಾಯಮ್ಮ ಹಾಗೂ ಜೊತೆಯಲ್ಲಿದ್ದ ಇನ್ನೊಂದು ಎತ್ತು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸಾಲ ಸೋಲ ಮಾಡಿ ಎತ್ತುಗಳನ್ನು ಖರೀದಿಸಿ ಜಮೀನಿನಲ್ಲಿ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದೇನೆ. ಸಿಡಿಲು ಬಡಿದು ಒಂದು ಎತ್ತು ಕಳೆದುಕೊಂಡಿದ್ದೇನೆ ಮುಂದಿನ ಜೀವನ ಸಾಗಿಸುವುದು ಹೇಗೆ ಎಂದು ಅಳಲು ತೋಡಿಕೊಂಡಿದ್ದಾರೆ.



ಸಿಡಿಲು ಬಡಿದು ಸಾವನ್ನಪ್ಪಿದ ಎತ್ತು ಸುಮಾರು 65 ಸಾವಿರ ಬೆಲೆ ಬಾಳುತ್ತದೆ. ಸರ್ಕಾರದಿಂದ ಪರಿಹಾರ ಕೊಡಿಸಿ ಎಂದು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ವೃತ್ತಿ ಬದ್ಧತೆಯಿಂದ ಶಿಕ್ಷಕರು ಸಂತೃಪ್ತರಾಗಬಹುದು

ನಂಜನಗೂಡು, ಮೇ 24– ವೃತ್ತಿ ಬದ್ಧತೆಯಿಂದ ಮಾತ್ರ ಶಿಕ್ಷಕರು ಸಂತೃಪ್ತಿಗಳಿಸಬಹುದು ಎಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ಬಿ.ಎ. ರಾಜಶೇಖರ ತಿಳಿಸಿದರು.

ಸುತ್ತೂರು ಕ್ಷೇತ್ರದಲ್ಲಿ ಬುಧವಾರ ಜೆಎಸ್‌ಎಸ್ ಮಹಾವಿದ್ಯಾಪೀಠದ ಆಶ್ರಯದಲ್ಲಿ ಪ್ರೌಢಶಾಲಾ ಕನ್ನಡ ಮತ್ತು ಆಂಗ್ಲ ಭಾಷಾ ಶಿಕ್ಷಕರ ಎರಡು ದಿನಗಳ ಪುನಶ್ಚೇತನ ಕಾರ್ಯಾಗಾರದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಕಲಿಯುವ ಮನಸ್ಸುಗಳು ಮುಕ್ತವಾಗಿದ್ದಾಗ ಮಾತ್ರ ಕಲಿಕೆಯಲ್ಲಿ ಯಶಸ್ಸು ಗಳಿಸಲು ಸಾಧ್ಯ. ನಮಗೆ ಎಲ್ಲವೂ ಗೊತ್ತಿದೆ ಎಂದುಕೊಂಡರೆ ಕಲಿಯಲು ಸಾಧ್ಯವಿಲ್ಲ. ಎಲ್ಲರಿಗೂ ವೈಯಕ್ತಿಕ ಸಮಸ್ಯೆಗಳು ಇದ್ದೇ ಇರುತ್ತವೆ. ಅವುಗಳನ್ನು ದೂರವಿಟ್ಟು ಕಲಿಯುವಂತಾಗಬೇಕು. ಜೊತೆಗೆ ಶಿಕ್ಷಕರು ತಮ್ಮ ವೃತ್ತಿ ಬದ್ಧತೆಯಿಂದ ಮಾತ್ರ ಸಂತೃಪ್ತಿ ಹೊಂದಬಹುದಾಗಿದೆ ಎಂದು ನುಡಿದರು.

ಮುಖ್ಯ ಅತಿಥಿಗಳಾಗಿದ್ದ ಸುತ್ತೂರು ಜೆಎಸ್‌ಎಸ್ ಸಂಸ್ಥೆಗಳ ಸಂಯೋಜನಾಧಿಕಾರಿ ಜಿ.ಎಲ್. ತ್ರಿಪುರಾಂತಕ ಮಾತನಾಡಿ, ವಿದ್ಯಾರ್ಥಿಗಳು ಓದು ಮತ್ತು ಬರೆಯುವಾಗ ಅಶಿಸ್ತು ಮತ್ತು ಅಶುದ್ಧತೆ ತಾಂಡವವಾಡುತ್ತಿದೆ. ಭಾಷಾ ಪ್ರಯೋಗ ಮಾಡುವಾಗ ಅಪಾರ್ಥ, ಆಭಾಸಗಳಿಗೆ ಎಡೆಮಾಡಿ ಕೊಡಬಾರದು. ಆದ್ದರಿಂದ ಶಿಕ್ಷಕರು ಮಕ್ಕಳಿಗೆ ಜಾಗರೂಕತೆಯಿಂದ ಕಲಿಸಬೇಕು. ಅಭ್ಯಾಸ ಮತ್ತು ಪೂರಕ ವಾತಾವರಣದಿಂದ ಕಲಿಕೆಯಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ಕಿವಿಮಾತು ಹೇಳಿದರು. ಸುತ್ತೂರು ಜೆಎಸ್‌ಎಸ್ ಸಂಸ್ಥೆಗಳ ಹೆಚ್ಚುವರಿ ಸಂಯೋಜನಾಧಿಕಾರಿ ಸಂಪತ್ತು, ವಿಷಯ ಸಂಪನ್ಮೂಲ ವ್ಯಕ್ತಿಗಳಾದ ರವೀಶ್‌ಕುಮಾರ್, ಹೆಚ್.ವಿ.ಮಹದೇವ ಪ್ರಸಾದ್, ಮೋಲಿ ವರ್ಗೀಸ್, ಎಸ್. ಆಶಾ ಉಪಸ್ಥಿತರಿದ್ದರು. ಸುತ್ತೂರಿನ ಶಾಲಾ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ವಿಷಯ ಪರಿವೀಕ್ಷಕ ಎಸ್.ಸಿ.ಚನ್ನಬಸಪ್ಪ ಸ್ವಾಗತಿಸಿದರು. ಸಹಾಯಕ ಶಿಕ್ಷಣಾಧಿಕಾರಿ ಎನ್. ರೇಣುಕಸ್ವಾಮಿ ವಂದಿಸಿದರು. ಸಹಶಿಕ್ಷಕರಾದ ಅಂದಯ್ಯ ಶಿರೂರ ಮಠ ನಿರೂಪಿಸಿದರು.



ವರುಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಶಿಕಾರಿಪುರ ಕ್ಷೇತ್ರದ ನೂತನ ಶಾಸಕ ವಿಜಯೇಂದ್ರ ಯಡಿಯೂರಪ್ಪ ಅವರನ್ನು ಸನ್ಮಾನಿಸಿದರು. ಈ ಸಂದರ್ಭ ಪೂಜಿತ್ ಮೆಡಿಕಲ್ ಕುಮಾರ್, ಆಲಗೂಡು ಪಿಎಸಿಎಸ್ ಮಾಜಿ ಅಧ್ಯಕ್ಷ ತೊಂಟೇಶ್, ಎಪಿಎಂಸಿ ಮಾಜಿ ಸದಸ್ಯ ಸಾಲೂರು ಸ್ವಾಮಿ, ಮುಖಂಡರಾದ ಪ್ರಭುಸ್ವಾಮಿ, ಶಂಕರ್, ಮೂಗಪ್ಪ ಇದ್ದಾರೆ.

ಅನಾಹುತಕ್ಕೆ ಆಹ್ವಾನ ನೀಡುತ್ತಿರುವ ಪೈಪ್‌ಲೈನ್ ವಾಲ್

ಹೆಚ್.ಡಿ.ಕೋಟೆ, ಮೇ 24– ತಾಲೂಕಿನ ಎನ್.ಬೇಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಕುಡಿಯವ ನೀರು ವ್ಯವಸ್ಥೆಗಾಗಿ ರಸ್ತೆ ಬದಿ ಪೈಪ್ ಲೈನ್ ವ್ಯವಸ್ಥೆ ಮಾಡಲಾಗಿದೆ. ಈ ಭಾಗದಲ್ಲಿ ಗೇಟ್‌ವಾಲ್‌ಗಳನ್ನು ಅಳವಡಿಸಲಾಗಿದೆ. ಅವುಗಳನ್ನು ಮುಚ್ಚದೆ ಇರುವುದರಿಂದ ವಾಹನ ಸಂಚಾರರಿಗೆ ಅನಾಹುತಕ್ಕೆ ಆಹ್ವಾನ ಕೊಟ್ಟಂತಾಗಿದೆ ಎಂದು ಕೆಂಚನಹಳ್ಳಿ ಭಾಗದ ಗ್ರಾಮಸ್ಥರು ಆರೋಪಿಸಿದ್ದಾರೆ.



ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಎನ್. ಬೇಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎನ್.ಬೇಗೂರು, ಕನಕನಹಳ್ಳಿ ತಿಟ್ಟು, ಮೂರು ಬಂದ್, ಬೋರೆ ದೇವರಮುಂಟಿ, ಕೆಂಚನಹಳ್ಳಿ ಗ್ರಾಮದವರಿಗೆ ಕುಡಿಯುವ ನೀರಿನ ಪೂರೈಸಲು ಪೈಪ್‌ಲೈನ್ ಕಾಮಗಾರಿ ಪೂರ್ತಿಗೊಂಡಿದೆ. ಆದರೆ ರಸ್ತೆಯ ಪಕ್ಕದಲ್ಲಿ ಗೇಟ್‌ವಾಲ್‌ಗಳನ್ನು ಹಾಕಲು ತೊಟ್ಟಿ ಮಾಡಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅದರ ಮೇಲೆ ಯಾವುದೇ ರೀತಿ ಮುಚ್ಚಿಲ್ಲ. ಮೂರು ದಿನಗಳ ಹಿಂದೆ ಬೈಕ್ ಸವಾರರು ಗುಂಡಿಗೆ ಬಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಇದನ್ನು ಮುಚ್ಚಲು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ. ಮುಂದಿನ ದಿನಗಳಲ್ಲಿ ಗೇಟ್‌ವಾಲ್‌ಗೆ ತೆಗೆದಿರುವ ಗುಂಡಿಗಳನ್ನು ಮುಚ್ಚದಿದ್ದಲ್ಲಿ ಪ್ರತಿಭಟನೆ ಮಾಡಲಾಗುವುದು ಎಂದು ಈ ಭಾಗದ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಡಾ.ಹೆಚ್.ಸಿ.ಮಹದೇವಪ್ಪಗೆ ಸಚಿವ ಸ್ಥಾನ ನೀಡಲು ಆಗ್ರಹ

ತಿ.ನರಸೀಪುರ, ಮೇ 24– ರಾಜ್ಯ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ಶಾಸಕ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನವನ್ನು ನೀಡಬೇಕು ಎಂದು ಕಾಂಗ್ರೆಸ್ ಯುವ ಮುಖಂಡ ಸಂದೇಶ್ ಸ್ವಾಮಿನಾಥಗೌಡ ಪಕ್ಷದ ವರಿಷ್ಠರು ಸೇರಿದಂತೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.



ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆರು ಬಾರಿ ಶಾಸಕರಾಗಿ, ಮೂರು ಅವಧಿಗೆ ಸಚಿವರಾಗಿಯೂ ಸೇವೆಯನ್ನು ಸಲ್ಲಿಸಿರುವ ಮಹದೇವಪ್ಪ ಅವರು ನೂತನ ಸರ್ಕಾರದಲ್ಲಿ ಸಚಿವರಾಗಲು ಸಮರ್ಥರು ಹಾಗೂ ಯೋಗ್ಯರಿದ್ದಾರೆ. ಹಾಗಾಗಿ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಸಚಿವ ಸ್ಥಾನ ನೀಡಿ, ಮೈಸೂರು ಜಿಲ್ಲಾ ಉಸ್ತುವಾರಿ ಜವಾಬ್ದಾರಿಯನ್ನು ಕೊಡಬೇಕೆಂದು ಮನವಿ ಮಾಡಿದರು.

ಆರೋಗ್ಯ ಸಚಿವರಾಗಿ ಆ ಕ್ಷೇತ್ರದಲ್ಲಿ ಹಲವು ಸುಧಾರಣೆ ತಂದು ವೈದ್ಯಕೀಯ ಸೇವೆ ಸಾಮಾನ್ಯ ಜನರ ಕೈಗೆ ಸಿಗುವಂತೆ ಮಾಡಿದ್ದರು. ಆರ್‌ಡಿಪಿ ಸಚಿವರಾಗಿದ್ದಾಗ ಗ್ರಾಮೀಣಾಭಿವೃದ್ಧಿಗೆ ಹೊಸ ಆಯಾಮ ನೀಡಿ, ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಬಲಪಡಿಸಿದರು. ಲೋಕೋಪಯೋಗಿ ಸಚಿವರಾಗಿದ್ದಾಗ ರಾಜ್ಯದ ರಸ್ತೆಗಳಿಗೆ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಸ್ವರೂಪವನ್ನು ನೀಡಿ ಸಂಪರ್ಕ ಜಾಲವನ್ನು ಸೃಷ್ಟಿಸಿದರು. ಅಭಿವೃದ್ಧಿ ಹಾಗೂ ಪ್ರಜಾಪ್ರಭುತ್ವದ ಬಗ್ಗೆ ಬದ್ಧತೆ ಇರುವ ಮಹದೇವಪ್ಪ ಅವರು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಕ್ಯಾಬಿನೆಟ್‌ನಲ್ಲಿ ಸಚಿವರಾಗಿ ಸೇವೆ ಸಲ್ಲಿಸಲು ಅವಕಾಶ ಕಲಿಸಬೇಕು ಎಂದು ಸಂದೇಶ್ ಸ್ವಾಮಿನಾಥಗೌಡ ಆಗ್ರಹಿಸಿದ್ದರು.

ತಾಲೂಕು ಕುರುಬರ ಸಂಘದ ಕಾರ್ಯದರ್ಶಿ ಕೊತ್ತೇಗಾಲ ಬಸವರಾಜು ಮಾತನಾಡಿ, ಮಹದೇವಪ್ಪರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು.

ಯುವ ಮುಖಂಡ ಮಣಿ. ಸುಹಾಸ್ ನಾಯಕ್. ಮಂಜು. ಲೋಕೇಶ್. ಮುರುಳಿ. ಸಾಗರ್ ಇದ್ದಾರೆ

ನಾಳೆ ಹಂಪಾಪುರದಲ್ಲಿ ಕಾರ್ನಾಡು ಮಾಲಮ್ಮ ದೇವರ ಉತ್ಸವ

ನಂಜನಗೂಡು, ಮೇ 24– ನಂಜನಗೂಡು ತಾಲೂಕು, ಕೌಲಂದೆ ಹೋಬಳಿ, ನೇರಳೆ ಗ್ರಾಮದ ಕುರುಬ ಸಮಾಜದವರ ಕುಲದೇವರಾದ ಶ್ರೀ ಕಾರ್ನಾಡು ಮಾಲಮ್ಮ ನವರ ವಾರ್ಷಿಕ ಉತ್ಸವವು ಮೇ 26 ರಂದು ಹಂಪಾಪುರ ಗ್ರಾಮದಲ್ಲಿ ನಡೆಯಲಿದೆ.



ಅಂದು ಬೆಳಗ್ಗೆಯಿಂದ ದೇವಾಲಯದಲ್ಲಿ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಮಧ್ಯಾಹ್ನ 12 ಗಂಟೆಯ ನಂತರ ದೇವರ ಉತ್ಸವ ನಡೆಯಲಿದೆ. ಗ್ರಾಮದಲ್ಲಿ ಮೆರವಣಿಗೆ ಸಾಗಲಿದೆ. ಮಧ್ಯಾಹ್ನ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ.

ಹಂಪಾಪುರ ಗ್ರಾಮದಲ್ಲಿ ನೆಲೆಸಿರುವ ತಾಯಿ ಕಾರ್ನಾಡು ಮಾಲಮ್ಮನವರ ದೇವಸ್ಥಾನವನ್ನು ಕಳೆದ ವರ್ಷ ಸಂಪೂರ್ಣ ನವೀಕರಿಸಿ ಉದ್ಘಾಟಿಲಾಗಿತ್ತು. ಇದೀಗ ದೇವಸ್ಥಾನಕ್ಕೆ ಒಂದು ವರ್ಷ ತುಂಬಿದ ಹಿನ್ನೆಲೆಯಲ್ಲಿ ಶುಕ್ರವಾರ ಈ ವಿಶೇಷ ಪೂಜೆಯನ್ನು ಏರ್ಪಡಿಸಲಾಗಿದೆ ಎಂದು ನೇರಳ ಗ್ರಾಮದ ಯಜಮಾನರು ತಿಳಿಸಿದ್ದಾರೆ.



ಭಾರಿ ಮಳೆಯಿಂದಾಗಿ ಬೆಟ್ಟದಪುರ ಸಮೀಪದ ಅಲ್ಪನಾಯಕನಹಳ್ಳಿ ಗ್ರಾಮದ ಶಿವರಾಜ್ ಎಂಬುವರ ಮನೆಯ ಚಾವಣಿ ಹಾರಿ ಹೋಗಿ ಅವರ ತಾಯಿ ವಸಂತಮ್ಮ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮನೆ ಚಾವಣಿ ಹಾರಿ ಹೋಗಿ ಇದೀಗ ಬಡ ರೈತ ಶಿವರಾಜ್ ಅವರಿಗೆ ನೆಲೆ ಇಲ್ಲದಂತಾಗಿದೆ. ಕೂಡಲೆ ಸರ್ಕಾರ ಇವರಿಗೆ ಪರಿಹಾರ ಒದಗಿಸಬೇಕೆಂದು ಗ್ರಾಮ ಪಂಚಾಯತಿ ಅಧ್ಯಕ್ಷ ಧರಣೇಶ್ ಒತ್ತಾಯಿಸಿದ್ದಾರೆ.

ಕೆ.ಆರ್. ನಗರ ತಾಲೂಕು ಕುರುಬರ ಸಂಘದ ಮಾಜಿ ಅಧ್ಯಕ್ಷ ಜಿ.ಎನ್. ಮಲ್ಲೇಗೌಡ ನಿಧನ

ಭೇರ್ಯ, ಮೇ 24 – ಗಂಧನಹಳ್ಳಿ ಗ್ರಾಮದ ಕೆ.ಆರ್.ನಗರ ತಾಲೂಕು ಕುರುಬರ ಸಂಘದ ಮಾಜಿ ಅಧ್ಯಕ್ಷ ಹಾಗೂ ತಾಲೂಕು ಬೋರ್ಡ್ ಮಾಜಿ ಅಧ್ಯಕ್ಷ ಜಿ.ಎನ್.ಮಲ್ಲೇಗೌಡ(73) ಬುಧವಾರ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯು ಗಂಧನಹಳ್ಳಿ ಗ್ರಾಮದ ಜಮೀನಿನಲ್ಲಿ ಅಪಾರ ಬಂಧು-ಬಳಗದ ಸಮ್ಮುಖದಲ್ಲಿ ನಡೆಯಿತು.



ಮಲ್ಲೇಗೌಡರ ನಿಧನಕ್ಕೆ ಶಾಸಕ ಡಿ.ರವಿಶಂಕರ್, ಕೆಪಿಸಿಸಿ ಕಾರ್ಯಕಾರಣಿ ಸದಸ್ಯ ದೊಡ್ಡಸ್ವಾಮೇಗೌಡ, ಜಿಪಂ ಮಾಜಿ ಸದಸ್ಯ ಅಮಿತ್ ದೇವರಹಟ್ಟಿ, ಸಿದ್ದಪ್ಪ, ಪುರಸಭಾ ಮಾಜಿ ಅಧ್ಯಕ್ಷ ಕೋಳಿ ಪ್ರಕಾಶ್, ಸದಸ್ಯ ನಟರಾಜು, ತಾಪಂ ಮಾಜಿ ಅಧ್ಯಕ್ಷ ಹೆಚ್.ಟಿ.ಮಂಜಪ್ಪ, ಮಾಜಿ ಸದಸ್ಯ ಜಿ.ಎಸ್.ಮಂಜುನಾಥ್ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

ಮುಖ್ಯಮಂತ್ರಿಗಳಿಂದಲೇ ಸಂಪುಟ ವಿಸ್ತರಣೆ: ಡಿಕೆಶಿ

ಬೆಂಗಳೂರು: ಮುಖ್ಯಮಂತ್ರಿಗಳಿಂದಲೇ ಸಚಿವ ಸಂಪುಟ ವಿಸ್ತರಣೆ ನಡೆಯಲಿದೆ. ಸಂಪುಟ ವಿಸ್ತರಣೆ ಮಾಡುವ ಅಧಿಕಾರ ಅವರಿಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಸಂಪುಟ ವಿಸ್ತರಣೆ ಮಾಡುವ ಅಧಿಕಾರ ಸಿಎಂಗೆ. ಅಲ್ಲದೆ ಸಂಪುಟ ವಿಸ್ತರಣೆ ಬಗ್ಗೆ ಉತ್ತರಿಸಲು ಅವರೇ ಸೂಕ್ತ ವ್ಯಕ್ತಿ ಎಂದು ಹೇಳಿದ್ದಾರೆ. ಈ ವೇಳೆ ಪೊಲೀಸರಿಗೆ ನೀಡಲಾಗಿರುವ ಖಡಕ್ ಸೂಚನೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿ, ಕಾನೂನನ್ನು ಕೈಗೆತ್ತಿಕೊಳ್ಳಲು ಯಾರಿಗೂ ಅವಕಾಶ ನೀಡುವುದಿಲ್ಲ. 3–4 ಸ್ಥಳಗಳಲ್ಲಿ ಪೊಲೀಸ್ ಅಧಿಕಾರಿಗಳು ತಮ್ಮ ಅಜೆಂಡಾವನ್ನು ಹೇರಿದ್ದಾರೆ. ತಮ್ಮ ಸಮವಸ್ತ್ರ ತೆಗೆದು ರಾಜಕೀಯ ಉಡುಗೆಗಳನ್ನು ಧರಿಸಿ, ಫೋಟೋಗಳಿಗೂ ಫೋಸ್ ನೀಡಿದ್ದಾರೆ. ಇದು ಅಸಂವಿಧಾನಿಕ ಎಂದು ಕಿಡಿಕಾರಿದ್ದಾರೆ.

ರೋಟರಿ ಗಾಯತ್ರಿ ಶಿಕ್ಷಣ ಪ್ರಶಸ್ತಿ ಪ್ರದಾನ

ಮೈಸೂರು: ರೋಟರಿ ಮೈಸೂರು ಸಂಸ್ಥೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 620 ಮತ್ತು ಹೆಚ್ಚಿನ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ರೋಟರಿ ಗಾಯತ್ರಿ ಶಿಕ್ಷಣ ಪ್ರಶಸ್ತಿ ಹಾಗೂ ಪ್ರೋತ್ಸಾಹಧನ ನೀಡುತ್ತಿದೆ. 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 490 ಹಾಗೂ ಹೆಚ್ಚು ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳು ತಾತ್ಕಾಲಿಕ ಅಂಕಪಟ್ಟಿಗೆ ಸಹಿ ಹಾಗೂ ಮೊಹರನ್ನು ಹಾಕಿದ ಅರ್ಜಿಯನ್ನು ಮೇ 26ರಂದು ಸಂಜೆ 5 ಗಂಟೆಯೊಳಗೆ ಕಾರ್ಯದರ್ಶಿಗಳು, ರೋಟರಿ ಮೈಸೂರು, ರೋಟರಿ ಕೇಂದ್ರ ಜೆಎಲ್‌ಬಿ ರಸ್ತೆ ಮೈಸೂರು ಇಲ್ಲಿಗೆ ಸಲ್ಲಿಸಲು ಕೋರಲಾಗಿದೆ. ಮಾಹಿತಿಗೆ ದೂ. 0821–4247823

71ನೇ ವರ್ಷದ ಹುಟ್ಟುಹಬ್ಬದ ಶುಭಾಶಯಗಳು



ಎಂ ಮಹದೇವಪ್ಪ
ನಿವೃತ್ತ ರೈಲ್ವೆ ನೌಕರರು

ಎಲ್ಲಮ್ಮ ತಾಯಿ ಕೃಪೆ ಮತ್ತು ಚಾಮುಂಡಿ ತಾಯಿ ಆಶೀರ್ವಾದವು ಸದಾ ನಿಮ್ಮ ಮೇಲೆ ಇರಲಿ
ಶುಭಕೋರುವವರು: ಪರಮೇಶ ಬಂಧುಗಳು, ರಾಜೇಂದ್ರ ಬಂಧುಗಳು, ಕೋಮಲ ಬಂಧುಗಳು, ಸೊಸೆ ಮಗ ಮತ್ತು ಮೊಮ್ಮಕ್ಕಳು

ವಿಧಾನಸಭೆ ಚುನಾವಣೆಯ ಫಲಿತಾಂಶ 2024ರ ಲೋಕಸಭಾ ಚುನಾವಣೆ ದಿಕ್ಸೂಚಿ

● ಕಾಂಗ್ರೆಸ್ ಮುಖಂಡ ಮರೀಗೌಡ ಅಭಿಮತ ● ಇಲವಾಲ ಹೋಬಳಿಯಲ್ಲಿ ವಿಜಯೋತ್ಸವ



ಮೈಸೂರು, ಮೇ 24– ಕಾಂಗ್ರೆಸ್ ಪಕ್ಷ 135 ಸ್ಥಾನಗಳ ಗೆದ್ದು ಅಧಿಕಾರಕ್ಕೆ ಬಂದಿದೆ. ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಉಪ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಂಭ್ರಮದ ಹಿನ್ನೆಲೆಯಲ್ಲಿ ಬುಧವಾರ ಇಲವಾಲ ಹೋಬಳಿಯಲ್ಲಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಲಾಯಿತು.

ಈ ವೇಳೆ ಕೆಪಿಸಿಸಿ ಸದಸ್ಯರೂ ಆದ ಮೈಸೂರು ಜಿಪಂ ಮಾಜಿ ಅಧ್ಯಕ್ಷ ಕೆ.ಮರೀಗೌಡ ಮಾತನಾಡುತ್ತಾ, ನಮ್ಮ ರಾಷ್ಟ್ರೀಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ ಈ ಎಲ್ಲಾ ರಾಜ್ಯಮಟ್ಟದ ನಾಯಕರ ಅವಿರತ ಪ್ರಯತ್ನದ ಫಲವಾಗಿ ಕಾಂಗ್ರೆಸ್ 135 ಸೀಟುಗಳನ್ನು ಗೆದ್ದು ಅಧಿಕಾರಕ್ಕೆ ಬಂದು, ಸಿದ್ದರಾಮಯ್ಯ ಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿಯಾಗಿ ಅಧಿಕಾರ ಹಿಡಿದಿದ್ದಾರೆ. ಸಿದ್ದರಾಮಯ್ಯನವರು 2013ರಲ್ಲಿ ಮುಖ್ಯಮಂತ್ರಿಯಾಗಿ 5 ವರ್ಷಗಳ ಕಾಲ ಉತ್ತಮ ಆಡಳಿತ ನೀಡಿ, ಎಲ್ಲ ಜಾತಿ–ಧರ್ಮದವರ ಹಿತ ಕಾಯುವುದರ ಜೊತೆಗೆ ಸಾಮಾಜಿಕ ನ್ಯಾಯ ಕಲ್ಪಿಸಿದ್ದರು ಎಂದರು.

ಚುನಾವಣಾ ಪೂರ್ವದಲ್ಲಿ ರಾಷ್ಟ್ರೀಯ ಹಾಗೂ ರಾಜ್ಯದ ನಾಯಕರು ಕೊಟ್ಟಂತಹ ಐದು ಕಾಂಗ್ರೆಸ್ ಗ್ಯಾರಂಟಿಗಳು ಜನರ ಮನಸ್ಸಿನಲ್ಲಿ ಉಳಿದಿದ್ದು, ಈಗ ವಿರೋಧ ಪಕ್ಷಗಳು, ಸರ್ಕಾರ ಗ್ಯಾರಂಟಿಗಳನ್ನು ಕೊಡುವುದಿಲ್ಲ ಎಂದು ಹೇಳುತ್ತಿವೆ. ಆದರೆ ಸಿದ್ದರಾಮಯ್ಯನವರು ಮೊದಲ ಸಂಪುಟ ಸಭೆಯಲ್ಲೇ ಎಲ್ಲಾ ಗ್ಯಾರಂಟಿಗೆ ತಾತ್ವಿಕವಾಗಿ ಅನುಮೋದನೆ ನೀಡಿದ್ದು, ಪೂರ್ಣ ಪ್ರಮಾಣದಲ್ಲಿ ಸಂಪುಟ ರಚನೆಯಾದ ನಂತರ ಅನುಷ್ಠಾನಗೊಳಿಸುತ್ತಾರೆ ಎಂದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸಿದ್ದರಾಮಯ್ಯನವರೇ ನಮ್ಮ ನಾಯಕರು. ಅವರ ನಾಯಕತ್ವದಲ್ಲಿ ನಂಬಿಕೆ ಇಟ್ಟು ಕ್ಷೇತ್ರದ ಮತದಾರರು 80,000 ಮತಗಳನ್ನು ನೀಡಿದ್ದಾರೆ. ಇದು ಸಿದ್ದರಾಮಯ್ಯನವರ ಶಕ್ತಿಯೇ ಹೊರತು ಬೇರೆ ಯಾವುದೇ ಶಕ್ತಿ ಅಲ್ಲ. ಚಾಮುಂಡೇಶ್ವರಿಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಸೋತಿದ್ದರು ಕೂಡ ಎಂಎಲ್ಎ ಇಲ್ಲ ಎಂದು ಆತಂಕಪಡುವ ಅಗತ್ಯವಿಲ್ಲ. ನಮ್ಮ ನಾಯಕರಾದ ಸಿದ್ದರಾಮಯ್ಯನವರು ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿಗೆ ನೆರವಾಗಲಿದ್ದಾರೆ. ಎಲ್ಲಾ ಕೆಲಸಗಳು ಸುಗಮವಾಗಿ ಸಾಗುತ್ತವೆ ಎಂದು ತಿಳಿಸಿದರು.

ವಿಧಾನಸಭೆ ಚುನಾವಣೆ ಫಲಿತಾಂಶ ಮುಂದಿನ ಲೋಕಸಭೆ ಚುನಾವಣೆಗೆ ದಿಕ್ಸೂಚಿಯಾಗುವ ಎಲ್ಲಾ ಸೂಚನೆಗಳು ಕಂಡು ಬರುತ್ತಿದೆ. ಸಿದ್ದರಾಮಯ್ಯನವರ ಪ್ರಮಾಣವಚನಕ್ಕೆ ಪ್ರಮುಖ 18 ರಾಜ್ಯ, ರಾಷ್ಟ್ರದ ನಾಯಕರು ಭಾಗವಹಿಸಿದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯನವರ ನಾಯಕತ್ವದಲ್ಲಿ ಅಹಿಂದ ಸಂಘಟನೆ ಪ್ರಾರಂಭವಾಗುತ್ತದೆ. ಅದು ಮುಂದಿನ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಶತಸಿದ್ಧ ಎಂದರು.

ಕೂರ್ಗಳ್ಳಿ ಮಹದೇವು, ಹೊಸಕಾಮನಕೊಪ್ಪಲು ಸ್ವಾಮಿ, ಇಲವಾಲ ಕೋಳಿ ಸುರೇಶ, ನಾಗೇಶ, ಬ್ಲಾಕ್ ಅಧ್ಯಕ್ಷರಾದ ಗುರುಸ್ವಾಮಿ, ಸತೀಶ್‌ಕುಮಾರ್, ಆರಿಫ್, ರಾಮೇಗೌಡ, ಹುಸೇನ್, ನಾಗವಾಲ ಮಹೇಶ್, ಮಹೇಶ್, ಇಲವಾಲ ಹೋಬಳಿ ಮಟ್ಟದ ನಾಯಕರು, ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಲೇಟ್ ರಾಚಪ್ಪಚಾರ್ ರವರ ಮಗಳು ಕು. ವಿಜಯಕುಮಾರಿ ಆರ್. ರವರು, ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಸದರಿ ಸ್ವತ್ತಿಗೆ ಸಂಬಂಧಿಸಿದ ಮೂಲದಾಖಲೆಗಳಾದ ಸಿ.ಐ.ಟಿ.ಬಿ. ಮಂಜೂರಾತಿ ಪತ್ರ ಹಾಗೂ ಸ್ವಾಧೀನ ಪತ್ರವನ್ನು ಕಳೆದುಕೊಂಡಿರುತ್ತಾರೆ. ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ: ಮೈಸೂರು ಸಿಟಿ, ನಜರ್‌ಬಾದ್ ಮೊಹಲ್ಲಾ, ಗಾಯತ್ರಿಪುರಂ 1ನೇ ಹಂತದಲ್ಲಿರುವ ಸ್ವತ್ತಿನ ಸಂಖ್ಯೆ. 124, ಹಳೇ ಸಂಖ್ಯೆ. 126, [ಹಾಲಿ ಎಂಸಿಸಿ ಪಿಐಡಿ ಸಂಖ್ಯೆ. 120003, ವಾರ್ಡ್ ನಂ. 39], ಉಳ್ಳ ಸ್ವತ್ತಿನ ವಿಸ್ತೀರ್ಣ ಪೂರ್ವ ಪಶ್ಚಿಮ 35 ಅಡಿಗಳು ಮತ್ತು ಉತ್ತರ ದಕ್ಷಿಣ 20 ಅಡಿಗಳು, ಇದರಲ್ಲಿರತಕ್ಕ ಕಟ್ಟಡವನ್ನೊಳಗೊಂಡ ಸ್ವತ್ತಿಗೆ ಚಕ್ಕುಬಂದಿ ಪೂರ್ವಕ್ಕೆ: ರಸ್ತೆ, ಪಶ್ಚಿಮಕ್ಕೆ: ಸ್ವತ್ತಿನ ಸಂಖ್ಯೆ. 111, ಉತ್ತರಕ್ಕೆ: ಸ್ವತ್ತಿನ ಸಂಖ್ಯೆ. 123 ದಕ್ಷಿಣಕ್ಕೆ: ಸ್ವತ್ತಿನ ಸಂಖ್ಯೆ. 125

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು,ಎಸ್‌ಎಲ್‌ಡಿ ಲಾ ಫರ್ಮ್, ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು., ಮೊ: 9844640641
email: sldlawfirm2021@gmail.com

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ, ನಂ.29 ವಿಜಯನಗರ 2ನೇ ಹಂತ, ಹಿನಕಲ್, ಮೈಸೂರು–570017.
ಚಾವಿಸನಿನಿ/ಪ್ರವ್ಯ(ವಾ)/ಉಪ್ರವ್ಯ(ನಿವ್ಯ–1)/ಸಪ್ರವ್ಯ(ನಿವ್ಯ–1)/2023–24/3278 ದಿ: 23.05.2023

ಸಾರ್ವಜನಿಕ ಪ್ರಕಟಣೆ

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಆರ್ಥಿಕ ವರ್ಷ–24 ರ ವಿದ್ಯುತ್ ದರ ಪರಿಷ್ಕರಣೆ

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ವಿದ್ಯುಚ್ಛಕ್ತಿ ಕಾಯಿದೆ 2003, ಪರಿಚ್ಛೇದ 62, 64 ಮತ್ತು ಇತರೆ ನಿಯಮಾನುಸಾರ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 12.05.2023 ರಂದು ಆರ್ಥಿಕ ವರ್ಷ–24 ರ ವಾರ್ಷಿಕ ಕಂದಾಯ ಅಗತ್ಯತೆ ಹಾಗೂ ಏಪ್ರಿಲ್ 1 ರಿಂದ ಅನ್ವಯವಾಗುವಂತೆ ಆರ್ಥಿಕ ವರ್ಷ–24ರ ವಿದ್ಯುತ್ ದರಗಳನ್ನು ಪರಿಷ್ಕರಿಸಿದೆ.

ವಿದ್ಯುತ್ ದರ ಪರಿಷ್ಕರಣೆಯ ಮುಖ್ಯಾಂಶಗಳು:

- ಪರಿಷ್ಕೃತ ದರಗಳು 2023 ರ ಏಪ್ರಿಲ್ 1 ರಂದು ಅಥವಾ ಅದರ ನಂತರದ ಮೊದಲ ಮೀಟರ್ ಓದುವ ದಿನಾಂಕದಿಂದ ಬಳಕೆ ಮಾಡುವ ವಿದ್ಯುಚ್ಛಕ್ತಿಗೆ ಅನ್ವಯವಾಗುತ್ತದೆ.
- ಮಾನ್ಯ ಆಯೋಗವು ಎಲ್ಲಾ ಜಕಾತಿ ಪ್ರವರ್ಗಗಳಲ್ಲಿ ವಿದ್ಯುತ್ ಬಳಕೆ ಶುಲ್ಕ ಮತ್ತು ನಿಗಧಿತ ಶುಲ್ಕದಲ್ಲಿ ಪ್ರತಿ ಯೂನಿಟ್‌ಗೆ ಸರಾಸರಿ 70 ಪೈಸೆ ಹೆಚ್ಚಿಸಿದೆ.
- ಒಟ್ಟಾರೆ ಜಕಾತಿ ಹೆಚ್ಚಳವು ಶೇ.8.86% ರಷ್ಟು ಇದೆ.
- ಆಯೋಗವು ಎಲ್.ಟಿ–2 ಗೃಹ ಬಳಕೆ ವರ್ಗದ ಗ್ರಾಹಕರಿಗೆ ನಾನ್–ಟೆಲಿಸ್ಕೋಪಿಕ್ ಜಕಾತಿಯನ್ನು ಪರಿಚಯಿಸಿದೆ.
- ಆಯೋಗವು ನಗರ ಮತ್ತು ಗ್ರಾಮೀಣ ವರ್ಗಗಳನ್ನು ವಿಲೀನಗೊಳಿಸಿದೆ
- ಆಯೋಗವು ಹೆಚ್.ಟಿ–3(ಎ)(i), ಹೆಚ್.ಟಿ–3(ಎ)(ii) ಹಾಗೂ ಹೆಚ್.ಟಿ–3(ಎ)(iii) ಜಕಾತಿ ವರ್ಗಗಳನ್ನು ವಿಲೀನಗೊಳಿಸಿ, ಹೆಚ್.ಟಿ–3(ಎ) ಎಂದು ಮರುವರ್ಗೀಕರಿಸಿದೆ.
- ಜಕಾತಿ ವರ್ಗ ಹೆಚ್.ಟಿ–3(ಬಿ) ಯನ್ನು ಹೆಚ್.ಟಿ–6 ಎಂದು ಮರುನಾಮಕರಣ ಮಾಡಲಾಗಿದೆ.
- ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳ ನೀತಿಗಳಿಗನುಗುಣವಾಗಿ, ಪರಿಸರ ಸ್ನೇಹಿ ವಿದ್ಯುತ್ ವಾಹನ ಬಳಕೆಯನ್ನು ಉತ್ತೇಜಿಸಲು ವಿದ್ಯುತ್ ವಾಹನ ಚಾರ್ಜಿಂಗ್ ಕೇಂದ್ರಗಳು ಹಾಗೂ ವಿದ್ಯುತ್ ವಾಹನಗಳಲ್ಲಿ ಬಳಸುವ ಬ್ಯಾಟರಿಗಳನ್ನು ಚಾರ್ಜ್ ಮಾಡುವ ಘಟಕಗಳ ಜಕಾತಿ ವರ್ಗವಾದ ಎಲ್‌ಟಿ6(ಸಿ)ಯ ವಿದ್ಯುತ್ ಬಳಕೆ ಶುಲ್ಕವನ್ನು ಪ್ರತಿ ಯೂನಿಟ್‌ಗೆ ರೂ.5.00 ರಿಂದ ರೂ.4.50ಕ್ಕೆ ಇಳಿಸಲಾಗಿದೆ ಹಾಗೂ ನಿಗಧಿತ ಶುಲ್ಕದಲ್ಲಿ ಯಾವುದೇ ಹೆಚ್ಚಳವಿರುವುದಿಲ್ಲ.
- ಕರ್ನಾಟಕ ಸರ್ಕಾರವು ಪ್ರಮಾಣೀಕರಿಸಿರುವ ಎಲ್‌ಟಿ–5 ವರ್ಗದ ಸ್ಥಾವರಗಳಿಗೆ, 12 ತಿಂಗಳ ಅವಧಿಗೆ ವಿದ್ಯುತ್ ಬಳಕೆ ಶುಲ್ಕದಲ್ಲಿ ಪ್ರತಿ ಯೂನಿಟ್‌ಗೆ 50 ಪೈಸೆ ರಿಯಾಯಿತಿಯನ್ನು ನೀಡಲಾಗಿದೆ.
- ಹಾಲಿ ಇರುವ ಟಿಓಡಿ ಜಕಾತಿಯನ್ನು ಮುಂದುವರೆಸಲಾಗಿದೆ.
- ಆಯೋಗವು ಅನುಮೋದಿಸಿರುವ ಸಮಯಾಧಾರಿತ ವಿದ್ಯುತ್ (ಟಿಓಡಿ) ಜಕಾತಿಯು ಕೆಆರ್‌ಎಸ್‌ಟಿಸಿಯ ಡಿಪೋಗಳಲ್ಲಿ ಎಲೆಕ್ಟ್ರಿಕ್ ಮೋಟಾರು ವಾಹನವನ್ನು ಚಾರ್ಜ್ ಮಾಡಲು ಪಡೆದುಕೊಂಡಿರುವ ಎಲ್‌ಟಿ–6(ಸಿ) ಸ್ಥಾವರಗಳಿಗೂ ಅನ್ವಯಿಸುತ್ತದೆ.
- ಹೆಚ್ಚುವರಿ ವಿದ್ಯುತ್ ಮಾರಾಟವನ್ನು ಉತ್ತೇಜಿಸುವ ಸಲುವಾಗಿ, ಎಚ್‌ಟಿ 2(ಎ), (ಬಿ) ಮತ್ತು (ಸಿ) ಪ್ರವರ್ಗಗಳಿಗೆ ಮೂಲ / ಕ್ರಮಬದ್ದ ಬಳಕೆಗಿಂತ ಹೆಚ್ಚಿನ ವಿದ್ಯುಚ್ಛಕ್ತಿ ಬಳಕೆಗೆ ಪ್ರತಿ ಯೂನಿಟ್‌ಗೆ ರೂ.6.00 ರಿಂದ ರೂ.5.00ಕ್ಕೆ ಇಳಿಸಿ ವಿದ್ಯುತ್ ಮಾರಾಟ ಮಾಡಲು "ರಿಯಾಯಿತಿ ವಿದ್ಯುಚ್ಛಕ್ತಿ ದರ ಯೋಜನೆ" ಯನ್ನು ಮುಂದುವರಿಸಲಾಗಿದೆ.
- "ರಿಯಾಯಿತಿ ವಿದ್ಯುಚ್ಛಕ್ತಿ ದರ ಯೋಜನೆ" ಯನ್ನು ಎಲ್.ಟಿ ಕೈಗಾರಿಕಾ ಗ್ರಾಹಕರು ಹಾಗೂ ಎಲ್.ಟಿ ವಾಣಿಜ್ಯ ಗ್ರಾಹಕರಿಗೆ ವಿಸ್ತರಿಸಲಾಗಿದೆ.
- ವಿದ್ಯುತ್ ಮಾರಾಟವನ್ನು ಹೆಚ್ಚಿಸಲು ಮತ್ತು ಗ್ರಾಹಕರನ್ನು ಎಸ್ಕಾಂಗಳ ಕಡೆಗೆ ಆಕರ್ಷಿಸುವ ಸಲುವಾಗಿ, ಆಯೋಗವು ಅಸ್ತಿತ್ವದಲ್ಲಿರುವ "ವಿಶೇಷ ಪ್ರೋತ್ಸಾಹಕ ಯೋಜನೆ" ಯನ್ನು ಎಚ್‌ಟಿ ವರ್ಗಕ್ಕೆ ಮುಂದುವರಿಸಲಾಗಿದೆ.
- ಆಯೋಗವು ನವೀಕರಿಸಬಹುದಾದ ಇಂಧನ ಮೂಲಗಳಿಂದ ಉತ್ಪಾದಿಸುವ ವಿದ್ಯುಚ್ಛಕ್ತಿಯ ಖರೀದಿ ಮತ್ತು ಉಪಯೋಗವನ್ನು ಉತ್ತೇಜಿಸುವ ದೃಷ್ಟಿಯಿಂದ ಹೆಚ್.ಟಿ ಕೈಗಾರಿಕಾ ಮತ್ತು ವಾಣಿಜ್ಯ ಗ್ರಾಹಕರುಗಳು ಇಚ್ಛಿಸಿದಲ್ಲಿ ಅವರಿಗೆ ಅನ್ವಯವಾಗುವ ದರಕ್ಕಿಂತ ಪ್ರತಿ ಯೂನಿಟ್‌ಗೆ 50 ಪೈಸೆಯಷ್ಟು ಹೆಚ್ಚಿನ ಹಸಿರು ಜಕಾತಿಯನ್ನು ಮುಂದುವರಿಸಿದೆ.
- ಸರ್ಕಾರದಿಂದ ಸಬ್ಸಿಡಿ ಪಾವತಿಯನ್ನು ನಿಯಂತ್ರಿಸಲು ಐ.ಪಿ. ಸೆಟ್‌ಗಳ ಆರ್.ಆರ್. ಸಂಖ್ಯೆಗಳೊಂದಿಗೆ ಆಧಾರ್ ಕಾರ್ಡ್ ಸಂಖ್ಯೆಯನ್ನು ಲಿಂಕ್ ಮಾಡಲು ಆಯೋಗವು ನಿರ್ದೇಶಿಸಿದೆ.
- ಸೌರ ಶಕ್ತಿ ಚಾಲಿತ ವಾಟರ್ ಹೀಟರ್‌ಗಳನ್ನು ಬಳಸುವ ಎಲ್.ಟಿ–2(ಎ) ಸ್ಥಾವರಗಳಿಗೆ ಪ್ರತಿ ಯೂನಿಟ್‌ಗೆ 50 ಪೈಸೆಯಂತೆ ಗರಿಷ್ಠ ಮೊತ್ತ ರೂ.50 ವರೆಗೆ ನೀಡಲಾಗುತ್ತಿದ್ದ ರಿಯಾಯಿತಿಯನ್ನು ಹಿಂಪಡೆಯಲಾಗಿದೆ.
- ಇಸಿಎಸ್ ಮೂಲಕ ವಿದ್ಯುತ್ ಬಿಲ್ಲು ಪಾವತಿಗೆ ನೀಡಲಾಗುತ್ತಿದ್ದ ಪ್ರೋತ್ಸಾಹ ಧನವನ್ನು ಹಿಂಪಡೆಯಲಾಗಿದೆ.
- ವಿವರವಾದ ಜಕಾತಿ ಆದೇಶವು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಅಂತರ್ಜಾಲ https://kerc.karnataka.gov.in/55/_gallery_/en ಹಾಗೂ ಚಾವಿಸನಿನಿ ಅಂತರ್ಜಾಲ https://cescmysore.karnataka.gov.in/ರಲ್ಲಿ ಲಭ್ಯವಿದೆ.

ಸಹಿ/– ಪ್ರಧಾನ ವ್ಯವಸ್ಥಾಪಕರು (ವಾಣಿಜ್ಯ), ಚಾವಿಸನಿನಿ, ಮೈಸೂರು
DIPR/DDMYS/KSMCA/21/2023-24

ಚಿರಸ್ಮರಣೆ



ಎಂ.ಎಸ್.ಶಶಿಧರ್
ನೀವು ನಮ್ಮನ್ನಗಲಿ ಒಂದು ದಶಕವೇ ಕಳೆದರೂ, ನಿಮ್ಮ ನೆನಪು ನಮ್ಮಲ್ಲಿ ಹಚ್ಚ ಹಸಿರಾಗಿದೆ. ನಿಮ್ಮ ಆದರ್ಶವೇ ನಮ್ಮೆಲ್ಲರ ದಾರಿ ದೀಪ.
- ಶ್ರೀ ಚಾಮುಂಡೇಶ್ವರಿ ಸೇವಾ ಸಮಿತಿ (ರಿ.) ಚಾಮರಾಜ ಜೋಡಿ ರಸ್ತೆ, ಮೈಸೂರು

1ನೇ ವರ್ಷದ ಪುಣ್ಯಸ್ಮರಣೆ



ಶ್ರೀ ಲಕ್ಕೇಗೌಡರು (ಲಾರಿ)
ನೀವು ನಮ್ಮನ್ನಗಲಿ ಇಂದಿಗೆ 1 ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿದೆ
ದುಃಖತಪ್ತರು: ಪತ್ನಿ ಶ್ರೀಮತಿ ರತ್ನಮ್ಮ, ಪ್ರದೀಪ, ಶ್ರೀಮತಿ ಜಿ.ಕಿರಣ್, ಸಹೋದರರು, ಸಹೋದರಿಯರು ಹಾಗೂ ಕುಟುಂಬ ವರ್ಗದವರು,

5ನೇ ವರ್ಷದ ಸವಿನೆನಪು



ಪೈಲ್ವಾನ್.ಡಿ ನಟರಾಜು
ನೀವು ನಮ್ಮ ಜೊತೆ ಎಂದಿಗೂ ಇರಬೇಕು. ನಿಮ್ಮ ನೆನಪೇ ನಮಗೆ ದಾರಿ ದೀಪ ನಿಮ್ಮ ಆತ್ಮಕ್ಕೆ ಶಾಂತಿ ಸಿಗಲಿ
ದುಃಖತಪ್ತರು: ಮಡದಿ, ಮಕ್ಕಳು, ಗಾಂಧಿನಗರ, ಮೈಸೂರು

ಮೂರನೇ ವರ್ಷದ ಸವಿನೆನಪು



ಶ್ರೀಮತಿ ಎಚ್.ಬಿ.ಸಾವಿತ್ರಮ್ಮ
ನೀವು ನಮ್ಮನ್ನಗಲಿ ಇಂದಿಗೆ 3 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮಲ್ಲಿ ಜೀವಂತವಾಗಿರುತ್ತದೆ
ದುಃಖತಪ್ತರು: ಪತಿ ಚೆಲುವಯ್ಯ ಹಾಗೂ ಅಕ್ಕಂದಿರು ಕುಟುಂಬವರ್ಗದವರು.

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ
ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು – 570028.
ದೂರವಾಣಿ ಸಂಖ್ಯೆ:0821–2474475, ಫ್ಯಾಕ್ಸ್ ನಂ.0821–2474476,
ಇ–ಮೇಲ್ : purmymul@gmail.com

ಟೆಂಡರ್ ಸಂಖ್ಯೆ: KMF/2023-24/IND0020 ದಿನಾಂಕ: 24.05.2023

ಅಲ್ಪಾವಧಿ ಟೆಂಡರ್ ಪ್ರಕಟಣೆ – (ಇ–ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಕ್ಕೆ ಅಗತ್ಯವಿರುವ ಸಕ್ಕರೆಯನ್ನು ತ್ರೈಮಾಸಿಕ ದರ ಗುತ್ತಿಗೆ ಆಧಾರದಲ್ಲಿ ಖರೀದಿಸಲು ಹಾಗೂ ರ್‍ಯಾಕಿಂಗ್ ಸಿಸ್ಟಂ ಅನ್ನು ಸರಬರಾಜು ಮಾಡಿ ಅಳವಡಿಸುವ ಸಂಬಂಧ ಅರ್ಹ ಟೆಂಡರ್‌ದಾರರಿಂದ ಇ–ಪ್ರೊಕ್ಯೂರ್‌ಮೆಂಟ್ ಮುಖೇನ ಟೆಂಡರ್ ಅನ್ನು ಆಹ್ವಾನಿಸಲಾಗಿದೆ. ಟೆಂಡರ್ ದಾಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪ್ಲಾಟ್ ಫಾರಂ ಅಡಿ **https://kppp.karnataka.gov.in** ಈ ವೆಬ್‌ಸೈಟ್‌ನಲ್ಲಿ ದಿನಾಂಕ:31.05.2023 ರಂದು ಸಂಜೆ 05.00 ಗಂಟೆಯೊಳಗೆ ಅಪ್‌ಲೋಡ್ ಮಾಡಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಖರೀದಿ ವಿಭಾಗದ ವ್ಯವಸ್ಥಾಪಕರನ್ನು (6366430803) ಸಂಪರ್ಕಿಸಬಹುದಾಗಿದೆ.

ಸಹಿ/–, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,

ಎರಡನೇ ವರ್ಷದ ಪುಣ್ಯಸ್ಮರಣೆ



ರುಕ್ಮಿಣಿ (ಅಕ್ಕ) ನಿಧನ 25.05.2021
ಎಂ.ಹೆಚ್.ಕೃಷ್ಣಪ್ಪ (ತಮ್ಮ) ನಿಧನ 24.05.2021
ನೀವು ನಮ್ಮನ್ನಗಲಿ ಇಂದಿಗೆ 2 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ.
ದುಃಖತಪ್ತರು: ಕುಟುಂಬವರ್ಗದವರು ಹಾಗೂ ಹಿತೈಷಿಗಳು